ಸಂಪುಟ: 22, ಸಂಚಿಕೆ: 226, ಪುಟಗಳು: 8, ಸೋಮವಾರ, 26 ಮೇ 2025 RNI NO. KARKAN/2002/08054
epaper: www.sanjemugilu.com



ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3



ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of Newspapers | Tabloids | Magazines



### ಸುಭಾಷಿತ

ಜೀವನ ಎಂದರೆ ಏನು ಎಂದು ನಮಗೆ ತಿಳಿಯುವವರೆಗೆ, ನಮ್ಮ ಅರ್ಧ ಜೀವನ ಮುಗಿದಿರುತ್ತದೆ.

### ಪಂಚಾಂಗ

(ಸೋಮವಾರ 26 ಮೇ-2025)

- ಶ್ರೀ ವಿಶ್ವಾವಸು ನಾಮ ಸಂವತ್ಸರ,
- ಉತ್ತರಾಯಣ, ವಸಂತ ಋತು,
- ವೈಶಾಖ ಮಾಸ, ಕೃಷ್ಣ ಪಕ್ಷ
- ಸೋಮವಾರ, ಚತುರ್ದಶಿ,
- ಭರಣಿ ಉಪರಿ ಕೃತಿಕ ನಕ್ಷತ್ರ,
- ಅತಿಗಂಡ ಯೋಗ
- ರಾಹುಕಾಲ - 7:32 ರಿಂದ 9:08
- ಗುಳಿಕಕಾಲ -1:56 ರಿಂದ 3:32
- ಯಮಗಂಡಕಾಲ - 10:44 ರಿಂದ 12:20

## ಸಂಕ್ಷಿಪ್ತ ಸುದ್ದಿ

### ಭಾರತದ ಸಶಸ್ತ್ರ ಪಡೆಗಳ ದುರ್ಬಲಗೊಳಿಸಲು ಯತ್ನ, ರಾಹುಲ್ ಯಾರ ಪರ ಮಾತಾಡ್ತಿದ್ದಾರೆ ಕಿಶನ್ ರೆಡ್ಡಿ ಪ್ರಶ್ನೆ



**ಹೈದರಾಬಾದ್:** ವಿರೋಧ ಪಕ್ಷದ ನಾಯಕ, ಸಂಸದ ರಾಹುಲ್ ಗಾಂಧಿ ಹೇಳಿಕೆಗಳು ಮೇಕ್ ಇನ್ ಇಂಡಿಯಾದ ಮೂಲಾಶಯವನ್ನೇ ಬುಡಮೇಲು ಮಾಡಹೊರಟಂತಿದೆ ಎಂದು ಕೇಂದ್ರ ಸಚಿವ ಜಿ ಕಿಶನ್ ರೆಡ್ಡಿ ಹೇಳಿದ್ದಾರೆ.

ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದು, ಕೆಲವು ವರ್ಷಗಳಿಂದ ರಾಹುಲ್ ಗಾಂಧಿ ನೀಡುತ್ತಿರುವ ಹೇಳಿಕೆಗಳನ್ನು ನೋಡಿದರೆ ಅವು ಭಾರತದ ಸಶಸ್ತ್ರ ಪಡೆಗಳನ್ನು ದುರ್ಬಲಗೊಳಿಸಲು ಮತ್ತು ನಮ್ಮ ಸ್ವದೇಶೀಕರಣ ಪ್ರಯತ್ನಗಳಿಗೆ ಅಡೆತಡೆ ಸೃಷ್ಟಿಸಲು ಮಾಡುತ್ತಿರುವ ಪ್ರಯತ್ನ ಎಂದೆನಿಸುತ್ತದೆ.

ಬೇರೆ ದೇಶಗಳ ಡ್ರೋನ್ ಗಳನ್ನು ಹೊಗಳುವುದರಿಂದ ಹಿಡಿದು ರಫೇಲ್ ಒಪ್ಪಂದವನ್ನು ಹಗರಣ ಎಂದು ಕರೆಯುವವರೆಗೆ ಅಗ್ನಿವೀರರನ್ನು ಟೀಕಿಸುವುದರಿಂದ ಹಿಡಿದು ನಮ್ಮ ಮೇಕ್ ಇನ್ ಇಂಡಿಯಾ ಪ್ರಯತ್ನಗಳಿಗೆ ಹಾನಿ ಮಾಡುವವರೆಗೆ, ರಾಹುಲ್ ಗಾಂಧಿ ಎಂದಿಗೂ ಭಾರತದ ಪುಟ 2

### ಮದ್ಯಪಾನ ಮಾಡಿ ಪೊಲೀಸರ ಮೇಲೆಯೇ ಕಾರು ಹತ್ತಿಸಿದ ಆಸಾಮಿ!



**ಬೆಂಗಳೂರು:** ವ್ಯಕ್ತಿಯೊಬ್ಬ ಮದ್ಯಪಾನ ಮಾಡಿದ ಮತ್ತಿನಲ್ಲಿ ಒನ್ ವೇಯಲ್ಲಿ ಕಾರು ನುಗ್ಗಿಸಿ ಹಲವು ವಾಹನಗಳಿಗೆ ಹಾನಿ ಉಂಟು ಮಾಡಿದ್ದಲ್ಲದೆ, ತಡೆಯಲು ಬಂದ ಪೊಲೀಸರ ಮೇಲೆಯೇ ಕಾರು ಹತ್ತಿಸಲು ಯತ್ನಿಸಿದ್ದಾನೆ. ಬೆಂಗಳೂರಿನ ಕೋರಮಂಗಲದ ಜ್ಯೋತಿ ನಿವಾಸ ಕಾಲೇಜು ಬಳಿ ಶನಿವಾರ ತಡರಾತ್ರಿ ಘಟನೆ ಸಂಭವಿಸಿದೆ. ಆರೋಪಿ ನಂದಕೃಷ್ಣ ಎಂಬಾತ ಪೊಲೀಸ್ ಬ್ಯಾರುಕೇಡ್ ಗೆ ಕಾರು ಗುದ್ದಿಸಿದ್ದಾನೆ. ಇದರಿಂದಾಗಿ ಪೊಲೀಸರೊಬ್ಬರ ಕಾಲಿಗೆ ಗಾಯವಾಗಿದೆ. ನಂತರ ಕಾರಿನ ಬಾಗಿಲು ತೆರೆಯುವಂತೆ ಪೊಲೀಸರು ಸೂಚನೆ ನೀಡಿದರೂ ನಂದಕೃಷ್ಣ ಪ್ರತಿಕ್ರಿಯಿಸುತ್ತಲೇ ಇರಲಿಲ್ಲ. ಹೀಗಾಗಿ ಪೊಲೀಸರೇ ಕಾರಿನ ಗಾಜು ಒಡೆದು ಆತನನ್ನು ಹೊರಗೆ ಎಳೆದು ತೆಗೆದಿದ್ದಾರೆ. ಇದೇ ವೇಳೆ ಆತ ಪ್ರಜ್ಞಾಹೀನ ಸ್ಥಿತಿಯಲ್ಲಿದ್ದ ಎನ್ನಲಾಗಿದೆ. ಪುಟ 2

### ಸಾರ್ವಜನಿಕರಿಗೂ ಇನ್ಮುಂದೆ ವಿಧಾನಸೌಧ ವೀಕ್ಷಣೆಗೆ ಅವಕಾಶ

## ರಾಜ್ಯ ಸರ್ಕಾರದ ವಿನೂತನ ಪ್ರಯತ್ನ

**ಬೆಂಗಳೂರು:** ವಿಧಾನಸೌಧ ಇದು ಕರ್ನಾಟಕ ಆಡಳಿತದ ಶಕ್ತಿ ಕೇಂದ್ರ. ಯಾವುದೇ ಸರ್ಕಾರ ಬರಲಿ, ಇದೇ ಐತಿಹಾಸಿಕ ಕಟ್ಟಡದಿಂದಲೇ ಆಡಳಿತದ ಪಯಣ ಶುರು ಮಾಡುವುದು. ಅಷ್ಟೇ ಅಲ್ಲ, ವಿಶ್ವದಲ್ಲೇ ಅತೀ ಹೆಚ್ಚು ಪ್ರಸಿದ್ಧಿ ಪಡೆದ ಹಾಗೂ ಭಾರತದ ಅತೀ ದೊಡ್ಡ ಆಡಳಿತದ ಕಟ್ಟಡ ಎಂದೇ ಹೆಸರು ವಾಸಿಯಾಗಿರೋ ಶಕ್ತಿ ಕೇಂದ್ರ. ಇದನ್ನ ನೋಡೋದಕ್ಕೆ ದೇಶ ವಿದೇಶದಿಂದ ಜನ ಬರ್ತಾರೆ. ನೆನಪಿಗಾಗಿ ಫೋಟೋ ತೆಗೆದುಕೊಳ್ಳುತ್ತಾರೆ. ಆದರೆ ಯಾರೂ ಸಹ ಭವ್ಯ ಕಟ್ಟಡದ ಆವರಣದೊಳಗೆ ಬರೋದಕ್ಕೆ ಅವಕಾಶ ಸಿಕ್ಕಿರಲಿಲ್ಲ. ಆದರೆ ಈಗ ವಿಧಾನಸೌಧಕ್ಕೆ



ಸಾರ್ವಜನಿಕರಿಗೂ ಪ್ರವೇಶ ನೀಡಲು ರಾಜ್ಯ ಸರ್ಕಾರ ಹೊಸ ಹಾಗೂ ವಿನೂತನ ಕಾರ್ಯಕ್ರಮ ಏರ್ಪಡಿಸುತ್ತಿದೆ.

**'ವಿಧಾನಸೌಧ ಮಾರ್ಗದರ್ಶಿ ಪ್ರವಾಸ':** ಇದೊಂದು ಐತಿಹಾಸಿಕ ತೀರ್ಮಾನ. ಇದುವರೆಗೂ ಯಾರು ಕೈಗೊಳ್ಳದ, ಇಟ್ಟಿರದ ಹೆಜ್ಜೆಯನ್ನ ರಾಜ್ಯ ಸರ್ಕಾರ ಇಡುತ್ತಿದೆ. ಸಾಮಾನ್ಯ ವ್ಯಕ್ತಿಗೂ ವಿಧಾನಸೌಧ ವೀಕ್ಷಣೆಗೆ ಸುವರ್ಣ ಅವಕಾಶ ಕಲ್ಪಿಸಲಾಗುತ್ತಿದೆ. ಅದರಲ್ಲೂ ಶಕ್ತಿ ಕೇಂದ್ರದಲ್ಲಿ ಶಾಸಕರು, ಸಚಿವರು ಕುರಿತುಕೊಳ್ಳುವ ವಿಧಾನಸಭೆ, ವಿಧಾನ ಪರಿಷತ್ ನೋಡೋದಕ್ಕೆ ಅವಕಾಶ ಕಲ್ಪಿಸಲಾಗುತ್ತಿದೆ. 'ವಿಧಾನಸೌಧ ಮಾರ್ಗದರ್ಶಿ ಪ್ರವಾಸ' ಅನ್ನೋ ಹೆಸರಿನಲ್ಲಿ ವಿನೂತನ ಕಾರ್ಯಕ್ರಮ ಶುರು ಮಾಡಲಾಗುತ್ತಿದೆ.

ಸಾರ್ವಜನಿಕರಿಗೂ ಇನ್ಮುಂದೆ ವಿಧಾನಸೌಧದ ಒಳಗೆ ನೋಡುವ ಅವಕಾಶ ಮಾಡಿಕೊಡೋದಕ್ಕೆ ಸರ್ಕಾರ ಹೊಸ ಕಾರ್ಯಕ್ರಮ ಪುಟ 2

## ಮೋದಿ ಸರ್ಕಾರಕ್ಕೆ 11 ವರ್ಷ

**ನವದೆಹಲಿ:** ನರೇಂದ್ರ ಮೋದಿ ಪ್ರಧಾನ ಮಂತ್ರಿಯಾಗಿ ಮೊದಲ ಬಾರಿಗೆ ಅಧಿಕಾರ ಸ್ವೀಕರಿಸಿ ಹನ್ನೊಂದು ವರ್ಷಗಳಾಗಿವೆ. 2014ರ ಮೇ 26 ರಂದು ಅವರು ಪ್ರಧಾನಿಯಾಗಿ ಪ್ರಮಾಣವಚನ ಸ್ವೀಕಾರ ಮಾಡಿದ್ದರು. ಆ ನಂತರ 2019ರಲ್ಲಿ ಮತ್ತೆ ಮೋದಿ ಸರ್ಕಾರ ಅಸ್ತಿತ್ವಕ್ಕೆ ಬಂದಿತು. 2024 ರ ಲೋಕಸಭೆ ಚುನಾವಣೆಯಲ್ಲಿ ಬಿಜೆಪಿಪೂರ್ಣ ಬಹುಮತ ಪಡೆಯುವಲ್ಲಿ ಕೆಲವೇ ಸಂಖ್ಯೆಗಳಿಂದ ಹಿಂದುಳಿದಿದ್ದರೂ ಎನ್ ಡಿಎ ಮಿತ್ರಪಕ್ಷಗಳ ಬೆಂಬಲದೊಂದಿಗೆ ಮತ್ತೆ ಪ್ರಧಾನಿಯಾದ್ದಾರೆ. ಇದೀಗ ಅವರು 11 ವರ್ಷಗಳ ಅಧಿಕಾರಾವಧಿ ಪೂರೈಸಿದ್ದು ಬಿಜೆಪಿ ಹಾಗೂ ಎನ್ ಡಿಎ ನಾಯಕರು ಶುಭ ಕೋರಿದ್ದಾರೆ. ಈ ಅವಧಿಯಲ್ಲಿ ಅವರು ನೋಟ್ ಬ್ಯಾನ್, ಅಯೋಧ್ಯೆಯಲ್ಲಿ ರಾಮ ಮಂದಿರ ನಿರ್ಮಾಣ, ಪಾಕಿಸ್ತಾನದ ಭಯೋತ್ಪಾದಕರ ಅಡಗುದಾಣಗಳ ಮೇಲೆ ಸರ್ಜಿಕಲ್ ದಾಳಿ ಸೇರಿದಂತೆ ಹಲವು ಮಹತ್ವದ ಕ್ರಮಗಳನ್ನು ಕೈಗೊಂಡಿದ್ದಾರೆ. ಕಳೆದ 11 ವರ್ಷಗಳಲ್ಲಿ ಮೋದಿ ಸರ್ಕಾರ ಕೈಗೊಂಡ ಕೆಲವು ಮಹತ್ವದ ಕ್ರಮಗಳ ಸಂಪಕ್ಷಿಪ್ತ ಹಿನ್ನೋಟ ಇಲ್ಲಿದೆ.



» ಕೈಗೊಂಡ ಹನ್ನೊಂದು ಪ್ರಮುಖ ನಿರ್ಧಾರಗಳು

**ಪ್ರಧಾನ ಮಂತ್ರಿ ಜನಧನ ಯೋಜನೆ:** ದೇಶದ ಎಲ್ಲ ಜನರಿಗೂ ಬ್ಯಾಂಕ್ ಖಾತೆ ಸೌಲಭ್ಯ ದೊರೆಯಬೇಕು ಮತ್ತು ಸರ್ಕಾರದ ಯೋಜನೆಗಳ ಫಲಾನುಭವಿಗಳ ಬ್ಯಾಂಕ್ ಖಾತೆಗೆ ನೇರ ಹಣ ವರ್ಗಾವಣೆ ಮಾಡಬೇಕು ಎಂಬ ಉದ್ದೇಶದೊಂದಿಗೆ 2014ರ ಆಗಸ್ಟ್ ಪುಟ 2

### ವಾಡಿಕೆಗಿಂತ ಮೊದಲೇ ಮುಂಗಾರು ಆಗಮನ

## ಕರ್ನಾಟಕ, ಕೇರಳ, ಮಹಾರಾಷ್ಟ್ರದಲ್ಲಿ ಮಳೆ

**ನವದೆಹಲಿ:** ವಾಡಿಕೆಗಿಂತ ಮೊದಲೇ ಹಲವು ರಾಜ್ಯಗಳಿಗೆ ನೈಋತ್ಯ ಮುಂಗಾರು ಆಗಮನವಾಗಿದೆ. ಕರ್ನಾಟಕ, ಕೇರಳ, ಗೋವಾ ಹಾಗೂ ಮಹಾರಾಷ್ಟ್ರದಲ್ಲಿ ಭಾರಿ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಕೇರಳದ ಬಳಿಕ ಮಹಾರಾಷ್ಟ್ರಕ್ಕೆ ಮುಂಗಾರು ಆಗಮನವಾಗಿದೆ. ಮುಂದಿನ ಎರಡು ದಿನಗಳಲ್ಲಿ ಮುಂಬೈ ತಲುಪಬಹುದು, ರಾಜ್ಯದ ಹಲವು ಭಾಗಗಳಲ್ಲಿ ಧಾರಾಕಾರ ಮಳೆಯ ಎಚ್ಚರಿಕೆಯನ್ನು ಹವಾಮಾನ ಇಲಾಖ ನೀಡಿದೆ.

ಮುಂದಿನ ಮೂರು ದಿನಗಳಲ್ಲಿ ಮಧ್ಯ ಅರಬ್ಬಿ ಸಮುದ್ರದ ಕೆಲವು ಭಾಗಗಳು, ಮುಂಬೈ ಸೇರಿದಂತೆ ಮಹಾರಾಷ್ಟ್ರದ ಕೆಲವು ಭಾಗಗಳು, ಬೆಂಗಳೂರು ಸೇರಿದಂತೆ ಕರ್ನಾಟಕದ ಕೆಲವು ಭಾಗಗಳು, ಆಂಧ್ರಪ್ರದೇಶ, ತಮಿಳುನಾಡು, ಪಶ್ಚಿಮ, ಮಧ್ಯ ಮತ್ತು ಉತ್ತರ ಬಂಗಾಳಕೊಲ್ಲಿಯ ಕೆಲವು ಭಾಗಗಳಲ್ಲಿ ಭಾರಿ ಮಳೆಯಾಗಲಿದೆ.

ದೆಹಲಿಯಲ್ಲಿ ಮಳೆ ದೆಹಲಿಗೆ ಮುಂಗಾರು ಆಗಮನ ಸಮೀಪದವಿಲ್ಲದಿದ್ದರೂ ಕೂಡ ಭಾನುವಾರ ಧಾರಾಕಾರ ಮಳೆಯಾಗಿದ್ದು, ಹಲವು ಮನೆಗಳಿಗೆ ನೀರು ನುಗ್ಗಿದೆ, ರಸ್ತೆಗಳೆಲ್ಲವೂ ಜಲಾವೃತಗೊಂಡು ಕೆರೆಯಂತಾಗಿತ್ತು, ಹಲವು ವಾಹನಗಳು ಸಿಲುಕಿದ್ದವು.



ಇಂದು ಎಲ್ಲೆಲ್ಲಿ ಮಳೆಯಾಗಲಿದೆ ಕರಾವಳಿ ಕರ್ನಾಟಕ, ಕೇರಳ, ಕರ್ನಾಟಕದ ದಕ್ಷಿಣ ಒಳನಾಡು, ತಮಿಳುನಾಡು ಹಾಗೂ ಕಾರೈಕಲ್ ನಲ್ಲಿ ವಿಪರೀತ ಮಳೆ ಸುರಿಯಲಿದೆ. ಅಂಡಮಾನ್ ನಿಕೋಬಾರ್ ದ್ವೀಪಗಳು, ಕೊಂಕಣ, ಗೋವಾ, ಮಧ್ಯ ಮಹಾರಾಷ್ಟ್ರ, ಕರ್ನಾಟಕದ ಉತ್ತರ ಒಳನಾಡಿನಲ್ಲೂ ಭಾರಿ ಮಳೆಯಾಗಲಿದೆ.

ಅರುಣಾಚಲಪ್ರದೇಶ, ಅಸ್ಸಾಂ, ಮೇಘಾಲಯ, ಬಿಹಾರ, ಛತ್ತೀಸ್ ಗಢ, ಆಂಧ್ರ ಕರಾವಳಿ, ಗುಜರಾತ್, ಲಕ್ಷದ್ವೀಪ, ಮರಾಠವಾಡ, ನಾಗಾಲ್ಯಾಂಡ್, ಪಣಿಪುರ, ಮಿಜೋರಾಂ, ತ್ರಿಪುರಾ, ತೆಲಂಗಾಣದಲ್ಲಿ ಮಳೆಯಾಗಲಿದೆ. ಬಿಹಾರ ಹಾಗೂ ಮಧ್ಯಪ್ರದೇಶದಲ್ಲಿ ಗಾಳಿಯು ಗಂಟೆಗೆ 50–60 ಕಿ.ಮೀ ವೇಗದಲ್ಲಿ ಪುಟ 2

## ಶಿರಾಡಿ ಘಾಟ್ ರಸ್ತೆಯ ಹಲವೆಡೆ ಭೂಕುಸಿತ

**ಹಾಸನ:** ಹಾಸನ ಜಿಲ್ಲೆಯಲ್ಲಿ ವರುಣಾರ್ಭಟ ಜೋರಾಗಿದ್ದು, ಈ ವರ್ಷ ಮುಂಗಾರಿನ ಮೊದಲ ಮಳೆಗೇ ಹತ್ತಾರು ಕಡೆ ಅವಘಡಗಳು ಸಂಭವಿಸಿವೆ. ರಾಷ್ಟ್ರೀಯ ಹೆದ್ದಾರಿಯಲ್ಲಿ ಸಂಚಾರಕ್ಕೆ ಸಂಚಕಾರ ಉಂಟಾಗಿದೆ. ಸಕಲೇಶಪುರ ತಾಲ್ಲೂಕಿನ ರಾಷ್ಟ್ರೀಯ ಹೆದ್ದಾರಿ 75ರ ಶಿರಾಡಿ ಘಾಟ್ ಮಾರ್ಗದಲ್ಲಿ ಭಾನುವಾರ ಹಲವು ಕಡೆ ಗುಡ್ಡ ಕುಸಿದು ಸಂಚಾರಕ್ಕೆ ಸಂಕಷ್ಟ ಎದುರಾಗಿತ್ತು. ಆನೆಮಹಲ್ ಬಳಿ ಹೆದ್ದಾರಿಯ ಬದಿಯ ಮಣ್ಣು ಕುಸಿದು ರಸ್ತೆಯೇ ಮಣ್ಣೀನಿಂದ ಆವೃತವಾಗಿದೆ. ಇದೇ ಮಾರ್ಗದ ಅಡ್ಡನಗುಡ್ಡ, ದೊಡ್ಡತಪ್ಲು ಬಳಿ ಕೂಡ ಅತಿಯಾದ ಮಳೆಯಿಂದ ಬರೆ ಕುಸಿದು ರಸ್ತೆ ಸಂಚಾರವೇ ಬಂದ್ ಆಗುವ ಭೀತಿ ಎದುರಾಗಿದೆ.

ಅತಿಯಾದ ವಾಹನದಟ್ಟಣೆಯಿಂದ ಭಾನುವಾರ ಕೆಲ ಕಾಲ ಸಂಚಾರದ ಮಾರ್ಗವನ್ನೇ ಬದಲಾಯಿಸಲಾಗಿತ್ತು. ಬೆಳಗ್ಗೆಯಿಂದ ಎಡೆಬಿಡದೆ ಸುರಿದ ಮಳೆಯಿಂದ ಸಕಲೇಶಪುರ ಪಟ್ಟಣದ



ಬಸ್ ನಿಲ್ದಾಣ ಬಳಿ ಇರುವ ಮಲ್ನಾಡ್ ಕೆಫೆ ಹೊಟೆಲ್ ಗೋಡೆ ಕುಸಿದು ಬಿದ್ದು ನಾಲ್ವರು ಗಾಯಗೊಂಡಿದ್ದಾರೆ. ಅದೃಷ್ಟವಶಾತ್, ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಗಾಯಾಳುಗಳಿಗೆ ಸಕಲೇಶಪುರ ತಾಲ್ಲೂಕು ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.

**ಹೊಂಡದಲ್ಲಿ ಸಿಲುಕಿದ ಸಾರಿಗೆ ಬಸ್: ಪ್ರಯಾಣಿಕರ ಪರದಾಟ:** ಈ ವರ್ಷ ಪೂರ್ವ ಮುಂಗಾರು ಮಳೆಯ ಅಬ್ಬರವೇ ಜನರನ್ನ ಹೈರಾಣಾಗಿಸಿದ್ದು, ಅದರ ಜತೆಗೇ ಈಗ ಮುಂಗಾರು ಸಹ ಸೇರಿಕೊಂಡಿದೆ. ಸಕಲೇಶಪುರ ತಾಲ್ಲೂಕಿನ ಬೊಮ್ಮನಕೆರೆ ಬಳಿ ಸಾರಿಗೆ ಬಸ್ ಒಂದು ರಸ್ತೆ ಬದಿಯ ಹೊಂಡದಲ್ಲಿ ಸಿಲುಕಿ ಪ್ರಯಾಣಿಕರು ಪರದಾಡುವಂತಾಗಿತ್ತು. ಪುಟ 2

## ಮಳೆ ಅನಾಹುತ

**ಬೆಂಗಳೂರು:** ಅವಧಿಗೂ ಮುನ್ನವೇ ಕರ್ನಾಟಕಕ್ಕೆ ಕಾಲಿಟ್ಟಿರುವ ಮುಂಗಾರು ಮಳೆ ಆರಂಭದಲ್ಲೇ ಅವಾಂತರಗಳನ್ನು ಸೃಷ್ಟಿಸಿದೆ. ಕರಾವಳಿ ಕರ್ನಾಟಕ ಭಾಗದಲ್ಲಿ ವರ್ಷಧಾರೆ ಸುರಿಯುತ್ತಿದ್ದು, ಅನೇಕ ಅವಾಂತರಗಳನ್ನು ಸೃಷ್ಟಿಸಿದೆ. ಭಾರೀ ಬಿರುಗಾಳಿ ಸಹಿತ ಮಳೆಗೆ ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲೂಕಿನ ಕಡಬದಲ್ಲಿ ಬೃಹತ್ ಮರ ಚಲಿಸುತ್ತಿದ್ದ ಕಾರಿನ ಮೇಲೆ ಬಿದ್ದಿದೆ. ನೂಜಿಬಾಳ್ತಿಲ ಎಂಬಲ್ಲಿ ಘಟನೆ ನಡೆದಿದೆ. ಕಾರು ಸಂಪೂರ್ಣ ನಜ್ಜುಗುಜ್ಜಾಗಿದೆ. ಅದೃಷ್ಟಕ್ಕೆ ಇಬ್ಬರು ಮಕ್ಕಳು ಸೇರಿ ಕಾರಿನಲ್ಲಿದ್ದ 6 ಮಂದಿ ಬಚಾವಾಗಿದ್ದಾರೆ. ಗಾಯಾಳುಗಳು ಶಿವಮೊಗ್ಗ ಮೂಲದವರಾಗಿದ್ದು, ಕುಕ್ಕೆಯಿಂದ ಧರ್ಮಸ್ಥಳಕ್ಕೆ ತೆರಳುತ್ತಿದ್ದ ವೇಳೆ ಅನಾಹುತ ಸಂಭವಿಸಿದೆ.

ಪುತ್ತೂರು ನಗರಸಭೆ ಕಾಂಪೌಂಡ್ ಕುಸಿದು 3 ಆಟೋಗಳು ಜಖಂಗೊಂಡಿವೆ. ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ. ಆದರೆ, ಮಹಾಲಿಂಗೇಶ್ವರ ದೇಗುಲ ಬಳಿ ಗೋಡೆ ಕುಸಿದು ಓರ್ವ ಮಹಿಳೆ ಗಾಯಗೊಂಡಿದ್ದಾರೆ.

**ಒಂದೇ ಮಳೆಗೆ ನದಿಯಂತಾಯ್ತು ಪಂಪ್ ವೆಲ್ ಸರ್ಕಲ್:** ಜೋರು ಮಳೆಗೆ ಮಂಗಳೂರಿನ ಪ್ರಮುಖ ಏರಿಯಾಗಳೇ ಜಲಾವೃತವಾಗಿವೆ. ಪಂಪ್‌ವೆಲ್ ಸರ್ಕಲ್ ಜಲಾವೃತಗೊಂಡು ನದಿಯಂತೆ ಕಾಣಿಸಿದೆ. ಕೆಲವೆಡೆ ಹೋಟೆಲ್ ಹಾಗೂ ಅಂಗಡಿಗಳಿಗೆ ಮಳೆ ನೀರು ನುಗ್ಗಿದೆ.

ಮಂಗಳೂರಿನ ಅಡ್ಯಾರ್‌ನಲ್ಲಿ ವರುಣಾರ್ಭಟಕ್ಕೆ ಚರಂಡಿ ನೀರು ಬಾವಿ, ಗದ್ದೆಗಳಿಗೆ ಸೇರುತ್ತಿದೆ. ಕುಡಿಯಲು ನೀರಿಲ್ಲದೆ ಪರದಾಡುವಂತಾಗಿದೆ. ಜೀವನದಿ ನೇತ್ರಾವತಿ ಭೋರ್ಗರೆಯುತ್ತಿದೆ. ಬೆಳ್ತಂಗಡಿಯಲ್ಲಿ ಅಡಕೆ ತೋಟವನ್ನ ನದಿ ನೀರು ಆವರಿಸಿದೆ.

ಇನ್ನು ಮಳೆ ನಡುವೆಯೂ ಮಂಗಳೂರಿನ ಕುಲಶೇಖರ ಕಲ್ಪನೆ ಬಳಿ ಕಾರೊಂದು ಹೊತ್ತಿ ಉರಿದಿದೆ. ಅದೃಷ್ಟವಶಾತ್ ಚಾಲಕ ಅಪಾಯದಿಂದ ಪಾರಾಗಿದ್ದಾನೆ.

**ಪ್ರಕ್ಷುಬ್ಧಗೊಂಡ ಕಡಲು: ಜೀವದ ಜೊತೆ ಜನರ ಚೆಲ್ಲಾಟ:** ಉಡುಪಿಯ ಮಲ್ಪೆ ಬೀಚ್



ನಲ್ಲಿ ರಕ್ಕಸ ಅಲೆಗಳು ದಡಕ್ಕೆ ಅಪ್ಪಳಿಸುತ್ತಿವೆ. ಆದರೆ ಪ್ರವಾಸಿಗರು ಜೀವದ ಜೊತೆ ಚೆಲ್ಲಾಟವಾಡುತ್ತಿದ್ದು, ಮಲ್ಪೆ ಸೀ ವಾಕ್ ಎಂಡ್ ಪಾಯಿಂಟ್ ನಲ್ಲಿ ರಿಸ್ಕಿ ಫೋಟೋಶೂಟ್ ಮಾಡುತ್ತಿರುವುದಿ ಕಂಡುಬಂದಿದೆ.

ಉತ್ತರ ಕನ್ನಡ ಜಿಲ್ಲೆಯ ಕಾರವಾರ ತಾಲೂಕಿನ ಸುಂಕೇರಿಯಲ್ಲಿ ಯುವಕನೊಬ್ಬ ಕಾಲು ಜಾರಿ ಕಾಳಿ ನದಿಗೆ ಬಿದ್ದಿದ್ದಾನೆ. ಶನಿವಾರ ರಾತ್ರಿ ಘಟನೆ ನಡೆದಿದ್ದು, ಭಾನುವಾರ ಸಂತೋಷ್ ಮೃತದೇಹ ಪತ್ತೆ ಆಗಿದೆ.

ಕುಮಟಾ ಮುಸುಗುಪ್ಪ ಬಳಿ ಮೂರೂರು-ಹರಕಡೆ ಸಂಪರ್ಕ ರಸ್ತೆಯಲ್ಲಿ ಗುಡ್ಡಕುಸಿತವಾಗಿದೆ. ನಿರಂತರ ಮಳೆಗೆ ಬಂಡೆಗಲ್ಲು ರಸ್ತೆಗೆ ಜಾರಿದ್ದು, ಸಂಚಾರ ಸಂಪೂರ್ಣ ಬಂದ್ ಆಗಿದೆ.

**ಕೊಡಗಿನಲ್ಲಿ ಇಂದು ಅಂಗನಾಡಿ, ಕಾಲೇಜ್ ಗಳಿಗೆ ರಜೆ:** ಕೊಡಗಿನ ವಿರಾಜಪೇಟೆಯಲ್ಲಿ ಮಳೆ ನೀರು ರಸ್ತೆ ಮೇಲೆ ನದಿಯಂತೆ ಹರಿದಿದೆ. ವಿರಾಜಪೇಟೆ-ಗೋಣಿಕೊಪ್ಪಲು ರಸ್ತೆಯಲ್ಲಿ ವಾಹನ ಸವಾರರ ಪರದಾಟವಂತಾಗಿದೆ. ಭಾರಿ ಮಳೆ ಹಿನ್ನೆಲೆ ಕೊಡಗು ವಿವಿ ಅಧೀನ ಕಾಲೇಜುಗಳಿಗೆ ಇಂದಿನಿಂದ 2 ದಿನ ರಜೆ ಘೋಷಿಸಲಾಗಿದ್ದು, ಜಿಲ್ಲಾಡಳಿತ ಅಂಗನವಾಡಿಗಳಿಗೂ ರಜೆ ಘೋಷಿಸಿದೆ.

**ಚಿಕ್ಕಮಗಳೂರಿನಲ್ಲಿ 2 ದಿನ ರೆಡ್ ಅಲರ್ಟ್ ಘೋಷಣೆ:** ಚಿಕ್ಕಮಗಳೂರು ಜಿಲ್ಲೆ ಮೂಡಿಗೆರೆ ತಾಲೂಕಿನ ಬಣಕಲ್, ಬಾಳೂರು, ಕೊಟ್ಟಿಗೆಹಾರ, ಎನ್ ಆರ್ ಪುರ ತಾಲೂಕಿನ ಬಾಳೆಹೊನ್ನೂರು, ಶೃಂಗೇರಿ, ಕೊಪ್ಪ, ಕಳಸ ಸೇರಿದಂತೆ ಜಿಲ್ಲೆಯಾದ್ಯಂತ ಮಳೆ ಅಬ್ಬರಿಸಿದೆ. ಚಿಕ್ಕಮಗಳೂರು ಜಿಲ್ಲೆಯಲ್ಲಿ ಪುಟ 2

### ಪಾಕ್ ಮಾಜಿ ಅಧ್ಯಕ್ಷ ಪರ್ವೇಜ್ ಮುಷರಫ್

## ಪೂರ್ವಜರ ಭೂಮಿ ಹರಾಜು

**ಲಕ್ನೋ:** ಒಂದೆಡೆ ಭಾರತಹಾಗೂ ಪಾಕಿಸ್ತಾನದ ನಡುವೆ ಉದ್ವಿಗ್ನತೆ ಇದೆ. ಇನ್ನೊಂದೆಡೆ ಪಾಕಿಸ್ತಾನದ ಮಾಜಿ ಅಧ್ಯಕ್ಷ ಪರ್ವೇಜ್ ಮುಷರಫ್ ಅವರ ಪೂರ್ವಜರು ಉತ್ತರ ಪ್ರದೇಶದ ಬಾಗಪತ್ ಜಿಲ್ಲೆಯಲ್ಲಿ ಹೊಂದಿದ್ದ ಜಮೀನು ಹರಾಜಾಗಿದೆ. ಏಪ್ರಿಲ್ 22ರಂದು ಉಗ್ರರು ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್ ನಲ್ಲಿ ದಾಳಿ ನಡೆಸಿ 26 ಅಮಾಯಕರ ಪ್ರಾಣ ತೆಗೆದಿದ್ದರು. ಇದಕ್ಕೆ ಪ್ರತಿಯಾಗಿ ಭಾರತವು ಆಪರೇಷನ್ ಸಿಂಧೂರ್ ಅಡಿಯಲ್ಲಿ ಪಾಕಿಸ್ತಾನದ 9 ಉಗ್ರ ನೆಲೆಗಳ ಮೇಲೆ ದಾಳಿ ನಡೆಸಿ ನಾಶಪಡಿಸಿತ್ತು.

ಅದಾದ ಮೇಲೆ ದಾಳಿ ಪ್ರತಿದಾಳಿಗಳು ನಡೆಯುತ್ತಲೇ ಇದ್ದವು. ಆದರೆ ಕೊನೆಯಲ್ಲಿ ಎರಡೂ ದೇಶಗಳು ಒಪ್ಪಂದಕ್ಕೆ ಬಂದಿದ್ದು, ಕದನ ವಿರಾಮ ಘೋಷಿಸಲಾಗಿದೆ. ಪಾಕಿಸ್ತಾನದ ಮಾಜಿ ಅಧ್ಯಕ್ಷ ಪರ್ವೇಜ್ ಮುಷರಫ್ ಅವರ



ಪೂರ್ವಜರು ಉತ್ತರ ಪ್ರದೇಶದ ಬಾಗ್ಪತ್ ಜಿಲ್ಲೆಯ ಬರೌತ್ ಪಟ್ಟಣದಲ್ಲಿ ಹೊಂದಿರುವ ಆಸ್ತಿಯನ್ನು 1.38 ಕೋಟಿ ರೂ.ಗೆ ಹರಾಜು ಹಾಕಲಾಗಿದೆ.

ಬರೌತ್‌ನ ಕೊಟಾನಾ ಗ್ರಾಮದಲ್ಲಿ ಇರುವ ಸುಮಾರು 13 ಬಿಘಾ ಭೂಮಿಯನ್ನು ಶತ್ರು ಆಸ್ತಿ ಎಂದು ಘೋಷಿಸಲಾಗಿದೆ. ಈಗ ಅದು 1.38 ಕೋಟಿ ರೂ.ಗೆ ಮಾರಾಟವಾಗಿದೆ. ಈ ಭೂಮಿ ಮೊದಲು ಪರ್ವೇಜ್ ಮುಷರಫ್ ಅವರ ಸಹೋದರ ಡಾ. ಜಾವೇದ್ ಮುಷರಫ್ ಮತ್ತು ಅವರ ಕುಟುಂಬದ ಹೆಸರಿನಲ್ಲಿತ್ತು ಆದರೆ 15 ವರ್ಷಗಳ ಹಿಂದೆ ಅದನ್ನು ಶತ್ರು ಆಸ್ತಿಯಾಗಿ ನೋಂದಾಯಿಸಲಾಗಿದೆ.

ಈಗ ಆ ಭೂಮಿಯನ್ನು ಪಂಕಜ್ (ಗುತ್ತಿಗೆದಾರ), ಮನೋಜ್ ಗೋಯಲ್ (ಬರಾವುತ್ ನಿವಾಸಿ) ಮತ್ತು ಗಾಜಿಯಾಬಾದ್‌ನ ಜೆಕೆ ಸ್ಟೀಲ್ ಕಂಪನಿಗೆ ವರ್ಗಾಯಿಸಲಾಗಿದೆ. ಶನಿವಾರ, ಲಕ್ನೋದಿಂದ ಬಂದ ಶತ್ರು ಆಸ್ತಿ ಇಲಾಖೆಯ ಅಧಿಕಾರಿ ಪ್ರಶಾಂತ್ ಕುಮಾರ್, ಬರೌತ್‌ನಲ್ಲಿರುವ ಸಬ್-ರಿಜಿಸ್ಟ್ರಾರ್ ಕಚೇರಿಯಲ್ಲಿ ಮಾರಾಟ ಪತ್ರ ಪ್ರಕ್ರಿಯೆಯನ್ನು ಪೂರ್ಣಗೊಳಿಸಿದರು. ಪುಟ 2

### 3 ಸಾವಿರ ಕೋಟಿ ರೂ. ಪಿಎಫ್ ಬಾಕಿ ಉಳಿಸಿಕೊಂಡ ಕೆಎಸ್‌ಆರ್‌ಟಿಸಿ, ಬಿಎಂಟಿಸಿ

## ಪಿಎಫ್ ಸಿಗದೆ ಸಂಕಷ್ಟ

**ಬೆಂಗಳೂರು:** ಕೆಎಸ್‌ಆರ್‌ಟಿಸಿ, ಬಿಎಂಟಿಸಿ ಸೇರಿದಂತೆ ನಾಲ್ಕು ನಿಗಮಳ ನೌಕರರ ಸಂಬಳದಲ್ಲಿ ಪ್ರತಿ ತಿಂಗಳು ಸಾವಿರಾರು ರೂಪಾಯಿ ಹಣವನ್ನು ಪಿಎಫ್‌ಗಾಗಿ ಕಡಿತ ಮಾಡಲಾಗುತ್ತದೆ. ಆ ಹಣವನ್ನು ಪಿಎಫ್ ಟ್ರಸ್ಟ್‌ಗೆ ಪಾವತಿ ಮಾಡಬೇಕು. ಆದರೆ ಕಳೆದ ಒಂದು ವರ್ಷದಿಂದ ಪಿಎಫ್ ಟ್ರಸ್ಟ್ ಗೆ ಹಣ ಪಾವತಿ ಮಾಡಿಲ್ಲ ಎಂಬ ಆರೋಪ ಕೇಳಿಬಂದಿದೆ. ಇದರಿಂದ ಸಾರಿಗೆ ನೌಕರರು ಇದೀಗ ಕಷ್ಟದ ಸಮಯದಲ್ಲಿ ಪಿಎಫ್ ಹಣಕ್ಕಾಗಿ ಅರ್ಜಿ ಸಲ್ಲಿಸಿದರೂ ಹಣ ಸಿಗದಂತಾಗಿದೆ. ನೌಕರರ ಪಿಎಫ್ ಹಣವನ್ನು ದುರ್ಬಳಕೆ ಮಾಡಿಕೊಳ್ಳಲಾಗಿದೆ ಎಂದು ಸಾರಿಗೆ ನೌಕರರ ಮುಖಂಡ ಜಗದೀಶ್ ಆರೋಪಿಸಿದ್ದಾರೆ.

ಪಿಎಫ್ ಟ್ರಸ್ಟ್ ಗೆ ಪಾವತಿಸಬೇಕಿದ್ದ 3110 ಕೋಟಿ ರುಪಾಯಿ ಹಣವನ್ನು ನಾಲ್ಕು ಸಾರಿಗೆ



ನಿಗಮಗಳು ಬಾಕಿ ಉಳಿಸಿಕೊಂಡಿವೆ. ಈ ಹಿನ್ನೆಲೆಯಲ್ಲಿ, ನಾಲ್ಕು ಸಾರಿಗೆ ನಿಗಮಗಳ ಎಂಡಿಗಳಿಗೆ ಪಿಎಫ್ ಟ್ರಸ್ಟ್ ಗೆ ಪಾವತಿ ಮಾಡಬೇಕಿರುವ ಸಾವಿರಾರು ಕೋಟಿ ರುಪಾಯಿ ಹಣವನ್ನು ಪಾವತಿ ಮಾಡಿ ಎಂದು ಸಾರಿಗೆ ನೌಕರರರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಪುಟ 2

### ಯೂನಸ್ ಬಾಂಗ್ಲಾದೇಶವನ್ನು ಅಮೆರಿಕಕ್ಕೆ ಮಾರುತ್ತಿದ್ದಾರೆ

## ಶೇಖ್ ಹಸೀನಾ

**ಬಾಂಗ್ಲಾ:** ಬಾಂಗ್ಲಾದೇಶದಲ್ಲಿನ ರಾಜಕೀಯ ಪ್ರಕ್ಷುಬ್ಧತೆಯ ನಡುವೆ, ಬಾಂಗ್ಲಾದೇಶದ ಮಾಜಿ ಪ್ರಧಾನಿ ಶೇಖ್ ಹಸೀನಾ ಅವರು ಮಧ್ಯಂತರ ಸರ್ಕಾರದ ಮುಖ್ಯಸ್ಥ ಮೊಹಮ್ಮದ್ ಯೂನಸ್ ವಿರುದ್ಧ ಗಂಭೀರ ಆರೋಪ ಮಾಡಿದ್ದಾರೆ. ಯೂನಸ್ ಬಾಂಗ್ಲಾದೇಶವನ್ನು ಅಮೆರಿಕಕ್ಕೆ ಮಾರಾಟ ಮಾಡಲು ಹೊರಟಿದ್ದಾರೆ ಎಂದು ದೂರಿದ್ದಾರೆ. ಭಯೋತ್ಪಾದಕರ ಸಹಾಯದಿಂದ ಯೂನಸ್ ಬಾಂಗ್ಲಾದೇಶದ ಅಧಿಕಾರವನ್ನು ವಶಪಡಿಸಿಕೊಂಡಿದ್ದಾರೆ ಮತ್ತು ಈ ಭಯೋತ್ಪಾದಕ ಸಂಘಟನೆಗಳಲ್ಲಿ ಹಲವು ಅಂತಾರಾಷ್ಟ್ರೀಯ ಮಟ್ಟದಲ್ಲಿ ನಿಷೇಧಿಸಲ್ಪಟ್ಟಿವೆ ಎಂದು ಶೇಖ್ ಹಸೀನಾ ಹೇಳಿದ್ದಾರೆ.





ಬಾಂಗ್ಲಾದೇಶದ ಜೈಲುಗಳು ಖಾಲಿ ಖಾಲಿ ಬಾಂಗ್ಲಾ ಮಾಜಿ ಪ್ರಧಾನಿ ಶೇಖ್ ಹಸೀನಾ ತಮ್ಮ ಫೇಸ್‌ಬುಕ್ ಪೋಸ್ಟ್‌ನಲ್ಲಿ, ಅಧಿಕಾರದ ಗದ್ದುಗೆ ಏರಲು ಯೂನಸ್ ನಿಷೇಧಿತ ಭಯೋತ್ಪಾದಕ ಸಂಘಟನೆಯ ಪುಟ 2

## ಚಿಕ್ಕಮಗಳೂರಲ್ಲಿ ಗಾಳಿ ಮಳೆ ಅಬ್ಬರ: ಹಳ್ಳಕ್ಕೆ ಉರುಳಿದ ಕಾರುಗಳು!

**ಚಿಕ್ಕಮಗಳೂರು:** ಭಾರೀ ಗಾಳಿ ಮಳೆಯ ಪರಿಣಾಮ 2 ಕಾರುಗಳು ಹೇಮಾವತಿ ನದಿಯ ಉಪನದಿಗೆ ಬಿದ್ದ ಘಟನೆ ಮೂಡಿಗೆರೆಯಲ್ಲಿ ನಡೆದಿದೆ. ಒಂದು ಕಾರು ಚಕ್ಕಮಕ್ಕಿ ಗ್ರಾಮದ ಬಳಿ ನದಿಗೆ ಬಿದ್ದಿದೆ. ಇನ್ನೊಂದು ಕಾರು ಬಣಕಲ್ ಸಮೀಪದ ಹಳ್ಳಕ್ಕೆ ಬಿದ್ದಿದೆ. ಭಾರೀ ಮಳೆಯಿಂದ ಚಾಲಕರ ನಿಯಂತ್ರಣ ತಪ್ಪಿ ಕಾರುಗಳು ಪಲ್ಟಿಯಾಗಿವೆ. ಕಾರಿನಲ್ಲಿದ್ದವರಿಗೆ ಸಣ್ಣಪುಟ್ಟ ಗಾಯಗಳಾಗಿವೆ. ಸಮಾಜ ಸೇವಕ ಆರೀಫ್ ಸೊಂಟಕ್ಕೆ ಹಗ್ಗ ಕಟ್ಟಿ ಹಳ್ಳಕ್ಕೆ ಇಳಿದು ಕಾರಿನಲ್ಲಿದ್ದವರನ್ನು ರಕ್ಷಿಸಿದ್ದಾರೆ. ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಈ ಸಂಬಂಧ ಬಣಕಲ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ರಾಜ್ಯದಲ್ಲಿ ಮುಂಗಾರು ಆರಂಭದಲ್ಲೇ ಹೀಗಾದರೆ, ಮಳೆಯ ತೀವ್ರತೆ ಹೆಚ್ಚಾದರೆ ಪರಿಸ್ಥಿತಿ ಹೇಗೆ ಎಂಬ ಆತಂಕ ಎದುರಾಗಿದೆ.



## ಒಂದೇ ಕುಟುಂಬದ ಮೂವರು ಆತ್ಮಹತ್ಯೆ

**ಮೈಸೂರು:** ಪ್ರೀತಿಸಿದ ಯುವಕನೊಂದಿಗೆ ಮಗಳು ಮನೆಬಿಟ್ಟು ಹೋಗಿದ್ದರಿಂದ ಮನನೊಂದು ಒಂದೇ ಕುಟುಂಬದ ಮೂವರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಮೈಸೂರು ಜಿಲ್ಲೆ ಹೆಚ್‌ಡಿ ಕೋಟೆ ತಾಲೂಕಿನ ಬಂದನೂರಿನಲ್ಲಿ ಘಟನೆ ನಡೆದಿದೆ. ಮಹದೇವಸ್ವಾಮಿ, ಪತ್ನಿ ಮಂಜುಳಾ ಹಾಗೂ ಮಗಳು ಹರ್ಷಿತಾ ಕೆರೆಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಮಹದೇವಸ್ವಾಮಿ ಹಿರಿಯ ಪುತ್ರಿ ಅರ್ಪಿತಾ ಪ್ರೀತಿಸಿದ ಯುವಕನೊಂದಿಗೆ ಮನೆಬಿಟ್ಟು ಹೋಗಿದ್ದಳು. ಈ ಹಿನ್ನೆಲೆ ಮನನೊಂದ ಕುಟುಂಬ ಆತ್ಮಹತ್ಯೆಯ ನಿರ್ಧಾರ ಮಾಡಿದ್ದಾರೆ. ಬೂದನೂರು ಕೆರೆಯ ಏರಿ ಮೇಲೆ ಬೈಕ್ ಹಾಗೂ ಮೂವರ ಚಪ್ಪಲಿಗಳು ಪತ್ತೆಯಾಗಿದೆ. ಈ ಹಿನ್ನೆಲೆ ಕೆರೆಯಲ್ಲಿ ಹುಡುಕಾಟ ನಡೆಸಲಾಗಿದೆ. ಸದ್ಯ ಮೂವರ ಮೃತದೇಹ ಪತ್ತೆಯಾಗಿದ್ದು, ಕೆರೆಯಿಂದ ಹೊರತೆಗೆಯಲಾಗಿದೆ. ಹೆಚ್‌ಡಿ ಕೋಟೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ನೀನೇ ಬೇಕೆಂದು ಪ್ರೀತಿಸಿ ಮದುವೆ 3 ತಿಂಗಳ ಗರ್ಭಿಣಿ ಮಾಡಿ ಪತಿ ಎಸ್ಕೇಪ್

**ಬೆಂಗಳೂರು:** ಮದುವೆಯಾದ ಮೂರೇ ತಿಂಗಳಿಗೆ ಪತ್ನಿಯನ್ನು ಗರ್ಭಿಣಿ ಮಾಡಿ, ಪತಿ ಎಸ್ಕೇಪ್ ಆಗಿರುವ ಘಟನೆ ಬೆಂಗಳೂರಿನ ಕಾಮಾಕ್ಷಿಪಾಳ್ಯದಲ್ಲಿ ನಡೆದಿದೆ. ಕುಣಿಗಲ್ ಮೂಲದ ಯುವತಿಯು ಬೆಂಗಳೂರಿನ ಖಾಸಗಿ ಮಾಲ್‌ನಲ್ಲಿ ಕೆಲಸ ಮಾಡುತ್ತಿದ್ದರು. ಈ ವೇಳೆ ಹೇಮಂತ್ ಕುಮಾರ್ ಪರಿಚಿತಯವಾಗಿತ್ತು. ಹೇಮಂತ್, ಯುವತಿಯ ಬೆನ್ನು ಬಿದ್ದು ಪ್ರೀತಿಸುವಂತೆ ಒತ್ತಾಯ ಮಾಡಿದ್ದ. ನಂತರ ಕಳೆದ ಮಾರ್ಚ್‌ನಲ್ಲಿ ಇಬ್ಬರು ವಿವಾಹವಾಗಿದ್ದರು. ಆದರೆ ಮದುವೆಯಾದ ಮೂರೇ ತಿಂಗಳಲ್ಲಿ ಪತ್ನಿಯ ನಡತೆ ಸರಿಯಲ್ಲ ಎಂದು ದೂಷಿಸಿ, ಮನೆಬಿಟ್ಟು ಹೋಗಿದ್ದ. ಇದೀಗ 3 ತಿಂಗಳ ಗರ್ಭಿಣಿಯಾಗಿರೋ ಪತ್ನಿ, ಪತಿಗಾಗಿ ಹುಡುಕಾಟ ನಡೆಸಿ ಪೊಲೀಸ್ ಠಾಣೆ ಮೆಟ್ಟಿಲೇರಿದ್ದಾರೆ. ಪಶ್ಚಿಮ ವಿಭಾಗ ಮಹಿಳಾ ಪೊಲೀಸ್ ಠಾಣೆಗೆ ಪತ್ನಿ ದೂರು ನೀಡಲಾಗಿದೆ. ಪೊಲೀಸರು ಪತಿ, ಪತ್ನಿ ಇಬ್ಬರನ್ನೂ ಕರೆಸಿ ತಿಳಿ ಹೇಳಿ ಕಳುಹಿಸಿದ್ದಾರೆ.

# ತಮನ್ನಾ ಬದಲು ನಮ್ಮ ನಟಿಯರನ್ನೇ ಮೈಸೂರ್ ಸ್ಯಾಂಡಲ್ ಸೋಪ್‌ಗೆ ರಾಯಭಾರಿ ಮಾಡಬಹುದಿತ್ತು

**ದಾವಣಗೆರೆ:** ಮೈಸೂರು ಸ್ಯಾಂಡಲ್ ಸೋಪ್‌ಗೆ ನಟಿ ತಮನ್ನಾ ಭಾಟಿಯಾ ರಾಯಭಾರಿಯಾಗಿ ಆಯ್ಕೆ ಸರಿಯಿಲ್ಲ. ನಮ್ಮ ರಾಜ್ಯದವರನ್ನೇ ಮಾಡಬೇಕು ಎಂದು ಸಾಕಷ್ಟು ಜನರ ಅಭಿಪ್ರಾಯ. ನನ್ನ ಅಭಿಪ್ರಾಯ ಕೂಡ ಅದೇ ಇದೆ ಎಂದು ದಾವಣಗೆರೆಯಲ್ಲಿ ವಸತಿ ಸಚಿವ ಜಮೀರ್ ಅಹ್ಮದ್ ಬೇಸರ ವ್ಯಕ್ತಪಡಿಸಿದರು.

ಈ ಕುರಿತು ದಾವಣಗೆರೆಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಮೈಸೂರು ಸ್ಯಾಂಡಲ್ ಸೋಪ್‌ನ ರಾಯಭಾರಿಯಾಗಲು ನಮ್ಮ ರಾಜ್ಯದಲ್ಲೇ ಬಹಳಷ್ಟು ಜನ ನಟಿಯರು ಇದ್ದರು, ಅವರಲ್ಲೇ ಒಬ್ಬರನ್ನು ರಾಯಭಾರಿಯಾಗಿ ಮಾಡಬಹುದಿತ್ತು ಎಂದರು. ಅಲ್ಲದೇ ತಮನ್ನಾರನ್ನು ಆಯ್ಕೆ ಮಾಡಿದ್ದು ಜಮೀರ್ ಎಂಬ ಬಿವೈ ವಿಜಯೇಂದ್ರ ಆರೋಪಕ್ಕೆ, ವಿಜಯೇಂದ್ರ ನಮ್ಮ ಜೊತೆ ಬಂದಿದ್ರಾ ಆಯ್ಕೆ ಮಾಡೋಕೆ ಎಂದು ಗರಂ ಆದರು.



ಸಚಿವ ಸಂಪುಟ ಪುನಾರಚನೆ ಹೈಕಮಾಂಡ್‌ಗೆ ಬಿಟ್ಟ ವಿಚಾರ. ಅವರು ಯಾವ ನಿರ್ಧಾರ ತೆಗೆದುಕೊಳ್ಳುತ್ತಾರೋ ಅದಕ್ಕೆ ನಾವು ಬದ್ಧ ಎಂದರು. ಡಿಸೆಂಬರ್‌ನಲ್ಲಿ ಸಿಎಂ ಬದಲಾವಣೆಯಾಗುತ್ತಾರೆ ಎಂಬ ಬಿಜೆಪಿಗರ ಹೇಳಿಕೆ ವಿಚಾರವಾಗಿ ಪ್ರತಿಕ್ರಿಯೆ ನೀಡಿದ ಅವರು, ನಾವು ಹೈಕಮಾಂಡ್‌ನ ಶಿಸ್ತಿನ ಸಿಪಾಯಿಗಳು. ನಮ್ಮ ಹೈಕಮಾಂಡ್ ಪಕ್ಷದವರು ನಿರ್ಧಾರ ಮಾಡುತ್ತಾರೆ. ಸಿಎಂ ಸಿದ್ದರಾಮಯ್ಯನವರೇ ಐದು ವರ್ಷ ಸಿಎಂ ಆಗುತ್ತಾರೆ. ಬದಲಾವಣೆ ಎನ್ನುವುದು ಹೈಕಮಾಂಡ್ ನಿರ್ಧಾರ ಮಾಡುತ್ತದೆ ಎಂದರು.

ಡಿಕೆಶಿ, ವಿಜಯೇಂದ್ರ ದೆಹಲಿಯಲ್ಲಿ ಮೀಟಿಂಗ್ ಮಾಡಿದ್ದಾರೆ ಎನ್ನುವ ವಿಚಾರವಾಗಿ ಮಾತನಾಡಿ, ನಮ್ಮ ಪಕ್ಷದ ಬಗ್ಗೆ ವಿಜಯೇಂದ್ರರವರಿಗೆ ಏಕೆ ಬೇಕು. ಅವರ ಪಕ್ಷದಲ್ಲಿರುವ ಸಮಸ್ಯೆಯನ್ನು ಬಗೆಹರಿಸಲಿ. ಯತ್ನಾಳ್‌ರನ್ನು ಮೊದಲು ಸಮಾಧಾನಪಡಿಸಿ ಸುಮ್ಮನಾಗಿಸಿ ಎಂದು ಬಿಜೆಪಿಗೆ ಟಾಂಗ್ ನೀಡಿದರು.

ಕೋವಿಡ್ ಮುನ್ನೆಚ್ಚರಿಕೆಗೆ ಎಲ್ಲಾ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗಿದೆ. ಏರ್‌ಪೋರ್ಟ್‌ಗಳಲ್ಲಿ ಮಾಸ್ಕ್ ಕಡ್ಡಾಯ ಮಾಡಿದ್ದೇವೆ. ಇದರಿಂದ ಯಾರು ಕೂಡ ಹೆದರುವ ಅವಶ್ಯಕತೆ ಇಲ್ಲ, ಜಾಗೃತವಾಗಿರಬೇಕು ಎಂದು ತಿಳಿಸಿದರು.

# ರಾಜ್ಯದ ಶಕ್ತಿಸೌಧ ಇನ್ಮುಂದೆ ಜನರ ವೀಕ್ಷಣೆಗೆ ಮುಕ್ತ

**ಬೆಂಗಳೂರು:** ರಾಜ್ಯದ ಶಕ್ತಿಸೌಧ ವಿಧಾನಸೌಧ ಇನ್ಮುಂದೆ ಸಾರ್ವಜನಿಕರ ವೀಕ್ಷಣೆಗೆ ಮುಕ್ತವಾಗಲಿದೆ. ರಾಜ್ಯದ ಶಕ್ತಿಸೌಧವನ್ನು ದೂರದಿಂದಲೇ ನೋಡಿ ಫೋಟೋ ಕ್ಲಿಕ್ಕಿಸಿ ಸಂತಸ ಪಡುತ್ತಿದ್ದವರಿಗೆ ಈಗ ಹತ್ತಿರದಿಂದಲೇ ನೋಡುವ ಸದಾವಕಾಶ ಸಿಕ್ಕಿದೆ. ಭವ್ಯ ವಿಧಾನಸೌಧ ವೀಕ್ಷಣೆಗೆ ಸರ್ಕಾರದಿಂದ ಪ್ರವಾಸ ಭಾಗ್ಯ ಶುರುವಾಗಿದೆ.

ಬೆಂದಕಾಳೂರಿನ ಹೆಗ್ಗುರುತು, ರಾಜ್ಯದ ಆಡಳಿತ ಶಕ್ತಿಸೌಧ ಅಂತನೇ ಕರೆಯಿಸಿಕೊಳ್ಳುವ ವಿಧಾನಸೌಧ ಈಗ ಪ್ರವಾಸಿ ತಾಣ. ಇಲ್ಲಿಯವರೆಗೂ ಕೇವಲ ಗೇಟ್ ಹೊರಭಾಗದಿಂದ, ರಸ್ತೆಯಿಂದ ಕಾಣಿಸುತ್ತಿದ್ದ ವಿಧಾನಸೌಧ ಇನ್ಮುಂದೆ ಪ್ರವಾಸಿ ಸ್ಥಳ ಆಗಲಿದೆ. ಗೈಡೆಡ್ ಟೂರ್ ಹೆಸರಲ್ಲಿ ಸಾರ್ವಜನಿಕರ ವೀಕ್ಷಣೆಗೆ ಸರ್ಕಾರ ಅವಕಾಶ ನೀಡಿದೆ. ಇನ್ಮುಂದೆ ವಿಧಾನಸೌಧದ ಒಳಗೆ ಹೋಗಿ ಭವ್ಯ ಐತಿಹಾಸಿಕ ಕಟ್ಟಡವನ್ನು ಕಣ್ತುಂಬಿಕೊಳ್ಳಬಹುದು. ವಿಧಾನಸೌಧ ಗೈಡೆಡ್ ಟೂರ್‌ಗೆ ನಿನ್ನೆ ಚಾಲನೆ ಕೊಡಲಾಯಿತು. ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಕಾನೂನು ಸಚಿವ ಹೆಚ್.ಕೆ. ಪಾಟೀಲ್, ಸ್ಪೀಕರ್ ಖಾದರ್ ಹಾಗೂ ಸಭಾಪತಿ ಹೊರಟ್ಟಿ ಅವರು ಗೈಡೆಡ್ ಟೂರ್ ಉದ್ಘಾಟಿಸಿದರು. ಜೂ.1 ರಿಂದ ಅಧಿಕೃತವಾಗಿ ವಿಧಾನಸೌಧ ವೀಕ್ಷಣೆಗೆ ಜನರಿಗೆ ಅವಕಾಶ ಸಿಗಲಿದೆ. ಕಳೆದ 75 ವರ್ಷಗಳಿಂದ ಆಡಳಿತಾತ್ಮಕ ಕಾರ್ಯಗಳಿಗಷ್ಟೇ ಸೀಮಿತವಾಗಿದ್ದ ವಿಧಾನಸೌಧ ಇನ್ಮುಂದೆ ಪ್ರೇಕ್ಷಣೀಯ ಸ್ಥಳದ ಸಾಲಿಗೆ ಸೇರ್ಪಡೆಯಾಗಿದೆ. ಜೂನ್ 1 ರಿಂದ ಸೀಮಿತ ಪ್ರತಿ ಭಾನುವಾರ, ಎರಡನೇ ಹಾಗೂ ನಾಲ್ಕನೇ ಶನಿವಾರದಂದು ವಿಧಾನಸೌಧ ಗೈಡೆಡ್ ಟೂರ್‌ಗೆ ಅವಕಾಶ ಇದೆ. ಪ್ರವಾಸಿಗರಿಗೆ ತಲಾ 50 ರೂ. ಪ್ರವೇಶ ಶುಲ್ಕ ವಿಧಿಸಲಾಗಿದೆ. 15 ವರ್ಷದೊಳಗಿನ ಮಕ್ಕಳಿಗೆ ಹಾಗೂ ಎಸ್ಸೆಸ್ಸೆಲ್ಸಿವರೆಗಿನ ವಿದ್ಯಾರ್ಥಿಗಳಿಗೆ ಪ್ರವೇಶ ಉಚಿತ ಇರಲಿದೆ. 30 ಜನರನ್ನೊಳಗೊಂಡ ಒಂದು ಬ್ಯಾಚ್‌ನಂತೆ 10 ಬ್ಯಾಚ್‌ಗಳಿಗೆ ವಿಧಾನಸೌಧ ವೀಕ್ಷಣೆಗೆ ಅವಕಾಶವಿದೆ. ಸದ್ಯಕ್ಕೆ 10 ಜನ ಗೈಡ್‌ಗಳು ವಿಧಾನಸೌಧದ ಭವ್ಯತೆ, ಪರಂಪರೆ, ಇತಿಹಾಸ, ಕಟ್ಟಡ ಶೈಲಿ, ಅಧಿವೇಶಗಳ ಬಗ್ಗೆ ವಿವರಣೆ ಕೊಡಲಿದ್ದಾರೆ. ಗ್ರ್ಯಾಂಡ್ ಸ್ಟೆಪ್ಸ್, ಕಟ್ಟಡ ಶೈಲಿ, ಸಭಾಂಗಣಗಳು, ವೀಕ್ಷಕರ ಗ್ಯಾಲರಿ, ವಿಧಾನಸೌಧ ಫೌಂಡೇಷನ್ ಸ್ಟೋನ್, ಗಣ್ಯರ ಪ್ರತಿಮೆಗಳು, ಭುವನೇಶ್ವರಿ ಪ್ರತಿಮೆ, ಸಿಎಂ ಕೊಠಡಿ, ಸಂಪುಟ ಸಭೆ ಕೊಠಡಿ ಮುಂಭಾಗಗಳು, ವಿಧಾನಸೌಧದ ವಿಶಾಲ ಕಾರಿಡಾರ್‌ಗಳ ವೀಕ್ಷಣೆ ಮತ್ತು ವಿವರಣೆ ಇರಲಿದೆ.



# ಫಾರ್ಮ್ ಹೌಸ್‌ನಲ್ಲಿ ರೇವ್ ಪಾರ್ಟಿ: 4 ಜನ ಅರೆಸ್ಟ್



**ಚಿಕ್ಕಬಳ್ಳಾಪುರ:** ದೇವನಹಳ್ಳಿ ತಾಲೂಕಿನ ಕನ್ನಮಂಗಲ ಗ್ರಾಮದ ಬಳಿಯ ಫಾರ್ಮ್ ಹೌಸ್‌ನಲ್ಲಿ ರೇವ್ ಪಾರ್ಟಿ ಮೇಲೆ ಪೊಲೀಸರು ದಾಳಿ ನಡೆಸಿ 4 ಮಂದಿಯನ್ನು ಪೊಲೀಸರು ಬಂಧಿಸಿದ್ದಾರೆ.

ಖಚಿತ ಮಾಹಿತಿ ಮೇರೆಗೆ ದೇವನಹಳ್ಳಿ ಪೊಲೀಸರು ದಾಳಿ ನಡೆಸಿದ್ದಾರೆ. ಈ ವೇಳೆ ಪಾರ್ಟಿಯಲ್ಲಿ 7 ಯುವತಿಯರು ಹಾಗೂ 24 ಯುವಕರು ಭಾಗಿಯಾಗಿರುವುದು ಗೊತ್ತಾಗಿದೆ. ಎಲ್ಲರನ್ನೂ ವಶಕ್ಕೆ ಪಡೆದು ಪೊಲೀಸರು ವಿಚಾರಣೆ ನಡೆಸಿದ್ದಾರೆ. ಬಳಿಕ 4 ಜನರನ್ನು ಬಂಧಿಸಿದ್ದು, ಉಳಿದವರನ್ನು ಸ್ಟೇಷನ್ ಬೇಲ್ ಮೇಲೆ ಬಿಡುಗಡೆ ಮಾಡಲಾಗಿದೆ ಎಂದು ಈಶಾನ್ಯ ವಿಭಾಗ ಡಿಸಿಪಿ ಸಜೀತ್ ತಿಳಿಸಿದ್ದಾರೆ.

ಬೆಳಗ್ಗೆ 5:00 ಗಂಟೆ ಸುಮಾರಿಗೆ ಕನ್ನಮಂಗಲ ಫಾರ್ಮ್ ಹೌಸ್ ಮೇಲೆ ಪೊಲೀಸರು ದಾಳಿ ನಡೆಸಿದ್ದರು. ಈ ವೇಳೆ ಬರ್ತ್ ಡೇ ಪಾರ್ಟಿಯಲ್ಲಿ, ರಾತ್ರಿ ಇಡೀ ಮಾದಕ ವಸ್ತು ಬಳಕೆ ಮಾಡಿದ್ದಾರೆ ಎಂಬುದು ತಿಳಿದು ಬಂದಿತ್ತು. ಪಾರ್ಟಿಯಲ್ಲಿ ಪೆಡ್ಲರ್ ಕೂಡ ಇದ್ದ. ಆರೋಪಿಗಳು ಐಟಿ ಸೆಕ್ಟರ್‌ನಲ್ಲಿ ಕೆಲಸ ಮಾಡುತ್ತಿದ್ದರು ಎಂದು ತಿಳಿದು ಬಂದಿದೆ.

ಫಾರ್ಮ್ ಹೌಸ್ ಮಾಲೀಕ ಸೇರಿ ಎಲ್ಲಾ ಆರೋಪಿಗಳ ವಿರುದ್ಧ ಎನ್‌ಡಿಪಿಎಸ್ ಕಾಯ್ದೆಯಡಿ ಪ್ರಕರಣ ದಾಖಲಾಗಿದೆ.

# ಮನಗೂಳಿ ಕೆನರಾ ಬ್ಯಾಂಕ್ ದೋಚಿದ ಖದೀಮರು

**ವಿಜಯಪುರ:** ಬಸವನಬಾಗೇವಾಡಿ ತಾಲೂಕಿನ ಮನಗಳಿ ಪಟ್ಟಣದಲ್ಲಿನ ಕೆನರಾ ಬ್ಯಾಂಕ್ ದರೋಡೆ ಮಾಡಲಾಗಿದೆ. ಬ್ಯಾಂಕ್ ಬಾಗಿಲಿನ ಕೀ ಮುರಿದು ಹಾಗೂ ಕಿಟಕಿ ಸರಳು ಮುರಿದು ಒಳ ನುಗ್ಗಿದ ಕಳ್ಳರು ಲಕ್ಷಾಂತರ ರೂಪಾಯಿ ಚಿನ್ನಾಭರಣ ಕದ್ದು ಪರಾರಿಯಾಗಿದ್ದಾರೆ ಎನ್ನಲಾಗಿದೆ. ಶನಿವಾರ ತಡರಾತ್ರಿ ಘಟನೆ ನಡೆದಿದ್ದು, ತಡವಾಗಿ ಬೆಳಕಿಗೆ ಬಂದಿದೆ. ಶನಿವಾರ ಮತ್ತು ಭಾನುವಾರ ಎರಡು ದಿನ ರಜೆ ಇದ್ದ ಹಿನ್ನೆಲೆಯಲ್ಲಿ ಸಿಬ್ಬಂದಿ ಬ್ಯಾಂಕ್‌ಗೆ ಬಂದಿಲ್ಲ.

ಇನ್ನು, ಬ್ಯಾಂಕ್ ಕಳ್ಳತನವಾದ ಸುದ್ದಿ ತಿಳಿದು,



ಸಿಬ್ಬಂದಿ, ಮನಗೂಳಿ ಠಾಣೆ ಪೊಲೀಸರು ಮತ್ತು ಶ್ವಾನದಳ ಸ್ಥಳಕ್ಕೆ ಆಗಮಿಸಿದೆ. ಶ್ವಾನದಳ ಹಾಗೂ ಪೋಲಿಸರು ಸ್ಥಳದಲ್ಲಿ ಪರಿಶೀಲನೆ ನಡೆಸಿದರು. ಸ್ಥಳಕ್ಕೆ ಎಸ್ಪಿ ಲಕ್ಷ್ಮಣ ನಿಂಬರಗಿ ಎಎಸ್ಪಿ ರಾಮನಗೌಡ ಹಟ್ಟಿ ಹಾಗೂ ಇತರೆ ಅಧಿಕಾರಿಗಳು ಭೇಟಿ ನೀಡಿ ಮಾಹಿತಿ ಕಲೆಹಾಕುತ್ತಿದ್ದಾರೆ.

# ಅಪ್ಪ, ಅಮ್ಮ, ತಂಗಿ ಸತ್ತರೂ ಮುಖ ನೋಡಲು ಬಾರದ ಕಟುಕಿ

**ಮೈಸೂರು:** ಮಗಳು ಮನೆ ಬಿಟ್ಟು ಓಡಿ ಹೋಗಿದ್ದಕ್ಕೆ ಮರ್ಯಾದೆಗೆ ಅಂಜಿ ಒಂದೇ ಕುಟುಂಬದ ಮೂವರು ಕೆರೆಗೆ ಹಾರಿ ಪ್ರಾಣ ಕಳೆದುಕೊಂಡಿದ್ದಾರೆ. ಮೈಸೂರಿನ ಹೆಚ್.ಡಿ.ಕೋಟೆ ತಾಲೂಕಿನ ಬೂದನೂರು ಗ್ರಾಮದಲ್ಲಿ ಈ ಘಟನೆ ನಡೆದಿದೆ.

ಮಹದೇವಸ್ವಾಮಿ, ಪತ್ನಿ ಮಂಜುಳಾ, ಮಗಳು ಹರ್ಷಿತಾ ಮೃತ ದುರ್ದೈವಿಗಳು. ಇವರ ಸಾವಿಗೆ ಕಾರಣ ದೊಡ್ಡ ಮಗಳು ಕಾರಣ ಎಂದು ತಿಳಿದುಬಂದಿದೆ, ಮಹದೇವ ಸ್ವಾಮಿ ಅವರ ದೊಡ್ಡ ಮಗಳು ಯುವಕನೊಬ್ಬನನ್ನು ಪ್ರೀತಿಸುತ್ತಿದ್ದು, ಆತನನ್ನು ಮದುವೆಯಾಗುವುದಾಗಿ ಆಕೆ ಪಟ್ಟು ಹಿಡಿದಿದ್ದಾಳಂತೆ. ಆದ್ರೆ ಮನೆಯವರಿಗೆ ಈ ಮದುವೆ ಇಷ್ಟವಿರಲಿಲ್ಲವಂತೆ. ಹೀಗಾಗಿ ಅವಳು ಮನೆಬಿಟ್ಟು ಪ್ರೀತಿಸಿದ ಹುಡುಗನ ಜೊತೆ



ಓಡಿಹೋಗಿದ್ದಾಳೆ. ಇದರಿಂದ ಮನನೊಂದು ಮೂವರು ಹಗ್ಗಕಟ್ಟಿಕೊಂಡು ಬೂದನೂರು ಕೆರೆಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಈ ಘಟನೆಗೆ ಇಡೀ ಗ್ರಾಮವೇ ಮಮ್ಮಲ ಮರುಗಿದೆ. ಆದ್ರೆ, ಓಡಿ ಹೋದವಳು ಮಾತ್ರ ತನ್ನ ಅಪ್ಪ, ಅಮ್ಮ, ತಂಗಿಯ ಮಾರಿ ನೋಡಲು ಸಹ ಬಂದಿಲ್ಲ.

**ಮುಖ ನೋಡಲು ಬರಲೇ ಇಲ್ಲ:** ಮಹದೇವಸ್ವಾಮಿ ಹಿರಿಯ ಪುತ್ರಿ ಅರ್ಪಿತಾ ಯುವನಕೊಂದಿಗೆ ಪ್ರೀತಿಯಲ್ಲಿ ಬಿದ್ದು ಮನೆಬಿಟ್ಟು ಹೋಗಿದ್ದಳು. ಹೀಗಾಗಿ ಮಾನಕ್ಕೆ ಅಂಜಿ ಮೂವರು ಜೀವ ಕಳೆದುಕೊಂಡಿದ್ದಾರೆ. ಹೆಚ್.ಡಿ ಕೋಟೆ ತಾಲೂಕಿನ ಬೂದನೂರು ಗ್ರಾಮದಲ್ಲಿ ಮಳೆಯ ನಡುವೆಯೇ ಮೂವರ ಅಂತ್ಯಕ್ರಿಯೆ ನೆರವೇರಿಸಲಾಗಿದೆ. ಮೃತರನ್ನು ನೆನೆದು ಇಡೀ ಗ್ರಾಮಸ್ಥರು ಕಣ್ಣೀರಿಡುತ್ತಿದ್ದಾರೆ. ಅತ್ತ, ಮನೆ ಬಿಟ್ಟು ಹೋಗಿದ್ದ ಮಗಳು ಅಂತ್ಯಕ್ರಿಯೆಗೂ ಬಂದಿಲ್ಲ ಹೀಗಾಗಿ ಗ್ರಾಮಸ್ಥರು ಹಿಡಿಶಾಪ ಹಾಕಿದ್ದಾರೆ.

## ವಿನೂತನ ಪ್ರಯತ್ನ

ರೂಪಿಸಿದೆ. ನಿನ್ನೆ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ವಿಧಾನಸೌಧ ಮಾರ್ಗದರ್ಶಿ ಪ್ರವಾಸವನ್ನ ಉದ್ಘಾಟನೆ ಮಾಡಲಾಯ್ತು. ವಿಧಾನಸಭೆ ಸ್ಪೀಕರ್ ಯು ಟಿ ಖಾದರ್ ಪ್ರಯತ್ನದಿಂದ ಇಂತದೊಂದು ಕಾರ್ಯಕ್ರಮ ಆರಂಭ ಮಾಡಲಾಗಿದೆ. ಇದರ ಜೊತೆ ಭದ್ರತೆ ಕೂಡ ಇರುತ್ತದೆ ಅಂತ ಯುಟಿ ಖಾದರ್ ಹೇಳಿದ್ದಾರೆ.

**ವಿಧಾನಸೌಧ ಪ್ರವಾಸದ ವಿಶೇಷತೆಗಳು**

- **ಪ್ರತೀ ಭಾನುವಾರ ಹಾಗೂ ಎರಡು ಮತ್ತು ನಾಲ್ಕನೇ ಶನಿವಾರ ವಿಧಾನಸೌಧ ಪ್ರವಾಸ**
- **ಆನ್‌ಲೈನ್‌ನಲ್ಲಿ (https://kstdc.co/activities) ಮುಂಚಿತವಾಗಿ ಟಿಕೆಟ್ ಬುಕ್ ಮಾಡಬೇಕು.**
- **ಜೂನ್ 1 ರಿಂದ ಅಧಿಕೃತ ವಿಧಾನಸೌಧ ಪ್ರವಾಸ ಆರಂಭ**
- **ವಿಧಾನಸೌಧ ಟೂರ್ ಗೆ 16 ವರ್ಷ ಮೇಲ್ಪಟ್ಟವರಿಗೆ 50 ರೂ. ಟಿಕೆಟ್ .**
- **16 ವರ್ಷ ವಯಸ್ಸಿಗಿಂತ ಕಡಿಮೆ ಇರುವ ಮಕ್ಕಳಿಗೆ ಉಚಿತ.**
- **ವಿಧಾನಸೌಧ ಟೂರ್ ಬೆಳಗ್ಗೆ 8 ರಿಂದ ಸಂಜೆ 5 ಗಂಟೆವರೆಗೆ ಇರಲಿದೆ.**
- **ದಿನಕ್ಕೆ ಪ್ರತೀ ಬ್ಯಾಚ್‌ನಲ್ಲಿ 30 ಜನರಂತೆ ವಿಧಾನಸೌಧ ವೀಕ್ಷಣೆ.**
- **ದಿನಕ್ಕೆ 300 ಮಂದಿಗೆ ಮಾತ್ರ ವಿಧಾನಸೌಧ ನೋಡುವ ಅವಕಾಶ**
- **ಒಂದು ಬ್ಯಾಚ್ ವಿಧಾನಸೌಧ ಪ್ರವಾಸಕ್ಕೆ ಒಂದೂವರೆ ಗಂಟೆ ಸಮಯ, ಒಂದೂವರೆ ಕಿಮೀ ಸಮಯ.**
- **ವಿಧಾನಸೌಧದ ಗೇಟ್ ನಂಬರ್ 3 ಮೂಲಕ ಟೂರ್ ಆರಂಭ**
- **20 ನಿಮಿಷ ಮುಂಚೆ ಟೂರ್ ಆರಂಭಕ್ಕೂ ಮುನ್ನ ಹಾಜರಿರಬೇಕು**
- **ಟಿಕೆಟ್ ಬುಕ್ ಮಾಡಿದವರು ಗುರುತಿನ ಚೀಟಿ ತರಬೇಕು**
- **ವಿಧಾನಸೌಧ ಟೂರ್ ವೇಳೆ ನಿಗದಿತ ಸ್ಥಳದಲ್ಲಿ ಫೋಟೋ ತೆಗೆಯಲು ಅವಕಾಶ**
- **ಕನ್ನಡ ಹಾಗೂ ಇಂಗ್ಲಿಷ್ ನಲ್ಲಿ ವಿಧಾನಸೌಧ ಟೂರ್ ಗೆ ಗೈಡ್‌ಗಳ ನೇಮಕ**

ವಿಧಾನಸೌಧದಲ್ಲಿ ಇಂತಹದೊಂದು ವಿನೂತನ ಕಾರ್ಯಕ್ರಮ ಮಾಡುತ್ತಿರೋದು ಇದೇ ಮೊದಲೇನಲ್ಲ. ಈಗಾಗಲೇ ಇದೇ ಶಕ್ತಿ ಕೇಂದ್ರದಲ್ಲಿ ಐತಿಹಾಸಿಕ ಪುಸ್ತಕ ಮೇಳ ಮಾಡಿ ಯಶಸ್ವಿ ನಡೆಸಲಾಗಿದೆ. ಇದಕ್ಕೆ ಸಾವಿರಾರು ಸಂಖ್ಯೆಯಲ್ಲಿ ಸಾರ್ವಜನಿಕರು ಪುಸ್ತಕ ಕೊಂಡು ವಿಧಾನಸೌಧದ ರೌಂಡ್ಸ್ ಹಾಕಿದರು. ಇದೀಗ ವಿಧಾನಸೌಧದ ಒಳಗೆ ಹೋಗಿ ಕಣ್ತುಂಬಿಕೊಳ್ಳುವ ಅವಕಾಶ ನೀಡಲಾಗುತ್ತಿದೆ. ಇಂತಹದೊಂದು ಅವಕಾಶ ಮಾಡಿದ್ದಕ್ಕೆ ವಿದ್ಯಾರ್ಥಿಗಳು ಪ್ರವಾಸಿಗಳು ಸಂತಸ ವ್ಯಕ್ತ ಪಡಿಸಿದ್ದಾರೆ.

## ಮೋದಿ ಸರ್ಕಾರಕ್ಕೆ 11 ವರ್ಷ

28 ರಂದು ಪ್ರಧಾನ ಮಂತ್ರಿ ಜನಧನ ಯೋಜನೆ ಆರಂಭಿಸಲಾಯಿತು.

**ಬೇಟಿ ಬಚಾವೋ ಬೇಟಿ ಪಢಾವೋ:** ಕ್ಷೀಣಿಸುತ್ತಿರುವ ಲಿಂಗಾನುಪಾತ ಸರಿಪಡಿಸುವುದು ಹಾಗೂ ಮಹಿಳೆಯರ ಸಬಲೀಕರದಣದ ಉದ್ದೇಶದೊಂದಿಗೆ 2015 ರ ಜನವರಿ 22 ರಂದು ಬೇಟಿ ಬಚಾವೋ ಬೇಟಿ ಪಢಾವೋ ಯೋಜನೆ ಅನುಷ್ಠಾನಕ್ಕೆ ಬಂದಿತು.

**ಸಂಸದರ ಆದರ್ಶ ಗ್ರಾಮ ಯೋಜನೆ:** ಈ ಯೋಜನೆಯ ಮೂಲಕ, ಸಂಸದರು ಗ್ರಾಮವೊಂದನ್ನು ದತ್ತು ಸ್ವೀಕಾರ ಮಾಡಿ ಮಾದರಿ ಗ್ರಾಮವನ್ನಾಗಿ ಅಭಿವೃದ್ಧಿಪಡಿಸುವ ಉದ್ದೇಶ ಹೊಂದಲಾಗಿತ್ತು.

**ಮೇಕ್ ಇನ್ ಇಂಡಿಯಾ:** ಇದು ವಿವಿಧ ಕೈಗಾರಿಕಾ ವಲಯಗಳ ಉತ್ಪಾದನೆ ಮತ್ತು ಉದ್ಯಮಶೀಲತಾ ಚಟುವಟಿಕೆಗಳನ್ನು ಬೆಂಬಲಿಸಲು ಕೈಗೊಂಡ ಯೋಜನೆಯಾಗಿದೆ. ಇದರ ಅಡಿಯಲ್ಲಿ ಕೈಗಾರಿಕೆಗಳು ಹಾಗೂ ಉತ್ಪಾದನಾ ವಲಯಕ್ಕೆ ಮೂಲಸೌಕರ್ಯ ಒದಗಿಸಿಕೊಡಲಾಗುತ್ತದೆ.

**ನಮಾಮಿ ಗಂಗೆ:** ದೇಶದ ಪ್ರಮುಖ ನದಿಯಾಗಿರುವ ಗಂಗಾ ನದಿಯ ನೈರ್ಮಲ್ಯ ಕಾಪಾಡುವುದು, ಸ್ವಚ್ಛತೆಗೆ ಸಂಬಂಧಿಸಿದ ಯೋಜನೆ ಇದಾಗಿದೆ. 2014 ರ ಜೂನ್ ನಲ್ಲಿ 20,000 ಕೋಟಿ ರೂಪಾಯಿಗಳ ಬಜೆಟ್ ಅನುದಾನದೊಂದಿಗೆ ಯೋಜನೆ ಆರಂಭಿಸಲಾಗಿತ್ತು. ನದಿಯ ಸಂರಕ್ಷಣೆ ಮತ್ತು ಪುನರುಜ್ಜೀವನದ ದೃಷ್ಟಿಯಿಂದ ಈ ಯೋಜನೆ ಬಹಳ ಮಹತ್ವದ್ದಾಗಿದೆ.

**ಗ್ರಾಮೀಣ ವಿದ್ಯುದೀಕರಣ:** ದೇಶದ ಪ್ರತಿ ಹಳ್ಳಿಗಳಿಗೂ 1000 ದಿನಗಳಲ್ಲಿ ವಿದ್ಯುತ್ ಸಂಪರ್ಕ ಕಲ್ಪಿಸಲಾಗುವುದು ಎಂದು ಪ್ರಧಾನಿ ಮೋದಿ ಘೋಷಣೆ ಮಾಡಿದ್ದರು. ಗ್ರಾಮೀಣ ಪ್ರದೇಶಗಳಲ್ಲಿ ವಿದ್ಯುತ್ ಸಂಪರ್ಕ ಹೆಚ್ಚಿಸಲು ಈ ಯೋಜನೆ ಸಹಾಯ ಮಾಡಿದೆ.

**ನೋಟ್ ಬ್ಯಾನ್:** ಕಪ್ಪುಹಣ ಮತ್ತು ಭ್ರಷ್ಟಾಚಾರ ತಡೆ ನಿಟ್ಟಿನಲ್ಲಿ 2016ರ ನವೆಂಬರ್ 8 ರಂದು 500 ಹಾಗೂ 1000 ರೂ. ಮುಖಬೆಲೆಯ ಕರೆನ್ಸಿ ನೋಟುಗಳನ್ನು ನಿಷೇಧಿಸಲಾಯಿತು. ಈ ಕ್ರಮ ರಾಜಕೀಯವಾಗಿಯೂ ಬಹಳಷ್ಟು ಟೀಕೆ, ಪರ–ವಿರೋಧ ಚರ್ಚೆಗೆ ಗ್ರಾಸವಾಗಿತ್ತು.

**ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ:** ಈ ಕಾರ್ಯಕ್ರಮವು ಸುಧಾರಿತ ನೀರಾವರಿ ಸೌಲಭ್ಯಗಳು ಮತ್ತು ''ಪ್ರತಿ ಹನಿಗೆ ಹೆಚ್ಚಿನ ಬೆಳೆ'' ಧ್ಯೇಯವಾಕ್ಯ ಸೇರಿದಂತೆ ಮಾರುಕಟ್ಟೆಯಲ್ಲಿ ಲಭ್ಯವಿರುವ ನೀರಾವರಿ ತಂತ್ರಜ್ಞಾನಗಳನ್ನು ಒದಗಿಸುವ ಮೂಲಕ ಕೃಷಿಯಿಂದ ಇಳುವರಿಯನ್ನು ಹೆಚ್ಚಿಸಲು ಪ್ರಯತ್ನಿಸುವ ಯೋಜನೆಯಾಗಿದೆ.

**ಡಿಜಿಟಲ್ ಇಂಡಿಯಾ ಉಪಕ್ರಮ:** ಭಾರತವನ್ನು ಡಿಜಿಟಲ್ ಸಬಲೀಕರಣಗೊಂಡ ಸಮಾಜವನ್ನಾಗಿ ಮಾಡುವ ಗುರಿಯೊಂದಿಗೆ ಡಿಜಿಟಲ್ ಇಂಡಿಯಾ ಯೋಜನೆ ಹಮ್ಮಿಕೊಳ್ಳಲಾಗಿತ್ತು. ಪರಿಣಾಮವಾಗಿ ದೇಶದಾದ್ಯಂತ, ಗ್ರಾಮೀಣ ಪ್ರದೇಶಗಳಲ್ಲೂ ಇಂಟರ್ನೆಟ್ ಸೌಲಭ್ಯ, ಡಿಜಿಟಲ್ ಪರಿಕರಗಳು ಲಭ್ಯವಾಗುವಂತಾಗಿದೆ.'

**ಸಾರ್ವಜನಿಕರ ಆರೋಗ್ಯಕ್ಕಾಗಿ ಹಲವು ಯೋಜನೆಗಳು:** ಕೇಂದ್ರ ಸರ್ಕಾರವು ಆರೋಗ್ಯ ಕ್ಷೇತ್ರಕ್ಕೆ ಸಂಬಂಧಿಸಿದ ಅನೇಕ ಉಪಕ್ರಮಗಳನ್ನು ಕೈಗೊಂಡಿದೆ. ಜನರಿಗೆ ಉತ್ತಮ ಮತ್ತು ಸುಧಾರಿತ ಆರೋಗ್ಯ ಸೇವೆಯನ್ನು ಒದಗಿಸುವ ಉದ್ದೇಶದಿಂದ, ಸಮಾಜದ ಆರ್ಥಿಕವಾಗಿ ದುರ್ಬಲ ವರ್ಗಗಳಿಗೆ ಆರೋಗ್ಯ ವಿಮೆಗಾಗಿ 'ಆಯುಷ್ಮಾನ್ ಭಾರತ್' ಆರಂಭಿಸಲಾಗಿದೆ. ಬಡವರಿಗೆ ಕಡಿಮೆ ದರದಲ್ಲಿ ಔಷಧ ನೀಡಲು ಜನ ಔಷಧ ಕೇಂದ್ರಗಳ ಆರಂಭ ಸೇರಿದಂತೆ ಅನೇಕ ಕ್ರಮಗಳನ್ನು ಕೈಗೊಳ್ಳಲಾಗಿದೆ.

**ಪಾಕಿಸ್ತಾನದ ಉಗ್ರರ ವಿರುದ್ಧ ದಿಟ್ಟ ಕ್ರಮ:** 2019ರಲ್ಲಿ ಜಮ್ಮು ಮತ್ತು ಕಾಶ್ಮೀರದ ಪುಲ್ವಾಮಾದಲ್ಲಿ ಭಯೋತ್ಪಾದಕ ದಾಳಿಗೆ ಸಿಆರ್ ಪಿಎಫ್ ಯೋಧರು ಹುತಾತ್ಮರಾಗಿದ್ದರು. ಅದಾದ ನಂತರ, ಭಾರತೀಯ ಸೇನೆಯು ಬಾಲಾಕೋಟ್ ಮೇಲೆ ಸರ್ಜಿಕಲ್ ಸ್ಟ್ರೈಕ್ ಮಾಡಿ ಉಗ್ರರ ನೆಲೆಗಳನ್ನು ಧ್ವಂಸಗೊಳಿಸಿತ್ತು. 2025ರ ಏಪ್ರಿಲ್ 22 ರಂದು ಪಹಲ್ಗಾಮ್ ನಲ್ಲಿ ಉಗ್ರರ ದಾಳಿಗೆ 26 ಮಂದಿ ಅಮಾಯಕರು ಬಲಿಯಾಗಿದ್ದರು. ಇದಕ್ಕೆ ಪ್ರತೀಕಾರವಾಗಿ ಮೇ 7–8ರಂದು ಭಾರತೀಯ ಸೇನೆ ಪಾಕಿಸ್ತಾನ ಆಕ್ರಮಿತ ಕಾಶ್ಮೀರ ಹಾಗೂ ಪಾಕಿಸ್ತಾನದ ಒಳಭಾಗದ ಉಗ್ರರ ನೆಲೆಗಳ ಮೇಲೆ ದಾಳಿ ನಡೆಸಿತು.

## ಮಹಾರಾಷ್ಟ್ರದಲ್ಲಿ ಮಳೆ

ಬೀಸಲಿದೆ. ಈ ಬಾರಿ ಮುಂಗಾರು ನಿಗದಿತ ಸಮಯಕ್ಕಿಂತ 8 ದಿನ ಮೊದಲೇ ಕೇರಳ ತಲುಪಿದೆ. ಐಎಂಡಿ ಪ್ರಕಾರ, ಕೊನೆಯ ಬಾರಿಗೆ ರಾಜ್ಯದಲ್ಲಿ ಮಾನ್ಸೂನ್ ಇಷ್ಟು ಬೇಗ ಆಗಮಿಸಿದ್ದು 2009 ರ ಮೇ 23 ಮತ್ತು 2001 ರಂದು. ಕೇರಳದಲ್ಲಿ ಮಾನ್ಸೂನ್ ಆಗಮನದ ಸಾಮಾನ್ಯ ದಿನಾಂಕ ಜೂನ್ 1. ಆದಾಗ್ಯೂ, 1918 ರಲ್ಲಿ, ಮಾನ್ಸೂನ್ ಮೇ 11 ರಂದು ಕೇರಳಕ್ಕೆ ಆಗಮಿಸಿತ್ತು.

ವಾಡಿಕೆಗಿಂತ ಮೊದಲೇ ಕೇರಳ ಪ್ರವೇಶಿಸಿರುವ ಮುಂಗಾರು, ರಾಜ್ಯದ ಎಲ್ಲೆಡೆ ನಿರಂತರವಾಗಿ ಮಳೆ ಸುರಿಯುಂತೆ ಮಾಡಿದೆ. ಮುಂಗಾರು ಮಾರುತವು ಮಹಾರಾಷ್ಟ್ರವನ್ನೂ ಪ್ರವೇಶಿಸಿದ್ದು, ಕೊಂಕಣದಲ್ಲಿ ಭಾರಿ ಮಳೆ ಸುರಿಯುತ್ತಿದೆ. ಈಶಾನ್ಯ ರಾಜ್ಯಗಳಿಗೆ ಕೂಡ ಮುಂಗಾರು ಪ್ರವೇಶ ಆಗಿದೆ.

ಇಡುಕ್ಕಿ ಜಿಲ್ಲೆಯಲ್ಲಿರುವ ಮಲಂಕರ ಅಣೆಕಟ್ಟಿನ ಐದು ಗೇಟುಗಳನ್ನು ತೆಗೆದು ಭಾನುವಾರ ನದಿಗೆ ನೀರು ಹರಿಸಲಾಯಿತು. ಇದರಿಂದ ತೊಡುಪುಳ ಹಾಗೂ ಮೂವಾಟ್ಟುಪುಳ ನದಿ ತೀರದಲ್ಲಿ ವಾಸಿಸುವ ನಿವಾಸಿಗಳಿಗೆ ಎಚ್ಚರದಿಂದ ಇರುವಂತೆ ಸೂಚಿಸಲಾಗಿದೆ.

ಕೋಳಿಕ್ಕೋಡ್, ಕಾಸರಗೋಡು ಜಿಲ್ಲೆಯ ಹಲವೆಡೆ ಮರಗಳು ಉರುಳಿಬಿದ್ದಿವೆ. ಕೊಲ್ಲಂ ಪಟ್ಟಣದ ಹೃದಯಭಾಗದಲ್ಲಿ ದೊಡ್ಡದಾದ ಫ್ಲೆಕ್ಸ್ ರಸ್ತೆಗೆ ಉರುಳಿಬಿದ್ದಿದ್ದು, ಭಾರಿ ಅನಾಹುತವೊಂದು ಸ್ವಲ್ಪದರಲ್ಲಿ ತಪ್ಪಿದೆ.

ದೆಹಲಿಯ ಬವಾನಾ, ಘೋಘಾ ಗ್ರಾಮ, ಸೆಕ್ಟರ್ 25 ರೋಹಿಣಿ, ಡಿಎಸ್‌ಐಡಿಸಿ ನರೇಲಾ, ಸುಲ್ತಾನ್‌ಪುರಿ, ಸೆಕ್ಟರ್

**ಮೊದಲನೇ ಪುಟದಿಂದ...**

22 ರೋಹಿಣಿ, ಕರಾಲಾ, ಬದ್ಲಿ, ಸಿರ್ಸಾಪುರ್, ಅವಂತಿಕಾ, ಮಂಗೋಲ್‌ಪುರಿ, ಆರ್.ಯು.ಬ್ಲಾಕ್ ಪೀತಾಂಪುರ ಹಾಗೂ ರಿಠಾಲಾ ಗ್ರಾಮಗಳು ಹಾಗೂ ಉತ್ತರ ದೆಹಲಿಯ ಹಲವೆಡೆಗಳಲ್ಲಿ ವಿದ್ಯುತ್ ವ್ಯತ್ಯಯಗೊಂಡಿದೆ ಎಂದು ಟಾಟಾ ಪವರ್ ದೆಹಲಿ ಡಿಸ್ಟ್ರಿಬ್ಯೂಷನ್ ಲಿಮಿಟೆಡ್ ತಿಳಿಸಿದೆ.

ಕೇರಳಕ್ಕೆ ಈ ವರ್ಷ ಮೇ 24ರಂದೇ ನೈಋತ್ಯ ಮುಂಗಾರು ಪ್ರವೇಶಿಸಿದ್ದು, ಭಾನುವಾರ ರಾಜ್ಯದ ಸಾಕಷ್ಟು ಜಿಲ್ಲೆಗಳಲ್ಲಿಯೂ ವ್ಯಾಪಕ ಮಳೆಯಾಗಿದೆ. ಮುಂಡಕ್ಕೈ ಮತ್ತು ಚೂರಲ್‌ಮಲದಲ್ಲಿ ಹಾದುಹೋಗುವ ಪುನ್ನಪುಳ ನದಿಯು ಅಪಾಯದ ಮಟ್ಟವನ್ನು ಮೀರಿ ಹರಿಯುತ್ತಿದ್ದು, ತಗ್ಗು ಪ್ರದೇಶಗಳ ನಿವಾಸಿಗಳು ಆತಂಕದಲ್ಲಿ ದಿನ ದೂಡುತ್ತಿದ್ದಾರೆ.

## ಹಲವೆಡೆ ಭೂಕುಸಿತ

ಬೇಲೂರು ತಾಲ್ಲೂಕಿನ ಕುಪ್ಪಗೋಡು ಬಳಿಕ ಕೆರೆಗೋಡಿ ಬಿದ್ದು ಹತ್ತಾರು ಎಕರೆ ಪ್ರದೇಶದ ಭತ್ತದ ಗದ್ದೆಗಳು ಜಲಾವೃತವಾಗಿವೆ. ನದಿ ತೊರೆಗಳಲ್ಲಿ ನೀರಿನ ಹರಿವು ಗಣನೀಯವಾಗಿ ಏರಿಕೆಯಾಗಿದೆ. ಇನ್ನೂ ಮೂರು ದಿನ ಮಳೆ ಮುಂದುವರಿಯುವ ಸೂಚನೆ ಹಿನ್ನೆಲೆಯಲ್ಲಿ ಹವಾಮಾನ ಇಲಾಖೆ ಜಿಲ್ಲೆಯಲ್ಲಿ ಆರೆಂಜ್ ಅಲರ್ಟ್ ಘೋಷಣೆ ಮಾಡಿದೆ. ನದಿ ಪಾತ್ರದ ಜನರು ಎಚ್ಚರಿಕೆಯಿಂದ ಇರುವಂತೆ ಸೂಚನೆ ನೀಡಲಾಗಿದೆ. ಈಗಾಗಲೇ ಜಿಲ್ಲೆಯ ಬೇಲೂರಿನ ಯಗಚಿ ಜಲಾಶಯ ಭರ್ತಿಯಾಗಿದ್ದು , ಹೆಚ್ಚಿನ ಪ್ರಮಾಣದ ನೀರನ್ನು ನದಿಗೆ ಹರಿಯ ಬಿಡಲಾಗಿದೆ.

ಮುಂಗಾರುಪೂರ್ವ ಮಳೆ ರಾಜಧಾನಿ ಬೆಂಗಳೂರಿನಲ್ಲಿ ಅನಾಹುತಗಳನ್ನು ಸೃಷ್ಟಿಸಿದ್ದೆ, ಮುಂಗಾರು ಮಳೆ ಹಲವು ಜಿಲ್ಲೆಗಳಲ್ಲಿ ಅವಾಂತರಗಳನ್ನು ಸೃಷ್ಟಿಸಿದೆ.

## ಮಳೆ ಅನಾಹುತ

ಇನ್ನೆರಡು ದಿನ ರೆಡ್ ಅಲರ್ಟ್ ಘೋಷಣೆ ಆಗಿದೆ.

**ಆಟೋ ಮೇಲೆ ಮರಬಿದ್ದು ಚಾಲಕ ಸಾವು:** ಚಿಕ್ಕಮಗಳೂರಿನಲ್ಲಿ ಧಾರಾಕಾರ ಮಳೆ, ಗಾಳಿ ಭಾರೀ ಗಂಡಾಂತರವನ್ನೇ ತಂದೊಡ್ಡಿದೆ. ಕೊಪ್ಪ ತಾಲೂಕಿನ ಜಯಪುರದಲ್ಲಿ ಚಲಿಸುತ್ತಿದ್ದ ಆಟೋ ಮೇಲೆ ಮರ ಬಿದ್ದು, ಚಾಲಕ ಆಟೋದಲ್ಲೇ ಮೃತಪಟ್ಟಿದ್ದಾರೆ. ಚಾಲಕ ರತ್ನಾಕರ್, ಪ್ರಯಾಣಿಕರನ್ನು ಡ್ರಾಪ್ ಮಾಡಿ ವಾಪಸ್ ಬರುವಾಗ ದುರಂತ ನಡೆದಿದೆ. ಇತ್ತ ಎನ್ ಆರ್ ಪುರ ತಾಲೂಕಿನಲ್ಲಿ ಭದ್ರಾ, ಹಿನ್ನೀರಿನಲ್ಲಿ ತಾಯಿಯ ಕಣ್ಣೆದುರೇ ಕಾಲು ಜಾರಿಬಿದ್ದು ಯುವಕ ಗೌತಮ್ ಎಂಬಾತ ಮೃತಪಟ್ಟಿದ್ದಾರೆ. ಭದ್ರಾ ಹಿನ್ನೀರು ವೀಕ್ಷಣೆಗೆ ಬಂದಿದ್ದ ವೇಳೆ ಘೋರ ದುರಂತ ಸಂಭವಿಸಿದೆ.

ಮಳೆ ವಾಹನ ಸವಾರರ ಜೀವಕ್ಕೆ ಸಂಚಕಾರ ತಂದೊಡ್ಡುತ್ತಿದೆ. ಮೂಡಿಗೆರೆ ತಾಲೂಕಿನ ರಾಮಣ್ಣನಗಂಡಿ ಬಳಿ ಹೆದ್ದಾರಿ ಅವೈಜ್ಞಾನಿಕ ಕಾಮಗಾರಿಯಿಂದ 3 ಕಾರುಗಳು ನದಿಗೆ ಉರುಳಿ ಬಿದ್ದಿದ್ದು, ಸ್ಥಳೀಯರು ಹರಸಾಹಸಪಟ್ಟು ಕಾರುಗಳನ್ನು ಮೇಲೆತ್ತಿದ್ದಾರೆ. ರಾಷ್ಟ್ರೀಯ ಹೆದ್ದಾರಿ 73 ರ ಚಕಮಕ್ಕಿ ಗ್ರಾಮದಲ್ಲೂ ಇಂತದ್ದೇ ಘಟನೆ ನಡೆದಿದೆ. ಚಾಲಕನ ಕಂಟ್ರೋಲ್ ತಪ್ಪಿ ಕಾರೊಂದು ಹೇಮಾವತಿ ನದಿಗೆ ಪಲ್ಟಿಯಾಗಿದ್ದು, ನಾಲ್ವರು ಗಾಯಗೊಂಡಿದ್ದಾರೆ. ಟ್ರಾಕ್ಟರ್‌ಗೆ ಹಗ್ಗ ಕಟ್ಟಿ ಗ್ರಾಮಸ್ಥರು ಕಾರನ್ನು ಮೇಲಕ್ಕೆತ್ತಿದ್ದಾರೆ.

ಮೂಡಿಗೆರೆ ತಾಲೂಕಿನ ಚೇಗ್ ಗ್ರಾಮದಲ್ಲಿ ಬೃಹತ್ ಮರ ರಸ್ತೆಗೆ ಉರುಳಿ ಬಿದ್ದಿದೆ. ವಿದ್ಯುತ್ ಕಂಬ ಪುಡಿ ಪುಡಿಯಾಗಿದೆ. ಇತ್ತ ಸಬ್ಲಿ ಗ್ರಾಮದಲ್ಲಿ ಮಳೆ, ಗಾಳಿಗೆ ವಿದ್ಯುತ್ ಟ್ರಾನ್ಸ್‌ಫಾರ್ಮರ್ ಸ್ಫೋಟಗೊಂಡಿದೆ. ರಾತ್ರಿಯಿಡೀ ಸಬ್ಲಿ ಗ್ರಾಮದಲ್ಲಿ ವಿದ್ಯುತ್ ಸಂಪರ್ಕವಿಲ್ಲದೆ ಗ್ರಾಮಸ್ಥರು ಪರದಾಡಿದರು. ಸೋಮವಾರ ಹಾಗೂ ಮಂಗಳವಾರ ಚಿಕ್ಕಮಗಳೂರು ಜಿಲ್ಲೆಯಲ್ಲಿ ರೆಡ್ ಅಲರ್ಟ್ ಘೋಷಿಸಲಾಗಿದೆ.

## ಪೂರ್ವಜರ ಭೂಮಿ ಹರಾಜು

ಪರ್ವೇಜ್ ಮುಷರಫ್ ಅವರ ಕುಟುಂಬವು 1943 ರಲ್ಲಿ ಬರೌತ್‌ನ ಕೊಟಾನಾ ಗ್ರಾಮದಿಂದ ದೆಹಲಿಗೆ ಸ್ಥಳಾಂತರಗೊಂಡಿತು. ಕೆಲವು ವರ್ಷಗಳ ನಂತರ, 1947 ರಲ್ಲಿ ವಿಭಜನೆಯ ಸಮಯದಲ್ಲಿ, ಅವರು ಪಾಕಿಸ್ತಾನಕ್ಕೆ ಹೋಗಿ ನೆಲೆಸಿದರು. ಆದಾಗ್ಯೂ, ಅವರ ಮಹಲು ಮತ್ತು ಕೃಷಿ ಭೂಮಿ ಕೋಟಾದಲ್ಲಿಯೇ ಉಳಿದಿತ್ತು. ವರ್ಷಗಳ ನಂತರ, ಈ ಆಸ್ತಿಗಳನ್ನು ಶತ್ರು ಆಸ್ತಿಗಳೆಂದು ಪರಿಗಣಿಸಿ ಸರ್ಕಾರಿ ದಾಖಲೆಗಳಲ್ಲಿ ನೋಂದಾಯಿಸಲಾಯಿತು.

ಶತ್ರು ಆಸ್ತಿ ಇಲಾಖೆ ಈಗ ಉತ್ತರ ಪ್ರದೇಶದಾದ್ಯಂತ ಅಂತಹ ಆಸ್ತಿಗಳನ್ನು ಹರಾಜು ಹಾಕುತ್ತಿದೆ. ಮಾರ್ಚ್ 28 ರಂದು 171 ಶತ್ರು ಆಸ್ತಿಗಳನ್ನು ಹರಾಜು ಹಾಕಲಾಗಿದ್ದು, ಇದರಿಂದ ಸರ್ಕಾರಕ್ಕೆ 15 ಕೋಟಿ ರೂ.ಗೂ ಹೆಚ್ಚು ಆದಾಯ ಬಂದಿತ್ತು. ಈ ಆಸ್ತಿ ಲಕ್ನೋ ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಹರಡಿಕೊಂಡಿವೆ.

## ಪಿಎಫ್ ಸಿಗದೆ ಸಂಕಷ್ಟ

ಕಳೆದ ಒಂದು ವರ್ಷದಿಂದ ಪಿಎಫ್ ಟ್ರಸ್ಟ್ ನೌಕರರ ಹಣವನ್ನು ಪಾವತಿ ಮಾಡಿಲ್ಲ. ಇದರಿಂದ ಪಿಎಫ್ ಟ್ರಸ್ಟ್ ನಾಲ್ಕು ನಿಗಮಗಳಿಗೆ ಪಾವತಿ ಮಾಡಬೇಕಿರುವ 3110 ಕೋಟಿ ರೂಪಾಯಿಗೆ ಶೇ 37 ರ ವರೆಗೆ ಬಡ್ಡಿ ವಿಧಿಸಲಿದೆ ಎನ್ನಲಾಗಿದೆ.

ಕೆಎಸ್‌ಆರ್‌ಟಿಸಿ– 891 ಕೋಟಿ ರುಪಾಯಿ, ಬಿಎಂಟಿಸಿ–958 ಕೋಟಿ ರುಪಾಯಿ, ಎನ್ಡಬ್ಲೂಕೆಆರ್‌ಟಿಸಿ– 1184 ಕೋಟಿ ರುಪಾಯಿ ಹಾಗೂ ಕೆಕೆಆರ್‌ಟಿಸಿ– 76 ಕೋಟಿ ರುಪಾಯಿ ಸೇರಿ ಒಟ್ಟು3110 ಕೋಟಿ ರುಪಾಯಿ ಬಾಕಿ ಉಳಿಸಿಕೊಳ್ಳಲಾಗಿದೆ. ಪಿಎಫ್ ಟ್ರಸ್ಟ್ ಗೆ ಪಾವತಿ ಮಾಡದ ಹಿನ್ನೆಲೆಯಲ್ಲಿ ದಿನದಿಂದ ದಿನಕ್ಕೆ ಬಡ್ಡಿ ಪ್ರಮಾಣ ಹಚ್ಚಳವಾಗುತ್ತಲೇ ಇದೆ ಎನ್ನಲಾಗಿದೆ.

**ಸಾರಿಗೆ ಇಲಾಖೆ ಕಾರ್ಯದರ್ಶಿ ಹೇಳಿದ್ದೇನು?:** ಸಾರಿಗೆ ನೌಕರರ ಪಿಎಫ್ ಹಣವನ್ನು ಪಿಎಫ್ ಟ್ರಸ್ಟ್ ಗೆ ಪಾವತಿ ಮಾಡಲು ರಾಜ್ಯ ಸರ್ಕಾರ ಎರಡು ಸಾವಿರ ಕೋಟಿ ಸಹಾಯಧನವನ್ನು ನೀಡಲು ಗ್ರೀನ್ ಸಿಗ್ನಲ್ ನೀಡಿದೆ. ನಾಲ್ಕು ನಿಗಮಗಳು ಸಾಲ ಪಡೆದುಕೊಂಡು ಪಿಎಫ್ ಟ್ರಸ್ಟ್ ಗೆ ಹಣವನ್ನು ಪಾವತಿ ಮಾಡಲಿದೆ. ನಂತರ ಆ ಹಣವನ್ನು ಸರ್ಕಾರ ನಾಲ್ಕು ನಿಗಮಗಳಿಗೆ ನೀಡಲಿದೆ. ಹಂತ ಹಂತವಾಗಿ ಪಿಎಫ್ ಟ್ರಸ್ಟ್ ಗೆ ಹಣ ಪಾವತಿ ಮಾಡಲಾಗುತ್ತದೆ ಎಂದು ಸಾರಿಗೆ ಇಲಾಖೆ ಕಾರ್ಯದರ್ಶಿ ಡಾ. ಎನ್ ವಿ ಪ್ರಸಾದ್ 'ಟಿವಿ9'ಗೆ ಮಾಹಿತಿ ನೀಡಿದ್ದಾರೆ.

ಒಟ್ಟಿನಲ್ಲಿ ಸಾರಿಗೆ ನೌಕರರಿಗೆ ತಮ್ಮದೇ ಪಿಎಫ್ ಹಣ ಕಷ್ಟಕಾಲದಲ್ಲಿ ನೆರವಿಗೆ ಸಿಗದಂತಾಗಿದೆ. ಸರ್ಕಾರ ಈ ಬಗ್ಗೆ ಗಮನಹರಿಸಿ ತಕ್ಷಣವೇ ಕ್ರಮ ಕೈಗೊಳ್ಳಬೇಕು ಎಂದು ಸಾರಿಗೆ ಮುಖಂಡರು ಆಗ್ರಹಿಸಿದ್ದಾರೆ.

## ಶೇಖ್ ಹಸೀನಾ

ಸಹಾಯವನ್ನು ಪಡೆದಿದ್ದಾರೆ. ನಾವು ಒಂದೇ ಒಂದು ಭಯೋತ್ಪಾದಕ ದಾಳಿಯ ನಂತರ ಕಠಿಣ ಕ್ರಮ ಕೈಗೊಂಡಿದ್ದೆವು. ಅನೇಕ ಜನರನ್ನು ಬಂಧಿಸಲಾಗಿತ್ತು. ಆದರೆ ಈಗ ಬಾಂಗ್ಲಾದೇಶದ ಜೈಲುಗಳು ಖಾಲಿಯಾಗಿವೆ. ಯೂನುಸ್ ಎಲ್ಲರನ್ನೂ ಬಿಡುಗಡೆ ಮಾಡಿದ್ದಾರೆ, ಈಗ ಆ ಭಯೋತ್ಪಾದಕರು ಬಾಂಗ್ಲಾದೇಶದಲ್ಲಿ ಆಳ್ವಿಕೆ ನಡೆಸುತ್ತಿದ್ದಾರೆ ಎಂದು ದೂರಿದರು.

ಅಕ್ರಮವಾಗಿ ಅಧಿಕಾರವನ್ನು ವಶಪಡಿಸಿಕೊಂಡಿರುವ ಈ ಉಗ್ರಗಾಮಿ ನಾಯಕನಿಗೆ ಸಂವಿಧಾನವನ್ನು ಮುಟ್ಟುವ ಹಕ್ಕನ್ನು ಯಾರು ಕೊಟ್ಟರು? ಅವರಿಗೆ ಜನರ ಆದೇಶವಿಲ್ಲ, ಅವರಿಗೆ ಯಾವುದೇ ಸಾಂವಿಧಾನಿಕ ಆಧಾರವಿಲ್ಲ. ಯೂನಸ್ ಮುಖ್ಯ ಸಲಹೆಗಾರ ಹುದ್ದೆಯನ್ನು ಅಲಂಕರಿಸಲು ಯಾವುದೇ ಅರ್ಹತೆಯೇ ಇಲ್ಲ ಎಂದು ಹಸೀನಾ ಹೇಳಿದರು. ಇಂತಹ ಪರಿಸ್ಥಿತಿಯಲ್ಲಿ, ಸಂಸತ್ತು ಇಲ್ಲದೆ ಅವರು ಕಾನೂನನ್ನು ಹೇಗೆ ಬದಲಾಯಿಸಬಹುದು, ಇದು ಕಾನೂನುಬಾಹಿರ. ಅವರು ದೇಶದಲ್ಲಿ ಅವಾಮಿ ಲೀಗ್ ಅನ್ನು ನಿಷೇಧಿಸಿದ್ದಾರೆ.

ಬಾಂಗ್ಲಾದೇಶದ ಮಾಜಿ ಪ್ರಧಾನಿ ಶೇಖ್ ಹಸೀನಾ, ತನ್ನ ತಂದೆಯ ಅಧಿಕಾರಾವಧಿ ನೆನೆಸಿಕೊಳ್ಳುತ್ತಾ, ಅಮೆರಿಕ ಸೇಂಟ್ ಮಾರ್ಟಿನ್ ದ್ವೀಪವನ್ನು ಬಯಸಿದಾಗ, ನನ್ನ ತಂದೆ ಶೇಖ್ ಮುಜಿಬುರ್ ರೆಹಮಾನ್ ಅದಕ್ಕೆ ಒಪ್ಪಲಿಲ್ಲ, ಅವರು ತಮ್ಮ ಪ್ರಾಣವನ್ನೇ ಅತ್ಯಾಗ ಮಾಡಬೇಕಾಯಿತು. ಅದು ನನ್ನ ಹಣೆ ಬರಹವಾಗಿತ್ತು. ಏಕೆಂದರೆ ಅಧಿಕಾರದಲ್ಲಿ ಉಳಿಯಲು ದೇಶವನ್ನೇ ಮಾರಬೇಕು ಎಂಬ ಆಲೋಚನೆ ನನ್ನ ಮನಸ್ಸಿಗೆ ಎಂದೂ ಬಂದಿರಲಿಲ್ಲ.

ಬಾಂಗ್ಲಾದೇಶದಲ್ಲಿ ಮಧ್ಯಂತರ ಸರ್ಕಾರವನ್ನು ತೆಗೆದುಹಾಕಲು ಸಿದ್ಧತೆಗಳು ನಡೆಯುತ್ತಿವೆ. ಸೇನೆ ಮತ್ತು ಬಾಂಗ್ಲಾದೇಶ ರಾಷ್ಟ್ರೀಯತಾವಾದಿ ಪಕ್ಷವು ಡಿಸೆಂಬರ್ ವೇಳೆಗೆ ಚುನಾವಣೆ ನಡೆಸಬೇಕೆಂದು ಒತ್ತಾಯಿಸುತ್ತಿವೆ. ಈ ಬಗ್ಗೆ ಮಧ್ಯಂತರ ಸರ್ಕಾರದ ಮುಖ್ಯಸ್ಥ ಮೊಹಮ್ಮದ್ ಯೂನಸ್, ಚುನಾವಣೆ ನಡೆಸಲು ಅಥವಾ ಇನ್ನಾವುದೇ ವಿಷಯದ ಬಗ್ಗೆ ಅನಗತ್ಯ ಒತ್ತಡ ಹೇರಿದರೆ, ಸಾರ್ವಜನಿಕರೊಂದಿಗೆ ಸೇರಿ ಪ್ರತೀಕಾರ ತೀರಿಸಿಕೊಳ್ಳುವುದಾಗಿ ಹೇಳಿದ್ದಾರೆ.

**ಬಾಂಗ್ಲಾದಲ್ಲಿ ಮುಂದುವರೆದ ಅಸ್ಥಿರತೆ:** ಶೇಖ್ ಹಸೀನಾ ಅಧಿಕಾರ ತೊರೆದಾಗಿನಿಂದ ಬಾಂಗ್ಲಾದೇಶದಲ್ಲಿ ಅಸ್ಥಿರತೆ ಇದೆ. ದೇಶದಲ್ಲಿ ಶೇಖ್ ಹಸೀನಾ ಸರ್ಕಾರದ ವಿರುದ್ಧ ಹಿಂಸಾತ್ಮಕ ದಂಗೆ ನಡೆದಿತ್ತು, ನಂತರ ಶೇಖ್ ಹಸೀನಾ ಪಲಾಯನ ಮಾಡಿ ಭಾರತದಲ್ಲಿ ಆಶ್ರಯ ಪಡೆಯಬೇಕಾಯಿತು. ಆಗಸ್ಟ್ 5, 2024 ರಂದು, ಬಾಂಗ್ಲಾದೇಶದಲ್ಲಿ ಯಾವುದೇ ರಕ್ತಪಾತವಿಲ್ಲದೆ ದಂಗೆ ನಡೆಯಿತು. ಅಂದಿನಿಂದ ಶೇಖ್ ಹಸೀನಾ ಭಾರತದಲ್ಲಿದ್ದಾರೆ.

ಮೊಹಮ್ಮದ್ ಯೂನಸ್ ಬಾಂಗ್ಲಾದೇಶದ ಮಧ್ಯಂತರ ಸರ್ಕಾರದ ಮುಖ್ಯಸ್ಥರಾಗಿದ್ದು, ಮುಖ್ಯ ಸಲಹೆಗಾರರಾಗಿದ್ದಾರೆ. ಆದರೆ ಒಂಬತ್ತು ತಿಂಗಳೊಳಗೆ, ಈ ಯುದ್ಧವು ಈಗ ಸೈನ್ಯ ಮತ್ತು ಯೂನಸ್ ನಡುವಿನ ಹೋರಾಟವಾಗಿ ಮಾರ್ಪಟ್ಟಿದೆ. ಯಾವುದೇ ಬೆಲೆ ತೆತ್ತಾದರೂ ಡಿಸೆಂಬರ್ ಒಳಗೆ ಚುನಾವಣೆ ನಡೆಸುವುದಾಗಿ ಬಾಂಗ್ಲಾದೇಶ ಸೇನೆ ಅಂತಿಮ ಎಚ್ಚರಿಕೆ ನೀಡಿದೆ.

## ಕಿಶನ್ ರೆಡ್ಡಿ ಪ್ರಶ್ನೆ

ಪರವಾಗಿ ಮಾತನಾಡಿಲ್ಲ ಎಂದಿದ್ದಾರೆ. ಭಾರತದವ ಆತ್ಮಸ್ಥೈರ್ಯ ಕುಗ್ಗಿಸಿ ಯಾರ ಪರವಾಗಿ ಮಾತನಾಡುತ್ತಿದ್ದಾರೆ ಎಂಬುದೇ ಅರ್ಥವಾಗುವುದಿಲ್ಲ ಎಂದು ಕಿಶನ್ ರೆಡ್ಡಿ ಬರೆದಿದ್ದಾರೆ.

ಇದಕ್ಕೂ ಮುನ್ನ ಆಪರೇಷನ್ ಸಿಂಧೂರ್ ಬಗ್ಗೆ ಪ್ರಶ್ನೆಗಳನ್ನು ಕೇಳಿದ್ದಕ್ಕಾಗಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ವಿರುದ್ಧ ಕಿಶನ್ ರೆಡ್ಡಿ ವಾಗ್ದಾಳಿ ನಡೆಸಿದ್ದರು. ರಾಹುಲ್ ಗಾಂಧಿ ಹಾಗೂ ಕಾಂಗ್ರೆಸ್ ಪಾಕಿಸ್ತಾನದ ಧಾಟಿಯಲ್ಲಿ ಮಾತನಾಡುತ್ತಿದ್ದಾರೆ.

ಭಾರತೀಯ ಸಶಸ್ತ್ರ ಪಡೆಗಳು ಆಪರೇಷನ್ ಸಿಂಧೂರ್ ಅನ್ನು ವಿಜಯಶಾಲಿಯನ್ನಾಗಿ ಮಾಡಿತು ಪಾಕಿಸ್ತಾನದಲ್ಲಿ ಭಯೋತ್ಪಾದಕ ನೆಲೆಗಳು ಮತ್ತು ಪ್ರಧಾನ ಕಚೇರಿಗಳು ನಾಶವಾಗಿವೆ, ಇಡೀ ದೇಶವು ಒಗ್ಗಟ್ಟಾಗಿದ್ದು ಸಶಸ್ತ್ರ ಪಡೆಗಳನ್ನು ಬೆಂಬಲಿಸುತ್ತಿದೆ. ಆದರೆ, ಕಾಂಗ್ರೆಸ್ ಪಕ್ಷವು ಪುರಾವೆ ಕೇಳುತ್ತಿದೆ.

ನಮ್ಮ ದೇಶವು ಹಲವು ದಶಕಗಳಿಂದ ಪಾಕಿಸ್ತಾನ ಪ್ರಾಯೋಜಿತ ಭಯೋತ್ಪಾದನೆಯನ್ನು ಎದುರಿಸುತ್ತಿದೆ. ಪಾಕಿಸ್ತಾನವು ವರ್ಷಗಳಲ್ಲಿ ಅನೇಕ ಪ್ರಮುಖ ಘಟನೆಗಳನ್ನು ನಡೆಸಿದೆ, ಆದರೆ ಅದಕ್ಕೆ ಸರಿಯಾದ ಪ್ರತಿಕ್ರಿಯೆ ನೀಡಲಾಗಿಲ್ಲ. 2014 ರಲ್ಲಿ ನರೇಂದ್ರ ಮೋದಿ ಪ್ರಧಾನಿಯಾದರು, ಭಾರತೀಯ ಜನತಾ ಪಕ್ಷದ ನೇತೃತ್ವದ ಸರ್ಕಾರ ರಚನೆಯಾಯಿತು ಮತ್ತು ಉರಿಯಲ್ಲಿ ನಮ್ಮ ಸೈನಿಕರ ಮೇಲೆ ಮೊದಲ ಪ್ರಮುಖ ದಾಳಿ ನಡೆಯಿತು.

ಅವರು ಅವರನ್ನು ಜೀವಂತವಾಗಿ ಸುಡುವ ಧೈರ್ಯ ಮಾಡಿದರು ಮತ್ತು ಉರಿಯ ನಂತರ ತಕ್ಷಣವೇ ಸರ್ಜಿಕಲ್ ಸ್ಟ್ರೈಕ್ ನಡೆಸುವ ಮೂಲಕ ನಾವು ಮೊದಲ ಬಾರಿಗೆ ಭಯೋತ್ಪಾದಕ ಅಡಗುತಾಣಗಳಿಗೆ ಪ್ರವೇಶಿಸುವ ಮೂಲಕ ಭಯೋತ್ಪಾದಕರಿಗೆ ಸೂಕ್ತ ಉತ್ತರವನ್ನು ನೀಡಿದ್ದೇವೆ ಎಂದು ಅಮಿತ್ ಶಾ ಹೇಳಿದ್ದಾರೆ.

ಇಷ್ಟೇ ಅಲ್ಲ, ನಾವು ಭಯೋತ್ಪಾದಕರ ಮೇಲೆ ದಾಳಿ ಮಾಡಿದ್ದೇವೆ ಆದರೆ ಪಾಕಿಸ್ತಾನ ಭಯೋತ್ಪಾದನೆಯನ್ನು ಪ್ರಾಯೋಜಿಸುತ್ತಿದೆ ಎಂದು ಸಾಬೀತುಪಡಿಸಿದೆ. ಭಯೋತ್ಪಾದಕರ ಮೇಲಿನ ದಾಳಿಯನ್ನು ಪಾಕಿಸ್ತಾನ ತನ್ನ ಮೇಲಿನ ದಾಳಿ ಎಂದು ಪರಿಗಣಿಸುತ್ತದೆ. ಪಾಕಿಸ್ತಾನಿ ಸೇನೆಯು ನಮ್ಮ ನಾಗರಿಕ ಗುರಿಗಳು ಮತ್ತು ನಮ್ಮ ಮಿಲಿಟರಿ ಸ್ಥಾಪನೆಗಳ ಮೇಲೆ ದಾಳಿ ಮಾಡಲು ಪ್ರಯತ್ನಿಸಿದಾಗ, ಭಾರತೀಯ ಸೇನೆಯು ಬಲವಾಗಿ ಪ್ರತಿಕ್ರಿಯಿಸಿತು. ಅವರ ವಿಮಾನ ನಿಲ್ದಾಣಗಳ ಮೇಲೆ ದಾಳಿ ಮಾಡುವ ಮೂಲಕ ಅದು ತನ್ನ ಗುಂಡಿನ ಶಕ್ತಿಯನ್ನು ಪ್ರದರ್ಶಿಸಿತು ಎಂದು ಹೇಳಿದ್ದರು.

## ಆಸಾಮಿ!

ಸದ್ಯ, ಘಟನೆ ಸಂಬಂಧ ಆಡುಗೋಡಿ ಸಂಚಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಈ ಡ್ರಂಕ್ ಆ ಯಂಡ್ ಡ್ರೈವ್ ಪ್ರಕರಣ ಸಾಮಾಜಿಕ ಮಾಧ್ಯಮಗಳಲ್ಲಿಯೂ ಈಗ ಭಾರಿ ಸದ್ದು ಮಾಡುತ್ತಿದೆ. ಪೊಲೀಸರು ಕಾರಿನ ಗಾಜು ಒಡೆದು ನಂದಕೃಷ್ಣನನ್ನು ಹೊರತೆಗೆಯುತ್ತಿರುವ ವಿಡಿಯೋವನ್ನು 'ಕರ್ನಾಟಕ ಪೋರ್ಟ್ ಫೋಲಿಯೋ' ಎಕ್ಸ್ ತಾಣದಲ್ಲಿ ಪೋಸ್ಟ್ ಮಾಡಲಾಗಿದೆ.

ಹಾನಿಗೊಳಗಾದ ವಾಹನಗಳು, ಗಾಯಗೊಂಡ ನಾಗರಿಕರು ಮತ್ತು ಪೊಲೀಸರು ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತರಲು ಹರಸಾಹಸ ಪಡುತ್ತಿದ್ದರು'' ಎಂದು 'ಕರ್ನಾಟಕ ಪೋರ್ಟ್ ಫೋಲಿಯೋ' ಎಕ್ಸ್ ತಾಣದಲ್ಲಿ ಉಲ್ಲೇಖಿಸಲಾಗಿದೆ.

ಸಂಜೆ ಮುಗಿಲು
ಸೋಮವಾರ
26.5.2025





ವಿಜಯಪುರ ಪಟ್ಟಣದಲ್ಲಿ ಕಳೆದ 2 ದಿನಗಳಿಂದ ಆಷಾಢ ಮಾಸವನ್ನು ನೆನಪಿಸುವಂತಹ ಗಾಳಿ ಬೀಸುತ್ತಿದ್ದು, ಮಳೆ ಬಾರದಿದ್ದರೂ, ಬೀಸುತ್ತಿರುವ ಜೋರು ಗಾಳಿಗೆ ಶನಿವಾರದಂದು ಪರಿವೀಕ್ಷಣಾ ಮಂದಿರದ ಒಳಗಿರುವ ಗುಲ್ಮಾರ್ಗ್(ಮೇ ಫ್ಲವರ್)ಮರ ಬುಡ ಸಮೇತ ಬಿದ್ದಿದ್ದು, ಅಲ್ಲಯೇ ಎಳನೀರು ವ್ಯಾಪಾರ ಮಾಡುತ್ತಿದ್ದವರು ಆ ಸಮಯದಲ್ಲಿ ಅಲ್ಲಿಲ್ಲದ ಕಾರಣ ಯಾವುದೇ ಅನಾಹುತ ಸಂಭವಿಸದೇ, ಕೇವಲ ಕಾಂಪೌಂಡ್ ಗೋಡೆಗೆ ಹಾನಿಯಾಗಿದೆ.

# ಸಮಗ್ರ ಅಭಿವೃದ್ಧಿಗೆ ಶಿಫಾರಸು

**ಬೆಂಗಳೂರು ಗ್ರಾಮಾಂತರ:** ಜಿಲ್ಲೆಯಲ್ಲಿನ ಶಿಕ್ಷಣ, ಆರೋಗ್ಯ, ತಲಾದಾಯ, ಕೃಷಿ, ಹೈನಗಾರಿಕೆ, ಕೈಗಾರಿಕೆ, ಸೇವಾ ವಿಭಾಗ, ಸಾಮಾಜಿಕ ವಲಯಗಳ ಮಾನದಂಡಗಳ ಆಧಾರದ ಮೇಲೆ ಅಭಿವೃದ್ಧಿ ಸೂಚ್ಯಂಕವನ್ನು ನಿರ್ಧರಿಸಲಾಗುತ್ತದೆ. ಈ ಅಭಿವೃದ್ಧಿ ಸೂಚ್ಯಂಕವನ್ನು ಆಧರಿಸಿ ಹಿಂದುಳಿದ ತಾಲ್ಲೂಕುಗಳು ಯಾವುವು ಎಂಬುದನ್ನು ಗುರುತಿಸಿ ಆ ತಾಲ್ಲೂಕುಗಳ ಸರ್ವಾಂಗೀಣ ಅಭಿವೃದ್ಧಿಗೆ ಬೇಕಾಗುವ ಆರ್ಥಿಕ ಸೌಲಭ್ಯವನ್ನು ಒದಗಿಸಲು ಸರ್ಕಾರಕ್ಕೆ ಸಮಿತಿ ವತಿಯಿಂದ ಶಿಫಾರಸ್ಸು ಮಾಡಲಾಗುವುದು ಎಂದು ಪ್ರಾದೇಶಿಕ ಅಸಮತೋಲನ ನಿವಾರಣಾ ಆಯೋಗದ ಅಧ್ಯಕ್ಷರಾದ ಪ್ರೊ.ಎಂ.ಗೋವಿಂದ ರಾವ್ ಅವರು ಹೇಳಿದರು. ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಿದ್ದ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿ ಸಂವಾದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸಮಿತಿಯು ರಾಜ್ಯದ 240 ತಾಲ್ಲೂಕುಗಳ ಅಧ್ಯಯನ ನಡೆಸುತ್ತದೆ. ಕಲಬುರ್ಗಿ, ಬೆಳಗಾವಿ, ಮೈಸೂರು, ಬೆಂಗಳೂರು ಎಂಬ ನಾಲ್ಕು ವಿಭಾಗಗಳಾಗಿ ವಿಂಗಡಿಸಲಾಗಿದೆ. 240 ತಾಲ್ಲೂಕುಗಳಲ್ಲಿ ಅತ್ಯಂತ ಹಿಂದುಳಿದ ತಾಲ್ಲೂಕುಗಳು ಮತ್ತು ಅತೀ ಹಿಂದುಳಿದ ಹಾಗೂ ಹಿಂದುಳಿದ ತಾಲ್ಲೂಕುಗಳು,ಮುಂದುವರಿದ ತಾಲ್ಲೂಕುಗಳು, ಅತೀ ಮುಂದುವರಿದ ತಾಲ್ಲೂಕುಗಳು ಎಂದು ವಿಂಗಡಿಸಿ ಯಾವ ಕಾರಣಕ್ಕೆ ತಾಲ್ಲೂಕು ಹಿಂದುಳಿದಿದೆ ಎಂದು ತಿಳಿಯಲು, ಮುಂದುವರೆದಿರುವ ತಾಲ್ಲೂಕುಗಳಿಂದ ಹಿಂದುಳಿದ ತಾಲ್ಲೂಕುಗಳನ್ನು ಹೇಗೆ ಸುಧಾರಣೆ ಮಾಡಬೇಕು ಎಂಬ ಮಾಹಿತಿಯನ್ನು ತಾಲ್ಲೂಕುವಾರು ಪಡೆಯಲಾಗುವುದು.

'2002ರಲ್ಲಿ ಡಾ.ಡಿ.ಎಂ.ನಂಜುಂಡಪ್ಪ ವರದಿ ಅನ್ವಯ 175 ತಾಲ್ಲೂಕುಗಳ ಅಧ್ಯಯನ ನಡೆಸಿದ್ದರು. ಅದರಲ್ಲಿ 114 ತಾಲ್ಲೂಕುಗಳ ಪೈಕಿ 39 ತಾಲ್ಲೂಕು ಅತೀ ಹಿಂದುಳಿದ, 40 ಅತ್ಯಂತ ಹಿಂದುಳಿದ, 35 ಹಿಂದುಳಿದ ತಾಲ್ಲೂಕುಗಳು ಎಂದು ಗುರ್ತಿಸಲಾಗಿತ್ತು. ರಾಜ್ಯದ ಹಿಂದುಳಿದ ಪ್ರದೇಶಗಳ ಸಮಗ್ರ ಅಭಿವೃದ್ಧಿಗೆ 2007 ರಿಂದ 2023 ವರೆಗೆ 43456.96 ಕೋಟಿ ಶಿಫಾರಸ್ಸು ಮಾಡಲಾಗಿತ್ತು. ಅದರಲ್ಲಿ 35380.25 ಕೋಟಿ ಬಿಡುಗಡೆ ಆಗಿ 32610.24 ಕೋಟಿ ಖರ್ಚಾಗಿದೆ ಎಂದರು.'ರಾಜ್ಯ ಸರ್ಕಾರ 2024ರಲ್ಲಿ ಪ್ರಾದೇಶಿಕ ಅಸಮತೋಲನ ನಿವಾರಣೆಗಾಗಿ ಆರ್ಥಿಕ ತಜ್ಞರನ್ನೊಳಗೊಂಡ ಸಮಿತಿ ರಚಿಸಿದ್ದು, ಈ ಸಮಿತಿಯು ಕೃಷಿ, ಕೈಗಾರಿಕೆ, ಆರ್ಥಿಕ ಮೂಲಸೌಲಭ್ಯ, ಸಾಮಾಜಿಕ ಸೌಲಭ್ಯ, ಹಣಕಾಸಿನ ಮತ್ತು ತಾಂತ್ರಿಕ ಮೂಲಸೌಕರ್ಯ ಮುಂತಾದ ವಲಯಗಳ ಅಭಿವೃದ್ಧಿಯನ್ನು ಗುರುತಿಸಿ, ಸೂಚ್ಯಂಕ ನಿಗದಿಪಡಿಸಲಿದೆ. ಸಮಿತಿಯು ಅಕ್ಟೋಬರ್ 2025 ಕ್ಕೆ ಸರ್ಕಾರಕ್ಕೆ ವರದಿ ಸಲ್ಲಿಸುತ್ತದೆ ಎಂದು ಹೇಳಿದರು.

# ವಿಧಾನ ಸೌಧ ಮಾರ್ಗದರ್ಶಿ ನಡಿಗೆ ಪ್ರವಾಸಕ್ಕೆ ಚಾಲನೆ

## ವಿಧಾನ ಸೌಧವು ನಮ್ಮ ರಾಜ್ಯದ ಪ್ರಜಾಪ್ರಭುತ್ವದ ಜೀವಂತ ಕಥೆಯಾಲಿದೆ: ಸಚಿವ ಹೆಚ್.ಕೆ.ಪಾಟೀಲ್

**ಬೆಂಗಳೂರು:** ವಿಧಾನ ಸೌಧವು ನಮ್ಮ ರಾಜ್ಯದ ಪ್ರಜಾಪ್ರಭುತ್ವದ ಜೀವಂತ ಕಥೆಯಾಗಿದ್ದು, ಇದನ್ನು ಸಾರ್ವಜನಿಕರಿಗೆ ತೆರೆದಿರುವುದು ಪಾರದರ್ಶಕತೆ, ಪರಂಪರೆ ಮತ್ತು ನಾಗರಿಕ ಹೆಮ್ಮೆಯ ಕಾರ್ಯಕ್ರಮವಾಗಿದೆ ಎಂದು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವ ಎಚ್.ಕೆ.ಪಾಟೀಲ ಅವರು ತಿಳಿಸಿದರು.

ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಪ್ರವಾಸೋದ್ಯಮ ಇಲಾಖೆ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಹಾಗೂ ಕರ್ನಾಟಕ ವಿಧಾನ ಸಭೆಯ ಸಚಿವಾಲಯದ ಸಹಯೋಗದೊಂದಿಗೆ ಹಮ್ಮಿಕೊಳ್ಳಲಾದ ಮಾರ್ಗದರ್ಶಿ ನಡಿಗೆ ಪ್ರವಾಸ ಕಾರ್ಯಕ್ರಮಕ್ಕೆ ದೀಪ ಬೆಳಗಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು. ವಿಧಾನ ಸೌಧವು ಇನ್ನು ಮುಂದೆ ಸಾರ್ವಜನಿಕರಿಗೂ ಮುಕ್ತವಾಗಲಿದೆ. ಕಲಾಕೌಶಲ್ಯದ ವಿರಳ ದಾಖಲೆಯಾಗಿ ಇತಿಹಾಸದಲ್ಲಿ ದಾಖಲಾಗಿರುವ ಆಡಳಿತಸೌಧವನ್ನು ದೂರದಿಂದಲೇ ನೋಡಿ ಫೋಟೋ ತೆಗೆದು ಸಂತಸ ಪಡುತ್ತಿದ್ದ ಜನರಿಗೆ ಈಗ ಇದನ್ನು ಹತ್ತಿರದಿಂದ ನೋಡುವ ಸದವಕಾಶ ಲಭ್ಯವಿದೆ ಎಂದರು. ಇದು ಕೇವಲ ಕಟ್ಟಡವಲ್ಲ. ಜಗತ್ತಿನ ಅತ್ಯಂತ ಸುಂದರವಾದ ಕಟ್ಟಡ, ವಿದ್ಯಾರ್ಥಿಗಳಿಗೆ, ಆಸಕ್ತರಿಗೆ ಇದರ ದರ್ಶನ ಮಾಡಿಸುವ ದೃಷ್ಟಿಯಿಂದ ಅವಕಾಶವನ್ನು ಕಲ್ಪಿಸಿಕೊಡಲಾಗುತ್ತಿದೆ. ಇಲ್ಲಿಯವರಿಗೆ ಕೇವಲ ಆಡಳಿತ ಕಾರ್ಯಗಳಿಗ?ೇ ಸೀಮಿತವಾಗಿದ್ದ ವಿಧಾನಸೌಧವು ಇನ್ನು ಮುಂದೆ ಪ್ರವಾಸಿ, ಪ್ರೇಕ್ಷಣೀಯ ಸ್ಥಳದ ಸಾಲಿಗೆ ಸೇರ್ಪಡೆಯಾಗಲಿದೆ. ಜೂನ್ 1ರಿಂದ ಸೀಮಿತ ದಿನಗಳಲ್ಲಿ ವಿಧಾನಸೌಧವು ಸಾರ್ವಜನಿಕರ ವೀಕ್ಷಣೆಗೆ ಲಭ್ಯವಾಗಲಿದೆ ಎಂದು ತಿಳಿಸಿದರು.

ವಿಧಾನಸೌಧ ಪ್ರವಾಸ ಕಾರ್ಯಕ್ರಮವು ಮನೋರಂಜನೆಯ ಪ್ರವಾಸವಾಗಬಾರದು, ಶೈಕ್ಷಣಿಕ ಅಧ್ಯಯನದ ಪ್ರವಾಸವಾಗಬೇಕು. ಪ್ರಜಾಪ್ರಭುತ್ವದ ಮಹತ್ವವನ್ನು ಸಾರ್ವಜನಿಕರು ತಿಳಿದುಕೊಳ್ಳುವಂತಾಗಬೇಕು. ವಿದ್ಯಾರ್ಥಿಗಳು ಮುಂದೆ ರಾಜಕೀಯ ಕ್ಷೇತ್ರಕ್ಕೂ ಬರಬೇಕು, ಉತ್ತಮ ರಾಜಕೀಯ ಪಟುಗಳಾಗಲು ಶಕ್ತಿಸೌಧ ಸ್ಪೂರ್ತಿ ನೀಡುವಂತಾಗಲಿದೆ ಎಂದು ಹೇಳಿದರು. ವಿಧಾನಸಭೆಯ ಸಭಾಧ್ಯಕ್ಷರಾದ ಯು.ಟಿ.ಖಾದರ್ ಮಾತನಾಡಿ ವಿಧಾನಸೌಧದ ಕಟ್ಟಡದಲ್ಲಿ ಓಡಾಡಿದ್ರೆ, ಅನೇಕ ಪಾರಂಪರಿಕ ಕಟ್ಟಡಗಳು ಕಣ್ಣಿಗೆ ಕಟ್ಟುವಂತೆ ಮಾಡಲಿದೆ. 75 ವರ್ಷಗಳ ಕಾಲ ವಿಧಾನಸೌಧದ ಒಳಗೆ ಯಾರನ್ನೂ ಬಿಟ್ಟಿರಲಿಲ್ಲ. ಸಾರ್ವಜನಿಕರು ಪಾಸ್ ಪಡೆದುಕೊಂಡು ಬರಬೇಕಿತ್ತು. ಆದರೆ ಈಗ ಕರ್ನಾಟಕ ಮಾತ್ರವಲ್ಲ ದೇಶದ ಜನತೆಗೆ ತೋರಿಸುವ ಕೆಲಸ ಮಾಡಿದ್ದೇವೆ ಎಂದರು.

ಮಾರ್ಗದರ್ಶಿ ಪ್ರವಾಸದ ಮೂಲಕ ವಿದ್ಯಾರ್ಥಿಗಳಿಗೆ ನಮ್ಮ ನಾಡಿನ ಇತಿಹಾಸ ಅರ್ಥಮಾಡಿಸುವ ಕೆಲಸ ವಾಗಲಿದೆ. ವಿದ್ಯಾರ್ಥಿಗಳು ಹಾಗೂ ಯುವ ಸಮುದಾಯದವರು ದೇಶದ ಇತಿಹಾಸವನ್ನು ಅರ್ಥ ಮಾಡಿಕೊಳ್ಳಬೇಕು. ವಿಧಾನಸೌಧ ನಮ್ಮದು ಎಂಬ ಭಾವನೆಯನ್ನು ನಮ್ಮ ರಾಜ್ಯದ ಜನರಲ್ಲಿ ಮೂಡುವಂತೆ ಕಾರ್ಯಕ್ರಮಗಳನ್ನು ರೂಪಿಸಲಾಗಿದೆ ಎಂದು ತಿಳಿಸಿದರು.

ವಿಧಾನ ಸೌಧ, ಬೆಂಗಳೂರಿನ ಪ್ರಮುಖ ಐತಿಹಾಸಿಕ ಮತ್ತು ಆಡಳಿತದ ಸಂಕೇತವಾಗಿದ್ದು. ಮಾರ್ಗದರ್ಶಿ ಪ್ರವಾಸಿ ನಡಿಗೆಯು ಈ ಕಟ್ಟಡದ ಐತಿಹಾಸಿಕದ ಮಹತ್ವ, ಶಿಲ್ಪಕಲೆಯ ವೈಭವ ಮತ್ತು ಅದರ ಪ್ರಮುಖ ಭಾಗಗಳನ್ನು ಪರಿಚಯಿಸುತ್ತದೆ. ಸಾರ್ವಜನಿಕರು ಇದರ ವೀಕ್ಷಣೆ ಮಾಡಬಹುದಾಗಿದೆ. ನುರಿತ ಗೈಡ್‌ಗಳು ವಿಧಾನಸೌಧ ಆವರಣದ ಕುರಿತು ಸಮಗ್ರ ಪರಿಚಯ ಸಹಿತ ಮಾಹಿತಿಯನ್ನು ಪ್ರವಾಸಿಗರಿಗೆ ಒದಗಿಸಲಿದ್ದಾರೆ ಎಂದು ತಿಳಿಸಿದರು. ರಾಜಕೀಯ ಅಕಾಡೆಮಿ ತೆರೆಯಲು ಚಿಂತಿಸಲಾಗುತ್ತಿದೆ, ರಾಜಕೀಯ ಕಾಲೇಜು ಆರಂಭಿಸಿ ತರಬೇತಿ ನೀಡುವ ಬಗ್ಗೆ ಕಾನೂನಾತ್ಮಕವಾಗಿ ಚರ್ಚಿಸಿ ಅನು?ಾನದ ಬಗ್ಗೆ ನಿರ್ಧಾರ ಮಾಡಲಾಗುವುದು ಎಂದರು.

ವಿಧಾನ ಪರಿ?ತ್ತಿನ ಸಭಾಧ್ಯಕ್ಷರಾದ ಬಸವರಾಜ ಎಸ್ ಹೊರಟ್ಟಿ ಮಾತನಾಡಿ ಸಾರ್ವಜನಿಕರಿಗೆ ವಿಧಾನಸೌಧ ವೀಕ್ಷಣೆಗೆ ಅವಕಾಶ ಕಲ್ಪಿಸಿರುವುದು ಒಳ್ಳೆಯ ಬೆಳವಣಿಗೆ. ಶಕ್ತಿ ಸೌಧದ ಬಗ್ಗೆ ಜನರಿಗೆ ಸೂಕ್ತ ಮಾಹಿತಿ ನೀಡುವ ಕೆಲಸವಾಗಲಿದೆ ಎಂದು ಹೇಳಿದರು.





### ವಿಧಾನಸೌಧ ಮಾರ್ಗದರ್ಶಿ ನಡಿಗೆ ಪ್ರವಾಸದ ವಿಶೇಷತೆಗಳು

**ಪ್ರತೀ ಭಾನುವಾರ ಹಾಗೂ ಎರಡನೇ ಮತ್ತು ನಾಲ್ಕನೇ ಶನಿವಾರ ವಿಧಾನಸೌಧ ಪ್ರವಾಸ ನಡಿಗೆ ಇರಲಿದೆ. ಇದಕ್ಕಾಗಿ ಆನ್‌ಲೈನ್ ನಲ್ಲಿ ಮುಂಚಿತವಾಗಿ ಟಿಕೆಟ್ ಮಾಡಿಕೊಳ್ಳಬೇಕು. ಜೂನ್ 1 ರಿಂದ ಅಧಿಕೃತ ವಿಧಾನಸೌಧ ಪ್ರವಾಸ ಆರಂಭವಾಗಲಿದೆ. ಪ್ರಾರಂಭಿಕ ದರವು 16 ವರ್ಷ ಮೇಲ್ಪಟ್ಟವರಿಗೆ 50 ರೂಪಾಯಿ ದರ ನಿಗಧಿಯಾಗಿದ್ದು. 15 ವರ್ಷ ವಯಸ್ಸಿಗಿಂತ ಕಡಿಮೆ ಇರುವ ಮಕ್ಕಳಿಗೆ ಉಚಿತ. ಟಿಕೆಟ್‌ಗಳನ್ನು** https://kstdc.co/activities **ವೆಬ್‌ಸೈಟ್ ನಲ್ಲಿ ಬುಕ್ ಮಾಡಿಕೊಳ್ಳಬೇಕು. ಪ್ರತಿ ಎರಡನೇ ಮತ್ತು ನಾಲ್ಕನೇ ಶನಿವಾರಗಳು ಹಾಗೂ ಎಲ್ಲಾ ಭಾನುವಾರಗಳು ವೀಕ್ಷಿಸಬಹುದು. ಪ್ರವಾಸವು ಬೆಳಗ್ಗೆ 8 ರಿಂದ ಸಂಜೆ 5 ಗಂಟೆವರೆಗೆ ಇರಲಿದೆ.**

# ಫಲಾನುಭವಿಗಳಿಗೆ ಸವಲತ್ತು ವಿತರಿಸಿದ ಡಾಕ್ಟರ್ ಯತೀಂದ್ರ ಸಿದ್ದರಾಮಯ್ಯ

**ತಾಂಡವಪುರ :** ಮೈಸೂರು ಜಿಲ್ಲೆ ವರುಣ ವಿಧಾನಸಭಾ ಕ್ಷೇತ್ರಕ್ಕೆ ಸೇರುವ ಕೀಳನಪುರ ಗ್ರಾಮದಲ್ಲಿ ತಾಲೂಕು ಆಡಳಿತ ವತಿಯಿಂದ ಹಮ್ಮಿಕೊಂಡಿದ್ದ ಕಂದಾಯ ಅದಲತ್ ಕಾರ್ಯಕ್ರಮವನ್ನು ಉದ್ಘಾಟಿಸಿ ವಿವಿಧ ಇಲಾಖೆಯಿಂದ ನೀಡಲಾಗುವ ಸವಲತ್ತುಗಳನ್ನು ಫಲಾನುಭವಿಗಳಿಗೆ ವಿಧಾನ ಪರಿಷತ್ ಸದಸ್ಯ ಹಾಗೂ ವರುಣ ವಿಧಾನಸಭಾ ಕ್ಷೇತ್ರದ ಆಶ್ರಯ ಸಮಿತಿಯ ಅಧ್ಯಕ್ಷರಾದ ಡಾಕ್ಟರ್ ಯತೀಂದ್ರ ಸಿದ್ರಾಮಯ್ಯನವರು ವಿತರಿಸಿದರು

ಬಳಿಕ ಮಾತನಾಡಿದ ಅವರು ಕಂದಾಯ ಇಲಾಖೆಯಿಂದ ರೈತರಿಗೆ ಅನುಕೂಲ ಆಗಲಿ ಎಂದು ಸರ್ಕಾರ ಹಲವಾರು ಯೋಜನೆಗಳನ್ನು ಜಾರಿಗೆ ತರುವ ಮೂಲಕ ರೈತರಿಗೆ ಅನುಕೂಲ ಮಾಡಿಕೊಳ್ಳಲಾಗುತ್ತಿದ್ದು ಈಗಾಗಲೇ ಕಂದಾಯ ಇಲಾಖೆ ಅಧಿಕಾರಿಗಳು ರೈತರ ಜಮೀನುಗಳನ್ನು ಸರ್ವೆ ಮಾಡಿ ಪೋಡಿ ಮುಕ್ತ ಗ್ರಾಮವನ್ನಾಗಿ ಮಾಡಲು ಶ್ರಮ ವಹಿಸ್ತಿದ್ದು ರೈತರು ಇದರ ಉಪಯೋಗವನ್ನು ಪಡೆದುಕೊಳ್ಳಬೇಕು ಎಂದು ತಿಳಿಸಿದ ಅವರು

ಇದೆ ವೇಳೆ ಫಲಾನುಭವಿಗಳಿಗೆ ಸರ್ಕಾರದಿಂದ ಸಬ್ಸಿಡಿ ರೀತಿಯಲ್ಲಿ ದೊರೆಯುವ ಪವರ್ ಟಿಲ್ಲರ್ ಹಾಗೂ ಇನ್ನಿತರ ಸೌಲಭ್ಯಗಳನ್ನು ವಿತರಿಸಿ ಸಾರ್ವಜನಿಕರಿಂದ ಸಮಸ್ಯೆಗಳನ್ನು ಆಲಿಸಿ ಆದಷ್ಟು ಬೇಗನೆ ಸಂಬಂಧಪಟ್ಟ ಕಾರ್ಯಗಳ ಜೊತೆ ಮಾತನಾಡಿ ನಿಮ್ಮ ಸಮಸ್ಯೆಗಳನ್ನು ಬಗೆಸುತ್ತೇನೆ ಎಂದು ಭರವಸೆ ನೀಡಿದರು

ಕಾರ್ಯಕ್ರಮದಲ್ಲಿ ವಿಧಾನಪರಿಷತ್ ಸದಸ್ಯ ಡಾ ಡಿ ತಿಮ್ಮಯ್ಯ ತಾಲೂಕು ದಂಡಾಧಿಕಾರಿ ಮಹೇಶ್ ಕುಮಾರ್ ಆರ್ ಐ ಯೋಗೇಂದ್ರ, ಕುಮಾರ್ ಮಲೆಯ ಮಾದೇಶ್ವರ ಬೆಟ್ಟದ ಧರ್ಮದರ್ಶಿ ಮಹದೇವಪ್ಪ ವರುಣ ಮಹೇಶ್ ಮುಖ್ಯಮಂತ್ರಿಗಳ ವಿಶೇಷ ಅಧಿಕಾರಿ ವಿಜಯ್ ಆಪ್ತ ಸಹಾಯಕರಾದ ಶಿವ ಸ್ವಾಮಿ ಪ್ರದೀಪ್ ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷರಾದ ಮಂಜುಳಾ ಮಂಜುನಾಥ್ ಸದಸ್ಯರಾದ ಎಂಟಿ ರವಿಕುಮಾರ್ ಗ್ರಾಮ ಪಂಚಾಯತಿ ಅಧ್ಯಕ್ಷರಾದ ನಂಜುಂಡಸ್ವಾಮಿ ತಾಲೂಕ್ ಪಂಚಾಯಿತಿ ಮಾಹಿತಿ ಮುದ್ರಾಮೇಗೌಡ ಕಾಂಗ್ರೆಸ್ ಪಕ್ಷದ ಕಾನೂನು ವಿಭಾಗದ ಎಂ ಸಿ ಹುಂಡಿ ಶಿವಪ್ರಸಾದ್ ಪಾಳ್ಯ ಸುರೇಶ್ ಅಹಿಂದ ಸಂಘಟನೆಯ ಜವರಪ್ಪ ಸಕಳ್ಳಿ ಬಸವರಾಜು ದುಡ್ಡಿಗೆರೆ ರಾಮೇಗೌಡ ಬೀರೇಗೌಡ ಮಲ್ಲಹಳ್ಳಿ ಅಭಿ ವರ ಕೊಡು ಉಮೇಶ್ ರವಿ ಕೆಎಸ್ ಹುಂಡಿ ನಂಜಯ್ಯ ಎಂ ದಕ್ಷಿಣ ಮೂರ್ತಿ ಶಿವಕುಮಾರ್ ಕಿಟ್ಟಿ ಪಿಡಿಒ ಮಾಯಪ್ಪ ಸದಸ್ಯರುಗಳು ದೇವರಾಜು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಗ್ರಾಮಸ್ಥರು ಮುಖಂಡರುಗಳು ಹಾಜರಿದ್ದರು.

# ಡೋಲು ಮತ್ತು ನಾದಸ್ವರ ಸಂಗೀತ ತರಬೇತಿಗೆ ಅರ್ಜಿ ಆಹ್ವಾನ

**ಬೆಂಗಳೂರು ಗ್ರಾಮಾಂತರ:** 2025-26 ನೇ ಸಾಲಿನ ಮೈಸೂರಿನ ಡಾ.ಗಂಗೂಬಾಯಿ ಹಾನಗಲ್ ಸಂಗೀತ ವಿಶ್ವವಿದ್ಯಾಲಯದ ಮೂಲಕ ದೇವನಹಳ್ಳಿ ತಾಲ್ಲೂಕಿನಲ್ಲಿರುವ ಸವಿತಾ ಸಮಾಜದ ಪಾರಂಪರಿಕ ಕಲೆಗಳಾದ ಡೋಲು ಮತ್ತು ನಾದಸ್ವರ ಸಂಗೀತ ತರಬೇತಿಗೆ ಅರ್ಜಿಯನ್ನು ಆಹ್ವಾನಿಸಲಾಗಿದೆ. **ಅರ್ಜಿ ಸಲ್ಲಿಸಲು ಅರ್ಹತೆ ಮತ್ತು ಮಾನದಂಡಗಳು:** ಹಿಂದುಳಿದ ವರ್ಗಗಳ ಪ್ರವರ್ಗ-2(ಎ) ರಲ್ಲಿ ಬರುವ ಸವಿತಾ ಸಮಾಜ ಅಥವಾ ಅದರ ಉಪಜಾತಿಗಳಿಗೆ ಸೇರಿದರಾಗಿರಬೇಕು. ಕನಿಷ್ಠ ವಯೋಮಿತಿ 10 ವರ್ಷ ಹಾಗೂ ಗರಿಷ್ಠ ವಯೋಮಿತಿ 15 ವರ್ಷ (ಒಂದು ವೇಳೆ ಅಧ್ಯಯನ ಮಾಡುತ್ತಿರುವ 15 ವರ್ಷದೊಳಗಿನ ವಿದ್ಯಾರ್ಥಿಗಳು ದೊರೆಯದ ಪಕ್ಷದಲ್ಲಿ ಮಾತ್ರ 18 ವರ್ಷದವರನ್ನು ಅರ್ಜಿ ಹಾಕಲು ಅವಕಾಶವಿದೆ). ಅರ್ಜಿಯನ್ನು ಸಲ್ಲಿಸಲು ಕುಟುಂಬದ ವಾರ್ಷಿಕ ಆದಾಯದ ರೂ, 2 ಲಕ್ಷ ಮೀರಬಾರದು. ಅರ್ಜಿಯನ್ನು ಸಲ್ಲಿಸಲು ಕೊನೆಯ ದಿನಾಂಕ ಜೂನ್ 20 ರೊಳಗೆ ಕಚೇರಿಯ ಸಮಯ 5 ಗಂಟೆಯ ಒಳಗೆ ಅರ್ಜಿಯನ್ನು ಸಲ್ಲಿಸಬಹುದು.ಹೆಚ್ಚಿನ ಮಾಹಿತಿಗಾಗಿ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ, ಮಿನಿ ವಿಧಾನಸೌಧದ ಹಿಂಭಾಗ, ಡಿ.ವಿ.ಎಂ ಕಾಲೋನಿ, ದೇವನಹಳ್ಳಿ ತಾಲ್ಲೂಕಿಗೆ ಹಾಗೂ ಸಹಾಯವಾಣಿ ಸಂಖ್ಯೆ: 080-22449999 ಗೆ ಕರೆ ಮಾಡಿ ಅಥವಾ ನೇರವಾಗಿ ಹೋಗಿ ಮಾಹಿತಿಯನ್ನು ಪಡೆಯಬಹುದು.

# ತೋಟಗಾರಿಕೆ ಇಲಾಖೆಯಿಂದ ವಿವಿಧ ಬೆಳೆಗಳಿಗೆ ಪ್ರೋತ್ಸಾಹಧನಕ್ಕಾಗಿ ಅರ್ಜಿ

**ಬೆಂಗಳೂರು ಗ್ರಾಮಾಂತರ:** 2025-26 ನೇ ಸಾಲಿನ ರಾಷ್ಟ್ರೀಯ ತೋಟಗಾರಿಕೆ ಮಿಷನ್, ಸಮಗ್ರ ತೋಟಗಾರಿಕೆ ಅಧಿವೃದ್ಧಿ ಮತ್ತು ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ದೇವನಹಳ್ಳಿ ತಾಲ್ಲೂಕಿನಲ್ಲಿ ವಿವಿಧ ಬೆಳೆಗಳನ್ನು ಬೆಳೆಯಲು ತೋಟಗಾರಿಕಾ ಇಲಾಖೆ ವತಿಯಿಂದ ರೈತರಿಗೆ ಪ್ರೋತ್ಸಾಹಧನ ನೀಡಲಾಗುತ್ತಿದೆ. ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿಹನಿ ನೀರಾವರಿ ಘಟಕಗಳನ್ನು ನಿರ್ಮಿಸಿಕೊಳ್ಳಬಹುದು, ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆ ಹಾಗೂ ಸಮಗ್ರ ತೋಟಗಾರಿಕೆ ಅಧಿವೃದ್ಧಿ ಯೋಜನೆಯ ರೈತರು ದ್ರಾಕ್ಷಿ, ಮಾವು, ದಾಳಿಂಬೆ, ಡ್ರ್ಯಾಗನ್ ಪ್ರೂಟ್,ಬೆಣ್ಣೆ ಹಣ್ಣು,ಹೈಬ್ರಿಡ್ ತರಕಾರಿ ಹಾಗೂ ಹೂವಿನ ಬೆಳೆಗಳಾದ ಬಲ್ಬಸ್ ಪುಷ್ಪಗಳು, ಟ್ಯೂಬ್ರೋಸ್, ಧವನ, ಮಲ್ಲಿಗೆ ಹೂವುಗಳನ್ನು ಬೆಳೆಯಬಹುದು. ಹಾಗೇ ರೋಗ ಮತ್ತು ಕೀಟ ನಿಯಂತ್ರಣ, ಪ್ಲಾಸ್ಟಿಕ್ ಹೊದಿಕೆ, ಪ್ಲಾಸ್ಟಿಕ್ ಟನೆಲ್ಸ್, ಸೆನ್ಸರ್ ಆಧಾರಿತ ಮಷಿನ್ ಗಳು, ಪ್ರಾಥಮಿಕ ಸಂಸ್ಕರಣ ಘಟಕಗಳು, ಪಾಲಿ ಮನೆ, ಪಕ್ಷಿ ನಿರೋಧಕ ಬಲೆಗಳು, ಜೇನುಸಾಕಾಣಿಕೆ, ಘಟಕಗಳನ್ನು ನಿರ್ಮಿಸಿಕೊಳ್ಳಲು ಹಾಗೂ ಕೃಷಿಗೆ ಸಂಬಂಧಪಟ್ಟ ಯಂತ್ರೋಪಕರಣಗಳ ಖರೀದಿಗೆ ತೋಟಗಾರಿಕೆ ಇಲಾಖೆಯಿಂದ ಸಹಾಯಧನವನ್ನು ಪಡೆಯಬಹುದಾಗಿದೆ. ಅರ್ಜಿಯನ್ನು ಸಲ್ಲಿಸಲು ಜೂನ್ 13ರ ಒಳಗೆ ಅಗತ್ಯ ದಾಖಲೆಗಳೊಂದಿಗೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೇವನಹಳ್ಳಿ ತಾಲ್ಲೂಕಿನ ತೋಟಗಾರಿಕೆ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರು ಮಲ್ಲಿಕಾರ್ಜುನ್ ಬಾಬು ಬಿ.ಎಂ - 9480461234, ಹಾಗೂ ತಾಲ್ಲೂಕಿನ ರೈತ ಸಂಪರ್ಕ ಕೇಂದ್ರಗಳಾದ ಕುಂದಾಣ ಹೋಬಳಿಯ ಸಹಾಯಕ ತೋಟಗಾರಿಕೆ ಅಧಿಕಾರಿ ಪೂರ್ಣಿಮ ಬಾಬು - 8867413260, ವಿಜಯಪುರ ಹೋಬಳಿಯ ಸಹಾಯಕ ತೋಟಗಾರಿಕೆ ಅಧಿಕಾರಿ ಆದರ್ಶ್ ಆರ್.ಕೆ - 8722487173, ಕಸಬಾ ಹೋಬಳಿಯ ಸಹಾಯಕ ತೋಟಗಾರಿಕೆ ಅಧಿಕಾರಿ ಹರೀಶ್ ಕುಮಾರ್ ಟಿ.ಜಿ - 7975888212, ಚನ್ನರಾಯಪಟ್ಟಣ ಹೋಬಳಿಯ ಸಹಾಯಕ ತೋಟಗಾರಿಕೆ ಅಧಿಕಾರಿ ಕವಿತಾ ಎಸ್ ಪೂಜಾರಿ - 7259612750 ಗೆ ಕರೆಮಾಡಿ ಮಾಹಿತಿಯನ್ನು ಪಡೆಯಬಹುದು ಎಂದು ದೇವನಹಳ್ಳಿ ತಾಲ್ಲೂಕಿನ ತೋಟಗಾರಿಕೆ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರು ಮಲ್ಲಿಕಾರ್ಜುನ್ ಬಾಬು ಬಿ.ಎಂ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರವಾಸ ಕಾರ್ಯಕ್ರಮ

**ಮಂಡ್ಯ:** ನ್ಯಾಯಮೂರ್ತಿ ಹಾಗೂ ಉಪಲೋಕಾಯುಕ್ತರಾದ ಬಿ.ವೀರಪ್ಪಅವರು ಮೇ 26 ರಿಂದ 29 ರವರೆಗೆಜಿಲ್ಲೆಯಲ್ಲಿ ಪ್ರವಾಸಕೈಗೊಂಡಿದ್ದಾರೆ. ಮೇ 26 ರಂದು ಸಂಜೆ 6.30 ಕ್ಕೆ ಮಂಡ್ಯಜಿಲ್ಲೆಗೆ ಆಗಮಿಸಿ ವಾಸ್ತವ್ಯ ಹೂಡಲಿದ್ದಾರೆ. ಮೇ 27 ರಂದು ಬೆಳಿಗ್ಗೆ 6:30 ಗಂಟೆಗೆ, ಬೆಳಿಗ್ಗೆ 9:30 ರಿಂದ ಮಧ್ಯಾಹ್ನ 1:30 ರವರೆಗೆ, ಮಧ್ಯಾಹ್ನ 2.30 ಗಂಟೆಗೆಜಿಲ್ಲೆಯ ವಿವಿಧ ಸ್ಥಳಗಳಿಗೆ ಭೇಟಿ ನೀಡಲಿದ್ದಾರೆ. ಮೇ 28 ರಂದು ಬೆಳಿಗ್ಗೆ 6:30 ಗಂಟೆಗೆಜಿಲ್ಲೆಯ ವಿವಿಧ ಸ್ಥಳಗಳಿಗೆ ಭೇಟಿ ನೀಡಲಿದ್ದಾರೆ.ಬೆಳಿಗ್ಗೆ 10:00 ಗಂಟೆಯಿ0ದ ಸಂಜೆ 5:00 ರವರೆಗೆ ನಗರದ ಸುಭಾಷ್ ನಗರದಲ್ಲಿರುವ ಬಿ.ಆರ್‌ಅಂಬೇಡ್ಕರ್ ಭವನದಲ್ಲಿ ಸಾರ್ವಜನಿಕರಿಂದದೂರು ಮತ್ತು ಅಹವಾಲು ಸ್ವೀಕರಿಸಲಿದ್ದಾರೆ. ಸಂಜೆ 5:00 ರಿಂದ 6:30 ರವರೆಗೆಕರ್ನಾಟಕರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ (ಡಿಎಲ್‌ಎಸ್‌ಎ) ಸಹಯೋಗದೊಂದಿಗೆಕರ್ನಾಟಕ ಲೋಕಾಯುಕ್ತಕಾಯ್ದೆಗೆ ಸಂಬಂಧಿಸಿದಂತೆ ಕಾನೂನು ಸಾಕ್ಷರತಾಕಾರ್ಯಕ್ರಮವನ್ನುಕಂದಾಯ ಇಲಾಖೆ, ಆರ್‌ಡಿಪಿಆರ್ ಇಲಾಖೆ, ಶಿಕ್ಷಣ ಇಲಾಖೆ, ರೇಷ್ಮೆ ಇಲಾಖೆ, ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ ಮತ್ತುಇತರತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ (ಉಪ ನೋಂದಣಿದಾರರು, ಆರ್‌ಟಿಒಗಳು, ಸಮಾಜಕಲ್ಯಾಣಕಚೇರಿ, ಡಿಡಿಪಿಐ, ಎಇಒ ಮತ್ತು ಬಿಇಒ ಇಲಾಖೆ ಇತ್ಯಾದಿ) ನಗರದಡಾ. ಬಿ.ಆರ್.ಅಂಬೇಡ್ಕರ್ ಭವನದಲ್ಲಿ ನಡೆಸಲಿದ್ದಾರೆ. ಮೇ 29 ರಂದು ಬೆಳಿಗ್ಗೆ 6:30 ಗಂಟೆಗೆಜಿಲ್ಲೆಯ ವಿವಿಧ ಸ್ಥಳಗಳಿಗೆ ಭೇಟಿ ನೀಡಲಿದ್ದಾರೆ. ಬೆಳಿಗ್ಗೆ 9:45 ಗಂಟೆಯಿಂದ 11:00 ಗಂಟೆಯವರೆಗೆ ನಗರದಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿಜಿಲ್ಲೆಯ ನ್ಯಾಯಾಂಗ ಅಧಿಕಾರಿಗಳು, ವಕೀಲರು ಮತ್ತು ಲೋಕಾಯುಕ್ತ ಪೊಲೀಸ್ ಅಧಿಕಾರಿಗಳೊಂದಿಗೆ ಸಭೆ ನಡೆಸಲಿದ್ದಾರೆ. ಬೆಳಿಗ್ಗೆ 11:00 ಗಂಟೆಯಿಂದ ಸಂಜೆ 6:00 ರವರೆಗೂಜಿಲ್ಲೆಗೆ ಸಂಬಂಧಿಸಿದ ಬಾಕಿ ಇರುವ ದೂರುಗಳ ವಿಚಾರಣೆ ಮತ್ತು ವಿಲೇವಾರಿಯನ್ನುದೂರುದಾರರ ಮತ್ತು ಪ್ರತಿವಾದಿಗಳ ಸಮ್ಮುಖದಲ್ಲಿಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ನಡೆಸಲಾಗುವುದು, ರಾತ್ರಿ 9 ಗಂಟೆಗೆರಸ್ತೆಯ ಮೂಲಕ ಕೇಂದ್ರ ಸ್ಥಾನ ಬೆಂಗಳೂರಿಗೆ ತೆರಳಲಿದ್ದಾರೆ ಎಂದುಅವರ ಆಪ್ತ ಕಾರ್ಯದರ್ಶಿಗಳು ತಿಳಿಸಿದ್ದಾರೆ.

# ಅಪರಿಚಿತ ವ್ಯಕ್ತಿ ಶವ ಪತ್ತೆ

**ಮೈಸೂರು:** ಸುಮಾರು 50 ರಿಂದ 55 ವರ್ಷದ ಅಪರಿಚಿತ ವ್ಯಕ್ತಿ ಮೇ 09 ರಂದು ರೈಲುಗಾಡಿಗೆ ಸಿಕ್ಕಿ ಮೃತಪಟ್ಟಿದ್ದಾರೆ. ಮೃತ ದೇಹವು ಮೈಸೂರಿನ ಕೆ.ಆರ್ ಆಸ್ಪತ್ರೆಯ ಶವಾಗಾರದಲ್ಲಿದ್ದು, ಮೈಸೂರು ರೈಲ್ವೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಚಹರೆ: ಸುಮಾರು 50-55 ವಯಸ್ಸಾಗಿದ್ದು, 5.3 ಅಡಿ ಎತ್ತರ, ಗೋಧಿ ಮೈಬಣ್ಣ, ಸಾಧಾರಣ ಶರೀರ ದುಂಡು ಮುಖ, ದಪ್ಪ ಮೂಗು, ಬೊಳು ತಲೆ ಇದ್ದು, ಕಪ್ಪು ಮೀಸೆ ಹೊಂದಿದ್ದು ಅಲ್ಲಲ್ಲಿ ಸುಮಾರು 1/2 ಇಂಚು ಕಪ್ಪು ಕೂದಲು ಬಿಟ್ಟಿರುತ್ತಾರೆ. ಲೈಟ್ ಬ್ಲೂ ಕಲರ್ ತುಂಬು ತೋಳಿನ ಶರ್ಟ್ ಕಪ್ಪು ಬಣ್ಣದ ಪ್ಯಾಂಟ್ ಪಾಚಿ ಬಣ್ಣದ ನಿಕರ್ (ಖಿ-ಖಿಙಿ) ಧರಿಸಿರುತ್ತಾರೆ. ಮೃತನ ವಾರಸುದಾರರ ಬಗ್ಗೆ ಮಾಹಿತಿ ಕಂಡುಬಂದಲ್ಲಿ ಮೈಸೂರು ಪೊಲೀಸ್ ಠಾಣೆಯ ದೂ.ಸಂ:0821-2516579 ನ್ನು ಸಂಪರ್ಕಿಸಬಹುದಾಗಿದೆ ಎಂದು ಮೈಸೂರು ರೈಲ್ವೆ ಪೊಲೀಸ್ ಠಾಣೆಯ ಠಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹೊಸಕೋಟೆ ತಾಲೂಕು ವ್ಯಾಪ್ತಿಯಲ್ಲಿ ವಿದ್ಯುತ್ ಉಪಕೇಂದ್ರಗಳನ್ನು ಸ್ಥಾಪಿಸಿ

**ಬೆಂಗಳೂರು ಗ್ರಾಮಾಂತರ:** ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆಯ ಸಚಿವರು ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಹೆಚ್ ಮುನಿಯಪ್ಪ ಅವರು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ ತಾಲ್ಲೂಕಿನ ವಿವಿಧ ಭಾಗಗಳಲ್ಲಿ ವಿದ್ಯುತ್ ಉಪಕೇಂದ್ರಗಳನ್ನು ಸ್ಥಾಪಿಸಲು ಮಾನ್ಯ ಇಂಧನ ಸಚಿವರಾದ ಕೆ.ಜೆ ಜಾರ್ಜ್ ಅವರಿಗೆ ಮನವಿ ಸಲ್ಲಿಸಿದರು. ಹೊಸಕೋಟೆ ನಗರದಲ್ಲಿ 400/200 ಕೆ.ವಿ ಸಾಮರ್ಥ್ಯದ ವಿದ್ಯುತ್ ಉಪಕೇಂದ್ರ, ದೇವನಗುಂದಿ ಕೈಗಾರಿಕಾ ಪ್ರದೇಶದಲ್ಲಿ 220 ಕೆ.ವಿ ಸಾಮರ್ಥ್ಯದ ವಿದ್ಯುತ್ ಉಪಕೇಂದ್ರ, ತಾತನೂರು, ಬಾನಹಳ್ಳಿ, ತಮ್ಮರಸನಹಳ್ಳಿ, ಎಂ ಸತ್ಯವಾರ, ಅಟ್ಟೂರಿನಲ್ಲಿ 66 ಕೆ.ವಿ ವಿದ್ಯುತ್ ಉಪಕೇಂದ್ರಗಳನ್ನು ಸ್ಥಾಪಿಸಲು ಮನವಿ ಪತ್ರ ಸಲ್ಲಿಸಿದರು. ಈ ಸಂದರ್ಭದಲ್ಲಿ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ(ಕೆಪಿಟಿಸಿಎಲ್ )ಪಂಕಜ್ ಕುಮಾರ್ ಪಾಂಡೆ, ಬೆಂಗಳೂರು ವಿದ್ಯುತ್ ಪ್ರಸರಣ ನಿಗಮದ(ಬೆಸ್ಕಾಂ)ವ್ಯವಸ್ಥಾಪಕ ನಿರ್ದೇಶಕರಾದ ಡಾ.ಎನ್ ಶಿವಶಂಕರ ಅವರು ಉಪಸ್ಥಿತರಿದ್ದರು.



ಶರಣೆ ದಾಕ್ಷಾಯಿಣಮ್ಮ ಅಭಿಪ್ರಾಯ

# ಶಿವ ಶರಣರ ಬದುಕು ಸರ್ವರಿಗೂ ಆದರ್ಶ

**ವಿಜಯಪುರ;** ಶರಣರ ರೀತಿಯಲ್ಲಿ ಶಿವಶರಣರ ಹಾದಿಯಲ್ಲಿ ಜೀವನ ನಡೆಯವುದು ಬಲು ಕಷ್ಟ. ಶರಣರ ಬದುಕು ಸರ್ವರಿಗೂ ಆದರ್ಶ ಎಂಬುದಾಗಿ ಶರಣೆ ದಾಕ್ಷಾಯಿಣಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು.

ವಿಜಯಪುರ ಅಕ್ಕನ ಬಳಗದ ಅರಿವಿನ ಮನೆಯಲ್ಲಿ ನಡೆದ ತಿಂಗಳ ಬೆಳಕು 119 ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿದರು.

ಹನ್ನೆರಡನೆಯ ಶತಮಾನದಲ್ಲಿ ಶರಣರು ಕಾಯಕವನ್ನು ಕೈಲಾಸ ದಂತೆ ಕಾಣುತ್ತಿದ್ದರು. ಅದರಂತೆ ತಮ್ಮ ತಂದೆ ಮಾಳಣ್ಣನವರು ಹಾಗೂ ತಾತ ರುದ್ರಪ್ಪನವರು ಬದುಕಿದ ರೀತಿಯೆ ನಮಗೆ ಆದರ್ಶ ಎಂಬುದಾಗಿ ತಿಳಿಸಿ,ಅವರುಗಳು ತಮ್ಮ ಇಷ್ಟದೈವ ಶ್ರೀ ಚನ್ನಕೇಶವ ಸ್ವಾಮಿಯನ್ನು ಬಹುವಾಗಿ ನಂಬಿದ್ದು, ಶ್ರೀ ಚೆನ್ನಕೇಶವಸ್ವಾಮಿಯ ರಥೋತ್ಸವ ಹಾಗೂ ಗಾಂಧಿ ಚೌಕದ ಗಣೇಶ ಕೂರಿಸುವ ಪದ್ಧತಿ ಸಹ ಇವರ ಅವಧಿಯಲ್ಲಿ ಆರಂಭವಾಯಿತು. ಇವರುಗಳು ಎಲ್ಲಾ ದೇವರ ಉತ್ಸವಗಳಿಗೂ ಪಲ್ಲಕ್ಕಿ ಸೇವೆ ನಡೆಸುತ್ತಿದ್ದರು ಎಂಬುದಾಗಿ ತಿಳಿಸಿದರು.

ಅಧ್ಯಕ್ಷರಾದ ಅನಿಲ್ ಕುಮಾರ್ ರವರು ಮಾತನಾಡುತ್ತಾ ಚೆನ್ನಬಸವಣ್ಣ ನವರ ವಚನದಲ್ಲಿ ಬರುವ ಗಂಡಭೇರುಂಡ ಪಕ್ಷಿಯ ಎರಡು ಮುಖಗಳು ಎಂದರೆ ದೇಹಕ್ಕೆ ಹೋಲಿಸಿ ಜೀವಾತ್ಮ ಪರಮಾತ್ಮರಿಗೆ ಸಂಬಂಧಿಸಿದಂತೆ ತಿಳಿಸಿ,ಒಂದು ಮುಖ ಸಾಂಸಾರಿಕ ವಾಗಿ ನೋಡಿದರೆ ಇನ್ನೊಂದು ಮುಖ ಆಧ್ಯಾತ್ಮಿಕದ ಕಡೆ ನೋಡುತ್ತದೆ ಆಧ್ಯಾತ್ಮಿಕದ ಕಡೆ ನೋಡುವ ಮುಖದ ಕಡೆಗೆ ನಮ್ಮ ಮನಸ್ಸನ್ನು ನಿಲ್ಲಿಸಿದರೆ ನಮ್ಮ ಜೀವನ ಸಂತೃಪ್ತಿಯಿಂದ ಕೂಡಿರುತ್ತದೆ. ಶಿವ ಶರಣರು ಅಂತರಂಗ ಬಹಿರಂಗ ಶುದ್ಧಿಗೆ ಕರೆ ಕೊಟ್ಟಿದ್ದಾರೆ ಹೀಗೆ ಶರಣರ ವಚನಗಳಲ್ಲಿ ಆಧ್ಯಾತ್ಮಿಕತೆ ಅಡಗಿದೆ ಅದನ್ನು ಅರ್ಥಮಾಡಿಕೊಂಡು ಬದುಕಬೇಕು ಎಂಬುದಾಗಿ ಅಭಿಪ್ರಾಯಪಟ್ಟರು.

ಬಳಗದ ಉಪಾಧ್ಯಕ್ಷೆ ಅಂಬಕ್ಕ ಚೆನ್ನಬಸವಣ್ಣ ನವರ ವಚನ ವಿಶ್ಲೇಷಣೆ ಮಾಡಿದರು. ಕಾರ್ಯಕ್ರಮದಲ್ಲಿ ಶ್ರೀ ಕೃಷ್ಣಪ್ಪ ದಾಸರು, ರೇಷ್ಮೆ ನಿವೃತ್ತ ನೌಕರ ಎಸ್ ಪಿ ಕೃಷ್ಣಾನಂದ, ಸಂಚಾಲಕರಾದ ಮ ಸುರೇಶ್ ಬಾಬು, ಖಜಾಂಚಿಗಳಾದ ಶಿವಪ್ರಸಾದ್ ಬಳಗದ ಸದಸ್ಯರಾದ ವಿಮಲಾಂಬ ಅನಿಲ್ ಕುಮಾರ್ ,ಮೀನಾ ಕುಮಾರಿ ,ಭಾರತಿ ಶಿವಪ್ರಸಾದ್, ಮಹಾದೇವಮ್ಮ ,ನಿರ್ಮಲ ಶೇಖರ್ ,ಚಂದ್ರಕಲಾ ರುದ್ರಮೂರ್ತಿ ಹಾಗೂ ಅಕ್ಕದ ಅಕ್ಕನ ಬಳಗದ ತಾಯಂದಿರು ಭಾಗವಹಿಸಿದ್ದರು ಕಾರ್ಯಕ್ರಮದ ಭಕ್ತಿ ಸೇವೆಯನ್ನು ಶೀಲರಾಣಿ ಸುರೇಶ್ ರವರು ನಡೆಸಿಕೊಟ್ಟರು.



# ತಾಲ್ಲೂಕು ಸಂಯೋಜಕರ ಹುದ್ದೆಗಳನ್ನು ಭರ್ತಿ ಮಾಡಲು ಅರ್ಜಿ ಆಹ್ವಾನ

**ಮೈಸೂರು:** ಕೇಂದ್ರ ಸರ್ಕಾರದ ರಾಷ್ಟ್ರೀಯ ಪೋಷಣ್ ಅಭಿಯಾದ ಯೋಜನೆಯ ಅನುಷ್ಠಾನ ಮಾರ್ಗಸೂಚಿಯನ್ವಯ ತಾಲ್ಲೂಕು ಮಟ್ಟದಲ್ಲಿ 03 ತಾಲ್ಲೂಕು ಸಂಯೋಜಕರ ಹುದ್ದೆಯನ್ನು ತಾತ್ಕಾಲಿಕ ಗೌರವಧನ ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಉದ್ದೇಶಿಸಿದ್ದು, ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ತಾಲ್ಲೂಕು ಸಂಯೋಜಕರ ಹುದ್ದೆಗೆ ಬಿಳಿಗೆರೆ ತಾಲ್ಲೂಕಿನಲ್ಲಿ 01, ಮೈಸೂರು ನಗರ ತಾಲ್ಲೂಕಿನಲ್ಲಿ 01, ಪಿರಿಯಾಪಟ್ಟಣ ತಾಲ್ಲೂಕಿನಲ್ಲಿ 01, ಹುದ್ದೆಗಳು ಖಾಲಿ ಇದ್ದು, Graduate ವಿದ್ಯಾರ್ಹತೆಯನ್ನು ಹೊಂದಿರಬೇಕು, ತಂತ್ರಜ್ಞಾನ ಮತ್ತು ಸಾಫ್ಟ್‌ವೇರ್ ಅಪ್ಲಿಕೇಶನ್ ಬೆಂಬಲದೊಂದಿಗೆ ಕನಿಷ್ಠ 2 ವರ್ಷ ಅನುಭವವನ್ನು ಹೊಂದಿರಬೇಕು. ಸ್ಥಳೀಯ ಭಾಷೆಯಲ್ಲಿ ಉತ್ತಮ ಮೌಖಿಕ ಮತ್ತು ಲಿಖಿತ ಸಂವಹನ ಹೊಂದಿರಬೇಕು, ಕಡ್ಡಾಯವಾಗಿ ಸ್ಥಳೀಯ ಅಭ್ಯರ್ಥಿಗಳನ್ನು ನೇಮಕ ಮಾಡಿಕೊಳ್ಳಲಾಗುತ್ತದೆ. ಖ. 20,000/- ಮಾಸಿಕ ವೇತನವನ್ನು ನೀಡಲಾಗುತ್ತದೆ. ನಿಗಧಿತ ನಮೂನೆಯಲ್ಲಿ ಅರ್ಜಿ, ಎಸ್.ಎಸ್.ಎಲ್.ಸಿ ಅಂಕ ಪಟ್ಟಿ, ಹುದ್ದೆಗೆ ನಿಗಧಿಪಡಿಸಿದ ಹಾಗೂ ವಿದ್ಯಾರ್ಹತೆಯ ಅಂಕಪಟ್ಟಿಗಳು, ಅನುಭವ ಪ್ರಮಾಣ ಪತ್ರ, ಭರ್ತಿ ಮಾಡಿದ ಅರ್ಜಿಗಳನ್ನು ಸಂಬಂದಿಸಿದ ದಾಖಲೆಗಳೊಂದಿಗೆ ಉಪ ನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಸ್ತ್ರೀಶಕ್ತಿ ಭವನ, ಕೃಷ್ಣದೇವರಾಯ ಸರ್ಕಲ್, ವಿಜಯನಗರ 2ನೇ ಹಂತ, ಮೈಸೂರು ಇವರಿಗೆ ಜೂನ್ 10 ರೊಳಗೆ ಸಲ್ಲಿಸಬೇಕಾಗಿದೆ. ಹೆಚ್ಚಿನ ಮಾಹಿತಿಗಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಕಚೇರಿ ದೂ. ಸಂ:0821-2495432 ನ್ನು ಸಂಪರ್ಕಿಸಬಹುದು ಎಂದು ಮೈಸೂರಿನ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯಾರ್ಥಿನಿಲಯ ಪ್ರವೇಶಾತಿಗಾಗಿ ಅರ್ಜಿ ಆಹ್ವಾನ

**ಮೈಸೂರು:** ಹುಣಸೂರು ತಾಲ್ಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ 2025-26ನೇ ಸಾಲಿನ ಮೆಟ್ರಿಕ್ ನಂತರದ ಪೂರ್ವ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಿಗೆ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಸೇರಿದ ಅರ್ಹ ವಿದ್ಯಾರ್ಥಿಗಳಿಗೆ ಹೊಸದಾಗಿ ಖಾಲಿ ಇರುವ ಸ್ಥಾನಗಳಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ವಿದ್ಯಾರ್ಥಿಗಳಿಗೆ ಉಚಿತ ವಸತಿ, ಊಟ, ಲೇಖನ ಸಾಮಾಗ್ರಿ, ನೋಟ್ ಪುಸ್ತಕ, ಲೈಬ್ರರಿ ವ್ಯವಸ್ಥೆ, ಕಂಪ್ಯೂಟರ್ ಲ್ಯಾಬ್, ಎರಡು ಜೊತೆ ಸಮವಸ್ತ್ರ, ಪತ್ರಿ ತಿಂಗಳು ಬಟ್ಟೆ ಸೋಪು, ಮೈಸೋಪು, ಕೊಬ್ಬರಿ ಎಣ್ಣೆ, ಟೂತ್ ಬ್ರಸ್ ಮತ್ತು ಪೇಸ್ಟ್ ಇತ್ಯಾದಿ ಸೌಲಭ್ಯಗಳನ್ನು ನೀಡಲಾಗುವುದು. ಆಸಕ್ತ ವಿದ್ಯಾರ್ಥಿನಿಲಯಗಳು ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ ಬಿಳಿಕೆರೆ, ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ ಗೆರೆಸನಹಳ್ಳಿ, ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ ಹನಗೋಡು, ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ ಹಿರಿಕ್ಯಾತನಹಳ್ಳಿ, ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ ಹುಣಸೂರು ಟೌನ್, ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ ತಟ್ಟೆಕೆರೆ, ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿ ನಿಲಯ ಹುಣಸೂರು ಟೌನ್ ಕಾರ್ಯನಿರ್ವಸುತ್ತಿರು ಸ್ಥಳಗಳು. ವಿದ್ಯಾರ್ಥಿನಿಯಗಳಿಗೆ ಪ್ರವೇಶ ಪಡೆಯಲು ಪ್ರವರ್ಗ-1, 2ಎ, 2ಬಿ, 3ಎ, 3ಬಿ ವರ್ಗಗಳ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ಆದಾಯ ರೂ.1.00 ಲಕ್ಷ/- ಗಳಿರುವ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1ಕ್ಕೆ ಸೇರಿದ ಮತ್ತು ಎಸ್.ಸಿ ಮತ್ತು ಎಸ್.ಟಿ ಪಂಗಡಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ರೂ. 2.50 ಲಕ್ಷ ಆದಾಯ ಮಿತಿ ಇರಬೇಕು. https://shp.karnataka.gov.in/bcwdಅನ್ನು ಸಂಪರ್ಕಿಸಿ ಅರ್ಜಿಯನ್ನು ಸಲ್ಲಿಸಬೇಕು. ಜೂನ್ 16 ರಂದು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವಾಗಿರುತ್ತದೆ.

# ಪೋಕ್ಸೋ ಪ್ರಕರಣದಲ್ಲಿ ಆರೋಪಿ ದರ್ಶನ್‌ಗೆ 20 ವರ್ಷ ಜೈಲು ಮತ್ತು 2.5 ಲಕ್ಷ ದಂಡ

**ಹುಳಿಯಾರು:** ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಪ್ರಕರಣದಲ್ಲಿ ಆರೋಪಿ ದರ್ಶನ್ ಅವರಿಗೆ 20 ವರ್ಷಗಳ ಜೈಲು ಶಿಕ್ಷೆ ಹಾಗೂ 2,50,000 ರೂ ದಂಡ ವಿಧಿಸಿ ತುಮಕೂರು ಜಿಲ್ಲಾ ವಿಶೇಷ ನ್ಯಾಯಾಲಯ ತೀರ್ಪು ನೀಡಿದೆ. 2022 ರಲ್ಲಿ ಚಿಕ್ಕನಾಯಕನಹಳ್ಳಿ ವೃತ್ತ ವ್ಯಾಪ್ತಿಯಲ್ಲಿ ನಡೆದ ಈ ಘಟನೆಯ ಪ್ರಕರಣವನ್ನು ಎಸ್.ಸಿ. ನಂ. 162/2022 ಅಡಿ ಐಪಿಸಿ ಸೆಕ್ಷನ್‌ಗಳು 376, 506, 500, 34, 22 ಜೊತೆಗೆ ಪೋಕ್ಸೋ ಕಾಯ್ದೆ 2012ರ ಸೆಕ್ಷನ್‌ಗಳು 04 ಮತ್ತು 06 ಅಡಿಯಲ್ಲಿ ದಾಖಲಿಸಲಾಗಿತ್ತು.

ಆರೋಪಿತರಾದ ಅಶೋಕ್ ನಾಯ್ಕ / ಗಣೇಶ್ ಬಿನ್ ಧನಂಜಯ್ಯ ನಾಯ್ಕ (24), ದೊಡ್ಡಬಿದರೆ ಹೊಸಹಟ್ಟಿ ತಾಂಡ್ಯ, ಹಾಗೂ ದರ್ಶನ್ ಬಿನ್ ಮಂಜುನಾಥ (26), ವರದಾಪುರದ ಕಟ್ಟೆ ಇಬ್ಬರೂ ಹುಳಿಯಾರು ಹೋಬಳಿಯ ಚಿಕ್ಕನಾಯಕನಹಳ್ಳಿ ತಾಲ್ಲೂಕಿನವರೆಂದು ಗುರುತಿಸಲಾಗಿದೆ. ಅಂದಿನ ಚಿಕ್ಕನಾಯಕನಹಳ್ಳಿ ವೃತ್ತದ ಪೊಲೀಸ್ ಪಿಎಸ್‌ಐ ನಿರ್ಮಲಾ ವಿ. ಅವರು ಈ ಪ್ರಕರಣದ ತನಿಖೆ ನಡೆಸಿ ಇಬ್ಬರನ್ನೂ ಬಂಧಿಸಿ ದೋಷಾರೋಪಣ ಪಟ್ಟಿ ನ್ಯಾಯಾಲಯಕ್ಕೆ ಸಲ್ಲಿಸಿದ್ದರು. ಸ್ಪೆಷಲ್ ಸಿಸಿ ನಂ. 782/2022 ರಂತೆ ಈಖಿಖಿಅ-01 ನ್ಯಾಯಾಲಯದಲ್ಲಿ ವಿಚಾರಣೆ ನಡೆಯಿತು. ವಿಚಾರಣೆ ಫಲಿತಾಂಶವಾಗಿ, ಆರೋಪಿ-1 ಅಶೋಕ್ ನಾಯ್ಕ ವಿರುದ್ಧದ ಆರೋಪ ಖುಲಾಸೆಯಾದರೂ, ಆರೋಪಿ-2 ದರ್ಶನ್ ವಿರುದ್ಧದ ಆರೋಪಗಳು ಸಾಬೀತಾದ ಹಿನ್ನೆಲೆಯಲ್ಲಿ ಮೇ 22, 2025 ರಂದು ತೀರ್ಪು ಘೋಷಿಸಲಾಯಿತು. ಈ ಪ್ರಕರಣದಲ್ಲಿ ವಿಶೇಷ ಸರ್ಕಾರಿ ಅಭಿಯೋಜಕರಾದ ಆಶಾ ಕೆ.ಎಸ್ ಅವರು ವಾದ ಮಂಡಿಸಿದ್ದಾರೆ.

# ಬಟ್ಟೆ ಅಂಗಡಿ ಮುಂದೆ ಬಟ್ಟೆ ಹೊಲಿಯುವವರ ಸಂಖ್ಯೆ ಕ್ಷೀಣಿಸುತ್ತಿದೆ

**ಚಿತ್ರದುರ್ಗ:** ಹಿಂದಲ್ಲ ಹೊಸ ಬಟ್ಟೆಗಳನ್ನು ಕೊಂಡುಕೊಂಡು ಜನರು, ಬಟ್ಟೆ ಅಂಗಡಿಯಲ್ಲಿ, ಅಕ್ಕಪಕ್ಕ ಕುಳಿತಿರುವಂತ ದರ್ಜಿಗಳಿಗೆ ಅಲ್ಲೇ ಅಳತೆ ಕೊಟ್ಟು, ತಮಗೆ ಇಷ್ಟವಾದ ಬಟ್ಟೆಯನ್ನು ಹೊಲಿಸಿಕೊಂಡು, ಅವರ ಜೀವನಕ್ಕೂ ಆಧಾರವಾಗಿದ್ದಂತ ಪದ್ಧತಿ ಈಗ ಬದಲಾಗಿದೆ. ದೊಡ್ಡ ದೊಡ್ಡ ಗಾರ್ಮೆಂಟ್ಸ್ ಕಂಪನಿಗಳೇ ಅವುಗಳನ್ನ ಹೊಲಿದು, ಜನರಿಗೆ ತಲುಪಿಸುವಂತಹ ಏರ್ಪಾಡು ಆದಾಗಿನಿಂದ, ಅಂಗಡಿ ಪಕ್ಕ ಕುಳಿತು ಧರ್ಜಿ ಕೆಲಸ ಮಾಡುವವರಿಗೆ ಇಂದು ಕೆಲಸ ಇಲ್ಲದೆ, ಹಾಗೆ ನಿರುದ್ಯೋಗ ಸಮಸ್ಯೆ ಎದ್ದು ಕಾಣುತ್ತಿದೆ. ಹಳೆಯ ವ್ಯಕ್ತಿಗಳು, 60-70 ವರ್ಷದಿಂದ ಮಾಡಿದಂತಹ ಕೆಲಸಗಾರರು ಮಾತ್ರ ಇಂದು ಸಹ, ಬಟ್ಟೆ ಅಂಗಡಿಯ ಅಕ್ಕಪಕ್ಕ ಕುಳಿತು, ಬಟ್ಟೆ ಹೊಲಿಯುವುದನ್ನು, ಜೀವನೋಪಾಯಕ್ಕಾಗಿ ಇಟ್ಟುಕೊಂಡಿದ್ದಾರೆ. ಆದರೆ ಈ ವ್ಯವಸ್ಥೆ ಇನ್ನು ಮುಂದೆ ಕಾಣದಷ್ಟು ಕ್ಷೀಣಿಸುತ್ತಾ ಬರುತ್ತದೆ ಎಂದು ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ಮತ್ತು ಕರ್ನಾಟಕ ಸರ್ವೋದಯ ಮಂಡಳಿ ಜಿಲ್ಲಾಧ್ಯಕ್ಷ ಡಾ ಎಚ್ ಕೆ ಎಸ್ ಸ್ವಾಮಿ ಅವರು ಕಳವಳ ವ್ಯಕ್ತಪಡಿಸಿದರು.

ಸಿಂಗರ್ ಎಂಬ ವಿಜ್ಞಾನಿ ತನ್ನ ಹೆಂಡತಿ ರಾತ್ರಿ ಎಲ್ಲಾ ಕುಳಿತು ಬಟ್ಟೆ ಹೊಲಿಯುವುದನ್ನು ನೋಡಲಾರದೇ, ಕೈಯಿಂದ ಬಟ್ಟೆ ಹೊಲಿಯುವುದನ್ನು ನೋಡಲಾರದೆ, ಅವಳಿಗೆ ಅನುಕೂಲಕರವಾಗಲಿ ಎಂದು ಪ್ರೇಮದಿಂದ, ಪ್ರೀತಿಯಿಂದ ಕಂಡು ಹಿಡಿದ ಹೊಲಿಗೆ ಯಂತ್ರವನ್ನು ಗಾಂಧೀಜಿಯವರು ಸಹ ಮೆಚ್ಚುಗೆ ವ್ಯಕ್ತಪಡಿಸಿದ್ದರು, ಏಕೆಂದರೆ ಈ ಯಂತ್ರದ ಹಿಂದೆ ಯಾವುದೇ ದುರಾಸೆ ಇಲ್ಲ, ಮಹಿಳೆಯರ ಸಂಕಷ್ಟಗಳಿಗೆ ಪರಿಹಾರ ಒದಗಿಸಲು ಕಂಡುಹಿಡಿದಂತ ಯಂತ್ರವಾಗಿದೆ, ಜನ ಕೈಯಿಂದ ಬಟ್ಟೆ ಮಾಡಿಕೊಂಡು, ತಮ್ಮ ಕೈಯಿಂದಲೇ ಹೊಲಿದುಕೊಳ್ಳುವುದನ್ನು ರೂಢಿ ಮಾಡಿಕೊಳ್ಳಿ ಎಂದು, ಯಾವುದೇ ವಿದ್ಯುತ್ತಿನ ಸಂಪರ್ಕವಿಲ್ಲದೆ, ಕೇವಲ ಕೈ ಕಾಲುಗಳನ್ನ ಬಳಸಿ, ಈ ಯಂತ್ರಗಳನ್ನ ತುಳಿದು, ಬಟ್ಟೆ ಹೊಲಿದುಕೊಳ್ಳುವಂತಹ ಪದ್ಧತಿ ಇತ್ತು, ಆದರೆ ಇಂದು ನಾವು ಆ ವ್ಯವಸ್ಥೆಯನ್ನು ತಪ್ಪಿಸಿ, ಕೈ ಕಾಲು ಬಳಸುವುದನ್ನು ತಪ್ಪಿಸಿದ್ದೇವೆ. ತಾಂತ್ರಿಕ ತೆಯಲ್ಲಿ ಉತ್ಕೃಷ್ಟ ಸ್ಥಿತಿಗೆ ಹೋಗಿ, ನಿರುದ್ಯೋಗ ಸಮಸ್ಯೆಯನ್ನು ಸೃಷ್ಟಿ ಮಾಡಿಕೊಂಡಿದ್ದೇವೆ ಎಂದರು.

ಈಗಲೂ ಸಹ ಕೆಲವೊಂದಿಷ್ಟು ಜನ ಮನೆಯಲ್ಲಿ ಕೈಯಿಂದನೇ ಹೊಲಿಗೆ ಹಾಕಿ, ಸಣ್ಣ ಸಣ್ಣ ಬಟ್ಟೆಗಳನ್ನ, ಚೀಲಗಳನ್ನ, ಕೈ ಚೀಲಗಳನ್ನ ತಯಾರು ಮಾಡಿಕೊಂಡು, ಕವದಿಗಳನ್ನ ಹೊಲಿದುಕೊಂಡು, ಜೀವನ ನಿರ್ವಹಿಸುತ್ತಿದ್ದಾರೆ. ಎಷ್ಟೇ ತಾಂತ್ರಿಕ ಬದಲಾವಣೆ ಹೊಂದಿದ್ದರು ಸಹ ಸೂಜಿ ದಾರಕ್ಕೆ ಇನ್ನೂ ಸಹ ಬೆಲೆ ಇದ್ದು, ಯಾರು ಸಹ ಅವುಗಳನ್ನ ಇನ್ನೂ ಬಿಸಾಕಿಲ್ಲ, ಇನ್ನೂ ಭಾರತೀಯ ಜನ ಬದಲಾಗಿಲ್ಲ ಎಂಬುದಕ್ಕೆ ಇದು ಸಾಕ್ಷಿಯಾಗಿದೆ ಎಂದರು.

ಹಿಂದೆ ಹೆಣ್ಣು ಮಕ್ಕಳು ಎಸ್‌ಎಸ್‌ಎಲ್ಸಿ ಓದು ಮುಗಿಸುವುದರೊಳಗೆ ತಮಗೆ ಬೇಕಾದಂತ ಬಟ್ಟೆಗಳನ್ನ ಹೊಲಿದುಕೊಳ್ಳುವಂತೆ ಹೊಲಿಗೆ ತರಬೇತಿಯನ್ನ, ಟೈಪಿಂಗ್ ತರಬೇತಿಯನ್ನ ನೀಡಿ, ಅವರನ್ನು ಸ್ವಂತ ಕಾಲಗಳ ಮೇಲೆ ನಿಲ್ಲಿಸುತ್ತಿದ್ದರು. ಆದರೆ ಇಂದು ಯಾರ ಮನೆಯಲ್ಲಿಯೂ ಸಹ ಟೈಲರಿಂಗ್ ಮೆಷಿನ್ ಸಹ ಕಾಣದಂತಾಗಿದೆ, ಎಲ್ಲರೂ ಸಹ ರೆಡಿಮೇಡ್ ಬಟ್ಟೆಗಳನ್ನ ಕೊಂಡುಕೊಂಡು, ಹರಿದ ತಕ್ಷಣ ಬಿಸಾಡುವಂತಹ ಪದ್ಧತಿ, ರೂಡಿಗೆ ಬರುತ್ತಿದೆ. ಮನುಷ್ಯ ಕೊನೇ ಪಕ್ಷ ಮನೆಯೊಳಗಾದರೂ ಕುಳಿತು, ತನ್ನ ಬಟ್ಟೆಗಳನ್ನು ಹೊಲಿದುಕೊಳ್ಳಲಿ ಎಂದು ಸಿಂಗರ್ ಎಂಬ ಮಹಾಶಯ ಟೈಲರಿಂಗ್ ಯಂತ್ರವನ್ನು ಕಂಡುಹಿಡಿದ, ಆದರೆ ಅತಿ ದುರಾಸೆಯಿಂದ ಮನುಷ್ಯ ಆ ಯಂತ್ರಕ್ಕೂ ಸಹ ಇನ್ನೊಂದು ಯಂತ್ರವನ್ನು ಜೋಡಿಸಿ, ವೇಗವಾಗಿ ಚಲಾಯಿಸಿ, ಊರ ಬಟ್ಟೆಯನ್ನೆಲ್ಲ ಒಬ್ಬನೇ ಕಟ್ ಮಾಡಿಕೊಂಡು, ಹೊಲಿಯುವಂತ ಪರಿಸ್ಥಿತಿ ನಿರ್ಮಾಣವಾಗಿದೆ. ಕೈಗಾರಿಕೆಗಳು ಎಷ್ಟರಮಟ್ಟಿಗೆ ಅಭಿವೃದ್ಧಿ ಹೊಂದಿವೆ ಎಂದರೆ ಸಾವಿರಾರು ಬಟ್ಟೆಗಳನ್ನ ಒಮ್ಮೆಲೇ ಕಟ್ಟು ಮಾಡಿ, ಒಮ್ಮೆಲೇ ಯಂತ್ರಗಳ ಮುಖಾಂತರ ಹೊಲಿಗೆ ಹಾಕಿಸಿ, ಬಟ್ಟೆಗಳನ್ನು ಸಿದ್ಧಪಡಿಸಿ, ಮಾರುಕಟ್ಟೆಯಲ್ಲಿ ಕಡಿಮೆ ವೆಚ್ಚದಲ್ಲಿ ಮಾರಾಟ ಮಾಡಿ, ಜನರನ್ನ ನಿರುದ್ಯೋಗಿಗಳನ್ನಾಗಿ, ಕೌಶಲ್ಯ ರಹಿತರನ್ನಾಗಿ ಮಾಡಿ, ಸೋಮಾರಿಗಳನ್ನಾಗಿ ಮಾಡಿ ಬಡತನಕ್ಕೆ ಇಳಿಸುತ್ತಿವೆ ಎಂದರು. ಮನೆಯಲ್ಲಿರುವ ಅಡುಗೆಮನೆಯನ್ನು ಸಹ ಕೆಲವೇ ದಿನಗಳಲ್ಲಿ ತೆಗೆಯುವ ಉನ್ನಾರ ನಡೆಯುತ್ತಿದ್ದು, ಇನ್ನು ಮುಂದೆ ಜನರು ತಮಗೆ ಬೇಕಾದಂತ ಅನ್ನ, ಸಾಂಬಾರ್, ರೊಟ್ಟಿ, ಚಪಾತಿ, ಮುದ್ದೆಗಳನ್ನ ದೊಡ್ಡ ದೊಡ್ಡ ಕೈಗಾರಿಕೆಗಳಿಂದ ಮನೆ ಬಾಗಿಲಿಗೆ ತಲುಪಿಸುವಂತಹ ವ್ಯವಸ್ಥೆ ಬರಬಹುದು, ಆಗ ಮನೆಯಲ್ಲಿರುವ ಗೃಹಿಣೀಯರು ಯಾವುದೇ ಕೆಲಸವಿಲ್ಲದೆ, ಕೇವಲ ನಿರುದ್ಯೋಗ ಸಮಸ್ಯೆಗಳನ್ನ ಎದುರಿಸಿಕೊಳ್ಳುತ್ತಾ, ದುಡಿಮೆ ಇಲ್ಲದೆ ತಾವೇ ಬಡತನದ ಗುಂಡಿಗೆ ಬೀಳುವಂತಹ ಸಿದ್ಧತೆಗಳಾಗುತ್ತಿವೆ. ಒಲೆಯ ಜೊತೆಗೆ ದಾರಾ ಮಾಡುವ ಯಂತ್ರ, ಚರಕ, ಬಟ್ಟೆ ಮಾಡುವ ಮಗ್ಗ, ಕೈ ಹೊಲಿಗೆ ಮಾಡುವ ಟೈಲರಿಂಗ್ ಯಂತ್ರ, ಇವೆಲ್ಲವನ್ನೂ ಸಹ ಮತ್ತೆ ನಾವು ಗ್ರಾಮಗಳಲ್ಲಿ, ಮನೆ ಮನೆಗಳಲ್ಲಿ ಪ್ರತಿಷ್ಠಾಪನೆ ಮಾಡಿದರೆ ಮಾತ್ರ, ಜನರಲ್ಲಿರುವ ಬಡತನ, ಅಸಮಾನತೆ, ಸೋಮಾರಿತನವನ್ನು ನಿವಾರಿಸಲು ಅನುಕೂಲವಾಗಿರುತ್ತದೆ ಎಂದು ವಿನಂತಿಸಿಕೊಂಡಿದ್ದಾರೆ.

ಶಾಲಾ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಟೈಲರಿಂಗ್ ತರಬೇತಿಯನ್ನು ನೀಡಿ, ಅವರಿಗೆ ತಮ್ಮ ಯೂನಿಫಾರಂಗಳನ್ನು ತಾವೇ ಹೊಲಿದುಕೊಳ್ಳುವಂತಹ ಶಿಕ್ಷಣ ನೀಡಿದರೆ ಮಾತ್ರ ಸ್ವಾವಲಂಬಿ ಜೀವನ ಮಕ್ಕಳಲ್ಲಿ ಅರಿವಿಗೆ ಬರುತ್ತದೆ, ದುಡಿಮೆಯ ಮಹತ್ವ ತಿಳಿಯುತ್ತದೆ. ಬರೀ ಓದಿನಿಂದ ಕೌಶಲ್ಯ ಹೆಚ್ಚಾಗುವುದಿಲ್ಲ, ಅವರಿಗೆ ಪ್ರಯೋಗಾಲಯ ತರಬೇತಿಗಳನ್ನು ನೀಡಿದಂತೆ ಜೀವನಕ್ಕೆ ಬೇಕಾದಂತ ಕೌಶಲ್ಯಗಳನ್ನು ತಿಳಿಸಿ ಕೊಡಬೇಕಾಗಿದೆ ಎಂದರು.

ಈಗಲೂ ಕೆಲವು ಶಾಲೆಗಳಲ್ಲಿ ಎಸ್ ಯು ಡಬ್ಲ್ಯೂ ಪಿ ಎಂಬ ವಿಷಯವನ್ನು ಇಟ್ಟು ಮಕ್ಕಳಿಗೆ, ಕೈ ಕಾಲುಗಳ ಬಳಸುವುದನ್ನು ಹೇಳಿಕೊಡಲಾಗುತ್ತದೆ. ಕೆಲವೊಂದಿಷ್ಟು ಶಾಲೆಗಳಲ್ಲಿ ಟೈಲರಿಂಗ್ ಮೆಷಿನ್ ಗಳನ್ನ ಸ್ಟೋರ್ ರೂಮುಗಳಲ್ಲಿ ಭದ್ರಪಡಿಸಿ, ಬೀಗ ಹಾಕಿ, ಯಾರಿಗೂ ಸಹ ದೊರೆಯದಂತೆ, ಯಂತ್ರಗಳು ಸಹ ಉಪಯೋಗಕ್ಕೆ ಬಾರದಂತೆ ಮಾಡಿರುವ ದೃಶ್ಯ ಕಾಣುತ್ತಿದೆ. ಅವುಗಳನ್ನು ಶಿಕ್ಷಣ ಇಲಾಖೆ ಹೊರ ತೆಗೆದು, ಮಕ್ಕಳಿಗೆ ಟೈಲರಿಂಗ್ ಆದರೂ ಕಲಿಸಿ, ನಿರುದ್ಯೋಗ ಸಮಸ್ಯೆಯನ್ನು ನಿವಾರಣೆ ಮಾಡಬೇಕೆಂದು ಪತ್ರಿಕಾ ಪ್ರಕಟಣೆ ಮುಖಾಂತರ ವಿನಂತಿಸಿಕೊಂಡಿದ್ದಾರೆ.

ರಾಜೀವ್‌ಗಾಂಧಿ ಆರೋಗ್ಯ ವಿಶ್ವವಿದ್ಯಾಲಯದ ಉಪ ಕುಲಪತಿ ಡಾ.ಭಗವಾನ್ ಹೇಳಿಕೆ

# ನರ್ಸಿಂಗ್ ಉದ್ಯೋಗಕ್ಕೆ ಬೇಡಿಕೆ

**ಕೋಲಾರ:** ನರ್ಸಿಂಗ್ ಉದ್ಯೋಗಕ್ಕೆ ಜಾಗತಿಕ ಬೇಡಿಕೆಯಿದ್ದು ಸ್ಥಳೀಯವಾಗಿಯೂ ಅವಕಾಶಗಳು ಹೆಚ್ಚಾಗಿರುವುದರಿಂದಾಗಿ ವಿದ್ಯಾರ್ಥಿಗಳು ಸಮಗ್ರ ಅಧ್ಯಯನದ ಮೂಲಕ ಭಾರತದ ನಿರುದ್ಯೋಗ ತಡೆಗೆ ಮುಂದಾಗಬೇಕೆಂದು ರಾಜೀವ್‌ಗಾಂಧಿ ಆರೋಗ್ಯ ವಿಶ್ವವಿದ್ಯಾಲಯದ ಉಪ ಕುಲಪತಿ ಡಾ.ಭಗವಾನ್ ಹೇಳಿದರು.




ನಗರದ ಚನ್ನೇಗೌಡ ಮತ್ತು ದೇವರಾಜ ನರ್ಸಿಂಗ್ ಕಾಲೇಜುಗಳ ದೀಪ ಬೆಳಗುವಿಕೆ ಹಾಗೂ ವಿದ್ಯಾರ್ಥಿಗಳ ಪ್ರಮಾಣವಚನ ಸ್ವೀಕಾರ ಸಮಾರಂಭ ಉದ್ಘಾಟಿಸಿ ಮಾತನಾಡಿ, ಮೊದಲು ನರ್ಸ್, ದಾದಿ, ಸಿಸ್ಟರ್ ಎಂದು ಕರೆಯಲಾಗುತ್ತಿದ್ದು ಇದೀಗ ಕರ್ನಾಟಕ ಸರ್ಕಾರ ನರ್ಸಿಂಗ್ ಆಫೀಸರ್ ಎಂದು ಹುದ್ದೆಯನ್ನು ಮೇಲ್ದರ್ಜೆಗೆ ಏರಿಸುವ ಮೂಲಕ ನರ್ಸಿಂಗ್ ವೃತ್ತಿಗೆ ಘನತೆ ತಂದು ಕೊಟ್ಟಿದೆ ಎಂದರು.

ಬೆಂಗಳೂರು ಡಿಸಿಪಿ ಡಿ.ದೇವರಾಜ್ ಮಾತನಾಡಿ, ವಿದ್ಯಾರ್ಥಿಗಳು ತಂದೆ-ತಾಯಿ ಕಷ್ಟವನ್ನು ಅರ್ಥ ಮಾಡಿಕೊಂಡು ಮೊಬೈಲ್ ಮಾಯೆಗೆ ಸಿಲುಕದೆ ನರ್ಸಿಂಗ್ ಕಲಿಕೆ ಮೂಲಕ ಉತ್ತಮ ಭವಿಷ್ಯವನ್ನು ರೂಪಿಸಿಕೊಳ್ಳಬೇಕೆಂದು ತಿಳಿಸಿದರು.

ಚನ್ನೇಗೌಡ ಸಮೂಹ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ಡಾ.ಎನ್.ಸಿ.ದೇವರಾಜ್ ಮಾತನಾಡಿ, ಗೆಳೆಯರ ಸಂಗ ಜೀವನದ ಮೇಲೆ ಪ್ರಭಾವ ಬೀರುವುದರಿಂದಾಗಿ ಉತ್ತಮ ಸ್ನೇಹಿತರನ್ನು ಆಯ್ಕೆ ಮಾಡಿಕೊಂಡು ಸಾಧನೆಗೆ ಮುಂದಾಗಬೇಕೆಂದು ನುಡಿದರು.

ಮಂಜುನಾಥ ಹೆಲ್ತ್ ಕೇರ್‌ನ ಡಾ.ನಾರಾಯಣಸ್ವಾಮಿ ಮಾತನಾಡಿ, ನರ್ಸಿಂಗ್ ಅಧ್ಯಯನದ ಜತೆಗೆ ವೃತ್ತಿ ನೈಪುಣ್ಯ ಮತ್ತು ಕೌಶಲ್ಯ ಕಲಿಕೆಗೆ ಹೆಚ್ಚಿನ ಒತ್ತು ನೀಡಬೇಕೆಂದು ಸೂಚಿಸಿದರು.

ಡಿಎಚ್‌ಒ ಡಾ.ಜಿ.ಶ್ರೀನಿವಾಸ್ ಮಾತನಾಡಿ, ಗುಣಮಟ್ಟದ ಶಿಕ್ಷಣಕ್ಕೆ ಹೆಸರಾಗಿರುವ ಚನ್ನೇಗೌಡ ಸಮೂಹ ಶಿಕ್ಷಣ ಸಂಸ್ಥೆಯಲ್ಲಿ ಎಂಎಸ್ಸಿ ನರ್ಸಿಂಗ್, ಪ್ಯಾರಾಮೆಡಿಕಲ್ ಕೋರ್ಸ್, ಅಲೈಡ್ ಹೆಲ್ತ್ ಸೈನ್ಸ್, ಫಿಸಿಯೋಥೆರಪಿ ಶಿಕ್ಷಣವೂ ಲಭ್ಯವಿದ್ದು ಇವುಗಳ ಕಲಿಕೆಗೆ ಗ್ರಾಮೀಣ ಯುವ ಸಮೂಹ ಮುಂದಾಗುವ ಮೂಲಕ ಸುಲಭವಾಗಿ ಉತ್ತಮ ಗಳಿಕೆಯ ಉದ್ಯೋಗ ಪಡೆದುಕೊಳ್ಳಬಹುದೆಂದು ಸಲಹೆ ನೀಡಿದರು.

ರಾಜೀವ್ಗಾಂಧಿ ಆರೋಗ್ಯ ವಿವಿ ಸೆನೆಟ್ ಸದಸ್ಯ ಡಾ.ಶ್ರೀನಿವಾಸನ್ ವೇಲು, ಡಾ.ಮದುಸೂದನ್, ಚನ್ನೇಗೌಡ ಶಿಕ್ಷಣ ಸಂಸ್ಥೆಗಳ ಕಾರ್ಯದರ್ಶಿ ಡಾ.ವಿ.ಜಿ.ಹೇಮಾವತಿ, ಸಿಇಒ ಎನ್.ಎಸ್.ಪ್ರವೀಣ್, ಪ್ರಿನ್ಸಿಪಾಲ್ ಭಾರತಿ ಇದ್ದರು. ನಂತರ ವಿದ್ಯಾರ್ಥಿಗಳು ಸಾಂಸ್ಕೃತಿಕ ಕಾರ್ಯಕ್ರಮ ನಡೆಸಿಕೊಟ್ಟರು.

# ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ಹುದ್ದೆಗೆ ಅರ್ಜಿ ಆಹ್ವಾನ

**ಮೈಸೂರು:** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಮೈಸೂರು ಜಿಲ್ಲೆಯಲ್ಲಿ ಖಾಲಿಯಿರುವ ಅಂಗನವಾಡಿ ಕಾರ್ಯಕರ್ತೆರು 68 ಹಾಗೂ ಸಹಾಯಕಿಯರ 251 ಹುದ್ದೆಗೆ ಗೌರವಧನ ಸೇವೆಯ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಹೆಣ್ಣು ಮಕ್ಕಳು ಹಾಗೂ ಮಹಿಳಾ ಲಿಂಗತ್ವ ಅಲ್ಪ ಸಂಖ್ಯಾತ ಮಹಿಳಾ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು ವೆಬ್‌ಸೈಟ್ https://karnemakaone.kar.nic.in/abcd/ ಮೂಲಕ ಅರ್ಜಿ ಸಲ್ಲಿಸಬಹುದಾಗಿದ್ದು, ಅರ್ಜಿ ಸಲ್ಲಿಸಲು ಜೂನ್ 15 ಕೊನೆಯ ದಿನಾಂಕವಾಗಿರುತ್ತದೆ.

ಟಿ.ನರಸೀಪುರ ಅಂಗನವಾಡಿ ಕಾರ್ಯಕರ್ತೆ 03 ಹಾಗೂ ಸಹಾಯಕಿಯರ 28 ಹುದ್ದೆಗಳು, ಬಿಳಿಕೆರೆ ಅಂಗನವಾಡಿ ಕಾರ್ಯಕರ್ತೆ 06 ಹಾಗೂ ಸಹಾಯಕಿಯರ 32 ಹುದ್ದೆಗಳು, ನಂಜನಗೂಡು ಅಂಗನವಾಡಿ ಕಾರ್ಯಕರ್ತೆ 10 ಹಾಗೂ ಸಹಾಯಕಿಯರ 31 ಹುದ್ದೆಗಳು, ಮೈಸೂರು ನಗರ ಅಂಗನವಾಡಿ ಕಾರ್ಯಕರ್ತೆ 01 ಹಾಗೂ ಸಹಾಯಕಿಯರ 14 ಹುದ್ದೆಗಳು, ಮೈಸೂರು ಗ್ರಾಮಾಂತರ ಅಂಗನವಾಡಿ ಕಾರ್ಯಕರ್ತೆ 06 ಹಾಗೂ ಸಹಾಯಕಿಯರ 12 ಹುದ್ದೆಗಳು, ಪಿರಿಯಾಪಟ್ಟಣ ಅಂಗನವಾಡಿ ಕಾರ್ಯಕರ್ತೆ 11 ಹಾಗೂ ಸಹಾಯಕಿಯರ 57 ಹುದ್ದೆಗಳು, ಹೆಚ್.ಡಿ ಕೋಟೆ ಅಂಗನವಾಡಿ ಕಾರ್ಯಕರ್ತೆ 22 ಹಾಗೂ ಸಹಾಯಕಿಯರ 29 ಹುದ್ದೆಗಳು, ಕೆ.ಆರ್.ನಗರ ಅಂಗನವಾಡಿ ಕಾರ್ಯಕರ್ತೆ 04 ಹಾಗೂ ಸಹಾಯಕಿಯರ 22 ಹುದ್ದೆಗಳು, ಹುಣಸೂರು ಅಂಗನವಾಡಿ ಕಾರ್ಯಕರ್ತೆ 05 ಹಾಗೂ ಸಹಾಯಕಿಯರ 26 ಹುದ್ದೆಗಳು ಖಾಲಿ ಇದ್ದು, ಒಟ್ಟು ಅಂಗನವಾಡಿ ಕಾರ್ಯಕರ್ತೆರು 68 ಹಾಗೂ ಸಹಾಯಕಿಯರ 251 ಹುದ್ದೆಗಳು ಖಾಲಿಯಿದೆ.

ಆನ್‌ಲೈನ್‌ನಲ್ಲಿ ಲಗತ್ತಿಸಬೇಕಾದ ದಾಖಲಾತಿಗಳು: ಆನ್‌ಲೈನ್‌ನಲ್ಲಿ ಸಲ್ಲಿಸಿದ ಅರ್ಜಿಗಳನ್ನು ಮಾತ್ರ ಪರಿಗಣಿಸಲಾಗುತ್ತದೆ. ಅರ್ಜಿಗಳನ್ನು ಭರ್ತಿಮಾಡಿ ಅವಶ್ಯಕ ಧೃಢಿಕೃತ ದಾಖಲೆಗಳನ್ನು ಸ್ಪಷ್ಟವಾಗಿ ಕಾಣಿಸುವಂತೆ ಸ್ಕ್ಯಾನ್ ಮಾಡಿ ಅರ್ಜಿ ಸಲ್ಲಿಸಬೇಕು, ಆನ್ ಲೈನ್ ಮೂಲಕವೇ ಎಲ್ಲಾ ಅಗತ್ಯ ದಾಖಲೆಗಳನ್ನು ಸಲ್ಲಿಸಬೇಕು, ಆಫ್‌ಲೈನ್‌ನಲ್ಲಿ ಸಲ್ಲಿಸುವ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ. 19 ವರ್ಷ ದಿಂದ 35 ವರ್ಷ ಮೀರಿರವಾರದು ಹಾಗೂ ವಿಕಲಚೇತನರಿಗೆ 10 ವರ್ಷಗಳ ವಯೋಮಾನ ಸಡಿಲಿಕೆ ಇರುತ್ತದೆ. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವಾಗ 4 ಹಂತಗಳಿದ್ದು, ಸೂಕ್ಷ್ಮವಾಗಿ ಓದಿ 4 ಹಂತಗಳನ್ನು ಪೂರೈಸಿ ಅರ್ಜಿ ಸಲ್ಲಿಸಬೇಕು. ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ಕನಿಷ್ಠ ವಿದ್ಯಾರ್ಹತೆ ಪಿ.ಯು.ಸಿ ತೇರ್ಗಡೆ ಹೊಂದಿರಬೇಕು ಹಾಗೂ ಎಸ್.ಎಸ್.ಎಲ್.ಸಿ ಯಲ್ಲಿ ಕನ್ನಡಭಾಷೆಯನ್ನು ಪ್ರಥಮ ಭಾಷೆ ಅಥವಾ ದ್ವಿತೀಯ ಭಾಷೆಯನ್ನಾಗಿ ಓದಿರಬೇಕು. ಅಂಗನವಾಡಿ ಸಹಾಯಕಿ ಹುದ್ದೆಗೆ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು ಹಾಗೂ ಎಸ್.ಎಸ್.ಎಲ್.ಸಿ ಯಲ್ಲಿ ಕನ್ನಡಭಾಷೆಯನ್ನು ಪ್ರಥಮ ಭಾಷೆ ಅಥವಾ ದ್ವಿತೀಯ ಭಾಷೆಯನ್ನಾಗಿ ಓದಿರಬೇಕು. ಹೆಚ್ಚಿನ ಮಾಹಿತಿಗಾಗಿ ತಾಲ್ಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ ದೂ. ಸಂ:08227-261267 ನ್ನು ಸಂಪರ್ಕಿಸಬಹದು ಎಂದು ಮೈಸೂರಿನ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

# ಡಿಪ್ಲೊಮಾ ತರಬೇತಿ

**ಮೈಸೂರು:** ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ-ಅಪರೇಟಿವ್ ಮ್ಯಾನೇಜ್‌ಮೆಂಟ್, ಮೈಸೂರು ಸಹಕಾರ ತರಬೇತಿ ಸಂಸ್ಥೆಯು ಜುಲೈ 01 ರಿಂದ6 ತಿಂಗಳ ಅವಧಿಯ ರೆಗ್ಯೂಲರ್ ಡಿಪ್ಲೊಮಾ ಇನ್ ಕೋ-ಆಪರೇಟಿವ್ ಮ್ಯಾನೇಜ್‌ಮೆಂಟ್ ಹಾಗೂ ಸಹಕಾರ ಸಂಘ ಸಂಸ್ಥೆಗಳ ಸಿಬ್ಬಂದಿಗಳಿಗೆ ದೂರ ಶಿಕ್ಷಣ ಡಿಪ್ಲೊಮಾ ಇನ್ ಕೋ-ಆಪರೇಟಿವ್ ಮ್ಯಾನೇಜ್‌ಮೆಂಟ್ ಕೋರ್ಸ್ ಸಹಕಾರ ತರಬೇತಿಯನ್ನು ಪ್ರಾರಂಭಿಸಲಾಗುತ್ತಿದ್ದು, ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಡಿಪ್ಲೊಮಾ ಇನ್ ಕೋ ಆಪರೇಟಿವ್ ಮ್ಯಾನೇಜ್‌ಮೆಂಟ್ ಕೋರ್ಸ್ ಎಲ್ಲಾ ಸಹಕಾರ ಸಂಘ ಸಂಸ್ಥೆ/ಬ್ಯಾಂಕ್‌ಗಳಲ್ಲಿನ ಉದ್ಯೋಗ ನೇಮಕಾತಿಗಾಗಿ ಕಡ್ಡಾಯವಾಗಿರುತ್ತದೆ. ತರಬೇತಿ ಪಡೆಯಲು ಕನಿಷ್ಠ ಎಸ್.ಎಸ್.ಎಲ್.ಸಿ ವಿದ್ಯಾರ್ಹತೆಯನ್ನು ಹೊಂದಿರಬೇಕು ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ತರಬೇತಿ ಅವಧಿಯಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ 600 ಶಿಷ್ಯವೇತನ ಹಾಗೂ ಇತರೆ ಎಲ್ಲಾ ಅಭ್ಯರ್ಥಿಗಳಿಗೆ 500 ಶಿಷ್ಯವೇತನವನ್ನು ಪ್ರತಿ ತಿಂಗಳು ನೀಡಲಾಗುತ್ತದೆ. ದೂರ ಶಿಕ್ಷಣ ಡಿಪ್ಲೋಮೋ ಇನ್ ಕೋ-ಆಪರೇಟಿವ್ ಮ್ಯಾನೇಜ್‌ಮೆಂಟ್ ತರಬೇತಿಯು ಸಹಕಾರ ಸಂಘ/ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ನೌಕರರಿಗೆ ಕಡ್ಡಾಯವಾಗಿರುತ್ತದೆ.

ಆಸಕ್ತ ಅಭ್ಯರ್ಥಿಗಳು ಅರ್ಜಿಯನ್ನು ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ ಆಪರೇಟಿವ್ ಮ್ಯಾನೇಜ್ ಮೆಂಟ್ ಸಹಕಾರ ಭವನ ಚಾಮರಾಜ ಜೋಡಿ ರಸ್ತೆ ಮೈಸೂರು ಇಲ್ಲಿ ಪಡೆದು ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಜೂನ್ 10 ಕೊನೆಯ ದಿನಾಂಕವಾಗಿರುತ್ತದೆ.

ಅರ್ಜಿಗಳು ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ-ಆಪರೇಟಿವ್ ಮ್ಯಾನೇಜ್‌ಮೆಂಟ್, ಸಹಕಾರ ಭವನ, ಮೈಸೂರು. ಜಿಲ್ಲಾ ಸಹಕಾರ ಯೂನಿಯನ್ ನಿ., ಸಹಕಾರ ಭವನ, ಮೈಸೂರು. ಜಿಲ್ಲಾ ಸಹಕಾರ ಯೂನಿಯನ್ ನಿ., ಅಶೋಕ ನಗರ, 1 ನೇ ಕ್ರಾಸ್, ಮಂಡ್ಯ. ಜಿಲ್ಲಾ ಸಹಕಾರ ಯೂನಿಯನ್ ನಿ., ಜಿಲ್ಲಾಡಳಿತ ಭವನ, ಚಾಮರಾಜನಗರ ಇಲ್ಲಿ ದೊರೆಯಲಿದೆ.

ಹೆಚ್ಚಿನ ಮಾಹಿತಿಗಾಗಿ ದೂ. ಸಂ: 0821-2520563, ಮೊ. ನಂ: 9902189872, 9845918519, 9535250704 ನ್ನು ಸಂಪರ್ಕಿಸಬಹುದು ಎಂದು ಮೈಸೂರಿನ ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ- ಆಪರೇಟಿವ್ ಮ್ಯಾನೇಜ್‌ಮೆಂಟ್‌ನ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಿಪ್ಲೋಮಾ ಕೋರ್ಸ್‌ಗೆ ಅರ್ಜಿ ಆಹ್ವಾನ

**ಮೈಸೂರು:** ಕೈಮಗ್ಗ ಮತ್ತು ಜವಳಿ ಇಲಾಖೆಯ ವತಿಯಿಂದ 2025-26 ನೇ ಸಾಲಿನ ಶೈಕ್ಷಣಿಕ ಅವಧಿಗೆ ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ 3 ವರ್ಷದ ಡಿಪ್ಲೋಮಾ(ಡಿ.ಹೆಚ್.ಟಿ.ಟಿ) ಕೋರ್ಸ್ ಕಲಿಕೆಗಾಗಿ 39 ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ವಿದ್ಯಾರ್ಥಿಗಳು ವ್ಯಾಸಂಗ ಮಾಡುವ ಸಮಯದಲ್ಲಿ ಅವರಿಗೆ ಪ್ರತಿ ತಿಂಗಳು ರೂ.2,500/- ರಂತೆ ಶಿಷ್ಯವೇತನ ನೀಡಲಾಗುವುದು ಹಾಗೂ ಪುರುಷ ಅಭ್ಯರ್ಥಿಗಳಿಗೆ ವಸತಿ ನಿಲಯದ ಸೌಲಭ್ಯವನ್ನು ಹಣ ಪಾವತಿಸುವ ಆಧಾರದ ಮೇಲೆ ಕಲ್ಪಿಸಲಾಗುತ್ತದೆ. ಎಸ್. ಎಸ್. ಎಲ್. ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಇಂಗ್ಲೀ?ನ್ನು ಒಂದು ವಿಷಯವಾಗಿ ಅಭ್ಯಸಿಸಿ ಉತ್ತೀರ್ಣರಾಗಿರುವ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದ್ದು, ಜುಲೈ 1,2025 ಕ್ಕೆ ಅನ್ವಯಿಸುವಂತೆ ಸಾಮಾನ್ಯ ವರ್ಗದ ಅಭ್ಯರ್ಥಿಗಳು 15 ರಿಂದ 23 ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು 15 ರಿಂದ 25 ರ ವಯೋಮಿತಿ ಹೊಂದಿರಬೇಕು. ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಕೃಢೀಕೃತ ಅಂಕಗಳು ಮೆರಿಟ್ ಲೆಕ್ಕಾಚಾರಕ್ಕೆ ಆಧಾರವಾಗಿರುತ್ತದೆ. 2025-26 ನೇ ಸಾಲಿಗೆ ಮೂರು ವರ್ಷದ ಡಿಪ್ಲೋಮಾ ಕೋರ್ಸ್ ಗಾಗಿ ಲಭ್ಯವಿರುವ ಅಭ್ಯರ್ಥಿಗಳ ಸಂಖ್ಯೆ ಮತ್ತು ಸಂಸ್ಥೆಗಳ ವಿವರ: ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಗದಗ - ಬೆಟಗೇರಿ( ಕರ್ನಾಟಕ), 22 ಅಭ್ಯರ್ಥಿಗಳು, ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ , ಸೇಲಂ (ತಮಿಳುನಾಡು), 12 ಅಭ್ಯರ್ಥಿಗಳು, ಎಸ್. ಪಿ.ಕೆ.ಎಂ ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ವೆಂಕಟಗಿರಿ (ನೆಲ್ಲೂರು ಜಿಲ್ಲೆ ಆಂಧ್ರಪ್ರದೇಶ), 03 ಅಭ್ಯರ್ಥಿಗಳು, ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಕಣ್ಣೂರು(ಕೇರಳ), 02 ಅಭ್ಯರ್ಥಿಗಳು ಒಟ್ಟು 39 ಅಭ್ಯರ್ಥಿಗಳಿಗೆ ಅವಕಾಶವಿದ್ದು, ಮೆರಿಟ್ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳನ್ನು ಆಯಾ ಡಿಪ್ಲೋಮಾ ಸಂಸ್ಥೆಗಳಲ್ಲಿ ಕೋರ್ಸ್ ಪ್ರವೇಶ ಕುರಿತಂತೆ ಕೌನ್ಸಿಲಿಂಗ್ ಕರೆಯಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ ನರಸಾಪುರ ಗದಗ- ಬೆಟಗೇರಿ ಕಚೇರಿ ದೂ. ಸಂ: 08372-297221 ಮೋ.ನಂ.9449162822 ಅಥವಾ ಉಪ ನಿರ್ದೇಶಕರ ಕಚೇರಿ ಕೈಮಗ್ಗ ಮತ್ತು ಜವಳಿ ಇಲಾಖೆ ಸಿ.ಟಿ.ಐ.ಕಟ್ಟಡ ಸೈಯಾಜಿ ರಾವ್ ರಸ್ತೆ ಜಿಲ್ಲಾ ಪಂಚಾಯತ್ ಮೈಸೂರು ದೂ. ಸಂ: 0821-2441353 ನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಪಂಚಾಯತ್‌ನ ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂಗ್ಲಿಷ್ ಶಿಕ್ಷಕರಿಂದ ಅರ್ಜಿ

**ಮೈಸೂರು:** ಸಮಗ್ರ ಬುಡಕಟ್ಟು ಅಭಿವೃದ್ಧಿ ಯೋಜನೆ ಪರಿಶಿ?ಟ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಮೈಸೂರು ಜಿಲ್ಲೆಯಲ್ಲಿ ವರ್ಗಗಳ ಕಲ್ಯಾಣ ಇಲಾಖೆಯಡಿ ವಿವಿಧ ತಾಲ್ಲೂಕುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶ್ರೀ ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆಗಳಿಗೆ 2025-26 ನೇ ಸಾಲಿಗೆ ತಾತ್ಕಾಲಿಕವಾಗಿ ಗೌರವಧನದ ಆಧಾರದ ಮೇಲೆ ಇಂಗ್ಲೀಷ್ ಭಾಷೆ ಬೋಧಿಸುವ ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲು ಅರ್ಜಿಯನ್ನು ಆಹ್ವಾನಿಸಲಾಗಿದೆ. ಇಂಗ್ಲೀಷ್ ಐಚ್ಚಿಕ ವಿಷಯದಲ್ಲಿ ಬಿ.ಎ,ಬಿ.ಇಡಿ. ವಿದ್ಯಾರ್ಹತೆಯನ್ನು ಹೊಂದಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ವಿದ್ಯಾರ್ಹತೆ ಮತ್ತು ಸ್ವವಿವರಗಳೊಂದಿಗೆ ಯೋಜನಾ ಸಮನ್ವಯಾಧಿಕಾರಿಗಳ ಕಚೇರಿ, ಸಮಗ್ರ ಬುಡಕಟ್ಟು ಅಭಿವೃದ್ಧಿ ಯೋಜನೆ, ಪಡುವಾರಳ್ಳಿ, ಮೈಸೂರು ಇವರಿಗೆ ಅರ್ಜಿ ಸಲ್ಲಿಸಲು ಮೇ 27 ಒಳಗೆ ಕೊನೆಯ ದಿನಾಂಕವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಮೊ.ಸಂ 9742099989 ನ್ನು ಸಂಪರ್ಕಿಸಬಹುದು ಎಂದು ಸಮಗ್ರ ಬುಡಕಟ್ಟು ಅಭಿವೃದ್ಧಿ ಯೋಜನೆ, ಯೋಜನಾ ಸಮನ್ವಯಾಧಿಕಾರಿಗಳು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಿತ್ತೋಗಿರೋ ರಸ್ತೆ ದುರಸ್ತಿ ಮಾಡುವವರಾರು?

**ಹುಳಿಯಾರು:** ಹುಳಿಯಾರು ಹೋಬಳಿಯ ಬಿಳಿಕಲ್ಲು ಗೊಲ್ಲರಹಟ್ಟಿಯ ಕಿತ್ತೋಗಿರುವ ಡಾಂಬಾರ್ ರಸ್ತೆ ದುರಸ್ತಿ ಮಾಡುವವರಾರು ಎಂಬ ಪ್ರಶ್ನೆ ಈಗ ಉದ್ಭವಿಸಿದೆ.



ಯಳನಾಡು ಗ್ರಾಮ ಪಂಚಾಯ್ತಿ ವ್ಯಾಪ್ತಿಯ ತಮ್ಮಡಿಹಳ್ಳಿಯಿಂದ ಬಿಳಿಕಲ್ಲು ಗೊಲ್ಲರಹಟ್ಟಿ ರಸ್ತೆ ಮಳೆ ಬಂದರೆ ಕೆಸರು ಗದ್ದೆ ಬೇಸಿಗೆಯಲ್ಲಿ ಧೂಳಿನ ರಸ್ತೆಯಾಗಿ ಮಾರ್ಪಡುತ್ತಿತ್ತು. ಅಲ್ಲದೆ ಅಲ್ಲಲ್ಲಿ ಜಲ್ಲಿ ಎದ್ದು ಜನರ ಓಡಾಟಕ್ಕೆ ತೊಂದರೆಯಾಗಿತ್ತು. ಪರಿಣಾಮ ಈ ಭಾಗದ ಶಾಲಾ ವಿದ್ಯಾರ್ಥಿಗಳು, ಕೂಲಿಕಾರ್ಮಿಕರು ನಿತ್ಯ ಕೆಸರು ಸಿಡಿಸಿಕೊಂಡು ಓಡಾಡುವಂತ್ತಾಗಿತ್ತು. ಅಲ್ಲದೆ ಬೈಕ್ ಸವಾರರು ಬಿದ್ದು ಎದ್ದು ಸರ್ಕಸ್ ಮಾಡಿ ಸಂಚರಿಸುತ್ತಿದ್ದರು. ಹತ್ತದಿನೈದು ನಿಮಿಷದ ಪ್ರಯಾಣ ಗಂಟೆಗಟ್ಟಲೆ ಆಗುತ್ತಿತ್ತು.

ಈ ಬಗ್ಗೆ ಪತ್ರಿಕೆ ವರದಿ ಮಾಡಿದ ಪರಿಣಾಮ ಎರಡ್ಮೂರು ವರ್ಷಗಳ ಹಿಂದೆ ರಸ್ತೆಗೆ ಡಾಂಬಾರ್ ಹಾಕಲಾಗಿತ್ತು. ಆದರೆ ಈ ರಸ್ತೆ ಈಗ ಎಲ್ಲೆಂದರಲ್ಲಿ ಕಿತ್ತೋಗಿದೆ. ಪರಿಣಾಮ ರಸ್ತೆ ಸಂಚಾರ ದುಸ್ತರವಾಗಿದೆ. ಬೈಕ್ ಸವಾರರು ಸ್ಕಿಡ್ ಆಗಿ ಬೀಳುವ ಸಾಧ್ಯತೆ ಇದೆ. ಹಾಗಾಗಿ ರಸ್ತೆ ದುರಸ್ತಿ ಮಾಡಿಕೊಡುವಂತೆ ಪಿಆರ್‌ಇಡಿ ಅವರನ್ನು ಕೇಳಿದರೆ ಈ ರಸ್ತೆ ನಾವು ಮಾಡಿಲ್ಲ. ಯಾರು ಮಾಡಿದ್ದಾರೋ ಗೊತ್ತಿಲ್ಲ ಎಂಬ ಸಬೂಬು ಹೇಳುತ್ತಾರೆ. ಒಟ್ಟಾರೆ ಈ ರಸ್ತೆ ದುರಸ್ತಿಯ ಹೊಣೆಯಿಂದ ಎಲ್ಲರೂ ನುಣಚಿಕೊಳ್ಳುತ್ತಿದ್ದಾರೆ. ಇನ್ನಾದರೂ ರಸ್ತೆಗೆ ಡಾಂಬಾರ್ ಹಾಕಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡುವಂತೆ ಇಲ್ಲಿನ ನಿವಾಸಿಗಳು ಮನವಿ ಮಾಡಿದ್ದಾರೆ.

## ಯಾರಾದ್ರೂ ದುರಸ್ತಿ ಮಾಡಿ ಕೊಡಿ

ಪಿಆರ್‌ಇಡಿ ಸೇರಿದಂತೆ ಎಲ್ಲಾ ಇಲಾಖೆಗಳಿಗೂ ದೂರವಾಣಿ ಕರೆ ಮಾಡಿ ರಸ್ತೆ ದುರಸ್ತಿ ಮಾಡುವಂತೆ ಕೇಳಿಕೊಂಡಿದ್ದೇನೆ. ಎಲ್ಲರೂ ನಾವು ಮಾಡಿಲ್ಲ, ನಾವು ಮಾಡಿಲ್ಲ ಎನ್ನುತ್ತಾರೆ. ಯಾರಾದ್ರು ಮಾಡ್ಲಿ ನೀವು ದುರಸ್ತಿ ಮಾಡಿಕೊಡಿ ಎಂದರೆ ಯಾರು ಮಾಡಿದ್ದಾರೋ ಅವರೇ ದುರಸ್ತೆ ಮಾಡಿಕೊಡಬೇಕು ಎನ್ನುವ ಟೆಕ್ನಿಕಲ್ ಪಾಯಿಂಟ್ ಹೇಳುತ್ತಾರೆ. ತಮ್ಮ ವ್ಯಾಪ್ತಿಯ ರಸ್ತೆಗೆ ಯಾರು ಡಾಂಬರೀಕರಣ ಮಾಡಿದ್ದಾರೆ ಎನ್ನುವ ಕನಿಷ್ಟ ಮಾಹಿತಿ ತಿಳಿದುಕೊಂಡಿಲ್ಲ ಎನ್ನುವುದು ಇವರ ಬೇಜವಾಬ್ದಾರಿಯನ್ನು ತೋರಿಸುತ್ತದೆ. ಇನ್ನಾದರೂ ಯಾರು ಮಾಡಿದ್ದಾರೆ ಎನ್ನುವುದನ್ನು ತಿಳಿದು ಅವರಿಂದ ರಸ್ತೆ ದುರಸ್ತಿ ಮಾಡಿಸಿಕೊಡಲಿ. ಇಲ್ಲವಾದರೆ ಕೆಡಿಪಿ ಸಭೆಯಲ್ಲೇ ಧರಣಿ ನಡೆಸಬೇಕಾಗುತ್ತದೆ.

**ದೇವರಾಜ್** ಕೆಡಿಪಿ ಸದಸ್ಯರು, ತಮ್ಮಡಿಹಳ್ಳಿ ಗೊಲ್ಲರಹಟ್ಟಿ

# ಇಂಡಿಯಾ ಬುಕ್ ಆಫ್ ರೆಕಾರ್ಡ್ ಮಾಡಿದ ಕಿಯಾನ್ನ ಎಂ.ಜಿ.

**ತುಮಕೂರು:** ಸತತ ಪರಿಶ್ರಮದಿಂದ ಪ್ರತಿಭೆಗಳಿಸಿಕೊಳ್ಳುವುದು ಒಂದು ವಿಧಾನವಾದರೆ ಮತ್ತೆ ಕೆಲವರಿಗೆ ದೈವದತ್ತವಾಗಿ ಅಸಾಧಾರಣಾ ಪ್ರತಿಭೆ ಹುಟ್ಟಿನಿಂದಲೆ ಬಂದಿರುತ್ತದೆ. ಅದು ಮಕ್ಕಳೇ ಆಗಿರಬಹುದು, ದೊಡ್ಡವರೇ ಆಗಿರಬಹುದು ಈ ಕಾರಣಕ್ಕಾಗಿಯೇ ಪ್ರತಿಭೆ ಯಾರ ಮನೆಯ ಖಾಸಗಿ ಸ್ವತ್ತಲ್ಲ ಮತ್ತು ಎಂದೂ ಕಳ್ಳಕದಿಯದ ಆಸ್ತಿಯಲ್ಲ ಎಂದು ಹೇಳುವುದು ಸಾಮಾನ್ಯವಾಗಿದೆ.

ಕಾಲದ ಮಹಿಮೆಗೆ ತಕ್ಕಂತೆ ನಿರೀಕ್ಷೆಗೂ ಮೀರಿದ ಅಸಾಧಾರಣ ಪ್ರತಿಭೆಯ ಪ್ರಚಂಡ ಪುಟಾಣಿಗಳು ಅಲ್ಲಲ್ಲಿ ಕಾಣುವುದುಂಟು. ಈಗ ನಾವು ಹೇಳುತ್ತಿರುವ ಇಂತಹ ಪ್ರಚಂಡ ಪುಟಾಣಿ ಹೆಸರು ಕಿಯಾನ್ನ ಎಂ.ಜಿ. ಮೂಲತಃ ಆನವಟ್ಟಿ ಗ್ರಾಮದ ಸೊರಬ ತಾಲ್ಲೂಕಿನ ಶಿವಮೊಗ್ಗ ಜಿಲ್ಲೆಯವರು ವಯಸ್ಸಿನ್ನೂ ಎರಡು ವರ್ಷ, ಅಬ್ಬಬ್ಬಾ ಅದೇನು ಗ್ರಹಿಕೆ ಶಕ್ತಿ. ಮಗುವಿನ ಸಾಧನೆಯನ್ನು ಇತ್ತೀಚೆಗೆ ಇಂಡಿಯಾ ಬುಕ್ ಆಫ್ ರೆಕಾರ್ಡ್ಸ್ ಪ್ರಮಾಣೀಕರಿಸಿ ಐ.ಬಿ.ಆರ್. ಸಾಧಕಿ ಎಂದು ಬಿರುದು ನೀಡಿದ್ದಾರೆ. ಸಾಮಾನ್ಯವಾಗಿ ಮಕ್ಕಳು ಶಾಲೆಗೆ ಸೇರಿದ ನಂತರವೂ ಬಹಳ ಕ?ಟಪಟ್ಟು ನೆನಪಿಟ್ಟುಕೊಳ್ಳುವ ಮಗ್ಗಿ, ತಿಂಗಳುಗಳ ಹೆಸರುಗಳು, ವಿವಿಧ ರಾಜ್ಯಗಳ ರಾಜಧಾನಿಗಳ ಹೆಸರುಗಳೆಲ್ಲವೂ ಈ ಮಗುವಿನ ಮೆದುಳಿನಲ್ಲಿ



ಸಂಗ್ರಹವಾಗಿರುವ ರೀತಿ ಎಂತಹವರಿಗೂ ಅಚ್ಚರಿ ಮೂಡಿಸಲಿದೆ. ಇದು ದೇವರು ಕೊಟ್ಟ ಅಗಾಧ ನೆನಪಿನ ಶಕ್ತಿ, ವರ ಎಂದರೂ ತಪ್ಪಾಗಲಾರದು.

7 ಆಕರಗಳು, 13 ವಾಹನಗಳು, 9 ಪ್ರಾಣಿಗಳ ಹೆಸರು, 9 ಬಣ್ಣಗಳ ಹೆಸರು, 22 ನಾನಾ ವಸ್ತುಗಳು, ಮಾನವ ಶರೀರದ ಭೂಪಟದಲ್ಲಿನ ದೇಹದ ನಾನಾ ಭಾಗಗಳನ್ನು ಗುರುತಿಸಿ ಕೇಳಿದ ತಕ್ಷಣ ಪಟಪಟನೆ ಹೇಳಿ ಬೆರಗು ಮೂಡಿಸುತ್ತಾಳೆ. ತಂದೆ-ತಾಯಿ ಇಬ್ಬರು ವೃತ್ತಿಯಲ್ಲಿ ಆರ್ಕಿಟೆಕ್ಟ್ ಸತ್ಯಶ್ರೀ ಕೆ.ಆರ್. ಹಾಗೂ ಇಂಜಿನಿಯರ್ ಗುರುರಾಜ್ ಎಂ.ವಿ. ಅವರ ಮುದ್ದಿನ ಮಗಳು ಕಿಯಾನ್ನ ಎಂ.ಜಿ. ಕೇವಲ 22 ತಿಂಗಳಲ್ಲೆ ಪ್ರಾಸಗಳನ್ನು ಪಠಿಸಲು ಪ್ರಾರಂಭಿಸಿದಾಗ ಪೋ?ಕರು ಆಕೆಯ ಅಸಾಧಾರಣಾ ಕೌಶಲ್ಯವನ್ನು ಗಮನಿಸಿ ಅದಕ್ಕೆ ಮತ್ತ?ಟು ಪುಷ್ಟಿ ನೀಡುತ್ತಾ ಬಂದರು. 2 ವರ್ಷ 3 ತಿಂಗಳ ಕಿಯಾನ್ನ 5 ರಾಷ್ಟ್ರೀಯ ಚಿಹ್ನೆಗಳನ್ನು ನೆನಪಿಸಿಕೊಳ್ಳುವುದು, ಇಂಗ್ಲೀ? ಮತ್ತು ತೆಲುಗಿನಲ್ಲಿ 6 ನರ್ಸರಿ ಪ್ರಾಸಗಳನ್ನು ಪಠಿಸಿ ಅಸಾಧಾರಣ ಸಾಮರ್ಥ್ಯ ತೋರಿಸಿದ್ದಾರೆ. ಇಂತಹ ಮುದ್ದಾದ ಚ್ಯೂಟಿಯಾದ ಮಕ್ಕಳನ್ನು ಕಂಡರೆ ವಿಶೇ?ವಾಗಿ ಅಜ್ಜ, ಅಜ್ಜಿಯರಿಗೆ, ಮನೆಯ ಸದಸ್ಯರಿಗೆಲ್ಲ ಪ್ರೀತಿ ತಾನಾಗಿ ಉಕ್ಕುತ್ತದೆ. ಬೆಳೆಯುವ ಸಿರಿ ಮೊಳಕೆಯಲ್ಲಿ ಎಂಬುದನ್ನು ಈಕೆ ನಿಜಕ್ಕೂ ಸಾರ್ಥಕ ಪಡಿಸಿಕೊಂಡಿದ್ದಾಳೆ ಇದಕ್ಕೆ ಪೋ?ಕರು ಸಹ ನೀರೆದು ಪೋಷಿಸುತ್ತಿದ್ದಾರೆ. ತಮ್ಮ ಮೊಮ್ಮಗಳ ಈ ಸಾಧನೆಯ ಬಗ್ಗೆ ಅವಳ ತಾತಾ ಅಜ್ಜಿಯವರಾದ ಜಯಶ್ರೀ, ವಿಜಯೇಂದ್ರ ಮತ್ತು ಡಾ.ಕೆ. ಎಸ್.ರಾಮಕೃಷ್ಣ ಮತ್ತು ಸುಮಾರವರು ಸಂತಸ ವ್ಯಕ್ತಪಡಿಸಿದ್ದಾರೆ. ಹೀಗಾಗಿ ವಯಸ್ಸಿಗೂ ಮೀರಿದ ಪ್ರತಿಭೆ ಅನಾವರಣಗೊಂಡಿದೆ. ಆಕೆ ನಿಜಕ್ಕೂ ಪುಟ್ಟ ಪುಣಾಣಿಗಳಿಗೆ ದಾರಿ ದೀಪ, ಆಶಾಕಿರಣ ಸ್ಫೂರ್ತಿಯ ಚಿಲುಮೆ.!! ಎಂದಿಗೂ ಬತ್ತದ ಕಣಜ.!

ಸಂಜೆ ಮುಗಿಲು
ಸೋಮವಾರ
26.5.2025



# ವಿದ್ಯುತ್ ವಿಫಲವಾದಲ್ಲಿ ಸೇವಾ ಕೇಂದ್ರಗಳು, ಅಧಿಕಾರಿಗಳನ್ನು ಸಂಪರ್ಕಿಸಿ

**ಮೈಸೂರು:** ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ, ವಿ.ವಿ ಮೊಹಲ್ಲಾ ಕಾರ್ಯ ಮತ್ತು ಪಾಲನಾ ವಿಭಾಗ ವ್ಯಾಪ್ತಿಯಲ್ಲಿ ವಿ.ವಿ ಮೊಹಲ್ಲಾ, ಕುವೆಂಪು ನಗರ, ಹೂಟಗಳ್ಳಿ ಮತ್ತು ರಾಮಕೃಷ್ಣ ನಗರ ಉಪ ವಿಭಾಗಗಳು ಕಾರ್ಯನಿರ್ವಹಿಸುತ್ತಿದ್ದು. ಈಗಾಗಲೇ ಮಳೆಗಾಲ ಆರಂಭವಾಗಿರುವುದರಿಂದ ಮಳೆ–ಗಾಳಿಯ ಸಂದರ್ಭಗಳಲ್ಲಿ ವಿದ್ಯುತ್ ವಿಫಲವಾದಲ್ಲಿ ಹಾಗೂ ವಿದ್ಯುತ್ ಮಾರ್ಗಗಳ ಜಾಲದಲ್ಲಿ ವ್ಯತ್ಯಯಗಳು ಸಂಭವಿಸಿದಲ್ಲಿ ಹಾಗೂ ವಿದ್ಯುತ್ ಸಂಬಂಧಿತ ದೂರುಗಳಿಗೆ ಸಾರ್ವಜನಿಕರು ತುರ್ತಾಗಿ ಈ ಕೆಳಕಂಡ ಆಯಾ ವ್ಯಾಪ್ತಿಯ ಚಾವಿಸನಿನಿಯ ನಿಗಮದ ಸಾರ್ವಜನಿಕ ಸೇವಾ ಕೇಂದ್ರಗಳು ಮತ್ತು ಅಧಿಕಾರಿಗಳನ್ನು ಸಂಪರ್ಕಿಸಬಹುದಾಗಿದೆ.

ವಿ.ವಿ ಮೊಹಲ್ಲಾ ವಿಭಾಗ ವ್ಯಾಪ್ತಿಯ ಕಾರ್ಯನಿರ್ವಾಹಕ ಇಂಜಿನಿಯರ್(ವಿ),9449598644, ವಿ.ವಿ ಮೊಹಲ್ಲಾ ಉಪವಿಭಾಗ ವ್ಯಾಪ್ತಿಯ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ), 9448994744, ಜಯಲಕ್ಷ್ಮೀಪುರಂ ಶಾಖಾ ವ್ಯಾಪ್ತಿ ಪ್ರದೇಶದ ಸಹಾಯಕ ಇಂಜಿನಿಯರ್(ವಿ), 9448994766 ಜಯಲಕ್ಷ್ಮೀಪುರಂ ಶಾಖಾ ವ್ಯಾಪ್ತಿ ಪ್ರದೇಶ ಕಿರಿಯ ಇಂಜಿನಿಯರ್(ವಿ),9448994877, ಎಂ.ಜಿ ಕೊಪ್ಪಲು ಶಾಖಾ ವ್ಯಾಪ್ತಿ ಪ್ರದೇಶದ ಸಹಾಯಕ ಇಂಜಿನಿಯರ್ (ವಿ),9449598555, ಎಂ.ಜಿಕೊಪ್ಪಲು ಶಾಖಾ ವ್ಯಾಪ್ತಿ ಪ್ರದೇಶ ಕಿರಿಯ ಇಂಜಿನಿಯರ್(ವಿ),9448994929, ಒಂಟಿಕೊಪ್ಪಲು ಶಾಖಾ ವ್ಯಾಪ್ತಿ ಪ್ರದೇಶ ಸಹಾಯಕ ಇಂಜಿನಿಯರ್(ವಿ), 9448994767, ಒಂಟಿಕೊಪ್ಪಲು ಶಾಖಾ ವ್ಯಾಪ್ತಿ ಪ್ರದೇಶ ಕಿರಿಯ ಇಂಜಿನಿಯರ್(ವಿ), 9448994768, ಸರ್ವೀಸ್ ಸ್ಟೇಷನ್ ನಂಬರ್ 0821–2510702 9449598599, ಮೇಟಗಳ್ಳಿ ಶಾಖಾ ವ್ಯಾಪ್ತಿ ಪ್ರದೇಶ ಸಹಾಯಕ ಇಂಜಿನಿಯರ್(ವಿ), 9448994769 ಮೇಟಗಳ್ಳಿ ಶಾಖಾ ವ್ಯಾಪ್ತಿ ಪ್ರದೇಶ ಕಿರಿಯ ಇಂಜಿನಿಯರ್(ವಿ), 9448994770, ಸರ್ವೀಸ್ ಸ್ಟೇಷನ್ ನಂಬರ್ 0821–2581570 9448994852.

ಹೂಟಗಳ್ಳಿ ಉಪವಿಭಾಗವ್ಯಾಪ್ತಿ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ), 9449598639, ಹೂಟಗಳ್ಳಿ ಶಾಖಾ ವ್ಯಾಪ್ತಿ ಪ್ರದೇಶ ಸಹಾಯಕ ಇಂಜಿನಿಯರ್ (ವಿ), 9449598640 ಹೂಟಗಳ್ಳಿ ಶಾಖಾ ವ್ಯಾಪ್ತಿ ಪ್ರದೇಶ ಕಿರಿಯ ಇಂಜಿನಿಯರ್(ವಿ),9480841175, ಸರ್ವೀಸ್ ಸ್ಟೇಷನ್ ನಂಬರ್ 0821–2404922 9449598699. ಬೋಗಾದಿ ಶಾಖಾ ವ್ಯಾಪ್ತಿ ಪ್ರದೇಶ ಸಹಾಯಕ ಇಂಜಿನಿಯರ್ (ವಿ), 9449598553 ,ಬೋಗಾದಿ ಶಾಖಾ ವ್ಯಾಪ್ತಿ ಪ್ರದೇಶ ಕಿರಿಯ ಇಂಜಿನಿಯರ್(ವಿ),9448994771, ಸರ್ವೀಸ್ ಸ್ಟೇಷನ್ ನಂಬರ್ 0821–2343711 9480844844, ಇಲವಾಲ ಶಾಖಾ ವ್ಯಾಪ್ತಿ ಪ್ರದೇಶ ಸಹಾಯಕ ಇಂಜಿನಿಯರ್ (ವಿ),9449598529, ಇಲವಾಲ ಶಾಖಾ ವ್ಯಾಪ್ತಿ ಪ್ರದೇಶ ಕಿರಿಯ ಇಂಜಿನಿಯರ್(ವಿ), 9448994784, ಸರ್ವೀಸ್ ಸ್ಟೇಷನ್ ನಂಬರ್ 0821–2402853 9449596800. ಬೀರಿಹುಂಡಿ ಶಾಖಾ ವ್ಯಾಪ್ತಿ ಪ್ರದೇಶ ಕಿರಿಯ ಇಂಜಿನಿಯರ್ (ವಿ), 9448994783 ಸರ್ವೀಸ್ ಸ್ಟೇಷನ್ ನಂಬರ್ 0821–2459576 9141209851. ರೂಪನಗರ ಶಾಖಾ ವ್ಯಾಪ್ತಿ ಪ್ರದೇಶ ಸಹಾಯಕ ಇಂಜಿನಿಯರ್(ವಿ), 9480810387 ಸರ್ವೀಸ್ ಸ್ಟೇಷನ್ ನಂಬರ್ 0821–2952441 8123070044.

ಕುವೆಂಪುನಗರ ಉಪವಿಭಾಗ ವ್ಯಾಪ್ತಿ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ),9448994743, ಸರಸ್ವತಿಪುರಂ ಶಾಖಾ ವ್ಯಾಪ್ತಿ ಪ್ರದೇಶ ಸಹಾಯಕ ಇಂಜಿನಿಯರ್(ವಿ),9448994762, ಸರಸ್ವತಿಪುರಂ ಶಾಖಾ ವ್ಯಾಪ್ತಿ ಪ್ರದೇಶ ಕಿರಿಯ ಇಂಜಿನಿಯರ್(ವಿ),9448994763, ಅರವಿಂದ ಶಾಖಾ ವ್ಯಾಪ್ತಿ ಪ್ರದೇಶ ಸಹಾಯಕ ಇಂಜಿನಿಯರ್ (ವಿ),9448994764, ಅರವಿಂದ ಶಾಖಾ ವ್ಯಾಪ್ತಿ ಪ್ರದೇಶ ಕಿರಿಯ ಇಂಜಿನಿಯರ್(ವಿ),9448994765, ನಿವೇದಿತಾ ಶಾಖಾ ವ್ಯಾಪ್ತಿ ಪ್ರದೇಶ ಸಹಾಯಕ ಇಂಜಿನಿಯರ್(ವಿ), 9449598574, ನಿವೇದಿತಾ ಶಾಖಾ ವ್ಯಾಪ್ತಿ ಪ್ರದೇಶ ಕಿರಿಯ ಇಂಜಿನಿಯರ್(ವಿ),9449598575, ಸರ್ವೀಸ್ ಸ್ಟೇಷನ್ ನಂಬರ್ 9448994866 0821–2560211.

ರಾಮಕೃಷ್ಣನಗರ ಉಪವಿಭಾಗ ವ್ಯಾಪ್ತಿ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ), 9448994596, ವಿವೇಕಾನಂದ ಶಾಖಾ ವ್ಯಾಪ್ತಿ ಪ್ರದೇಶ ಸಹಾಯಕ ಇಂಜಿನಿಯರ್ (ವಿ),9449598572, ವಿವೇಕಾನಂದ ಶಾಖಾ ವ್ಯಾಪ್ತಿ ಪ್ರದೇಶ ಕಿರಿಯ ಇಂಜಿನಿಯರ್(ವಿ),9449598573, ಸರ್ವೀಸ್ ಸ್ಟೇಷನ್ ನಂಬರ್ 0821–2340292 9449598581. ಜಯಪುರ ಶಾಖಾ ವ್ಯಾಪ್ತಿ ಪ್ರದೇಶ ಸಹಾಯಕ ಇಂಜಿನಿಯರ್ (ವಿ), 9448994787 ಜಯಪುರ ಶಾಖಾ ವ್ಯಾಪ್ತಿ ಪ್ರದೇಶ ಕಿರಿಯ ಇಂಜಿನಿಯರ್(ವಿ),9480057637, ಸರ್ವೀಸ್ ಸ್ಟೇಷನ್ ನಂಬರ್ 0821–2595844 9480816972, ಹಾರೋಹಳ್ಳಿ ಶಾಖಾ ವ್ಯಾಪ್ತಿ ಪ್ರದೇಶ ಕಿರಿಯ ಇಂಜಿನಿಯರ್ (ವಿ), 9448994844, ಸರ್ವೀಸ್ ಸ್ಟೇಷನ್ ನಂಬರ್ 9480816971 9141209414 ನ್ನು ಸಂಪರ್ಕಿಸಬಹುದು ಎಂದು ಚಾ.ವಿ.ಸ.ನಿ.ನಿ.,ಯ ವಿ.ವಿ.ಮೊಹಲ್ಲಾ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ (ವಿ.), ತಿಳಿಸಿದ್ದಾರೆ.

## ಅಕ್ರಮವಾಗಿ ಸಾಗಿಸುತ್ತಿದ್ದ ಪಡಿತರ ಅಕ್ಕಿ ವಶ

**ಚಾಮರಾಜನಗರ:** ಅಕ್ರಮವಾಗಿ ಸಾಗಿಸುತ್ತಿದ್ದ 12. 37 ಕ್ವಿಂಟಾಲ್ ಪಡಿತರ ಅಕ್ಕಿಯನ್ನು ಜಿಲ್ಲೆಯ ಕೊಳ್ಳೇಗಾಲ ಗ್ರಾಮಾಂತರ ಠಾಣೆ ಪೊಲೀಸರು ಆಹಾರ ಇಲಾಖೆ ಅಧಿಕಾರಿಗಳೊಡನೆ ದಾಳಿ ನಡೆಸಿ ವಾಹನ ಸಮೇತ ಅಕ್ಕಿಯನ್ನು ವಶಪಡಿಸಿಕೊಂಡು ಆರೋಪಿಯನ್ನು ಬಂಧಿಸಿದ್ದಾರೆ.

ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲ್ಲೂಕು ದೊಡ್ಡಬಾಗಿಲು ಸಮೀಪದ ನರೀಪುರ ಗ್ರಾಮದ ಅಜ್ಗಲ್ ಆಲಿ ಬಂಧಿತ ಆರೋಪಿಯಾಗಿದ್ದಾನೆ.

ಆರೋಪಿ ಅಜ್ಗಲ್ ಆಲಿ ಗ್ರಾಮೀಣ ಪ್ರದೇಶದ ನಾಗರಿಕರಿಂದ ಪಡಿತರ ಅಕ್ಕಿಯನ್ನು ಕಡಿಮೆ ಬೆಲೆಗೆ ಖರೀದಿಸಿ ರೈಸ್ ಮಿಲ್ ಗಳಿಗೆ ಮಾರಾಟ ಮಾಡುತ್ತಿದ್ದ. ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲ ? ಬೆಂಗಳೂರು ರಾಷ್ಟ್ರೀಯ ಹೆದ್ದಾರಿಯ ಸರಗೂರು ಬಳಿ ಗ್ರಾಮಾಂತರ ಠಾಣೆ ಪೊಲೀಸರು ವಾಹನಗಳನ್ನು ತಡೆದು ತಪಾಸಣೆ ನಡೆಸುತ್ತಿದ್ದಾಗ ನಿನ್ನೆ ಸಂಜೆ ಪಾಳ್ಯ ನರೀಪುರ ಮಾರ್ಗವಾಗಿ ಕೆ. ಎ. 13 ಬಿ 2920 ಸಂಖ್ಯೆಯ ಮಾಕ್ಸಿಮೊ ಗೂಡ್ಸ್ ವಾಹನದಲ್ಲಿ ಅಕ್ರಮವಾಗಿ ಅಕ್ಕಿ ಸಾಗಿಸುತ್ತಿದ್ದ ವೇಳೆ ಈತ ಸಿಕ್ಕಿಬಿದ್ದಿದ್ದಾನೆ. ಈ ವೇಳೆ ಪೊಲೀಸರು ವಾಹನ ತಡೆದು ಪರಿಶೀಲಿಸಿದಾಗ ವಾಹನದಲ್ಲಿ ಪಡಿತರ ಅಕ್ಕಿ ಸಾಗಿಸುತ್ತಿರುವುದು ಗೊತ್ತಾಗಿ ಕೂಡಲೇ ಈ ಕುರಿತು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದಾರೆ.

ಮಾಹಿತಿ ತಿಳಿದು ಸ್ಥಳಕ್ಕೆ ಬಂದ ಆಹಾರ ನಿರೀಕ್ಷಕ ಎಂ.ಎನ್. ಪ್ರಸಾದ್ ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲ ಗ್ರಾಮಾಂತರ ಠಾಣೆ ಆರಕ್ಷಕ ಉಪ ನಿರೀಕ್ಷ ಸುಪ್ರೀತ್ ರೊಡನೆ ಅಕ್ಕಿ ತುಂಬಿದ ಮಾಕ್ಸಿಮೊ ಗೂಡ್ಸ್ ವಾಹನವನ್ನು ಜಪ್ತಿ ಮಾಡಿ ಸೂಕ್ತ ಕ್ರಮಕ್ಕಾಗಿ ವಾಹನ ಮತ್ತು ಆರೋಪಿಯನ್ನು ಒಪ್ಪಿಸಿದ್ದಾರೆ. ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಆಹಾರ ನಿರೀಕ್ಷಕ ಎಂ.ಎನ್. ಪ್ರಸಾದ್ ನೀಡಿದ ದೂರಿನ ಮೇರೆಗೆ ಕೊಳ್ಳೇಗಾಲ ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ದಾಳಿಯಲ್ಲಿ ಆರಕ್ಷಕ ಉಪನಿರೀಕ್ಷಕ ಸುಪ್ರೀತ್ ಮುಖ್ಯ ಪೇದೆಗಳಾದ ರಾಜಪ್ಪ, ಶಾಂತರಾಜು, ಮನೋಹರ್, ಚಾಲಕ ನಂಜುಂಡಸ್ವಾಮಿ ಭಾಗವಹಿಸಿದ್ದರು.



ಕೃಷಿ ಚಟುವಟಿಕೆಗಳಿಗೆ ಅಡ್ಡಿಯಾದ ವರ್ಷಧಾರೆ

## ಧಾರಾಕಾರ ಮಳೆ, ಜನರ ಪರದಾಟ

**ಪಿರಿಯಾಪಟ್ಟಣ:** ತಾಲೂಕಿನಲ್ಲಿ ಕಳೆದ ಎರಡು ದಿನಗಳಿಂದ ಎಡೆಬಿಡದೆ ಸುರಿಯುತ್ತಿರುವ ಧಾರಾಕಾರ ಮಳೆಯಿಂದಾಗಿ ರೈತರು, ಸಣ್ಣಪುಟ್ಟ ವ್ಯಾಪಾರಿಗಳು, ಸಾರ್ವಜನಿಕರು ಪರಿತಪಿಸುವಂತಾಗಿದೆ. ಬಹುದಿನಗಳಿಂದ ಮಳೆ ಇಲ್ಲದೆ ಕೊರಗುತ್ತಿದ್ದ ರೈತನಿಗೆ ಒಂದೆಡೆ ಖುಷಿಯಾದರೆ ಸತತವಾಗಿ ಬೀಳುತ್ತಿರುವ ಮಳೆಯೂ ರೈತನಿಗೆ ಆಸೆಗೆ ತಣ್ಣೀರೆರಿಸಿದೆ. ತಾಲೂಕಿನಲ್ಲಿ ಈಗಾಗಲೇ ಬಹುತೇಕ ತಂಬಾಕು ನಾಟಿ ಕಾರ್ಯ ಮುಗಿದಿದ್ದು, ಜೋಳ, ಶುಂಠಿ, ತರಕಾರಿ, ತೋಟಗಾರಿಕೆ ಬೆಳೆಗಳನ್ನು ಬೆಳೆಯಲು ಭೂಮಿ ಹದ ಮಾಡಿದ್ದು ಮಳೆ ಹೆಚ್ಚಾದರಿಂದ ನೀರಿನೊಂದಿಗೆ ಮಣ್ಣು ಕೊಚ್ಚಿ ಹೋಗುತ್ತಿದೆ.ಇದರಿಂದ ಮತ್ತೊಮ್ಮೆ ಹಣ ವ್ಯಯ ಮಾಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಅವಧಿಗೆ ಮುನ್ನವೇ ಪೂರ್ವ ಮುಂಗಾರು ಆರಂಭವಾಗಿ ಕೃಷಿ ಕಾರ್ಯಕ್ಕೆ ಅಡ್ಡಿ ತಂದಿರುವುದು ಒಂದೆಡೆಯಾದರೆ ಕೆರೆಕಟ್ಟೆಗಳಿಗೆ ನೀರಿನ ಹರಿವು ಬರಲು ಆರಂಭವಾಗಿದೆ. ಕಳೆದ ಮೂರ್ನಾಲ್ಕು ದಿನಗಳಿಂದ ತಾಲ್ಲೂಕಿನ ಕೆಲವೇ ಭಾಗಗಳಿಗೆ ಸೀಮಿತವಾಗಿದ್ದ ಮಳೆ ಶನಿವಾರದಿಂದ ತಾಲ್ಲೂಕಿನ್ಯಾದ್ಯಂತ ಬೀಳಲಾರಂಭಿಸಿದೆ.ಇದರ ಪರಿಣಾಮ ಚಳಿಯ ವಾತಾವರಣ ಸೃಷ್ಟಿಯಾಗಿದ್ದು, ಜನರು ಮನೆಯಿಂದ ಹೊರಗೆ ಬರಲು ಹಿಂದೇಟು ಹಾಕುತ್ತಿದ್ದಾರೆ. ಸತತ ಮಳೆ?ಗಾಳಿಯಿಂದ ವಿದ್ಯುತ್ ಪೂರೈಕೆಯಲ್ಲಿ ತೀವ್ರ ವ್ಯತ್ಯಯ ಆಗಿದೆ. ವಿದ್ಯುತ್ ಕಡಿತದಿಂದ ಜನರ ದೈನಂದಿನ ಜೀವನಕ್ಕೆ ಬಹಳ ಸಂಕಷ್ಟವಾಗಿದೆ. ಇದಲ್ಲದೆ ಪಿರಿಯಾಪಟ್ಟಣ ತಾಲೂಕಿನ ಗಡಿಭಾಗಗಳಾದ ಕುಶಾಲನಗರ, ಸೋಮವಾರಪೇಟೆ, ಅರಕಲಗೂಡು, ಪೊನ್ನಂಪೇಟೆ, ಹುಣಸೂರು ಹಾಗೂ ಕೃಷ್ಣರಾಜ ನಗರ ತಾಲ್ಲೂಕುಗಳಲ್ಲೂ ಹೆಚ್ಚಿನ ಮಳೆ ಸುರಿಯಲಾರಂಭಿಸಿದ್ದರಿಂದ ಅಪಾರ ಪ್ರಮಾಣದ ನೀರು ಹರಿಯುತ್ತಿದೆ ಕಳೆದ ಎರಡು ದಿನಗಳಲ್ಲಿ ಸರಿಸುಮಾರು 100 ರಿಂದ 150 ಮಿ.ಮೀ ಮಳೆಯಾಗಿದೆ ಎಂದು ವರದಿಯಾಗಿದೆ.



## ಇಂದು ವಿದ್ಯುತ್ ವ್ಯತ್ಯಯ

**ಮೈಸೂರು:** ಮೇ 26 ರಂದು ಕೈಗೊಳ್ಳಬೇಕಾಗಿದ್ದ ನಿರ್ವಹಣಾ ಕಾಮಗಾರಿಯನ್ನು ಆಡಳಿತಾತ್ಮಕ ಕಾರಣಗಳಿಂದ ಮೇ 25 ರಂದು ಬೆಳಿಗ್ಗೆ 10:00 ರಿಂದ ಸಂಜೆ 5:30 ಗಂಟೆಯ ವರೆಗೆ 66/11 ಕೆ.ವಿ ದೊಡ್ಡಕೆರೆ ಮೈದಾನ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಕ.ವಿ.ಪ್ರ.ನಿ.ನಿ. ವತಿಯಿಂದ ತ್ರೈಮಾಸಿಕ ಅವಧಿಯ ನಿರ್ವಹಣಾ ಕಾಮಗಾರಿಯನ್ನು ಹಮ್ಮಿಕೊಳ್ಳಲಾಗಿರುವುದರಿಂದ, ಈ ಕೆಳಕಂಡ ಪ್ರದೇಶಗಳಲ್ಲಿ ಮೇ 25 ರಂದು ವಿದ್ಯುತ್ ಸರಬರಾಜಿನಲ್ಲಿ ಅನಿಯಮಿತ ವ್ಯತ್ಯಯವಾಗಲಿದೆ. ವಿದ್ಯುತ್ ವ್ಯತ್ಯಯವಾಗಲಿರುವ ಮುಖ್ಯ ಪ್ರದೇಶಗಳು: ರಾಮಾನುಜ ರಸ್ತೆ 01 ರಿಂದ 09ನೇ ಕ್ರಾಸ್ ವರೆಗೆ, ಹೊಸಬಂಡಿಕೇರಿ, ಜೆ.ಎಸ್.ಎಸ್. ಆಸ್ಪತ್ರೆ, ಅಗ್ರಹಾರ, ಬಸವೇಶ್ವರ ರಸ್ತೆ, ಚಾಮುಂಡಿಪುರಂನ ಹಲವು ಭಾಗಗಳು, ತ್ಯಾಗರಾಜ ರಸ್ತೆ, ಚಾಮುಂಡಿಬೆಟ್ಟ ಮತ್ತು ಪಾದ, ಗುಂಡುರಾವ್ ನಗರ, ದತ್ತನಗರ, ಮುನೇಶ್ವರನಗರ, ಗೌರಿಶಂಕರನಗರ, ನಂಜನಗೂಡು ಟೋಲ್ ಗೇಟ್, ತಾವರೆಕೆರೆ, ಜಾಕಿ ಕ್ವಾರ್ಟರ್ಸ್, ರೇಸ್ ಕೋರ್ಸ್ ಹಿಂಭಾಗ, ಸಬರ್ಬ್ ಬಸ್ ನಿಲ್ದಾಣ, ನಜರ್‌ಬಾದ್, ಇಟ್ಟಿಗೆಗೂಡು, ಮೃಗಾಲಯದ ಸುತ್ತ–ಮುತ್ತ, ಸರ್ಕಾರಿ ಅತಿಥಿ ಗೃಹ ಮತ್ತು ಸುತ್ತ–ಮುತ್ತಲಿನ ಪ್ರದೇಶಗಳು, ತಾಲ್ಲೂಕು ಕಛೇರಿ, ಡಿ. ದೇವರಾಜ ಅರಸು ರಸ್ತೆ, ಬಿ.ಎನ್. ರಸ್ತೆ, ಚಾಮುಂಡಿಬೆಟ್ಟ, ಸಿದ್ಧಾರ್ಥನಗರ, ಕುರುಬಾರಹಳ್ಳಿ, ಜೆ.ಸಿ. ನಗರ, ಕೆ.ಸಿ ನಗರ, ಜೆ.ಎಸ್.ಎಸ್ ಆಯುರ್ವೇದಿಕ್ ಸುತ್ತ–ಮುತ್ತ, ಅರಮನೆ ಸುತ್ತ–ಮುತ್ತಲಿನ ಪ್ರದೇಶಗಳು, ಶ್ರೀ ಹರ್ಷ ರಸ್ತೆ, ಸಯ್ಯಾಜೀರಾವ್ ರಸ್ತೆ, ಇರ್ವಿನ್ ರಸ್ತೆ ಸುತ್ತ–ಮುತ್ತಲಿನ ಪ್ರದೇಶಗಳು, ಧನ್ವಂತರಿ ರಸ್ತೆ ಹಾಗೂ ಶಿವರಾಂಪೇಟೆ ಸುತ್ತ–ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ವಾಗಲಿದೆ.

## 28 ರಂದು ಉಪಲೋಕಾಯುಕ್ತರಿಂದ ಅಹವಾಲು ಸ್ವೀಕಾರ

**ಮಂಡ್ಯ:** ಗೌರವಾನ್ವಿತ ನ್ಯಾಯಮೂರ್ತಿ ಹಾಗೂ ಕರ್ನಾಟಕ ಲೋಕಾಯುಕ್ತದಉಪಲೋಕಾಯುಕ್ತರಾದ ಬಿ.ವೀರಪ್ಪಅವರು ಮೇ 26 ರಿಂದ 29 ರವರಿಗೆ ಮಂಡ್ಯಜಿಲ್ಲೆಯ ಪ್ರವಾಸಕೈಗೊಂಡಿದ್ದು, ಭ್ರಷ್ಟಾಚಾರ ಮತ್ತು ದುರಾಡಳಿತದ ವಿರುದ್ಧ ಸಾರ್ವಜನಿಕರಿಂದಅರ್ಜಿ ಅಹವಾಲು ಸ್ವೀಕರಿಸಲಿದ್ದಾರೆ. ಮೇ 28 ರಂದು ಬೆಳಿಗ್ಗೆ 10:00 ಗಂಟೆಯಿಂದ ಮದ್ಯಾಹ್ನ 01:30 ಗಂಟೆಯವರೆಗೆ ಹಾಗೂ ಮದ್ಯಾಹ್ನ 02:30 ಗಂಟೆಯಿಂದ ಸಂಜೆ 05:00 ಗಂಟೆಯವರೆಗೆ ನಗರದ ಸುಭಾ?ನಗರದಲ್ಲಿರುವ ಶಿವನಂಜಪ್ಪ ಉದ್ಯಾನವನದಎದುರಿನ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ''ಸಾರ್ವಜನಿಕ ಕುಂದುಕೊರತೆಗಳ ಅಹವಾಲು ಸ್ವೀಕಾರ ಮತ್ತು ವಿಚಾರಣೆಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದಾರೆ. ಜಿಲ್ಲೆಯಲ್ಲಿ ಸಾರ್ವಜನಿಕರಿಗೆ ಸರ್ಕಾರಿಅಧಿಕಾರಿ, ನೌಕರರಿಂದ ಕಾನೂನು ರೀತಿ ನಿರ್ವಹಿಸಬೇಕಾದ ಕೆಲಸದಲ್ಲಿ ವಿಳಂಬವಾಗಿದ್ದರೆಅಥವಾ ನ್ಯಾಯಯುತವಾಗಿ ಮಾಡಿಕೊಡಬೇಕಾದ ಕೆಲಸಗಳಲ್ಲಿ ಕಾರಣ ವಿಲ್ಲದೇತೊಂದರೆಕೊಡುವುದು, ಲಂಚಕ್ಕೆ ಬೇಡಿಕೆಇಡುವುದು, ಇನ್ಯಾವುದೇತರಹದ ದುರಾಡಳಿತದಲ್ಲಿ ತೊಡಗಿದ್ದರೆಅದರಿಂದ ತೊಂದರೆಗೊಳಗಾದ ಸಾರ್ವಜನಿಕರುಗೌರವಾನ್ವಿತರ ಮುಂದೆತಮ್ಮ ಅಹವಾಲುಗಳನ್ನು ಲಿಖಿತರೂಪದಲ್ಲಿ ಸಲ್ಲಿಸಬಹುದಾಗಿದೆ. ಮೇ 29 ರಂದು ಬೆಳಿಗ್ಗೆ 11.00 ಗಂಟೆಯಿಂದ ಮದ್ಯಾಹ್ನ 01.45 ಗಂಟೆಯವರೆಗೆಹಾಗೂ ಮದ್ಯಾಹ್ನ 02.30 ಗಂಟೆಯಿಂದಸಂಜೆ 06.00 ಗಂಟೆಯವರೆಗೆ ನಗರದ ಸುಭಾಷನಗರದಲ್ಲಿರುವ ಶಿವನಂಜಪ್ಪ ಉದ್ಯಾನವನದಎದುರಿನ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿಮಂಡ್ಯಜಿಲ್ಲೆಗೆ ಸಂಬಂಧಪಟ್ಟಂತೆ ಲೋಕಾಯುಕ್ತಸಂಸ್ಥೆಯಲ್ಲಿದಾಖಲಾಗಿರುವ(ಗೌರವಾನ್ವಿತಉಪಲೋಕಾಯುಕ್ತರ ವ್ಯಾಪ್ತಿಗೆ ಒಳಪಡುವ ಪ್ರಕರಣಗಳಲ್ಲಿ) ತನಿಖೆ ಮತ್ತುವಿಚಾರಣೆಗೆ ಬಾಕಿಯಿರುವ ಪ್ರಕರಣಗಳಲ್ಲಿ ದೂರುದಾರರು ಹಾಗೂ ಎದುರುದಾರರ ಸಮ್ಮುಖದಲ್ಲಿ ಕಾನೂನು ರೀತ್ಯಾ ವಿಚಾರಣೆ ನಡೆಸಲಿದ್ದಾರೆ.ಆದ್ದರಿಂದದೂರುದಾರರು ಮತ್ತುಎದುರುದಾರರು ನಿಗದಿತ ಸಮಯದಲ್ಲಿ ಹಾಜರಿದ್ದುಇದರ ಸದುಪಯೋಗವನ್ನು ಪಡೆದುಕೊಳ್ಳಬಹುದಾಗಿರುತ್ತದೆಎಂದುಕರ್ನಾಟಕ ಲೋಕಾಯುಕ್ತದ ಪೊಲೀಸ್ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪರೀಕ್ಷಾ ಕೇಂದ್ರಗಳ ಸುತ್ತಲೂ ನಿಷೇಧಾಜ್ಞೆ ಜಾರಿ

**ಮೈಸೂರು:** ಮೇ 26 ರಿಂದ ಜೂನ್ 02 ರವರೆಗೆ ಮೈಸೂರು ನಗರದಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆ–2ರ ಪರೀಕ್ಷೆಗಳು ನಡೆಯಲಿದ್ದು, ಸದರಿ ಪರೀಕ್ಷೆಯನ್ನು ಸುಸೂತ್ರವಾಗಿ ನಡೆಸುವ ಉದ್ದೇಶದಿಂದ ಪರೀಕ್ಷಾ ಕೇಂದ್ರದ ವ್ಯಾಪ್ತಿಯಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ತಡೆಯಲು ಭಾರತೀಯ ನಾಗರೀಕ ಸುರಕ್ಷಾ ಸಂಹಿತೆ–2023 ಸೆಕ್ಷನ್ 163 ರೀತ್ಯ ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟರ್ ವ್ಯಾಪ್ತಿಯ ನಿಷೇಧಾಜ್ಞೆಯನ್ನು ಜಾರಿ ಮಾಡಲಾಗಿದೆ ಪರೀಕ್ಷಾ ಕೇಂದ್ರಗಳು: ಕೆ.ಪಿ.ಕಾನ್ವೆಂಟ್ ಪ್ರೌಢಶಾಲೆ, ಗೋಕುಲಂ, ಸರ್ಕಾರಿ ಪ್ರೌಢಶಾಲೆ, ಕೈಲಾಸಪುರಂ, ಪುಲಿಕೇಶಿ ರಸ್ತೆ, ಸೇಂಟ್ ಆನ್ಸ್ ಪ್ರೌಢಶಾಲೆ, ಎನ್.ಆರ. ಮೊಹಲ್ಲಾ, ಮೆಜೆಸ್ಟಿಕ್ ಪ್ರೌಢಶಾಲೆ, ಉದಯಗಿರಿ, ಸರ್ಕಾರಿ ಬಾಲಿಕಾ ಪದವಿಪೂರ್ವ ಕಾಲೇಜು, ಪೀಪಲ್ಸ್ ಪಾರ್ಕ್, ಸರ್ಕಾರಿ ವಿಭಜಿತ ಮಹಾರಾಜ ಪದವಿ ಪೂರ್ವ ಕಾಲೇಜು, ನಜರ್‌ಬಾದ್, ಸೇಂಟ್ ಮೇರಿಸ್ ಪ್ರೌಢಶಾಲೆ, ಚರ್ಚ್ ಕಾಂಪೌಂಡ್, ನಿರ್ಮಲ ಪ್ರೌಢಶಾಲೆ, ಶ್ರೀರಾಂಪುರ, ಸರ್ಕಾರಿ ಪ್ರೌಢಶಾಲೆ, ಹೂಟಗಳ್ಳಿ, ಶ್ರೀ ವಿದ್ಯಾಜ್ಯೋತಿ ಪ್ರೌಢಶಾಲೆ, ನಾಡನಹಳ್ಳಿ, ಕರ್ನಾಟಕ ಪಬ್ಲಿಕ್ ಶಾಲೆ, ಮಂಚೇಗೌಡನಕೊಪ್ಪಲು, ಮಹಾರಾಜ ಸರ್ಕಾರಿ ಪ್ರೌಢಶಾಲೆ, ಜೆಎಲ್‌ಬಿ ರಸ್ತೆ, ಸರ್ಕಾರಿ ಆದರ್ಶ ವಿದ್ಯಾಲಯ, ಜಾಕಿ ಕ್ವಾರ್ಟರ್ಸ್, ಜ್ಞಾನಗಂಗಾ ಪ್ರೌಢಶಾಲೆ, ಈ ಪ್ರದೇಶಗಳಲ್ಲಿ ಪರೀಕ್ಷಾರ್ಥಿಗಳು ಹಾಗೂ ಪರೀಕ್ಷಾ ಸಿಬ್ಬಂದಿಗಳನ್ನು ಹೊರತುಪಡಿಸಿ ಇತರೆ ಅನಧೀಕೃತ ವ್ಯಕ್ತಿಗಳು ಸಂಚರಿಸಬಾರದು ಮತ್ತು ಯಾರು ಆಕ್ಷೇಪಾರ್ಹ ವಸ್ತುಗಳನ್ನು ಒಯ್ಯಬಾರದು ಹಾಗೂ ಪರೀಕ್ಷೆ ಕೇಂದ್ರಗಳ ಸುತ್ತಮುತ್ತಲಿನ ಜೆರಾಕ್ಸ್/ಬ್ರೌಸಿಂಗ್ ಸೆಂಟರ್‌ಗಳನ್ನು ಪರೀಕ್ಷಾ ಅವಧಿಯಲ್ಲಿ ಮುಚ್ಚುವಂತೆ ಆದೇಶಿಸಲಾಗಿದೆ ಎಂದು ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯಾರ್ಥಿವೇತನ ಪೋರ್ಟಲ್‌ನಲ್ಲಿ ಒನ್–ಟೈಮ್ ನೋಂದಣಿ ಸಂಖ್ಯೆ ರಚಿಸುವುದು ಕಡ್ಡಾಯ

**ಮೈಸೂರು:** ಮೈಸೂರು ಜಿಲ್ಲೆಯಲ್ಲಿ ಪರಿಶಿಷ್ಟ ಪಂಗಡದ ಮೆಟ್ರಿಕ್ ಪೂರ್ವ (9 ಮತ್ತು 10ನೇ ತರಗತಿ) ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿಗಳು 2025–26ನೇ ಸಾಲಿನ ಪರಿಶಿಷ್ಟ ಪಂಗಡದ ವಿದ್ಯಾರ್ಥಿವೇತನ ಪಡೆಯಲು ಕಡ್ಡಾಯವಾಗಿ ರಾಷ್ಟ್ರೀಯ ವಿದ್ಯಾರ್ಥಿವೇತನ ಪೋರ್ಟಲ್‌ನಲ್ಲಿ ಒನ್–ಟೈಮ್ ನೋಂದಣಿ ಸಂಖ್ಯೆಯನ್ನು ಕಡ್ಡಾಯವಾಗಿ ರಚಿಸಬೇಕಾಗಿದೆ. ಒನ್ ಟೈಮ್ ನೋಂದಣಿ ಸಂಖ್ಯೆಯನ್ನು ಬಳಸಿಕೊಂಡು 2025–26ನೇ ಸಾಲಿಗೆ ಎಸ್.ಎಸ್.ಪಿ ಮೂಲಕ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದ್ದು, ವೆಬ್‌ಸೈಟ್ https://scholarships.gov.in/ ಮೂಲಕ ರಚಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಯೋಜನಾ ಸಮನ್ವಯಾಧಿಕಾರಿಗಳು, ಸಮಗ್ರ ಬುಡಕಟ್ಟು ಅಭಿವೃದ್ಧಿ ಯೋಜನೆ, ಡಾ. ಬಾಬು ಜಗಜೀವನರಾಂ ಭವನ, ಆದಿಪಂಪ ರಸ್ತೆ, ಒಂಟಿಕೊಪ್ಪಲು ಪೂರ್ವ ಬಡಾವಣೆ, ಮೈಸೂರು ಜಿಲ್ಲೆ, ಮೈಸೂರು ಇವರ ಇ–ಮೇಲ್– itdpmysore@gmail.com ನ್ನು ಹಾಗೂ ದೂರವಾಣಿ :0821–2427140/9591122826 ನ್ನು ಸಂಪರ್ಕಿಸಬಹುದಾಗಿದೆ ಮೈಸೂರು ಜಿಲ್ಲೆಯ ಸಮಗ್ರ ಬುಡಕಟ್ಟು ಅಭಿವೃದ್ಧಿ ಯೋಜನೆಯ ಯೋಜನಾ ಸಮನ್ವಯಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಮೈಸೂರು:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಟಿ.ನರಸೀಪುರ ತಾಲ್ಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ–1, 2ಎ, 2ಬಿ, 3ಎ, 3ಬಿ, ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದ ಪಿಯುಸಿ, ಐ.ಟಿ.ಐ ಮತ್ತು ಡಿಪ್ಲೋಮೋ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಂದ 2025–26 ನೇ ಸಾಲಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ವಿದ್ಯಾರ್ಥಿಯ ಪೋಷಕರ ವಾರ್ಷಿಕ ಆದಾಯ ಮಿತಿ: ಪ್ರವರ್ಗ–1, ಎಸ್.ಸಿ ಎಸ್.ಟಿ. ರೂ. 2.50 ಲಕ್ಷ, ಪ್ರವರ್ಗ–2ಎ, 2ಬಿ, 3ಎ, 3ಬಿ, ಇತರೆ ಹಿಂದುಳಿದ, ವರ್ಗ ಹಾಗೂ ಇತರೆ ರೂ. 1.00 ಲಕ್ಷ ಇಲಾಖೆಯ ವೆಬ್‌ಸೈಟ್ https://shp.karnataka.gov.in/bcwd ನ್ನು ಸಂಪರ್ಕಿಸಿ ಆನ್‌ಲೈನ್ ನಲ್ಲಿ ಅರ್ಜಿಯನ್ನು ಸಲ್ಲಿಸಬೇಕು. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಜೂನ್ 20 ಕೊನೆಯ ದಿನಾಂಕವಾಗಿರುತ್ತದೆ. ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ https://bcwd.karnataka.gov.in/ನ್ನು ನೋಡಬಹುದು. ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwdhelpline@gmail.com ಮುಖಾಂತರ ಅಥವಾ ಜಿಲ್ಲಾ/ತಾಲ್ಲೂಕು ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸುವುದು. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ 8050770004 ಮತ್ತು 8050770005 ಸಂಪರ್ಕಿಸಬಹುದು ಎಂದು ಟಿ.ನರಸೀಪುರ ತಾಲ್ಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.



## ಉದ್ಘಾಟನೆ

**ರಾಜಾಜಿನಗರ ಎರಡನೇ ಹಂತದ ಒಂದನೇ ಬಿ ಮುಖ್ಯ ರಸ್ತೆಯಲ್ಲಿ ನೂತನವಾಗಿ ಆರಂಭಗೊಂಡ ಜೂನಿಯರ್ ಟೋಸ್ ಇಂಟರ್ನ್ಯಾಷನಲ್ ಫ್ರೀ ಸ್ಕೂಲ್ಲನ್ನು ಸ್ಥಳೀಯ ಶಾಸಕರಾದ ಕೆ, ಗೋಪಾಲಯ್ಯನವರು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಅಶ್ವಿನಿ ಪುನೀತ್ ರಾಜಕುಮಾರ್, ನಿರೂಪಕಿ ಅನುಶ್ರೀ, ಸ್ಕೂಲ್ ನ ವ್ಯವಸ್ಥಾಪಕ ನಿರ್ದೇಶಕಿ ದೀಪ್ತಿ ಕಿರಣ್ ಚಂದ್ರಶೇಖರ್, ಕಿರಣ್, ಬಿಜೆಪಿ ಮುಖಂಡ ವೆಂಕಟೇಶ್ ಮೂರ್ತಿ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.**

## ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಪ್ರವೇಶಕ್ಕೆ ಅರ್ಜಿ

**ಮೈಸೂರು:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಟಿ.ನರಸೀಪು ತಾಲ್ಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ–1, 2ಎ, 2ಬಿ, 3ಎ, 3ಬಿ, ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ 2025–26 ನೇ ಸಾಲಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ವಿದ್ಯಾರ್ಥಿಯ ಪೋಷಕರ ವಾರ್ಷಿಕ ಆದಾಯ ಮಿತಿ: ಪ್ರವರ್ಗ–1, ಎಸ್.ಸಿ ಎಸ್.ಟಿ. ರೂ. 2.50 ಲಕ್ಷ, ಪ್ರವರ್ಗ–2ಎ, 2ಬಿ, 3ಎ, 3ಬಿ, ಇತರೆ ಹಿಂದುಳಿದ, ವರ್ಗ ಹಾಗೂ ಇತರೆ ರೂ. 1.00 ಲಕ್ಷ ಇಲಾಖೆಯ ವೆಬ್‌ಸೈಟ್ https://shp.karnataka.gov.in/bcwd ನ್ನು ಸಂಪರ್ಕಿಸಿ ಆನ್‌ಲೈನ್ ನಲ್ಲಿ ಅರ್ಜಿಯನ್ನು ಸಲ್ಲಿಸಬೇಕು. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಜೂನ್ 16 ಕೊನೆಯ ದಿನಾಂಕವಾಗಿರುತ್ತದೆ. ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ https://bcwd.karnataka.gov.in/ನ್ನು ನೋಡಬಹುದು. ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwdhelpline@gmail.com ಮುಖಾಂತರ ಅಥವಾ ಜಿಲ್ಲಾ/ತಾಲ್ಲೂಕು ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸುವುದು. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ 8050770004 ಮತ್ತು 8050770005 ಸಂಪರ್ಕಿಸಬಹುದು ಎಂದು ಟಿ.ನರಸೀಪುರ ತಾಲ್ಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಳ್ಳಿಗಳು ಅಭಿವೃದ್ಧಿಯಾದರೆ ದೇಶಕ್ಕೆ ಬಹು ದೊಡ್ಡ ಶಕ್ತಿ : ಶ್ರೀ ರಂಭಾಪುರಿ ಜಗದ್ಗುರುಗಳು

**ಕಲಬುರ್ಗಿ:** ಭಾರತ ದೇಶ ಹಳ್ಳಿಗಳ ದೇಶ. ಹಳ್ಳಿಗಳು ಹೆಚ್ಚು ಅಭಿವೃದ್ಧಿಯಾದರೆ ದೇಶಕ್ಕೆ ಬಹುದೊಡ್ಡ ಶಕ್ತಿ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ನಗರದ ತಾಜ್ ಸುಲ್ತಾನಪುರದಲ್ಲಿ ಚಿನ್ನದ ಕಂತಿ ಸಾಂಸ್ಕೃತಿಕ ಸಭಾಭವನದ ಉದ್ಘಾಟನಾ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಸ್ವಾತಂತ್ರ್ಯ ಬಂದು 77 ವರ್ಷಗಳು ಗತಿಸಿದರೂ ಇನ್ನೂ ಹಲವಾರು ಹಳ್ಳಿಗಳಿಗೆ ಓಡಾಡುವ ಒಳ್ಳೆಯ ರಸ್ತೆ, ಶುದ್ಧವಾದ ಕುಡಿಯುವ ನೀರು, ಓದುವ ಮಕ್ಕಳಿಗೆ ಉತ್ತಮವಾದಂಥ ಶಾಲೆಗಳಿಲ್ಲ. ನಗರ ಪ್ರದೇಶಗಳು ಹೆಚ್ಚು ಬೆಳೆಯುತ್ತಾ ಅತಿಯಾದ ಜನ ಸಂಖ್ಯೆಯಿಂದ ತುಂಬಿ ತುಳುಕುತ್ತಿವೆ. ಹಳ್ಳಿಯ ಜನ ನಗರಕ್ಕೆ ಸೇರುವುದರಿಂದ ಗ್ರಾಮೀಣ ಭಾಗದಲ್ಲಿ ದುಡಿಯುವ ಜನರು ಇಲ್ಲದಂತಾಗಿದೆ. ಇದರಿಂದಾಗಿ ಕೃಷಿ ಭೂಮಿಯಲ್ಲಿ ಕೆಲಸ ಮಾಡುವ ಜನರ ಕೊರತೆಯಾಗಿದೆ. ನಗರಗಳಂತೆ ಹಳ್ಳಿಗಳು ಅಭಿವೃದ್ಧಿಯಾದರೆ ಜನಸಂಖ್ಯೆಯನ್ನು ನಿಯಂತ್ರಿಸಬಹುದು. ಆದ್ದರಿಂದ ಪಕ್ಷಾತೀತವಾಗಿ ಜಾತ್ಯಾತೀತವಾಗಿ ನಮ್ಮೆಲ್ಲ ರಾಜಕೀಯ ಧುರೀಣರು ಗಮನಹರಿಸುವ ಅವಶ್ಯಕತೆ ಇದೆ. ತಾಜ್ ಸುಲ್ತಾನಪುರದಲ್ಲಿರುವ ಶ್ರೀನಿವಾಸ ಸರಡಗಿಯ ಚಿನ್ನದ ಕಂತಿ ಚಿಕ್ಕ ವೀರೇಶ್ವರ ಹಿರೇಮಠದ ಡಾ.ರೇವಣಸಿದ್ಧ ಶಿವಾಚಾರ್ಯ ಸ್ವಾಮಿಗಳು ಶ್ರೀಮಠದ ಆವರಣದಲ್ಲಿ ಸಾಂಸ್ಕೃತಿಕ ಭವನ ನಿರ್ಮಿಸಿ ಗ್ರಾಮದ ಜನತೆಗೆ ಬಹುದೊಡ್ಡ ಅನುಕೂಲವಾಗುವ ಕಾರ್ಯವನ್ನು ಮಾಡಿದ್ದಾರೆ. ಇದರ ಸದುಪಯೋಗವನ್ನು ಗ್ರಾಮಸ್ಥರು ಪಡೆಯುವುದರ ಜೊತೆಗೆ ಮಠದ ಜನಪರ ಕಾರ್ಯಗಳಿಗೆ ಭಕ್ತರು ಸಹಕರಿಸುವಂತಾಗಬೇಕು. ಕಲಬುರ್ಗಿ ದಕ್ಷಿಣ ಮತಕ್ಷೇತ್ರದ ಅಲ್ಲಮಪ್ರಭು ಪಾಟೀಲ್ ಅವರು ತಮ್ಮ ಅನುದಾನದಲ್ಲಿ ಸಭಾಂಗಣವನ್ನು ನಿರ್ಮಿಸಿ ಕೊಟ್ಟರೆ ಎಲ್ಲ ಸಮುದಾಯದ ಜನತೆಗೆ ಬಹಳ?ಟ್ಟ ಅನುಕೂಲವಾಗುತ್ತದೆ. ಈ ಹಿಂದಿನ ಮಾಜಿ ಶಾಸಕರಾದ ದತ್ತಾತ್ರೇಯ ಪಾಟೀಲ್ ಅವರು ಈ ಸಾಂಸ್ಕೃತಿಕ ಭವನದ ನಿರ್ಮಾಣಕ್ಕೆ ಸಹಕರಿಸಿರುವುದನ್ನು ಕಂಡು ತಮ್ಮ ಸಂತೋಷವನ್ನು ವ್ಯಕ್ತಪಡಿಸಿದರು. ಶ್ರೀನಿವಾಸ ಸರಡಗಿ ಶ್ರೀಗಳು ಧಾರ್ಮಿಕ ಜಾಗೃತಿಯ ಜೊತೆಗೆ



ಸಾಮಾಜಿಕ ಸತ್ಕಾರ್ಯಗಳನ್ನು ಮಾಡುತ್ತಿರುವುದು ಅತ್ಯಂತ ಸಂತೋ?ವನ್ನು ಉಂಟು ಮಾಡುತ್ತದೆ ಎಂದರು.

ಕಲಬುರ್ಗಿ ಗ್ರಾಮೀಣ ಭಾಗದ ಶಾಸಕ ಬಸವರಾಜ್ ಮತ್ತಿಮಡು ಸಮಾರಂಭ ಉದ್ಘಾಟಿಸಿ ಶ್ರೀ ಮಠದ ಅಭಿವೃದ್ಧಿಗೆ ಹೆಚ್ಚಿನ ಸಹಕಾರ ಕೊಡುವುದಾಗಿ ಭರವಸೆ ನೀಡಿದರು. ಕಲಬುರ್ಗಿ ದಕ್ಷಿಣ ಭಾಗದ ಶಾಸಕ ಅಲ್ಲಮಪ್ರಭು ಪಾಟೀಲ ಮಾತನಾಡಿ ಮುಂಬರುವ ದಿನಗಳಲ್ಲಿ ಸಭಾಂಗಣ ನಿರ್ಮಾಣಕ್ಕೆ ವಿಶೇ?ವಾದಂತಹ ಅನುದಾನವನ್ನು ದೊರಕಿಸಿಕೊಡಲು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಮಾತು ಕೊಟ್ಟರು. ಮಾಜಿ ಶಾಸಕ ದತ್ತಾತ್ರೇಯ ಪಾಟೀಲ್ ಮಾತನಾಡಿ ಮಠ ಮಂದಿರಗಳು ಸಾರ್ವಜನಿಕವಾಗಿ ಜನರಿಗೆ ಅನುಕೂಲ ಕಲ್ಪಿಸಿ ಕೊಡುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನವನ್ನು ಮಾಡುತ್ತಾ ಬಂದಿವೆ. ನನ್ನ ಅಧಿಕಾರದ ಸಂದರ್ಭದಲ್ಲಿ ಬಹಳ?ಟ್ಟ ಸಂಘ ಸಂಸ್ಥೆಗಳಿಗೆ ಮಂದಿರಗಳಿಗೆ ವಿಶೇಷ ಅನುದಾನ ಕೊಟ್ಟು ಅಭಿವೃದ್ಧಿಪಡಿಸಿದ ಸಂತೃಪ್ತಿ ನನಗಿದೆ ಎಂದರು.

ನೇತೃತ್ವ ವಹಿಸಿದ ಶ್ರೀನಿವಾಸ್ ಸರಡಗಿ ಡಾ.ರೇವಣಸಿದ್ಧ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ಈ ಗ್ರಾಮದ ಚಾರಿತ್ರಿಕ ಇತಿಹಾಸದಲ್ಲಿ ಅವಿಸ್ಮರಣೀಯ ದಿನ. ಬಾಳೆಹೊನ್ನೂರು ಶ್ರೀ ರಂಭಾಪುರಿ ಜಗದ್ಗುರುಗಳ ಶುಭಾಗಮನದಿಂದ ಶ್ರೀಮಠ ಮತ್ತು ಸುಲ್ತಾನ್‌ಪುರ ಗ್ರಾಮ ಮುಂದಿನ ದಿನಗಳಲ್ಲಿ ಹೆಚ್ಚು ಅಭಿವೃದ್ಧಿಯಾಗುವುದೆಂದು ನಂಬಿಕೆ ನಮಗಿದೆ. ಕಲ್ಬುರ್ಗಿ ಜಿಲ್ಲಾ ಕೇಂದ್ರದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳ ಸಾನ್ನಿಧ್ಯದಲ್ಲಿ ಭವ್ಯ ಸಮಾರಂಭ ಹಮ್ಮಿಕೊಳ್ಳುವ ಕಾರ್ಯಕ್ಕೆ ಎಲ್ಲ ರಾಜಕೀಯ ಧುರೀಣರ ಸಹಕಾರ ಅಗತ್ಯವೆಂದರು.

ಈ ಪವಿತ್ರ ಸಮಾರಂಭದಲ್ಲಿ ಸ್ಟೇ?ನ್ ಬಬಲಾದ ಬೃಹನ್ ಮಠದ ಶಿವಮೂರ್ತಿ ಶಿವಾಚಾರ್ಯ ಸ್ವಾಮಿಗಳು, ಚೌದಾಪುರಿ ಹಿರೇಮಠದ ಡಾ.ರಾಜಶೇಖರ ಶಿವಾಚಾರ್ಯ ಸ್ವಾಮಿಗಳು, ಆಲಮೇಲ ಹಿರೇಮಠದ ಚಂದ್ರಶೇಖರ ಶಿವಾಚಾರ್ಯ ಸ್ವಾಮಿಗಳು, ತೊನಸಿನಹಳ್ಳಿ ಚರಂತೇಶ್ವರ ಮಠದ ರೇವಣಸಿದ್ಧ ಶಿವಾಚಾರ್ಯ ಸ್ವಾಮಿಗಳು ಪಾಲ್ಗೊಂಡಿದ್ದರು ಕಾಂಗ್ರೆಸ್ ಧುರೀಣ ನೀಲಕಂಠರಾವ್ ಮೂಲಗೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಎಂಟು ದಿನಗಳಿಂದ ನಡೆದುಕೊಂಡು ಬಂದ ಶ್ರೀ ಜಗದ್ಗುರು ರೇವಣಸಿದ್ದೇಶ್ವರ ಪುರಾಣವನ್ನು ಸಿದ್ದೇಶ್ವರ ಶಾಸ್ತ್ರಿಗಳು ಮಂಗಲಗೊಳಿಸಿದರು.

ಶ್ರೀಮಠದ ಉತ್ತರಾಧಿಕಾರಿ ಚಿನ್ನದ ಕಂತಿ ಚನ್ನವೀರ ದೇವರು ಶ್ರೀ ರಂಭಾಪುರಿ ಜಗದ್ಗುರುಗಳವರಿಗೆ ರೇ?ೆ ಮಡಿ ಫಲ ಪು?ಪ ಸಮರ್ಪಿಸಿ ಆಶೀರ್ವಾದ ಪಡೆದರು. ಹಲವಾರು ಗಣ್ಯರಿಗೆ ಹಾಗೂ ದಾನಿಗಳಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರು ರಕ್ಷೆಯಿತ್ತು ಶುಭ ಹಾರೈಸಿದರು. ಸಮಾರಂಭಕ್ಕೂ ಮುನ್ನ ಭವ್ಯ ಮೆರವಣಿಗೆಯೊಂದಿಗೆ ಜಗದ್ಗುರುಗಳನ್ನು ಬರಮಾಡಿಕೊಂಡರು.

# ಸಂಜೆ ಟಿಪ್ಸ್

## ರುಪೇ ಆಧರಿತ ಕ್ಯಾಶ್ ಬ್ಯಾಕ್ ಕ್ರೆಡಿಟ್ ಕಾರ್ಡ್ ಅನ್ನು ಬಿಡುಗಡೆ ಮಾಡಿದ ಆಕ್ಸಿಸ್ ಬ್ಯಾಂಕ್ ಮತ್ತು ಸೂಪರ್.ಮನಿ

ಭಾರತದ ಅತಿದೊಡ್ಡ ಖಾಸಗಿ ವಲಯದ ಬ್ಯಾಂಕ್‌ಗಳಲ್ಲಿ ಒಂದಾದ ಆಕ್ಸಿಸ್ ಬ್ಯಾಂಕ್ ಮತ್ತು ಫ್ಲಿಪ್‌ಕಾರ್ಟ್ ಗ್ರೂಪ್ ಅಧೀನದ ಸೂಪರ್.ಮನಿ ಸಂಸ್ಥೆ ಜಂಟಿಯಾಗಿ ಕೋ-ಬ್ರಾಂಡೆಡ್ ಕ್ರೆಡಿಟ್ ಕಾರ್ಡ್-ಆಕ್ಸಿಸ್ ಬ್ಯಾಂಕ್ ಸೂಪರ್.ಮನಿರುಪೇ ಕ್ರೆಡಿಟ್ ಕಾರ್ಡ್-ಅನ್ನು ಬಿಡುಗಡೆ ಮಾಡಿದೆ. ಈಕ್ರೆಡಿಟ್ ಕಾರ್ಡ್ ಭಾರತ ಮೂಲದ ಜಾಗತಿಕ ಕಾರ್ಡ್ ಪೇಮೆಂಟ್ ಜಾಲವಾದ ರುಪೇಯಲ್ಲಿ ಲಭ್ಯವಿದ್ದು, ಗ್ರಾಹಕರಿಗೆ ಉತ್ತಮರಿ ವಾರ್ಡ್ ಗಳು ಮತ್ತು ಸೌಲಭ್ಯವನ್ನು ಒದಗಿಸುತ್ತದೆ.ಈ ಹೊಸರುಪೇ ಕ್ರೆಡಿಟ್‌ಕಾರ್ಡ್ ಡಿಜಿಟಲ್‌ಮತ್ತು ಭೌತಿಕ ರೂಪದಲ್ಲಿ ಲಭ್ಯವಿದ್ದು,ಈ ಕಾರ್ಡ್ ಬಳಸಿ ಕೊಂಡುಯುಪಿಐ, ಕಾರ್ಡ್ ಪಿಓಎಸ್ ಟರ್ಮಿನಲ್ ಗಳು, ಆನ್‌ಲೈನ್‌ವೇದಿಕೆಗಳು ಮತ್ತು ಎಟಿಎಂಗಳ ಮೂಲಕ ಸುಗಮವಾಗಿ ನಗದು ವಹಿವಾಟು ಮಾಡಬಹುದಾಗಿದೆ. ಸೂಪರ್.ಮನಿ ಅಪ್ಲಿಕೇಶನ್‌ಮೂಲಕ 'ಸ್ಕ್ಯಾನ್‌ಪೇ'ವಹಿವಾಟು ನಡೆಸಿದರೆ ಈ ಕಾರ್ಡ್ ಮೇಲೆಶೇ.3ಕ್ಯಾಶ್ ಬ್ಯಾಕ್‌ಮತ್ತುಇತರವಿಭಾಗಗಳಲ್ಲಿ ಮಾಡುವ ಖರ್ಚುಗಳಿಗೆಶೇ.1ಕ್ಯಾಶ್‌ಬ್ಯಾಕ್ ಲಭ್ಯವಿದೆ. ಈ ಸೌಲಭ್ಯವು ಈ ಕಾರ್ಡ್ ಅನ್ನು ಭಾರತದ ಅತ್ಯುತ್ತಮ ರುಪೇ ಕ್ರೆಡಿಟ್‌ಕಾರ್ಡ್ ಗಳಲ್ಲಿಒಂದಾಗಿ ಮಾಡಿದೆ.ವಿಶೇಷವೆಂದರೆ ಈ ಕಾರ್ಡ್ ಗೆಯಾವುದೇವಾರ್ಷಿಕ ಶುಲ್ಕವಿರುವುದಿಲ್ಲ ಮತ್ತು ಗ್ರಾಹಕರಿಗೆ ಜೀವನ ಪರ್ಯಂತ ಉಚಿತವಾಗಿರುತ್ತದೆ.

## ನಿಮಗಿದು ಗೊತ್ತೇ

ಎಂ. ವೆಂಕಟೇಶ್ ಶೇಷಾದ್ರಿ

5.ಜ್ಞಾನಪೀಠ ಪ್ರಶಸ್ತಿ ಪಡೆದವರಲ್ಲಿ ಮೊಟ್ಟ ಮೊದಲು ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷತೆಯನ್ನು ವಹಿಸಿದ್ದವರು ಯಾರು ?

## ರವೆ ಉಂಡೆ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಚಿರೋಟಿ ರವೆ- 1 ಕಪ್, ಒಣಕೊಬ್ಬರಿ- 1 ಕಪ್, ಒಣದ್ರಾಕ್ಷಿ- 15, ಗೋಡಂಬಿ- 15, ಏಲಕ್ಕಿ ಸ್ವಲ್ಪ, ಸಕ್ಕರೆ -1 ಕಪ್, ಹಾಲು -1 ಕಪ್, ತುಪ್ಪ-1 ಕಪ್

### ಮಾಡುವ ವಿಧಾನ

ಮೊದಲಿಗೆ ಚಿರೋಟಿ ರವೆಯನ್ನು ಸಣ್ಣ ಉರಿಯಲ್ಲಿ ತುಪ್ಪ ಹಾಕಿ ಚೆನ್ನಾಗಿ ಹುರಿಯಬೇಕು.

ಒಣಕೊಬ್ಬರಿಯನ್ನು ಮಿಕ್ಸಿಯಲ್ಲಿ ಹಾಕಿ ಪುಡಿ ಮಾಡಿಕೊಳ್ಳಬೇಕು.

ದ್ರಾಕ್ಷಿ ಮತ್ತು ಗೋಡಂಬಿಯನ್ನು ತುಪ್ಪದಲ್ಲಿ ಹಾಕಿ ಕರಿಯಬೇಕು.

ರವೆ ಬಿಸಿ ಇರುವಾಗಲೇ ಕೊಬ್ಬರಿ ಪುಡಿ, ದ್ರಾಕ್ಷಿ ಗೋಡಂಬಿ, ಪುಡಿ ಮಾಡಿದ ಸಕ್ಕರೆ ಎಲಕ್ಕಿ ಪುಡಿ ಹಾಕಿ ಚೆನ್ನಾಗಿ ಮಿಕ್ಸ್ ಮಾಡಿ.

ನಂತರ ಬಿಸಿ ಮಾಡಿದ ಹಾಲನ್ನು ಮಿಶ್ರಣಕ್ಕೆ ಹಾಕಿ ಚೆನ್ನಾಗಿ ಕಲೆಸಿ. ನಂತರ ಉಂಡೆ ಮಾಡಿ. ಈಗ ಸಿಹಿಯಾದ ರವೆಉಂಡೆ ಸವಿಯಲು ಸಿದ್ಧ.

## ದೊಡ್ಡಪತ್ರೆ ಅನೇಕರೋಗಗಳಿಗೆರಾಮಬಾಣ

### ಹೆಲ್ತ್ ಟಿಪ್ಸ್



ದೊಡ್ಡಪತ್ರೆ ಎಲೆಗಳು ಆರೋಗ್ಯಕರ ಗುಣಗಳಿಂದ ಸಮೃದ್ಧವಾಗಿವೆ. ಅದರ ಎಲೆಗಳನ್ನು ನೀರಿನಲ್ಲಿ ಕುದಿಸಿ ಕುಡಿಯುವುದರಿಂದ ಶೀತ, ಜ್ವರ ಮತ್ತು ಕೆಮ್ಮಿನಂತಹ ಕಾಯಿಲೆಗಳಿಂದ ಪರಿಹಾರ ಸಿಗುತ್ತದೆ. ಇಷ್ಟೇ ಅಲ್ಲ, ಇದರಲ್ಲಿರುವ ಥೈಮೋಲ್ ಎಂಬ ಅಂಶವು ಸೋಂಕನ್ನು ತೆಗೆದುಹಾಕಲು ಸಹಾಯ ಮಾಡುತ್ತದೆ.

ದೊಡ್ಡಪತ್ರೆ ಮೂಳೆಗಳಿಗೆ ಸಂಬಂಧಿಸಿದ ಎಲ್ಲಾ ಸಮಸ್ಯೆಗಳನ್ನು ತೊಡೆದುಹಾಕಲು ಸಹಾಯ ಮಾಡುತ್ತದೆ. ದೇಹದಲ್ಲಿನ ಯಾವುದೇ ಬಾಹ್ಯ ಉರಿಯೂತವನ್ನು ಕಡಿಮೆ ಮಾಡುತ್ತದೆ. ದೊಡ್ಡಪತ್ರೆ ಪ್ರಯೋಜನಗಳು ದೊಡ್ಡಪತ್ರೆ ಎಲೆಗಳನ್ನು ಅಗಿಯುವುದರಿಂದ ಹೊಟ್ಟೆ ಉಬ್ಬುವುದು, ಗ್ಯಾಸ್ಟ್ರಿಕ್ ಮತ್ತು ಮಲಬದ್ಧತೆ ಮುಂತಾದ ಜೀರ್ಣಕ್ರಿಯೆಗೆ ಸಂಬಂಧಿಸಿದ ಸಮಸ್ಯೆಗಳನ್ನು ದೂರವಿಡಲು ಸಹಾಯ ಮಾಡುತ್ತದೆ.

ದೊಡ್ಡಪತ್ರೆ ನಂಜುನಿರೋಧಕ ಗುಣಗಳಿಂದ ತುಂಬಿರುತ್ತದೆ. ನೀರಿನಲ್ಲಿ ಕುದಿಸಿ ಕುಡಿಯುವುದರಿಂದ ಶೀತ, ಕೆಮ್ಮು ಮತ್ತು ಆಸ್ತಮಾ ಮುಂತಾದ ಉಸಿರಾಟದ ಸಮಸ್ಯೆಗಳನ್ನು ದೂರವಿಡಲು ಸಹಾಯ ಮಾಡುತ್ತದೆ. ಇದರ ಎಲೆಗಳನ್ನು ಪೇಸ್ಟ್ ಮಾಡಿ ವಾಸನೆ ನೋಡಿದರೆ ಕಟ್ಟಿದ ಮೂಗು ಸಡಿಲವಾಗುತ್ತದೆ.

ದೊಡ್ಡಪತ್ರೆ ನೋವು ನಿವಾರಕ ಗುಣಗಳನ್ನು ಹೊಂದಿದೆ. ಹಲ್ಲುನೋವು, ತಲೆನೋವು ಮತ್ತು ದೇಹದ ನೋವಿನಿಂದ ಪರಿಹಾರ ನೀಡುತ್ತದೆ.

ದೊಡ್ಡಪತ್ರೆಯ ಪೇಸ್ಟ್ ಅನ್ನು ನೋವಿನ ಪ್ರದೇಶದ ಮೇಲೆ ಹಚ್ಚಿದರೆ ನೋವು ಗುಣವಾಗುತ್ತದೆ. ಹೊಟ್ಟೆ ನೋವು ಕಾಣಿಸಿಕೊಂಡರೆ ದೊಡ್ಡಪತ್ರೆ ಎಲೆಗೆ ಇಂಗು, ಕಪ್ಪು ಉಪ್ಪು ಬೆರೆಸಿ ತಿಂದು ಉಗುರು ಬೆಚ್ಚಗಿನ ನೀರು ಕುಡಿದರೆ ತಕ್ಷಣ ಪರಿಹಾರ ಸಿಗುತ್ತದೆ.

## ಬೆಂಡೆಕಾಯಿ ನೀರನ್ನು ಕೂದಲಿಗೆ ಬಳಸಿ ನೋಡಿ

### ಬ್ಯೂಟಿ ಟಿಪ್ಸ್

ಹೇಳಿ ಕೇಳಿ ಬೆಂಡೆಕಾಯಿ ಒಂದು ನೈಸರ್ಗಿಕ ಆಹಾರ ಪದಾರ್ಥ. ಇದರಲ್ಲಿ ಪೌಷ್ಟಿಕಾಂಶಗಳಿಗೆ ಯಾವುದೇ ಕೊರತೆ ಇಲ್ಲ. ಅದರಲ್ಲೂ ಪ್ರಮುಖವಾಗಿ ತಲೆ ಕೂದಲ ಬೆಳವಣಿಗೆಗೆ ಅಗತ್ಯವಾಗಿ ಬೇಕಾದ ಎಲ್ಲಾ ಬಗೆಯ ಪೌಷ್ಟಿಕಾಂಶಗಳು ಇದರಲ್ಲಿವೆ. ಪ್ರಮುಖವಾಗಿ ವಿಟಮಿನ್ ಎ, ವಿಟಮಿನ್ ಸಿ ಮತ್ತು ವಿಟಮಿನ್ ಕೆ ಹಾಗೂ ಖನಿಜಾಂಶಗಳಾದ ಕಬ್ಬಿಣ, ಮೆಗ್ನೀಷಿಯಂ ಮತ್ತು ಕ್ಯಾಲ್ಸಿಯಂ ಇದರಲ್ಲಿ ಇರುವು ದನ್ನು ನಾವು ಕಾಣಬಹುದು. ತಲೆ ಕೂದಲಿನ ಕಿರು ಚೀಲಗಳಿಗೆ ತನ್ನ ಈ ಪೌಷ್ಟಿಕಾಂಶಗಳು ತಲುಪುವಂತೆ ಬೆಂಡೆಕಾಯಿ ಮಾಡುತ್ತದೆ. ನೀವು ತಪ್ಪದೇ ನಿಯಮಿತವಾಗಿ ಆಗಾಗ ಬೆಂಡೆಕಾಯಿ ನೀರನ್ನು ಉಪಯೋಗಿಸುತ್ತಿದ್ದರೆ, ತಲೆ ಕೂದಲಿನ ಬೇರುಗಳು ಉತ್ತಮ ಸಾಮರ್ಥ್ಯದಿಂದ ಕೂಡಿರಲು ಅನುಕೂಲವಾಗುತ್ತದೆ ಜೊತೆಗೆ ತಲೆ ಕೂದಲು ಉದುರುವುದು ಹಾಗೂ ಕೂದಲು ಅರ್ಧಕ್ಕೆ ಮುರಿದುಕೊಳ್ಳುವ ಸಾಧ್ಯತೆ ಕೂಡ ಇರುವುದಿಲ್ಲ. ಬೆಂಡೆ ಕಾಯಿಯ ಸತ್ವಗಳು ಪೂರ್ಣ ಪ್ರಮಾಣದಲ್ಲಿ ತಲೆ ಕೂದಲಿಗೆ ಸಿಗುತ್ತವೆ. ನಿಯಮಿತವಾಗಿ ಆಗಾಗ ಬೆಂಡೆಕಾಯಿ ನೀರನ್ನು ತಲೆಯ ಭಾಗಕ್ಕೆ ಹಚ್ಚುವುದರಿಂದ ನಿಮ್ಮ ತಲೆ ಕೂದಲು ಉದುರುವಿಕೆ ಸಮಸ್ಯೆ ಕ್ರಮೇಣವಾಗಿ ಕಡಿಮೆಯಾಗುತ್ತಾ ಬರುತ್ತದೆ. ಏಕೆಂದರೆ ಇದರಿಂದ ತಲೆಕೂದಲಿನ ಬೇರುಗಳು ಮತ್ತು ಕಿರುಚೀಲಗಳು ಸಾಮರ್ಥ್ಯದಿಂದ ಕೂಡಿ ತಲೆ ಕೂದಲು ಹಾಳಾಗುವ ಸಾಧ್ಯತೆ ಇರುವುದಿಲ್ಲ.

ತಲೆ ಕೂದಲಿಗೆ ಬೆಂಡೆಕಾಯಿ ನೀರನ್ನು ಬಳಸುವುದರಿಂದ ನೀವು ನೈಸರ್ಗಿಕ ಕಂಡೀಷನರ್ ಬಳಸಿದ ಅನುಭವವನ್ನು ಪಡೆದು ಕೊಳ್ಳಬಹುದು. ಇದು ತಲೆ ಕೂದಲಿನ ಸಿಕ್ಕು ಸಮಸ್ಯೆಯನ್ನು ಸರಿಪಡಿಸಿ ತಲೆ ಕೂದಲನ್ನು ಮೃದುವಾಗಿ, ಹೊಳಪಿನಿಂದ ಕೂಡಿರುವಂತೆ ಮಾಡುತ್ತದೆ.

ತಲೆ ಕೂದಲು ಸಮೃದ್ಧವಾಗಿ ಬೆಳೆಯಬೇಕು ಎಂದರೆ ಮೊದಲು ನೆತ್ತಿಯ ಆರೋಗ್ಯ ಚೆನ್ನಾಗಿರಬೇಕು.



ಬೆಂಡೆಕಾಯಿ ನೀರು ನೆತ್ತಿಯ ಆರೋಗ್ಯವನ್ನು ನಿರ್ವಹಣೆ ಮಾಡುತ್ತದೆ. ಇದರಲ್ಲಿನ ಆಂಟಿ ಇಂಪ್ಲಾಮೆಟರಿ ಗುಣಲಕ್ಷಣಗಳು ನೆತ್ತಿಯ ಭಾಗದಲ್ಲಿ ಉಂಟಾಗುವ ಕಿರಿಕಿರಿ ಮತ್ತು ತಲೆ ಹೊಟ್ಟಿನ ಸಮಸ್ಯೆಯನ್ನು ಸುಲಭವಾಗಿ ಪರಿಹಾರ ಮಾಡುತ್ತದೆ.

## ಪುತ್ರನಿಗೆ ಕ್ರೈಸ್ತ ಧರ್ಮಕ್ಕೆ ದೀಕ್ಷೆ ಕೊಡಿಸಿದ ನಟಿ ಅಮಲಾ ಪೌಲ್



ನಟ ಕಿಚ್ಚ ಸುದೀಪ್ ಅಭಿನಯದ ಸೂಪರ್ ಹಿಟ್ ಹೆಬ್ಬುಲಿ ಸಿನಿಮಾದಲ್ಲಿ ನಟಿಸಿದ್ದ ಬಹುಭಾಷಾ ನಟಿ ಅಮಲಾ ಪೌಲ್ ಸೋಷಿಯಲ್ ಮೀಡಿಯಾದಲ್ಲಿ ಸಕ್ರಿಯರಾಗಿದ್ದಾರೆ. ಆಗಾಗ ತಮ್ಮ ಹೊಸ ಫೋಟೋಶೂಟ್, ವಿಡಿಯೋ ಮತ್ತು ಸಿನಿಮಾಗಳ ಬಗ್ಗೆ ಅಭಿಮಾನಿಗಳಿಗೆ ಅಪ್‌ಡೇಟ್ ನೀಡುತ್ತಿರುತ್ತಾರೆ. ಅದರಂತೆ ನಟಿ ತಮ್ಮ ಫ್ಯಾನ್ಸ್‌ಗಳಿಗೆ ಇದೀಗ ಕುತೂಹಲಕಾರಿ ಅಪಡೇಟ್ ನೀಡಿದ್ದಾರೆ.

ನಟಿ ಅಮಲಾ ಪೌಲ್ ಅವರು ತಮ್ಮ ಪುತ್ರನಿಗೆಕ್ರಿಶ್ಚಿಯನ್ ಧರ್ಮಕ್ಕೆ ದೀಕ್ಷೆ ಕೊಡಿಸಿರುವವಿಚಾರವನ್ನಇನ್‌ಸ್ಟಾಗ್ರಾಮ್ ಪೋಸ್ಟ್ ಮೂಲಕ ತಿಳಿಸಿದ್ದಾರೆ. ಈ ಪೋಸ್ಟ್‌ಗೆ ಅವರು 'Surrounded by love and peace Celebrating Ilai's Baptismಎಂದು ಕ್ಯಾಪ್ಷನ್ ಬರೆದುಕೊಂಡಿದ್ದಾರೆ. ಇಲ್ಲಿ ಬ್ಯಾಪ್ಟಿಸಮ್ ಎಂದರೆ ಕ್ರಿಶ್ಚಿಯನ್ ಧರ್ಮಕ್ಕೆ ಮತಾಂತರಗೊಳ್ಳುವುದು.

ತಮ್ಮ ಮನಗ ಕೆಲವು ಫೋಟೋಗಳನ್ನ ಹಂಚಿಕೊಂಡಿರುವ ನಟಿ, ತಮ್ಮ ಪುತ್ರ ದೀಕ್ಷಾಸ್ನಾನ ಪಡೆದಿರುವ ಬಗ್ಗೆ ಮಾಹಿತಿ ನೀಡಿದ್ದಾರೆ. ಅವರ ಈ ಪೋಸ್ಟ್ ಇದೀಗ ಸೋಷಿಯಲ್ ಮೀಡಿಯಾದಲ್ಲಿ ಸಖತ್ ವೈರಲ್ ಆಗುತ್ತಿದೆ. ಅನೇಕ ಅಭಿಮಾನಿಗಳು ನಟಿಯ ಪೋಸ್ಟ್‌ಗೆ ಕಾಮೆಂಟ್ ಮಾಡಿದ್ದು, ಶುಭ ಹಾರೈಸಿದ್ದಾರೆ.

ಅಂದಹಾಗೆ ನಟಿ ಅಮಲಾ ಪೌಲ್ ಕೇರಳದ ಎರ್ನಾಕುಲಂನಲ್ಲಿ ಮಲಯಾಳಿ ಕ್ರಿಶ್ಚಿಯನ್ ಕುಟುಂಬದಲ್ಲಿ ಜನಿಸಿದರು. ಅವರ ನಿಜವಾದ ಹೆಸರು ಅನಖ್. ಚಿತ್ರರಂಗ ಪ್ರವೇಶಿಸಿದ ನಂತರ ತಮ್ಮ ಹೆಸರನ್ನು ಅಮಲಾ ಪೌಲ್ ಎಂದು ಬದಲಾಯಿಸಿಕೊಂಡರು. 2009ರ ಮಲಯಾಳಂ ಚಿತ್ರ ನೀಲತಾಮರದ ಮೂಲಕ ನಟನೆಗೆ ಪಾದಾರ್ಪಣೆ ಮಾಡಿದ್ದರು. ತಮಿಳು, ಕನ್ನಡ, ಹಿಂದಿ, ಮಲಯಾಳಂ ಮುಂತಾದ ಹಲವು ಭಾಷೆಗಳಲ್ಲಿ ನಟಿ ಅಮಲಾ ಪೌಲ್ ನಟಿಸಿದ್ದಾರೆ. ಈ ನಟಿ ತಮ್ಮ ಸಿನಿಮಾಗಳಿಗಿಂತ ವೈಯಕ್ತಿಕ ಜೀವನದಿಂದಲೇ ಸಖತ್ ಸುದ್ದಿಯಾಗಿದ್ದರು. 2014ರಲ್ಲಿ ತಮಿಳು ನಿರ್ದೇಶಕ ವಿಜಯ್ ಅವರನ್ನ ಮದುವೆಯಾಗಿದ್ದ ಈ ನಟಿ, ಕೇವಲ ಮೂರು ವರ್ಷಗಳಲ್ಲಿ ಅಂದರೆ 2017ರಲ್ಲಿ ಡಿವೋರ್ಸ್ ಮೂಲಕ ದೂರವಾದರು.

2023ರಲ್ಲಿ ಜಗತ್ ದೇಸಾಯಿರನ್ನು ಅಮಲಾ ಪೌಲ್ ಮದುವೆಯಾದರು. 2024ರ ಜೂನ್ 11ರಂದು ಅವರಿಗೆ ಗಂಡು ಮಗು ಜನಿಸಿತ್ತು. ಈ ಮಗುವಿಗೆ ಅವರು ಇಲೈ ಎಂದು ಹೆಸರಿಟ್ಟಿದ್ದರು.ಅಮಲಾ ಪೌಲ್‌ಪ್ರಸ್ತುತ ಸಿನಿಮಾಗಳ ಜೊತೆಗೆ ತಾಯಿಯಾಗಿಯೂ ತಮ್ಮ ಜವಾಬ್ದಾರಿ ನಿರ್ವಹಿಸುತ್ತಿದ್ದಾರೆ.

## ಹೋಂಡಾ ಮೋಟಾರ್‌ಸೈಕಲ್ ಸ್ಕೂಟರ್ ಇಂಡಿಯಾ ಬಿಡುಗಡೆ 'ಹೊಸ ಸಿಬಿ 750 ಹಾರ್ನೆಟ್' ಮತ್ತು 'ಸಿಬಿ 1000 ಹಾರ್ನೆಟ್ ಎಸ್‌ಪಿ'



ಹೋಂಡಾ ಮೋಟಾರ್‌ಸೈಕಲ್ ಮತ್ತು ಸ್ಕೂಟರ್ ಇಂಡಿಯಾ (ಹೆಚ್‌ಎಂಎಸ್‌ಐ) ಇಂದು ತನ್ನ ಪ್ರೀಮಿಯಂ ಪೋರ್ಟ್ಫೋಲಿಯೊಗೆ ಎರಡು ಶಕ್ತಿಶಾಲಿ ಹೊಸ ಸೇರ್ಪಡೆಗಳನ್ನು ಬಿಡುಗಡೆ ಮಾಡುವುದಾಗಿ ಘೋಷಿಸಿದೆ - ''ಸಿಬಿ 750 ಹಾರ್ನೆಟ್'' ಮತ್ತು ''ಸಿಬಿ 1000 ಹಾರ್ನೆಟ್ ಎಸ್‌ಪಿ''. ಎರಡೂ ಮೋಟಾರ್‌ಸೈಕಲ್‌ಗಳ ಬುಕಿಂಗ್‌ಗಳು ಈಗ ಆರಂಭವಾಗಿವೆ ಮತ್ತು ಅವುಗಳ ವಿತರಣೆಗಳು ಜೂನ್ 2025 ರಿಂದ ಪ್ರಾರಂಭವಾಗಲಿವೆ. ಹೊಸ ಹೋಂಡಾ ಸಿಬಿ750 ಹಾರ್ನೆಟ್ ಬೆಲೆ ರೂ. 8,59,500 ಮತ್ತು ಸಿಬಿ1000 ಹಾರ್ನೆಟ್ ಎಸ್‌ಪಿ ಬೆಲೆ ರೂ. 12,35,900, ಎಕ್ಸ್-ಶೋರೂಂ ಗುರುಗ್ರಾಮ್. ಸಿಬಿ750 ಹಾರ್ನೆಟ್ ಎಲ್ಲಾ ಬಿಗ್‌ವಿಂಗ್ ಟಾಪ್‌ಲೈನ್ ಮತ್ತು ಬಿಗ್‌ವಿಂಗ್ ಡೀಲರ್‌ಶಿಪ್‌ಗಳಲ್ಲಿ ಲಭ್ಯವಿರುತ್ತದೆ ಮತ್ತು ಸಿಬಿ1000 ಹಾರ್ನೆಟ್ ಎಸ್‌ಪಿ ಭಾರತದಲ್ಲಿ ಬಿಗ್‌ವಿಂಗ್ ಟಾಪ್‌ಲೈನ್ ಡೀಲರ್‌ಶಿಪ್‌ಗಳ ಮೂಲಕ ಪ್ರತ್ಯೇಕವಾಗಿ ಮಾರಾಟವಾಗುತ್ತದೆ.

ಹೊಸ ಪ್ರೀಮಿಯಂ ಮೋಟಾರ್‌ಸೈಕಲ್‌ಗಳನ್ನು ಪರಿಚಯಿಸಿದ ವೇ:ಳೆ, ಹೋಂಡಾ ಮೋಟಾರ್ ಸೈಕಲ್ ಮತ್ತು ಸ್ಕೂಟರ್ ಇಂಡಿಯಾದ ವ್ಯವಸ್ಥಾಪಕ ನಿರ್ದೇಶಕ, ಅಧ್ಯಕ್ಷ ಮತ್ತು ಸಿಇಒ ಶ್ರೀ ಸುಟ್ಸುಮು ಒಟಾನಿ, ''ಭಾರತೀಯ ಪ್ರೀಮಿಯಂ ಮೋಟಾರ್ ಸೈಕಲ್ ವಿಭಾಗವು ವಿಶೇಷವಾಗಿ ಶೈಲಿಯೊಂದಿಗೆ ಕಾರ್ಯಕ್ಷಮತೆಯನ್ನು ಬಯಸುವ ಯುವ ಮತ್ತು ಉತ್ಸಾಹಭರಿತ ಸವಾರರಲ್ಲಿ ಇತ್ತೀಚಿನ ವರ್ಷಗಳಲ್ಲಿ ಅಗಾಧವಾದ ಬೆಳವಣಿಗೆಯನ್ನು ತೋರಿಸಿದೆ. ಸಿಬಿ750 ಹಾರ್ನೆಟ್ ಮತ್ತು ಸಿಬಿ1000 ಹಾರ್ನೆಟ್ ಎಸ್‌ಪಿ ಬಿಡುಗಡೆಯೊಂದಿಗೆ, ಮೋಜಿನ ಬೈಕಿಂಗ್ ಕ್ಷೇತ್ರದಲ್ಲಿನಮ್ಮ ಉಪಸ್ಥಿತಿಯನ್ನು ಮತ್ತಷ್ಟು ಬಲಪಡಿಸುವ ಗುರಿಯನ್ನು ನಾವು ಹೊಂದಿದ್ದೇವೆ. ಈ ಮೋಟಾರ್‌ಸೈಕಲ್‌ಗಳು ಹೋಂಡಾದ ಎಂಜಿನಿಯರಿಂಗ್ ಶ್ರೇಷ್ಠತೆ, ಆಕ್ರಮಣಕಾರಿ ವಿನ್ಯಾಸ ಮತ್ತು ರೋಮಾಂಚಕ ಕಾರ್ಯಕ್ಷಮತೆಯ ಪರಂಪರೆಯ ನಿಜವಾದ ಪ್ರಾತಿನಿಧ್ಯವಾಗಿದೆ. ಈ ಹಾರ್ನೆಟ್‌ಗಳು ಕ್ರಿಯಾತ್ಮಕ ಮತ್ತು ಸ್ಪೋರ್ಟಿ ರೈಡಿಂಗ್ ಅನುಭವವನ್ನು ಬಯಸುವ ಸವಾರರೊಂದಿಗೆ ಒಂದು ಸ್ವರಮೇಳವನ್ನು ಹೊಡೆಯುತ್ತವೆ ಎಂದು ನಮಗೆ ವಿಶ್ವಾಸವಿದೆ'' ಎಂದು ಹೇಳಿದರು.

ಮೋಟಾರ್‌ಸೈಕಲ್‌ಗಳ ಬಿಡುಗಡೆಯ ಸಂದರ್ಭದಲ್ಲಿ ಮಾತನಾಡಿದ ಹೋಂಡಾ ಮೋಟಾರ್‌ಸೈಕಲ್ ಮತ್ತು ಸ್ಕೂಟರ್ ಇಂಡಿಯಾದ ಮಾರಾಟ ಮತ್ತು ಮಾರುಕಟ್ಟೆ ನಿರ್ದೇಶಕರಾದ ಶ್ರೀ ಯೋಗೇಶ್ ಮಾಥುರ್, ''ಹಾರ್ನೆಟ್ ಯಾವಾಗಲೂ ಉತ್ಸಾಹಿಗಳ ಹೃದಯದಲ್ಲಿ ವಿಶೇಷ ಸ್ಥಾನವನ್ನು ಹೊಂದಿದೆ ಮತ್ತು ಸಿಬಿ750 ಮತ್ತು ಸಿಬಿ1000 ಹಾರ್ನೆಟ್ ಎಸ್‌ಪಿ ಗಳ ಪರಿಚಯದೊಂದಿಗೆ, ನಾವು ಆ ಪರಂಪರೆಯನ್ನು ಮುಂದಿನ ಹಂತಕ್ಕೆ ಕೊಂಡೊಯ್ಯುತ್ತಿದ್ದೇವೆ. ಈ ಮೋಟಾರ್‌ಸೈಕಲ್ ಗಳು ಅತ್ಯಾಧುನಿಕ ತಂತ್ರಜ್ಞಾನ, ಐಕಾನಿಕ್ ವಿನ್ಯಾಸ ಮತ್ತು ಕಮಾಂಡಿಂಗ್ ರಸ್ತೆ ಉಪಸ್ಥಿತಿಯನ್ನು ಸಂಯೋಜಿಸುತ್ತವೆ, ಇವುಗಳನ್ನು ಆಯಾ ವಿಭಾಗಗಳಲ್ಲಿ ಆಕರ್ಷಕ ಆಯ್ಕೆಯನ್ನಾಗಿ ಮಾಡುತ್ತವೆ. ಭಾರತದಲ್ಲಿ ಕಾರ್ಯಕ್ಷಮತೆಯ ಮೋಟಾರ್ ಸೈಕಲ್‌ಗಳಿಗಾಗಿ ಹೆಚ್ಚುತ್ತಿರುವ ಹಸಿವು ನಮ್ಮನ್ನು ರೋಮಾಂಚನಗೊಳಿಸುತ್ತದೆ ಮತ್ತು ಈ ಹಾರ್ನೆಟ್ ಗಳು ಅಲ್ಲಿರುವ ಪ್ರತಿಯೊಬ್ಬ ಥ್ರಿಲ್-ಅನ್ವೇಷಕರೊಂದಿಗೆ ಪ್ರತಿಧ್ವನಿಸುತ್ತದೆ ಎಂದು ನಾವು ನಂಬುತ್ತೇವೆ. ಬೈಕಿಂಗ್ ಸಮುದಾಯದಿಂದ ಉತ್ತಮ ಪ್ರತಿಕ್ರಿಯೆಯನ್ನು ನಾವು ಎದುರು ನೋಡುತ್ತಿದ್ದೇವೆ.'' ಎಂದು ನುಡಿದರು.

ಹೋಂಡಾ ಸಿಬಿ750 ಹಾರ್ನೆಟ್ ಅನ್ನು ಪವರ್ ಮಾಡುವುದು ಹೊಸದಾಗಿ ಅಭಿವೃದ್ಧಿಪಡಿಸಲಾದ ಇನ್ ಲೈನ್ 2-ಸಿಲಿಂಡರ್, 755ಸಿಸಿ, 4 ಸ್ಟ್ರೋಕ್, 270-ಡಿಗ್ರಿ ಕ್ರಾಯಂಕ್ ಹೊಂದಿರುವ 8 ವಾಲ್ವ್‌ಗಳು, ಲಿಕ್ವಿಡ್ ಕೂಲ್ಡ್ ಎಂಜಿನ್ ಆಗಿದೆ. ಈ ಮೋಟಾರ್ 9,500 ಆರ್‌ಪಿಎಂ ನಲ್ಲಿ 67.5 ಕೆಡಬ್ಲ್ಯುಯ ಪವರ್ ಮತ್ತು 7,250 ಆರ್‌ಪಿಎಂ ನಲ್ಲಿ 75 ಎನ್‌ಎಂ ಪೀಕ್ ಟಾರ್ಕ್ ಅನ್ನು ಹೊರಹಾಕುತ್ತದೆ. ಫ್ಲಾಯಗ್‌ಶಿಪ್ ಸಿಬಿ1000 ಹಾರ್ನೆಟ್ ಎಸ್‌ಪಿ 999ಸಿಸಿ, ಲಿಕ್ವಿಡ್ ಕೂಲ್ಡ್, 4 ಸ್ಟ್ರೋಕ್, 16 ವಾಲ್ವ್‌ಗಳು, ಇನ್‌ಲೈನ್ ಫೋರ್ ಡಿಒಹೆಚ್‌ಸಿ ಎಂಜಿನ್‌ನಿಂದ ನಿಯಂತ್ರಿಸಲ್ಪಡುತ್ತದೆ, ಇದು 11,000 ಆರ್‌ಪಿಎಂ ನಲ್ಲಿ 115.6 ಕೆಡಬ್ಲ್ಯುಯ ಪವರ್ ಮತ್ತು 9,000 ಆರ್‌ಪಿಎಂ ನಲ್ಲಿ 107 ಎನ್‌ಎಂ ಟಾರ್ಕ್ ಅನ್ನು ಹೊರಹಾಕುತ್ತದೆ. ಅವು 6-ಸ್ಪೀಡ್ ಗೇರ್‌ಬಾಕ್ಸ್‌ಗೆ ಜೋಡಿಸಲ್ಪಟ್ಟಿವೆ ಮತ್ತು ಅಸಿಸ್ಟ್ ಮತ್ತು ಸ್ಲಿಪ್ಪರ್ ಕ್ಲಚ್ ಅನ್ನು ಸಹ ಪಡೆಯುತ್ತವೆ.

ಸಿಬಿ750 ಹಾರ್ನೆಟ್ ನಾಲ್ಕು ರೈಡಿಂಗ್ ಮೋಡ್ ಗಳನ್ನು ಪಡೆಯುತ್ತದೆ - ಸ್ಪೋರ್ಟ್, ಸ್ಟಾಯಂಡರ್ಡ್, ರೈನ್ ಮತ್ತು ಯೂಸರ್. ಫ್ಲಾಯಗ್‌ಶಿಪ್ ಸಿಬಿ1000 ಹಾರ್ನೆಟ್ ಎಸ್‌ಪಿ ಐದು ರೈಡಿಂಗ್ ಮೋಡ್ ಗಳನ್ನು ಪಡೆಯುತ್ತದೆ. ಎರಡೂ ಮಾದರಿಗಳಿಗೆ ಸ್ಪೋರ್ಟ್, ಸ್ಟಾಯಂಡರ್ಡ್ ಮತ್ತು ರೈನ್ ಮೋಡ್ ಗಳು ಒಂದೇ ಆಗಿದ್ದರೂ, ಇದು ಎರಡು ರೈಡರ್ ಕಸ್ಟಮೈಸ್ ಮಾಡಬಹುದಾದ ಬಳಕೆದಾರ ಮೋಡ್ ಗಳನ್ನು ಹೊಂದಿದ್ದು, ಇದು ಸವಾರರು ತಮ್ಮ ಆದ್ಯತೆಗೆ ಅನುಗುಣವಾಗಿ ಅದನ್ನು ಕಸ್ಟಮೈಸ್ ಮಾಡಲು ಅನುವು ಮಾಡಿಕೊಡುತ್ತದೆ. ಹೆಚ್ಚುವರಿ ರೈಡರ್ ಸಹಾಯಗಳಲ್ಲಿ ಹೋಂಡಾ ಸೆಲೆಕ್ಟಬಲ್ ಟಾರ್ಕ್ ನಿಯಂತ್ರಣ ಸೇರಿವೆ, ಇದನ್ನು ಸವಾರರ ಆದ್ಯತೆಗೆ ಅನುಗುಣವಾಗಿ ಮೂರು ವಿಭಿನ್ನ ಹಂತಗಳಲ್ಲಿ ಹೊಂದಿಸಬಹುದು ಮತ್ತು ತುರ್ತು ನಿಲುಗಡೆ ಸಿಗ್ನಲ್, ಇದು ಪ್ರತಿ ರೈಡ್ ಅನ್ನು ಸುರಕ್ಷಿತವಾಗಿಸುತ್ತದೆ. ಸಿಬಿ1000 ಹಾರ್ನೆಟ್ ಎಸ್‌ಪಿ ಸ್ಟಾಯಂಡರ್ಡ್ ಆಗಿ ಬೈ-ಡೈರೆಕ್ಷನಲ್ ಕ್ವಿಕ್‌ಶಿಫ್ಟರ್ ಅನ್ನು ಸಹ ಒಳಗೊಂಡಿದೆ.

ಹೊಸ 2025 ಹೋಂಡಾ ಸಿಬಿ750 ಹಾರ್ನೆಟ್ ಬೆಲೆ ರೂ. 8,59,500 (ಎಕ್ಸ್-ಶೋರೂಂ), ಆದರೆ ಪ್ರಮುಖ ಸಿಬಿ1000 ಹಾರ್ನೆಟ್ ಎಸ್‌ಪಿ ಬೆಲೆ ರೂ. 12,35,900 (ಎಕ್ಸ್-ಶೋರೂಂ). ಎರಡೂ ಮೋಟಾರ್‌ಸೈಕಲ್‌ಗಳ ಬುಕಿಂಗ್‌ಗಳು ಈಗ ತೆರೆದಿವೆ ಮತ್ತು ಅವುಗಳ ವಿತರಣೆಗಳು ಜೂನ್ 2025 ರಿಂದ ಪ್ರಾರಂಭವಾಗಲಿವೆ. ಹೋಂಡಾ ಬಿಗ್‌ವಿಂಗ್ ಇಂಡಿಯಾದ ಅಧಿಕೃತ ವೆಬ್‌ಸೈಟ್ ಮೂಲಕವೂ ಅವುಗಳನ್ನು ಆನ್‌ಲೈನ್‌ನಲ್ಲಿ ಬುಕ್ ಮಾಡಬಹುದು. ಸಿಬಿ750 ಹಾರ್ನೆಟ್ ಎಲ್ಲಾ ಬಿಗ್‌ವಿಂಗ್ ಟಾಪ್‌ಲೈನ್ ಮತ್ತು ಬಿಗ್‌ವಿಂಗ್ ಡೀಲರ್‌ಶಿಪ್‌ಗಳಲ್ಲಿ ಲಭ್ಯವಿರುತ್ತದೆ ಮತ್ತು ಸಿಬಿ1000 ಹಾರ್ನೆಟ್ ಎಸ್‌ಪಿ ಅನ್ನು ಭಾರತದ ಬಿಗ್‌ವಿಂಗ್ ಟಾಪ್‌ಲೈನ್ ಡೀಲರ್‌ಶಿಪ್‌ಗಳ ಮೂಲಕ ಪ್ರತ್ಯೇಕವಾಗಿ ಮಾರಾಟ ಮಾಡಲಾಗುತ್ತದೆ. ಕಾರ್ಯಕ್ಷಮತೆ ಮತ್ತು ಶೈಲಿಯಲ್ಲಿ ಬೇರೂರಿರುವ ಪರಂಪರೆಯೊಂದಿಗೆ, ಹೊಸ ಹಾರ್ನೆಟ್‌ಗಳು ಮಾರುಕಟ್ಟೆಯಲ್ಲಿ ಸದ್ದು ಮಾಡಲು ಸಜ್ಜಾಗಿವೆ.



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಈ ದಿನ ಸ್ವಯಂ ಸಾಮರ್ಥ್ಯದಿಂದ ಅವಕಾಶ, ವಾಹನ ಯೋಗ, ಮನ ಶಾಂತಿ, ವಿದೇಶ ವ್ಯವಹಾರಗಳಲ್ಲಿ ಪ್ರಗತಿ.

**ವೃಷಭ:** ವೆಚ್ಚಗಳ ಬಗ್ಗೆ ಜಾಗೃತಿ, ಮಾನಸಿಕ ಚಿಂತೆ, ರಾಜಕೀಯ ವ್ಯಕ್ತಿಗಳ ಭೇಟಿ, ಸೇವಕ ವರ್ಗದಿಂದ ಸಹಾಯ.

**ಮಿಥುನ:** ಮಾಡಿದ ತಪ್ಪಿನಿಂದ ಪಶ್ಚಾತ್ತಾಪ, ಸಗಟು ವ್ಯಾಪಾರಿಗಳಲ್ಲಿ ಅಲ್ಪ ಲಾಭ, ಆಲೋಚಿಸಿ ನಿರ್ಣಯ ಕೈಗೊಳ್ಳುವುದು ಸೂಕ್ತ.

**ಕಟಕ:** ಉದ್ಯೋಗದಲ್ಲಿ ಬಡ್ತಿ, ಬಂಧು ಮಿತ್ರರಲ್ಲಿ ಪ್ರೀತಿ, ಆರೋಗ್ಯದಲ್ಲಿ ಏರುಪೇರು, ಸ್ಥಳ ಬದಲಾವಣೆ, ದಂಪತ್ಯದಲ್ಲಿ ಕಲಹ.

**ಸಿಂಹ:** ದುಂದು ವೆಚ್ಚ, ಶತ್ರು ಭಾದೆ ನಿವಾರಣೆ, ಸಣ್ಣ ಪುಟ್ಟ ತೊಂದರೆ, ಮನಕ್ಲೇಶ, ಪರಿಚಿತರಿಂದ ಮೋಸ, ನಿರೀಕ್ಷಿತಾ ಆದಾಯ.

**ಕನ್ಯಾ:** ಕ್ರಯಾ ವಿಕ್ರೇಯಗಳಲ್ಲಿ ಲಾಭ, ಶರೀರದಲ್ಲಿ ಆಯಾಸ, ಕೋಪ ಜಾಸ್ತಿ, ಇತರರ ಮಾತಿಗೆ ಮರುಳಾಗಬೇಡಿ.

**ತುಲಾ:** ಆಪ್ತರೊಡನೆ ಪ್ರಯಾಣ, ಮನೋವ್ಯಥೆ, ವೈ ಮನಸ್ಸು, ಶತ್ರಭಾದೆ, ಪ್ರಗತಿ, ಅಲ್ಪ ಕಾರ್ಯ ಸಿದ್ಧಿ.

**ವೃಶ್ಚಿಕ:** ಅನ್ಯರಲ್ಲಿ ಪ್ರೀತಿ, ನಾನ ಮೂಲಗಳಿಂದ ಧನ ಲಾಭ , ಸಾಲದಿಂದ ಮುಕ್ತಿ, ಶ್ರಮಕ್ಕೆ ತಕ್ಕ ಫಲ, ಆಹಾರ ಸೇವನೆಯಲ್ಲಿ ವ್ಯತ್ಯಾಸ.

**ಧನುಸ್ಸು:** ಸ್ವಲ್ಪ ಪ್ರಯತ್ನ ಪಟ್ಟರೆ ಉತ್ತಮ ಫಲ, ವಕೀಲರಿಗೆ ಕಾರ್ಯಸಿದ್ಧಿ, ಆರೋಗ್ಯ ವೃದ್ಧಿ, ಅಧಿಕ ತಿರುಗಾಟ, ಕುಟುಂಬ ಸೌಖ್ಯ.

**ಮಕರ:** ಆರ್ಥಿಕ ಪರಿಸ್ಥಿತಿ ಬಿಕ್ಕಟ್ಟು, ಸ್ತ್ರೀಯರಿಗೆ ಶುಭ, ತಾಳ್ಮೆಯ ಅತ್ಯಗತ್ಯ, ಕೆಲಸ ಕಾರ್ಯಗಳಲ್ಲಿ ವಿಳಂಬ, ಸಲ್ಲದ ಅಪವಾದ.

**ಕುಂಭ:** ಕುಟುಂಬದಲ್ಲಿ ಪ್ರೀತಿ, ಚೋರ ಭಯ, ಇಷ್ಟವಸ್ತುಗಳ ಖರೀದಿ, ಮನಕ್ಲೇಶ, ಅತಿಯಾದ ನೋವು, ಎಲ್ಲಿ ಹೋದರೂ ಅಶಾಂತಿ.

**ಮೀನ:** ಅತಿಯಾದ ಪ್ರೀತಿ ದುಃಖಕ್ಕೆ ಕಾರಣ, ಸಣ್ಣ ವಿಷಯಕ್ಕೆ ಭಿನ್ನಾಭಿಪ್ರಾಯ, ಆರ್ಥಿಕ ಸಂಕಷ್ಟ, ರೋಗಭಾದೆ.

## ಸಾವಿತ್ರಿ ಅಮಾವಾಸ್ಯೆ

ಸಾವಿತ್ರಿ ಅಮಾವಾಸ್ಯೆಯು ಮೇ ನಿಂದ ಜೂನ್ ನಡುವೆ ಬರುವ ಹಿಂದೂ ಕ್ಯಾಲೆಂಡರ್‌ನ ಮೂರನೇ ತಿಂಗಳಾದ ಜ್ಯೇಷ್ಠ ಮಾಸದ ಅಮಾವಾಸ್ಯೆಯಂದು ಅಥವಾ ಅಮಾವಾಸ್ಯೆಯಂದು ಆಚರಿಸುವ ಉಪವಾಸದ ದಿನವಾಗಿದೆ. ಈ ವರ್ಷ, ಇದು ಮೇ 26 ರಂದು ಬರುತ್ತದೆ. ಈ ದಿನವನ್ನು ಉತ್ತರ ಭಾರತದ ಕೆಲವು ರಾಜ್ಯಗಳು ಮತ್ತು ನೇಪಾಳ ದೇಶದಲ್ಲಿ ಆಚರಿಸಲಾಗುತ್ತದೆ. ಒಡಿಶಾ ರಾಜ್ಯದ ಕೆಲವು ಭಾಗಗಳಲ್ಲಿ ಈ ಹಬ್ಬವನ್ನು ಸಬಿತ್ರಿ ಉವಾಸಸ್ ಎಂದೂ ಕರೆಯಲಾಗುತ್ತದೆ. ಈ ದಿನದಂದು, ಒಡಿಶಾ, ಬಿಹಾರ ಮತ್ತು ಉತ್ತರ ಪ್ರದೇಶ ರಾಜ್ಯಗಳಲ್ಲಿ ವಿವಾಹಿತ ಹಿಂದೂ ಮಹಿಳೆಯರು ಉಪವಾಸ ಮಾಡುತ್ತಾರೆ ಮತ್ತು ತಮ್ಮ ಗಂಡಂದಿರು ದೀರ್ಘಾಯುಷ್ಯವನ್ನು ಹೊಂದಬೇಕೆಂದು ಪ್ರಾರ್ಥಿಸುತ್ತಾರೆ. ಈ ಉಪವಾಸವು ಧಾರ್ಮಿಕವಾಗಿದೆ ಮತ್ತು ಈ ಮಹಿಳೆಯರಲ್ಲಿ ಇದನ್ನು ಒಂದು ಪ್ರತಿಜ್ಞೆ ಎಂದು ಪರಿಗಣಿಸಲಾಗುತ್ತದೆ. ಸಾವಿತ್ರಿ ಅಮಾವಾಸ್ಯೆಯು ಹಿಂದೂ ಕ್ಯಾಲೆಂಡರ್‌ನ ಜ್ಯೇಷ್ಠ ಮಾಸದ ಅಮಾವಾಸ್ಯೆಯಂದು ಅಥವಾ ಅಮಾವಾಸ್ಯೆಯಂದು ಆಚರಿಸುವ ಉಪವಾಸದ ದಿನವಾಗಿದೆ. ಈ ತಿಂಗಳು ಹಿಂದೂ ಕ್ಯಾಲೆಂಡರ್‌ನ ಮೂರನೇ ತಿಂಗಳು ಮತ್ತು ಮೇ ನಿಂದ ಜೂನ್ ನಡುವೆ ಬರುತ್ತದೆ. ಅಮಾವಾಸ್ಯೆಯ ದಿನಾಂಕವು ಪ್ರತಿ ವರ್ಷ ಬದಲಾಗುತ್ತದೆ. ಈ ದಿನದಂದು, ಉತ್ತರ ಭಾರತದ ರಾಜ್ಯಗಳಾದ ಒಡಿಶಾ, ಬಿಹಾರ ಮತ್ತು ಉತ್ತರ ಪ್ರದೇಶ ಹಾಗೂ ನೇಪಾಳದಲ್ಲಿ ವಿವಾಹಿತ ಮಹಿಳೆಯರು ಉಪವಾಸ ಆಚರಿಸುತ್ತಾರೆ. ಅವರ ನಂಬಿಕೆಗಳ ಪ್ರಕಾರ, ಈ ಉಪವಾಸವು ತಮ್ಮ ಗಂಡಂದಿರು ದೀರ್ಘಕಾಲ ಬದುಕಲಿ ಎಂಬ ಪ್ರಾರ್ಥನೆಯನ್ನು ಬಲಪಡಿಸುವ ಪ್ರತಿಜ್ಞೆಯಾಗಿದೆ.

ಹಿಂದೂ ಪುರಾಣಗಳಲ್ಲಿದಂತಕಥೆಯ ದಂಪತಿಗಳಾದ ಸಾವಿತ್ರಿ ಮತ್ತು ಸತ್ಯವಾನ್ ಅವರ ಅರ್ಧದಷ್ಟು ಸಾವಿತ್ರಿಯಿಂದ ಈ ದಿನ ಮತ್ತು ಉಪವಾಸಕ್ಕೆ ಈ ಹೆಸರು ಬಂದಿದೆ. ಸಾವಿತ್ರಿ ಮತ್ತು ಸತ್ಯವಾನ್ ಬಗ್ಗೆ ಅನೇಕ ಕಥೆಗಳಿವೆ, ಆದರೆ ಅತ್ಯಂತ ಹಳೆಯ ಕಥೆಗಳು ಸಂಸ್ಕೃತ ಮಹಾಕಾವ್ಯವಾದ ಮಹಾಭಾರತದಿಂದ ಬಂದಿವೆ. ಕಥೆಗಳ ಪ್ರಕಾರ, ಸಾವಿತ್ರಿ ಮದ್ರ ಸಾಮ್ರಾಜ್ಯದ ರಾಜ ಅಶ್ವಪತಿಗೆ ಜನಿಸಿದಳು, ಅದು ಬಹುಶಃ ಆಧುನಿಕ ಭಾರತದ ಮಹಾರಾಷ್ಟ್ರದಲ್ಲಿತ್ತು. ಸಾವಿರಿತಿ ಕುರುಡು ರಾಜ ದ್ಯುಮತ್ಸೇನನ ಮಗನಾದ ಸತ್ಯವಾನ್‌ನನ್ನು ತನ್ನ ಪತಿಯಾಗಿ ಆರಿಸಿಕೊಳ್ಳುತ್ತಾಳೆ. ಸತ್ಯವಾನ್ ಒಂದು ವರ್ಷದಲ್ಲಿ ಸಾಯುವ ಉದ್ದೇಶ ಹೊಂದಿದ್ದಾನೆ ಎಂದು ಸಾವಿತ್ರಿಯ ತಂದೆಗೆ ತಿಳಿಸಲಾಯಿತು. ಅವನು ಅವಳನ್ನು ಇನ್ನೊಬ್ಬ ಪುರುಷನನ್ನು ಆಯ್ಕೆ ಮಾಡಲು ಮನವೊಲಿಸಲು ಪ್ರಯತ್ನಿಸುತ್ತಾನೆ, ಆದರೆ ಅವಳು ನಿರಾಕರಿಸುತ್ತಾಳೆ. ಸತ್ಯವಾನ್‌ನ ಭವಿಷ್ಯವಾಣಿಯ ಸಾವಿಗೆ ಮೂರು ದಿನಗಳ ಮೊದಲು ಸಾವಿತ್ರಿ ಆಚರಿಸಿದ ಅದೇ ಉಪವಾಸವನ್ನು ಈ ಉಪವಾಸ ಆಧರಿಸಿದೆ.ಸಾವಿನ ದೇವತೆ ಯಮ, ಸತ್ಯವಾನನ ಆತ್ಮವನ್ನು ತೆಗೆದುಕೊಂಡಂತೆ ಕಾಣಿಸಿಕೊಂಡಾಗ, ಅವನು ಸಾವಿತ್ರಿಯ ಉಪವಾಸ ಮತ್ತು ಅವಳ ವಾಕ್ಚಾತುರ್ಯದಿಂದ ಪ್ರಭಾವಿತನಾಗುತ್ತಾನೆ. ಸಾವಿತ್ರಿ ಬುದ್ಧಿವಂತಿಕೆಯಿಂದ ಪ್ರಭಾವಿತನಾದ ಸಾವಿನ ದೇವರು ಅವಳಿಗೆ ಸತ್ಯವಾನನ ಜೀವವನ್ನು ಬಯಸಲು ಅವಕಾಶ ನೀಡುತ್ತಾನೆ ಮತ್ತು ಯಮ ಅವನ ಜೀವವನ್ನು ಮರಳಿ ನೀಡುತ್ತಾನೆ.

# ಬಾಂಗ್ಲಾದೇಶವನ್ನ ಅಮೆರಿಕಕ್ಕೆ ಮಾರಾಟ ಮಾಡಿದ್ದಾರೆ ಯೂನಸ್ ವಿರುದ್ಧ ಶೇಖ್ ಹಸೀನಾ ಬಾಂಬ್



**ಢಾಕಾ:** ಸರ್ಕಾರದ ಮುಖ್ಯಸ್ಥ ಮುಹಮ್ಮದ್ ಯೂನಸ್ ಬಾಂಗ್ಲಾದೇಶವನ್ನ ಅಮೆರಿಕಕ್ಕೆ ಮಾರಾಟ ಮಾಡಿದ್ದಾರೆ ಅಂತ ಬಾಂಗ್ಲಾದ ಮಾಜಿ ಪ್ರಧಾನಿ ಶೇಖ್ ಹಸೀನಾ ಗಂಭೀರ ಆರೋಪ ಮಾಡಿದ್ದಾರೆ. ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಅವಾಮಿ ಲೀಗ್ ಪಕ್ಷದ ಮೇಲಿನ ನಿಷೇಧವನ್ನ ತೀವ್ರವಾಗಿ ಖಂಡಿಸಿದ್ದಾರೆ. ಅಲ್ಲದೇ ಇದು ಸಂವಿಧಾನ ಬಾಹಿರ ಎಂದು ಹೇಳಿದ್ದಾರೆ. ಸರ್ಕಾರದ ಮುಖ್ಯಸ್ಥ ಯೂನಸ್ ಉಗ್ರಗಾಮಿ ಗುಂಪುಗಳ ಸಹಾಯದಿಂದ ಬಾಂಗ್ಲಾದೇಶ ಸರ್ಕಾರವನ್ನ ನಿಯಂತ್ರಣಕ್ಕೆ ತೆಗೆದುಕೊಂಡಿದ್ದಾರೆ. ನಮ್ಮ ಸರ್ಕಾರ ಅಂದು ಭಯೋತ್ಪಾದಕರ ನಿಯಂತ್ರಣಕ್ಕೆ ಹೋರಾಡಿತ್ತು. ಆದರಿಂದು ಭಯೋತ್ಪಾದಕರಿಗೆ ಸರ್ಕಾರದ ನಿಯಂತ್ರಣವನ್ನ ಯೂನಸ್ ಆಡಳಿತ ನೀಡಿದೆ. ಈ ಹಿಂದೆ ನನ್ನ ತಂದೆ ಸೇಂಟ್ ಮಾರ್ಟಿನ್ ದ್ವೀಪಕ್ಕಾಗಿ ಅಮೆರಿಕದ ಡಿಮ್ಯಾಂಡ್‌ಗಳನ್ನ ಒಪ್ಪಿರಲಿಲ್ಲ. ಅದಕ್ಕಾಗಿ ತಮ್ಮ ಪ್ರಾಣವನ್ನೇ ಬಿಟ್ಟರು ಹೊರತು ಅಧಿಕಾರಕ್ಕಾಗಿ ದೇಶವನ್ನು ಮಾರುವ ಬಗ್ಗೆ ಯೋಚಿಸಿರಲಿಲ್ಲ ಎಂದು ತೀವ್ರ ವಾಗ್ದಾಳಿ ನಡೆಸಿದ್ದಾರೆ. ಇದೇ ವೇಳೆ ಬಾಂಗ್ಲಾದೇಶದ ಸ್ವಾತಂತ್ರ್ಯಕ್ಕಾಗಿ ಇಡೀ ದೇಶ ತಮ್ಮ ತಂದೆಯವರೊಂದಿಗೆ ಶಸ್ತ್ರಾಸ್ತ್ರ ಹಿಡಿದು ಹೋರಾಟ ನಡೆಸಿದ ಕ್ಷಣಗಳನ್ನು ಹಸೀನಾ ನೆನಪಿಸಿಕೊಂಡರು. ಆ ದೇಶದ ಒಂದಿಂಚು ಮಣ್ಣನ್ನೂ ಬಿಟ್ಟುಕೊಡುವ ಉದ್ದೇಶ ಯಾರೊಬ್ಬರಿಗೂ ಇರಲಿಲ್ಲ. ಆದರೆ ಇಂದಿನ ಸ್ಥಿತಿ ನಿಜಕ್ಕೂ ದುರದೃಷ್ಟಕರ, ದೇಶವನ್ನೇ ಮಾರಾಟ ಮಾಡುವ ವ್ಯಕ್ತಿ ಅಧಿಕಾರಕ್ಕೆ ಬಂದಿದ್ದಾರೆ ಎಂದು ಬೇಸರ ಹೊರಹಾಕಿದ್ದಾರೆ. ಅಂದು ನಮ್ಮ ಸರ್ಕಾರ ಬಾಂಗ್ಲಾದೇಶದ ಜನರ ರಕ್ಷಣೆಗೆ ನಿಂತಿತ್ತು. ಒಂದೇ ಒಂದು ಉಗ್ರರ ದಾಳಿಯ ನಂತರ ಕಠಿಣ ಕ್ರಮ ತೆಗೆದುಕೊಂಡಿದ್ದೆವು. ಹಲವರನ್ನು ಬಂಧಿಸಿ ಜೈಲಿಗಟ್ಟಿದ್ದೆವು. ಆದರಿಂದು ದೇಶದ ಜೈಲುಗಳು ಖಾಲಿಯಾಗಿವೆ. ಬಂಧನದಲ್ಲಿದ್ದ ಉಗ್ರರನ್ನ ಬಿಡುಗಡೆ ಮಾಡಲಾಗಿದೆ. ಹಾಗಾಗಿ ಬಾಂಗ್ಲಾ ಸರ್ಕಾರದಲ್ಲಿ ಈಗ ಉಗ್ರರ ಆಳ್ವಿಕೆ ಶುರುವಾಗಿದೆ ಎಂದು ವಿಷಾದ ವ್ಯಕ್ತಪಡಿಸಿದ್ದಾರೆ.

# ಮುನೀರ್‌ಗೆ ಬೆಂಕಿ ಫೋಟೋ ಗಿಫ್ಟ್ ನೀಡಿ ಜಗತ್ತಿನ ಮುಂದೆ ಮತ್ತೆ ಬೆತ್ತಲಾದ ಪಾಕ್!

**ಇಸ್ಲಾಮಾಬಾದ್:** ಸದಾ ಸುಳ್ಳು ಹೇಳುವ ಮೂಲಕ ಜಗತ್ತಿನ ಮುಂದೆ ಬೆತ್ತಲಾಗುವ ಪಾಕಿಸ್ತಾನ ಈಗ ಮತ್ತೆ ಸುಳ್ಳು ಹೇಳಿ ನಗೆಪಾಟಲಿಗೆ ಗುರಿಯಾಗಿದೆ.

ಭಾರತದ ಜೊತೆ ಕರೆ ಮಾಡಿ ಕದನ ವಿರಾಮ ಘೋಷಣೆ ಮಾಡುವಂತೆ ಬೇಡಿಕೊಂಡ ಬಳಿಕ ಪಾಕಿಸ್ತಾನ ಈಗ ಸಮರವನ್ನು ಗೆದ್ದಂತೆ ಪೋಸ್ ನೀಡಿ ಸಂಭ್ರಮಿಸುತ್ತಿದೆ. ಈ ಸಂಭ್ರಮಾಚರಣೆಯ ಸಂದರ್ಭದಲ್ಲಿ ಪಾಕ್ ಪ್ರಧಾನಿ ಶಹಬಾಜ್ ಷರೀಫ್, ಪಾಕ್ ಸೇನಾ ಮುಖ್ಯಸ್ಥ ಅಸಿಮ್ ಮುನೀರ್‌ಗೆ ನೀಡಿದ ಗಿಫ್ಟ್ ಫೋಟೋ ಈಗ ಸಾಮಾಜಿಕ ದೊಡ್ಡ ಸದ್ದು ಮಾಡುತ್ತಿದೆ.

ಪಾಕಿಸ್ತಾನದ ಅತ್ಯುನ್ನತ ಮಿಲಿಟರಿ ಶ್ರೇಣಿ ಫೀಲ್ಡ್ ಮಾರ್ಷಲ್ ಹುದ್ದೆಗೆ ಬಡ್ತಿ ಪಡೆದ ಹಿನ್ನೆಲೆಯಲ್ಲಿ ಅಸಿಮ್ ಮುನೀರ್ ಪಾಕಿಸ್ತಾನದ ರಾಜಕಾರಣಿಗಳಿಗಾಗಿ ಔತಣಕೂಟವನ್ನು ಆಯೋಜಿಸಿದ್ದರು. ಈ ವೇಳೆ ಶಹಬಾಜ್ ಷರೀಫ್ ದೀರ್ಘ ವ್ಯಾಪ್ತಿಯ ರಾಕೆಟ್ ಲಾಂಚರ್‌ನಿಂದ ಕ್ಷಿಪಣಿ ಚಿಮ್ಮುತ್ತಿರುವ ಫೋಟೋವನ್ನು ಗಿಫ್ಟ್ ನೀಡಿದ್ದರು.

ಶಹಬಾಜ್ ಷರೀಫ್ ಗಿಫ್ಟ್ ನೀಡುತ್ತಿರುವ ಫೋಟೋವನ್ನು ಪಾಕಿಸ್ತಾನ ಖಖಖ ಹಂಚಿಕೊಂಡಿತ್ತು. ಈ ಫೋಟೋ ಹಂಚಿಕೊಂಡ ಬೆನ್ನಲ್ಲೇ ನೆಟ್ಟಿಗರು ಈ ಫೋಟೋದ ಸತ್ಯಾಸತ್ಯತೆ ಪರಿಶೀಲನೆ ಇಳಿದಾಗ ಚೀನಾ ಸೇನೆಯ ಫೋಟೋ ಎನ್ನುವುದು ದೃಢಪಟ್ಟಿದೆ. 2017 ರಲ್ಲಿ ಚೀನಾ ಪರೀಕ್ಷೆ ಮಾಡಿದ್ದ ಫೋಟೋವನ್ನು ಎಡಿಟ್ ಮಾಡಿ ಗಿಫ್ಟ್ ನೀಡಿರುವ ವಿಚಾರ ಬೆಳಕಿಗೆ ಬಂದಿದೆ. ಈ ವಿಚಾರ ಬೆಳಕಿಗೆ ಬಂದ ಬೆನ್ನಲ್ಲೇ ನೆಟ್ಟಿಗರು ಪಾಕಿಸ್ತಾನವನ್ನು ಫುಲ್ ಟ್ರೋಲ್ ಮಾಡಲು ಆರಂಭಿಸಿದ್ದಾರೆ.

ವಿಜಯೋತ್ಸವ ಆಚರಿಸಲು ಪಾಕಿಸ್ತಾನಕ್ಕೆ ಯಾವುದೇ ಫೋಟೋ ಸಿಕ್ಕಿಲ್ಲ. ಈ ಕಾರಣಕ್ಕೆ ಚೀನಾ ಸೇನೆಯ ಫೋಟೋವನ್ನು ಎಡಿಟ್ ಮಾಡಿ ಗಿಫ್ಟ್ ನೀಡಿದ್ದಾರೆ ಎಂದು ನೆಟ್ಟಿಗರು ಕಮೆಂಟ್ ಮಾಡಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಈಗ ಈ ಫೋಟೋ ವೈರಲ್ ಆಗಿದೆ.

# ಪ್ರೇಮಸೌಧ ತಾಜ್ ಮಹಲ್ ಸ್ಫೋಟಿಸುವುದಾಗಿ ಇಮೇಲ್ ಮೂಲಕ ಬೆದರಿಕೆ

**ಆಗ್ರಾ:** ಇಲ್ಲಿನ ಪ್ರವಾಸೋದ್ಯಮ ಇಲಾಖೆಯ ಇಮೇಲ್‌ಗೆ ಬೆದರಿಕೆಯ ಸಂದೇಶವೊಂದು ಬಂದಿದೆ. ತಾಜ್ ಮಹಲ್ ಒಳಗೆ ಆರ್‌ಡಿಎಕ್ಸ್ ಬಾಂಬ್ ಇಟ್ಟಿದ್ದು, ಅದನ್ನು ಸ್ಫೋಟಿಸುವುದಾಗಿ ದುಷ್ಕರ್ಮಿಗಳು ಬೆದರಿಕೆ ಹಾಕಿರುವ ಬಗ್ಗೆ ಅಧಿಕಾರಿಗಳು ತಿಳಿಸಿದ್ದಾರೆ. ಇದಕ್ಕೆ ಸಂಬಂಧಿಸಿದಂತೆ ಪೊಲೀಸರು ಎಫ್‌ಐಆರ್ ದಾಖಲಿಸಿಕೊಂಡಿದ್ದಾರೆ.17ನೇ ಶತಮಾನದಲ್ಲಿ ಮಾರ್ಬಲ್ ಶಿಲೆಯಿಂದ ಕಟ್ಟಲ್ಪಟ್ಟಿರುವ ಈ ಪ್ರೇಮಸೌಧದ ಒಳಗೆ ಆರ್‌ಡಿಎಕ್ಸ್ ಮತ್ತು ಐಇಡಿ ಇಟ್ಟಿದ್ದು, ಐತಿಹಾಸಿಕ ಕಟ್ಟಡವನ್ನು ಸ್ಫೋಟಿಸುವುದಾಗಿ ಶನಿವಾರವೇ ಬೆದರಿಕೆ ಸಂದೇಶ ಬಂದಿದೆ ಎಂದು ಅವರು ಭಾನುವಾರ ಮಾಹಿತಿ ನೀಡಿದ್ದಾರೆ. ಈ ಕುರಿತು ಮಾತನಾಡಿರುವ ತಾಜ್ ಭದ್ರತಾ ವಿಭಾಗದ ಎಸಿಪಿ ಸಯ್ಯದ್ ಅರಿಬ್ ಅಹ್ಮದ್, ಪ್ರವಾಸಿಗರಿಗೆ ಯಾವುದೇ ತೊಂದರೆ ಆಗದಂತೆ ಶೋಧ ಕಾರ್ಯ ನಡೆಸಲಾಯಿತು. ಸ್ಥಳೀಯ ಸೈಬರ್ ಕ್ರೈಮ್ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ. ಬೆದರಿಕೆ ಇಮೇಲ್ ಬಂದಿರುವುದು ನಿಜ ಎಂದಿದ್ದಾರೆ. ತಾಜ್ ಮಹಲ್ ಸ್ಫೋಟಿಸುವ ಬಗ್ಗೆ ಇದೇ ರೀತಿ ಕೇರಳ ಪ್ರವಾಸೋದ್ಯಮ ಇಲಾಖೆಗೂ ಬೆದರಿಕೆ ಸಂದೇಶ ಬಂದಿದೆ. ಅಲ್ಲಿನ ಪೊಲೀಸರನ್ನು ಸಂಪರ್ಕಿಸುತ್ತಿದ್ದು, ಈ ಕುರಿತು ಚರ್ಚಿಸಲಾಗುತ್ತಿದೆ. ವಿಪಿಎನ್ ಬಳಸಿ ಇಮೇಲ್ ಸಂದೇಶ ಕಳಿಸಲಾಗಿದೆ. ಅದನ್ನು ಕಳಿಸಿದವರ ಪತ್ತೆಹಚ್ಚಲು ತನಿಖೆ ಮುಂದುವರಿದಿದೆ ಎಂದು ತಿಳಿಸಿದ್ದಾರೆ.



# ಭಾರತ-ಪಾಕಿಸ್ತಾನ ಕದನ ವಿರಾಮದಲ್ಲಿ 3ನೇ ವ್ಯಕ್ತಿಯ ಪಾತ್ರವಿಲ್ಲ : ಮೋದಿ



**ನವದೆಹಲಿ:** ಭಾರತ ಪಾಕಿಸ್ತಾನ ನಡುವಿನ ಕದನ ವಿರಾಮದಲ್ಲಿ ಮೂರನೇ ವ್ಯಕ್ತಿಯ ಪಾತ್ರವಿಲ್ಲ ಎಂದು ಎನ್‌ಡಿಎ ನಾಯಕರಿಗೆ ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆಂದು ಉನ್ನತ ಮೂಲಗಳು ತಿಳಿಸಿರುವುದಾಗಿ ವರದಿಯಾಗಿದೆ.

ದೆಹಲಿಯಲ್ಲಿ ನಡೆದ ಬಿಜೆಪಿ ನೇತೃತ್ವದ ಎನ್‌ಡಿಎ ಆಡಳಿತ ರಾಜ್ಯಗಳ ಮುಖ್ಯಮಂತ್ರಿಗಳು ಮತ್ತು ಉಪಮುಖ್ಯಮಂತ್ರಿಗಳ ಉನ್ನತಮಟ್ಟದ ಸಭೆಯಲ್ಲಿ ಪ್ರಧಾನಿ ಮೋದಿ ಆಪರೇಷನ್ ಸಿಂಧೂರ ವಿಷಯ ಪ್ರಸ್ತಾಪಿಸಿದರು. ಈ ವೇಳೆ ಕದನ ವಿರಾಮ ಕೋರಿ ಪಾಕಿಸ್ತಾನವೇ ಭಾರತಕ್ಕೆ ಮನವಿ ಮಾಡಿತು. ಈ ವಿಷಯದಲ್ಲಿ ಮೂರನೇ ವ್ಯಕ್ತಿಯ ಪಾತ್ರವಿಲ್ಲ ಎಂದು ಸಭೆಯಲ್ಲಿ ತಿಳಿಸಿದ್ದಾರೆ.

ಎನ್‌ಡಿಎನ ಎಲ್ಲ ನಾಯಕರು ತಮ್ಮ ಭಾಷಣಗಳಲ್ಲಿ ಸಂಯಮ ಕಾಯ್ದುಕೊಳ್ಳುವಂತೆ ಹಾಗೂ ಅನಗತ್ಯ ಹೇಳಿಕೆ ನೀಡುವುದನ್ನು ತಪ್ಪಿಸುವಂತೆ ಸಭೆಯಲ್ಲಿ ಸಲಹೆ ನೀಡಿದ್ದಾರೆ ಎಂದು ಹೇಳಲಾಗಿದೆ.

**ಟ್ರಂಪ್ ಹೇಳಿದ್ದೇನು?:** ಭಾರತ ಮತ್ತು ಪಾಕಿಸ್ತಾನ ನಡುವಿನ ಸಮಸ್ಯೆಯನ್ನು ನಾನು ಬಗೆಹರಿಸಿದ್ದೇನೆ. ಇಡೀ ಸಮಸ್ಯೆಯನ್ನು ವ್ಯಾಪಾರದ ಮೂಲಕ ಇತ್ಯರ್ಥಪಡಿಸಿದ್ದೇನೆ. ಕದನ ವಿರಾಮ ಸಾಧ್ಯವಾಗಿದ್ದು ನನ್ನಿಂದಲೇ ಅಂತ ಹಲವು ವೇದಿಕೆಗಳಲ್ಲಿ ಬೊಬ್ಬೆ ಹೊಡೆದುಕೊಂಡಿದ್ದರು. ಕಳೆದ ಏಪ್ರಿಲ್ 22ರಂದು ಜಮ್ಮು ಮತ್ತು ಕಾಶ್ಮೀರದ ಬೈಸರನ್ ಕಣಿವೆಯಲ್ಲಿ ನಡೆದ ಭಯೋತ್ಪಾದಕ ದಾಳಿಗೆ ಪ್ರತಿಯಾಗಿ ಆಪರೇಷನ್ ಸಿಂಧೂರ ಕಾರ್ಯಾಚರಣೆ ಮೂಲಕ ಭಾರತ ಪ್ರತೀಕಾರ ತೀರಿಸಿಕೊಂಡಿತ್ತು. ಮೇ 7-8ರ ಮಧ್ಯರಾತ್ರಿ ಪಾಕ್ ಮತ್ತು ಪಾಕ್ ಆಕ್ರಮಿತ ಕಾಶ್ಮೀರದ 9 ಉಗ್ರ ನೆಲೆಗಳನ್ನು ಧ್ವಂಸಗೊಳಿಸಿತ್ತ. ಇದರಿಂದ ಕುತಂತ್ರ ಹೂಡಿದ್ದ ಪಾಕ್ ಭಾರತದ ಸೇನಾನೆಲೆಗಳು ಸೇರಿದಂತೆ ಹಲವು ನಗರಗಳ ಮೇಲೆ ಮಿಸೈಲ್ ದಾಳಿಗೆ ಯತ್ನಿಸಿತ್ತು. ಈ ವೇಳೆ ಪಾಕ್‌ನ ಎಲ್ಲ ದಾಳಿಯನ್ನು ಭಾರತದ ವಾಯು ರಕ್ಷಣಾ ವ್ಯವಸ್ಥೆ ವಿಫಲಗೊಳಿಸಿತ್ತು. ಇದಾದ ಬಳಿಕ ಪಾಕ್‌ನ ಹಲವು ವಾಯುನೆಲೆಗಳು ಮತ್ತು ರೆಡಾರ್ ಕೇಂದ್ರಗಳ ಮೇಲೆ ಭಾರತ ಕ್ಷಿಪಣಿ ದಾಳಿ ನಡೆಸಿ ಧ್ವಂಸಗೊಳಿಸಿತ್ತು.

# ನಾಲ್ಕು ರಾಜ್ಯಗಳ 5 ವಿಧಾನಸಭಾ ಕ್ಷೇತ್ರಗಳಿಗೆ ಉಪಚುನಾವಣೆ ಘೋಷಣೆ



**ನವದೆಹಲಿ:** ಗುಜರಾತ್, ಕೇರಳ, ಪಶ್ಚಿಮ ಬಂಗಾಳ ಮತ್ತು ಪಂಜಾಬ್‌ನ ಐದು ವಿಧಾನಸಭಾ ಕ್ಷೇತ್ರಗಳಿಗೆ ಉಪಚುನಾವಣಾ ದಿನಾಂಕವನ್ನು ಭಾರತೀಯ ಚುನಾವಣಾ ಆಯೋಗ ಭಾನುವಾರ ಘೋಷಣೆ ಮಾಡಿದೆ.

ವಿಧಾನಸಭಾ ಸದಸ್ಯರ ನಿಧನ ಮತ್ತು ರಾಜೀನಾಮೆಯ ಹಿನ್ನೆಲೆಯಲ್ಲಿ ವಿವಿಧ ರಾಜ್ಯಗಳ 5 ಸ್ಥಾನಗಳಿಗೆ ಉಪಚುನಾವಣೆ ನಡೆಯಲಿದೆ. ಇದರಲ್ಲಿ ಗುಜರಾತ್‌ನ ಎರಡು ಸ್ಥಾನಗಳು (ಕಾಡಿ ಮತ್ತು ವಿಸಾವದರ್) ಮತ್ತು ಕೇರಳ (ನಿಲಂಬೂರ್), ಪಶ್ಚಿಮ ಬಂಗಾಳ (ಕಾಲಿಯಾಗಂಜ್) ಮತ್ತು ಪಂಜಾಬ್ (ಲುಧಿಯಾನ) ಗಳಲ್ಲಿ ತಲಾ ಒಂದು ಸ್ಥಾನಗಳಿಗೆ ಉಪಚುನಾವಣೆ ಜರುಗಲಿದೆ.

ಆಯೋಗ ಘೋಷಿಸಿದ ವೇಳಾಪಟ್ಟಿ ಪ್ರಕಾರ, ಜೂನ್ 19ರಂದು ಮತದಾನ ನಡೆಯಲಿದೆ. ಮೇ 26ರಂದು ಅಧಿಸೂಚನೆ ಹೊರಬೀಳಲಿದೆ. ನಾಮಪತ್ರ ಸಲ್ಲಿಸಲು ಜೂನ್ 2 ಕೊನೆಯ ದಿನಾಂಕವಾಗಿದ್ದು, ಅದರ ಮರುದಿನ ಪರಿಶೀಲನೆ ನಡೆಯಲಿದೆ. ಉಮೇದುವಾರಿಕೆ ಹಿಂಪಡೆಯಲು ಜೂನ್ 5 ಅಂತಿಮ ದಿನ. ಹಾಗೆಯೇ, ಮತ ಎಣಿಕೆಯು ಜೂನ್ 23ರಂದು ನಿಗದಿಯಾಗಿದೆ. ಚುನಾವಣಾ ಪ್ರಕ್ರಿಯೆ ಕೊನೆಗೊಳ್ಳುವ ದಿನ ಜೂನ್ 25 ಎಂದು ಆಯೋಗ ಹೇಳಿದೆ. ಎಲ್ಲಾ ಮತಗಟ್ಟೆಗಳಲ್ಲಿ ಉಪಚುನಾವಣೆಗಳಲ್ಲಿ ಇವಿಎಂಗಳು ಮತ್ತು ವಿವಿಪ್ಯಾಟ್‌ಗಳನ್ನು ಬಳಸಲು ನಿರ್ಧರಿಸಲಾಗಿದೆ. ಅಗತ್ಯ ಇವಿಎಂಗಳು ಮತ್ತು ವಿವಿಪ್ಯಾಟ್‌ಗಳನ್ನು ಒದಗಿಸುವ ನಿಟ್ಟಿನಲ್ಲಿ ಕ್ರಮ ವಹಿಸಲಾಗುವುದು. ಸುಗಮ ಮತದಾನ ನಡೆಸಲು ಎಲ್ಲಾ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ಎಂದು ಆಯೋಗವು ಮಾಹಿತಿ ನೀಡಿದೆ. ಚುನಾವಣೆ ನಡೆಯುವ ವಿಧಾನಸಭಾ ಕ್ಷೇತ್ರಗಳು ಹಾಗೂ ಆಯಾ ಜಿಲ್ಲೆಗಳಲ್ಲಿ ತಕ್ಷಣದಿಂದ ಮಾದರಿ ನೀತಿ ಸಂಹಿತೆ (ಎಂಸಿಸಿ) ಜಾರಿಗೆ ಬರಲಿದೆ ಎಂದು ಕೇಂದ್ರ ಚುನಾವಣಾ ಆಯೋಗವು ತಿಳಿಸಿದೆ.

# ಕೇರಳದಲ್ಲಿ ಲೈಬೀರಿಯನ್ ಹಡಗು ಮುಳುಗಡೆ



**ಕೊಚ್ಚಿ:** ತೈಲ ಸೇರಿದಂತೆ ಅಪಾಯಕಾರಿ ವಸ್ತುಗಳುಳ್ಳ 640 ಕಂಟೇನರ್‌ಗಳನ್ನು ಹೊಂದಿದ್ದ ಲೈಬೀರಿಯನ್ ಸರಕು ಸಾಗಣೆ ಹಡಗು ಕೇರಳ ಸಮೀಪದ ಅರಬ್ಬೀ ಸಮುದ್ರದಲ್ಲಿ ಮುಳುಗಿದೆ. ಇದರಲ್ಲಿದ್ದ ಎಲ್ಲ 24 ಸಿಬ್ಬಂದಿಯನ್ನು ಭಾರತೀಯ ನೌಕಾಪಡೆ ರಕ್ಷಿಸಿದೆ.

ಶನಿವಾರವೇ ಹಡಗು ಅಪಾಯಕ್ಕೆ ಸಿಲುಕಿದೆ. ಭಾರತದ ಐಎನ್‌ಎಸ್ ಸುಜಾತಾ ನೌಕೆಯಿಂದ ಕರಾವಳಿ ಕಾವಲು ಪಡೆಯು ರಕ್ಷಣಾ ಕಾರ್ಯಾಚರಣೆ ನಡೆಸಿತು. ನಿನ್ನೆಯ 21 ಸಿಬ್ಬಂದಿಯನ್ನು ರಕ್ಷಿಸಲಾಗಿತ್ತು. ಇಂದು ಮತ್ತೆ ಮೂವರನ್ನು ಮುಳುಗಿದ ಹಡಗಿನಿಂದ ಹೊರತರಲಾಗಿದೆ. ಲೈಬೀರಿಯನ್ ಹಡಗು ಸಂಪೂರ್ಣವಾಗಿ ಸಮುದ್ರದಲ್ಲಿ ಮುಳುಗಿದೆ ಎಂದು ಭಾರತೀಯ ಅಧಿಕಾರಿಗಳು ತಿಳಿಸಿದ್ದಾರೆ.

641 ಕಂಟೇನರ್‌ಗಳು ನೀರಿನಲ್ಲಿ ಮುಳುಗಿವೆ. ಅದರಲ್ಲಿ 13 ಕಂಟೇನರ್‌ಗಳು ಅಪಾಯಕಾರಿ ವಸ್ತುಗಳನ್ನು ಹೊಂದಿವೆ. ಇದು ಪರಿಸರ ಹಾನಿಯ ಭೀತಿ ಸೃಷ್ಟಿಸಿದೆ. ಮುಳುಗಿದ ಕಂಟೇನರ್‌ಗಳು ದಡಕ್ಕೆ ಬಂದು ತಲುಪುವ ಸಾಧ್ಯತೆ ಇದೆ. ಅವುಗಳು ಕಂಡುಬಂದಲ್ಲಿ ಮಾಹಿತಿ ನೀಡಲು ತೀರ ಪ್ರದೇಶದ ಜನರಿಗೆ ಎಚ್ಚರಿಕೆ ನೀಡಲಾಗಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.

ಲೈಬೀರಿಯಾ ಧ್ವಜ ಹೊತ್ತಿದ್ದ ಹಡಗು ವಿಝಿಜಂನಿಂದ ಕೊಚ್ಚಿಗೆ ಶುಕ್ರವಾರ ಪ್ರಯಾಣ ಬೆಳೆಸಿತ್ತು. ಶನಿವಾರ ಅವಘಡ ಸಂಭವಿಸಿದೆ. ಕೊಚ್ಚಿ ಕರಾವಳಿಯಿಂದ ನೈಋತ್ಯಕ್ಕೆ 38 ನಾಟಿಕಲ್ ಮೈಲಿಗಳಷ್ಟು ದೂರದಲ್ಲಿ ಅರಬ್ಬೀ ಸಮುದ್ರದಲ್ಲಿ ಹಡಗು ಅಪಾಯಕ್ಕೀಡಾಗಿದೆ.

# ನರಭಕ್ಷಕ ರಾಜಾ ಕೊಲಂದರ್‌ಗೆ ಜೀವಾವಧಿ ಶಿಕ್ಷೆ

**ದೆಹಲಿ:** ನರಭಕ್ಷಕ ಕೊಲಂದರ್ ಮಂದಹಾಸ ಬೀರುತ್ತಿದ್ದ. ಆತನಲ್ಲಿ ಯಾವುದೇ ಪಶ್ಚಾತ್ತಾಪ ಅಥವಾ ಭಯ ಇರಲಿಲ್ಲ ಎಂದು ತಿಳಿದುಬಂದಿದೆ.14 ವ್ಯಕ್ತಿಗಳ ಕೊಲೆ ಪ್ರಕರಣದಲ್ಲಿ ಆರೋಪಿಯಾಗಿರುವ ಆರೋಪಿ ನರಭಕ್ಷಕ ಎಂಬುದು ಆಘಾತಕಾರಿ ಸಂಗತಿ. ಈತನ ಅಪರಾಧ ಹಿನ್ನೆಲೆಯು ಕ್ರೂರವಾಗಿದ್ದು, ಈತನ ಸರಣಿ ಕೊಲೆಗಳಲ್ಲಿ ವಾಚ್ ರಾಜ್ ಎಂಬಾತ ನೆರವು ನೀಡುತ್ತಿದ್ದ. ರಾಜಾ ಕೊಲಂದರ್ ನರಭಕ್ಷಕ ಎಂಬುದು ಆಘಾತಕಾರಿ ಸಂಗತಿ. ವ್ಯಕ್ತಿಗಳನ್ನು ಅಪಹರಿಸಿ, ಕೊಲೆ ಮಾಡಿ ಅವರ ತಲೆಗಳನ್ನು ಕಡಿದು ತಿನ್ನುತ್ತಿದ್ದ. ಅಲ್ಲದೇ, ಅದರಿಂದ ಸೂಪ್ ತಯಾರಿಸಿ ಕುಡಿಯುತ್ತಿದ್ದರು ಎಂಬ ಆರೋಪವೂ ಇದೆ. ಮಾನವನ ತಲೆಯ ಸೂಪ್ ಕುಡಿಯುವುದರಿಂದ ಮೆದುಳು ಚುರುಕಾಗುತ್ತದೆ ಎಂದು ಈ ನರಭಕ್ಷಕರು ನಂಬಿದ್ದರು. ಪ್ರಯಾಗ್‌ರಾಜ್‌ನ ಪತ್ರಕರ್ತ ಧೀರೇಂದ್ರ ಸಿಂಗ್ ಅವರ ಕೊಲೆ ಪ್ರಕರಣದಲ್ಲಿ ಕೊಲಂದರ್ ವಿರುದ್ಧ ಮೊದಲ ಎಫ್‌ಐಆರ್ ದಾಖಲಾಗಿದೆ. ಪೊಲೀಸರು ಪ್ರಕರಣದ ತನಿಖೆ ಆರಂಭಿಸಿದಾಗ ಕೊಲಂದರ್ ಸರಣಿ ಕೊಲೆ ಬೆಳಕಿಗೆ ಬಂದಿತ್ತು. ಧೀರೇಂದ್ರ ಸಿಂಗ್ ಹತ್ಯೆಯ ತನಿಖೆಗಾಗಿ ಪೊಲೀಸರು ಕೊಲಂದರ್ ತೋಟದ ಮನೆಗೆ ಹೋದಾಗ, ಅಲ್ಲಿ ಹಲವಾರು ಮಾನವ ತಲೆಬುರುಡೆಗಳು ಕಂಡುಬಂದಿದ್ದವು. ಇವುಗಳನ್ನು ವಶಪಡಿಸಿಕೊಂಡು ನರಭಕ್ಷಕನನ್ನು ವಿಚಾರಿಸಿದಾಗ, ಸತ್ಯ ಹೊರಬಂದಿತ್ತು.

# ಟರ್ಕಿಗೆ ನೆರವು: ಶಶಿ ತರೂರ್ ಟೀಕೆ

**ಟರ್ಕಿ:** ಟರ್ಕಿಯಾದಲ್ಲಿ 2023ರಲ್ಲಿ ಸಂಭವಿಸಿದ್ದ ಭೀಕರ ಭೂಕಂಪದ ಸಂದರ್ಭ ಕೇರಳ ಸರಕಾರ ಟರ್ಕಿಗೆ ನೆರವು ನೀಡಿರುವುದನ್ನು ಕಾಂಗ್ರೆಸ್ ಸಂಸದ ಶಶಿ ತರೂರ್ ಟೀಕಿಸಿದ್ದಾರೆ. ತುರ್ಕಿಯಾಗೆ ಕೇರಳ 10 ಕೋಟಿ ರೂ. ನೆರವು ನೀಡಿದೆ ಎಂಬ ವರದಿಯನ್ನು ಉಲ್ಲೇಖಿಸಿದ ತರೂರ್, ಎರಡು ವರ್ಷದ ಬಳಿಕ ಟರ್ಕಿಯ ವರ್ತನೆ ಗಮನಿಸಿದರೆ, ತಾನು ಮಾಡಿದ ತಪ್ಪು ದಾನದ ಬಗ್ಗೆ ಕೇರಳದ ಎಡರಂಗ ಸರಕಾರ ಈಗ ಯೋಚಿಸುವ ಕಾಲ ಬಂದಿದೆ . ಈ 10 ಕೋಟಿ ರೂಪಾಯಿಯನ್ನು ಒಳ್ಳೆಯ ಕಾರ್ಯಕ್ಕೆ ಬಳಸಬಹುದಿತ್ತು ಎಂದು ವಯನಾಡ್‌ನ ಜನತೆ ಭಾವಿಸುತ್ತಿದ್ದಾರೆ ಎಂದರು. ಪಹಲ್ಗಾಮ್ ಭಯೋತ್ಪಾದಕರ ದಾಳಿಯ ಬಳಿಕ ಭಾರತ-ಪಾಕಿಸ್ತಾನ ಬಿಕ್ಕಟ್ಟಿನ ಸಂದರ್ಭದಲ್ಲಿ ತುರ್ಕಿಯಾ ಪಾಕಿಸ್ತಾನದ ಪರ ವಹಿಸಿತ್ತು. ತರೂರ್ ಹೇಳಿಕೆಗೆ ಪ್ರತಿಕ್ರಿಯಿಸಿರುವ ಸಿಪಿಎಂನ ಜಾನ್ ಬ್ರಿಟ್ಟಾಸ್ 'ಶಶಿ ತರೂರ್ ಬಗ್ಗೆ ನಮಗೆ ಗೌರವವಿದೆ. ಆದರೆ ಈ ಹೇಳಿಕೆ ಆಯ್ದು ಭಾಗವಾಗಿದೆ. ಭೂಕಂಪದ ಸಂದರ್ಭ ಕೇಂದ್ರ ಸರಕಾರವೂ ಟರ್ಕಿಗೆ ನೆರವಿನ ಹಸ್ತ ಚಾಚಿದ್ದನ್ನು ಅವರಿಗೆ ನೆನಪಿಸಲು ಬಯಸುತ್ತೇನೆ' ಎಂದಿದ್ದಾರೆ.



# ಇಸ್ರೇಲ್ ಕ್ಷಿಪಣಿ ದಾಳಿಯಲ್ಲಿ ಅತೀ ಕಿರಿಯ ಮಾಧ್ಯಮ ಕಾರ್ಯಕರ್ತೆ ಯಕೀನ್ ಹಮ್ಮಾದ್ ಬಲಿ



**ಗಾಝಾ :** ಇಸ್ರೇಲ್ ಕ್ಷಿಪಣಿ ದಾಳಿಯಲ್ಲಿ ಗಾಝಾದ ಅತೀ ಕಿರಿಯ ಮಾಧ್ಯಮ ಕಾರ್ಯಕರ್ತೆ 11ರ ಹರೆಯದ ಯಕೀನ್ ಹಮ್ಮಾದ್ ಮೃತಪಟ್ಟಿದ್ದಾರೆ. ಮೇ 23ರಂದು ಗಾಝಾದ ದೇರ್ ಅಲ್-ಬಲಾಹ್ ಪ್ರದೇಶದ ಅಲ್-ಬರಾಕಾ ಎಂಬಲ್ಲಿ ಇಸ್ರೇಲ್ ನಡೆಸಿದ ವಾಯುದಾಳಿಯಲ್ಲಿ ಯಕೀನ್ ಹಮ್ಮದ್ ಮನೆ ನೆಲಸಮವಾಗಿದೆ. ಈ ವೇಳೆ ಯಕೀನ್ ಜೊತೆ ಆಕೆಯ ತಾಯಿ ಮತ್ತು ಇಬ್ಬರು ಸಹೋದರರು ಕೂಡ ಮೃತಪಟ್ಟಿದ್ದಾರೆ.

ಯಕೀನ್, ವಿಶ್ವ ಚಾಂಪಿಯನ್. ನನ್ನ ಸಹೋದರಿ, ನನ್ನ ಆತ್ಮ, ಹುತಾತ್ಮಳಾದಳು, ಎಂದು ಯಕೀನ್ ನಿಧನ ಬಗ್ಗೆ ಸಹೋದರ ಮಹಮೂದ್ ದುಃಖವನ್ನು ವ್ಯಕ್ತಪಡಿಸಿದ್ದಾರೆ.

# 10 ವರ್ಷದಲ್ಲಿ ದ್ವಿಗುಣಗೊಂಡ ಜಿಡಿಪಿ!



**ದೆಹಲಿ:** ಜಾಗತಿಕ ಆರ್ಥಿಕತೆಯಲ್ಲಿ ಮತ್ತೊಂದು ಐತಿಹಾಸಿಕ ಮೈಲಿಗಲ್ಲು ಸಾಧಿಸುವ ಮೂಲಕ ಭಾರತವು ವಿಶ್ವದ ನಾಲ್ಕನೇ ಆರ್ಥಿಕತೆಯಾಗಿದೆ. ಐಎಂಎಫ್ ಪ್ರಕಾರ, ಭಾರತದ ಜಿಡಿಪಿ ಈಗ 4 ಟ್ರಿಲಿಯನ್ ಡಾಲರ್‌ಗಳನ್ನು ದಾಟಿದ್ದು, ಜಪಾನ್‌ಗಿಂತಲೂ ಮುಂದೆ ಇದೆ ಎಂದು ನೀತಿ ಆಯೋಗ ಹೇಳಿದೆ. ಈಗ ಭಾರತಕ್ಕಿಂತ ದೊಡ್ಡ ಆರ್ಥಿಕತೆ ಹೊಂದಿರುವ ದೇಶಗಳು ಕೇವಲ ಮೂರು ಮಾತ್ರ.

ನಾವು ವಿಶ್ವದ ಟಾಪ್ -5 ಆರ್ಥಿಕತೆಗಳನ್ನು ನೋಡಿದರೆ, ಅವು ಈಗ ಹೀಗಿವೆ. ಅಮೆರಿಕ ಮೊದಲ ಸ್ಥಾನದಲ್ಲಿ, ಚೀನಾ ಎರಡನೇ ಸ್ಥಾನದಲ್ಲಿ, ಜರ್ಮನಿ ಮೂರನೇ ಸ್ಥಾನದಲ್ಲಿ, ಭಾರತ ನಾಲ್ಕನೇ ಸ್ಥಾನದಲ್ಲಿ ಮತ್ತು ಜಪಾನ್ ಐದನೇ ಸ್ಥಾನದಲ್ಲಿವೆ. ಪರಿಸ್ಥಿತಿ ಸರಿಯಾಗಿ ನಡೆದರೆ, 2.5 ರಿಂದ 3 ವರ್ಷಗಳಲ್ಲಿ ಭಾರತವು ಜರ್ಮನಿಯನ್ನು ಹಿಂದಿಕ್ಕಿ ವಿಶ್ವದ ಮೂರನೇ ಆರ್ಥಿಕತೆಯಾಗಲಿದೆ ಎಂದು ನೀತಿ ಆಯೋಗ ಹೇಳಿದೆ.

10 ವರ್ಷಗಳ ಹಿಂದೆ, ಅಂದರೆ 2015 ರಲ್ಲಿ, ಭಾರತದ ಉಆಕ ಕೇವಲ 2.1 ಟ್ರಿಲಿಯನ್ ಡಾಲರ್ ಆಗಿತ್ತು. ಅದು ಇಂದು 4 ಟ್ರಿಲಿಯನ್ ಡಾಲರ್‌ಗಳನ್ನು ದಾಟಿದೆ. ಅಂದರೆ ಕಳೆದ 10 ವರ್ಷಗಳಲ್ಲಿ ಭಾರತದ ಉಆಕ ಶೇ. 100 ರಷ್ಟು ಹೆಚ್ಚಾಗಿದೆ. ಈಗ ದೊಡ್ಡ ಪ್ರಶ್ನೆ ಏನೆಂದರೆ, ದಶಕಗಳಿಂದ ಮುಂದುವರಿದ ತಂತ್ರಜ್ಞಾನ, ನಾವೀನ್ಯತೆ ಮತ್ತು ಆಟೋಮೊಬೈಲ್ ವಲಯದಲ್ಲಿ ಮುಂಚೂಣಿಯಲ್ಲಿರುವ ಜಪಾನ್ ಅನ್ನು ಆರ್ಥಿಕ ರಂಗದಲ್ಲಿ ಭಾರತ ಹೇಗೆ ಹಿಂದಿಕ್ಕಿತು ಕೇವಲ 10 ವರ್ಷಗಳಲ್ಲಿ ಭಾರತದ ಜಿಡಿಪಿ ದ್ವಿಗುಣಗೊಳ್ಳಲು ಭಾರತ ಏನು ಮಾಡಿತು

ಭಾರತದ ಆರ್ಥಿಕತೆಯಲ್ಲಿನ ಅಗಾಧ ಬೆಳವಣಿಗೆಗೆ ಸರ್ಕಾರದ ನೀತಿಗಳು ಮತ್ತು ಸುಧಾರಣೆಗಳು ಪ್ರಮುಖ ಕಾರಣ ಎಂದು ಆರ್ಥಿಕ ತಜ್ಞರು ನಂಬುತ್ತಾರೆ. ಉತ್ಪಾದನೆ, ರಫ್ತು, ಡಿಜಿಟಲೀಕರಣ, ಜಿಎಸ್‌ಟಿ ಮತ್ತು ಮೂಲಸೌಕರ್ಯದಲ್ಲಿನ ಬಂಡವಾಳ ವೆಚ್ಚದ ಮೇಲಿನ ಗಮನವು ಜಿಡಿಪಿಯನ್ನು ದಾಖಲೆಯ ಗರಿಷ್ಠ ಮಟ್ಟಕ್ಕೆ ತಳ್ಳಿದೆ. ಬ್ಯಾಂಕ್ ಆಫ್ ಬರೋಡಾದ ಮುಖ್ಯ ಅರ್ಥಶಾಸ್ತ್ರಜ್ಞ ಮದನ್ ಸಬ್ನವಿಸ್ ಮಾರ್ಚ್ 2025 ರಲ್ಲಿ ನೀಡಿದ ಸಂದರ್ಶನವೊಂದರಲ್ಲಿ, ಈ ಅಭೂತಪೂರ್ವ ಬೆಳವಣಿಗೆಯ ಹಿಂದೆ ಹಲವು ಅಂಶಗಳು ಒಟ್ಟಾಗಿ ಕೆಲಸ ಮಾಡುತ್ತಿವೆ ಎಂದಿದ್ದಾರೆ.

# 'ಭಾರತ್ ಹವಾಮಾನ ಮುನ್ಸೂಚನಾ ವ್ಯವಸ್ಥೆ' ದೇಶಕ್ಕೆ ಸಮರ್ಪಣೆ



**ದೆಹಲಿ:** ಅತ್ಯಂತ ನಿಖರವಾದ ಹಾಗೂ ಸ್ಥಳೀಕರಿಸಲಾದ ಹವಾಮಾನ ಮುನ್ಸೂಚನೆಗಳನ್ನು ಒದಗಿಸಲು ಹವಾಮಾನ ಇಲಾಖೆಗೆ ಸಾಧ್ಯವಾಗುವಂತಹ ನೂತನ 'ಭಾರತ ಮುನ್ಸೂಚನಾ ವ್ಯವಸ್ಥೆ'ಯನ್ನು ಕೇಂದ್ರ ಸರಕಾರವು ಅನಾವರಣಗೊಳಿಸಿದೆ.

ಪುಣೆ ಮೂಲದ ಭಾರತೀಯ ಉಷ್ಣವಲಯ ಹವಾಮಾನಶಾಸ್ತ್ರ ಸಂಸ್ಥೆ (ಐಐಟಿಎಂ), ದಿ ಭಾರತ್ ಮುನ್ಸೂಚನಾ ವ್ಯವಸ್ಥೆ (ಬಿಎಫ್‌ಎಸ್) ಸಂಸ್ಥೆ ಇವು 6 ಕಿ.ಮೀ. ಎತ್ತರದ ರೆಸೊಲ್ಯೂಶನ್ ನೊಂದಿಗೆ ಹವಾಮಾನ ಮುನ್ಸೂಚನೆಗಳನ್ನು ಒದಗಿಸಲಿದೆ.

ಈ ನೂತನ ಹವಾಮಾನ ಮುನ್ಸೂಚನೆ ಮಾದರಿಯನ್ನು ಪಾರ್ಥಸಾರಥಿ ಮುಖ್ಯೋಪಾಧ್ಯಾಯ ಸೇರಿದಂತೆ ಹಲವಾರು ಪ್ರಮುಖ ಸಂಶೋಧಕರು ಅಭಿವೃದ್ಧಿಪಡಿಸಿದ್ದಾರೆ. ಐಐಟಿಎಂ ಕ್ಯಾಂಪಸ್ ನಲ್ಲಿ ಕಳೆದ ವರ್ಷ ಸ್ಥಾಪಿಸಲಾದ ನೂತನ ಸೂಪರ್ ಕಂಪ್ಯೂಟರ್ ಅರ್ಕದಿಂದಾಗಿ ಈ ನೂತನ ಹವಾಮಾನ ಮುನ್ಸೂಚನೆ ವ್ಯವಸ್ಥೆಯನ್ನು ರೂಪಿಸಲು ಸಾಧ್ಯವಾಗಿದೆ ಎಂದು ಮೂಲಗಳು ತಿಳಿಸಿವೆ. ಈ ಹಿಂದಿನ ಸೂಪರ್ ಕಂಪ್ಯೂಟರ್ ಪ್ರತ್ಯೂಷ್ ಹವಾಮಾನ ಮುನ್ಸೂಚನೆ ಮಾದರಿಯನ್ನು ಚಲಾಯಿಸಲು 10 ತಾಸುಗಳನ್ನು ತೆಗೆದುಕೊಳ್ಳುತ್ತಿತ್ತು. ಆದರೆ 'ಅರ್ಕ' ಕಂಪ್ಯೂಟರ್‌ಗೆ ಕೇವಲ ನಾಲ್ಕು ತಾಸುಗಳು ಸಾಕಾಗುತ್ತದೆ ಎಂದು ಮುಖ್ಯೋಪಾಧ್ಯಾಯ ಅವರು ತಿಳಿಸಿದ್ದಾರೆ.

# ತೇಜ್ ಪ್ರತಾಪ್ ಯಾದವ್ ಪಕ್ಷದಿಂದ ಉಚ್ಚಾಟನೆ





**ಪಾಟ್ನಾ:** ಬಿಹಾರದ ಮಾಜಿ ಮುಖ್ಯಮಂತ್ರಿ ಲಾಲು ಪ್ರಸಾದ್ ಯಾದವ್ ಅವರ ಹಿರಿಯ ಪುತ್ರ ತೇಜ್ ಪ್ರತಾಪ್ ಯಾದವ್ ಅವರ 12 ವರ್ಷಗಳ ಹಿಂದಿನ ರಹಸ್ಯ ವಿವಾಹದ ಫೋಟೊ ಮತ್ತು ವಿಡಿಯೊ ಆನ್‌ಲೈನ್‌ನಲ್ಲಿ ಹರಿದಾಡಿ ಭಾರಿ ಚರ್ಚೆಗೆ ಗ್ರಾಸವಾಗಿದೆ. ಇದರ ಬೆನ್ನಲ್ಲೇ ರಾಷ್ಟ್ರೀಯ ಜನತಾ ದಳ ದ ಮುಖ್ಯಸ್ಥರೂ ಆದ ಲಾಲೂ ಪ್ರಸಾದ್ ಯಾದವ್ ಅವರು ತೇಜ್ ಪ್ರತಾಪ್ ಯಾದವ್ ಅವರನ್ನು ಪಕ್ಷದಿಂದ ಉಚ್ಚಾಟಿಸಿದ್ದಾರೆ. ಬೇಜವಾಬ್ದಾರಿಯುತ ನಡವಳಿಕೆ ಕಾರಣ ನೀಡಿ 6 ವರ್ಷಗಳ ಕಾಲ ಪಕ್ಷದಿಂದ ಉಚ್ಚಾಟಿಸಲಾಗಿದೆ. ಜತೆಗೆ ಕೌಟುಂಬಿಕ ಮೌಲ್ಯಗಳಿಗೆ ಬೆಲೆ ಕೊಟ್ಟಿಲ್ಲವೆಂದು ಕುಟುಂಬದಿಂದಲೂ ಹೊರ ಹಾಕಲಾಗಿದೆ. ಆ ಮೂಲಕ ತೇಜ್ ಪ್ರತಾಪ್ ಯಾದವ್‌ಗೆ ಒಂದೇ ಬಾರಿಗೆ ಎರಡೆರಡು ಶಾಕ್ ಎದುರಾಗಿದೆ.

ಹಿರಿಯ ಪುತ್ರ, ತೇಜ್ ಪ್ರತಾಪ್ ಯಾದವ್‌ನ ಚಟುವಟಿಕೆ ಮತ್ತು ಬೇಜವಾಬ್ದಾರಿಯುತ ನಡವಳಿಕೆ ನಮ್ಮ ಕುಟುಂಬದ ಮೌಲ್ಯಗಳಿಗೆ, ಪಕ್ಷಕ್ಕೆ ಹೊಂದಿಕೆಯಾಗುವುದಿಲ್ಲ. ಹೀಗಾಗಿ ನಾನು ಅವರನ್ನು ಮನೆಯಿಂದ ಹೊರ ಹಾಕುತ್ತಿದ್ದೇನೆ ಮತ್ತು 6 ವರ್ಷ ಪಕ್ಷದಿಂದ ಉಚ್ಚಾಟಿಸುತ್ತಿದ್ದೇನೆ. ಇಂದಿನಿಂದ ಅವರಿಗೂ ಪಕ್ಷ ಮತ್ತು ಕುಟುಂಬಕ್ಕೂ ಯಾವುದೇ ಸಂಬಂಧವಿಲ್ಲ ಎಂದು ಲಾಲು ಪ್ರಸಾದ್ ಯಾದವ್ ತಿಳಿಸಿದ್ದಾರೆ.

ತೇಜ್ ಪ್ರತಾಪ್ ಯಾದವ್ ರಹಸ್ಯವಾಗಿ ಮದುವೆಯಾಗಿದ್ದಾರೆ ಎನ್ನಲಾದ ಫೋಟೊ, ವಿಡಿಯೊ ಹೊರಬಿದ್ದ ಬೆನ್ನಲ್ಲೇ ನಿರ್ಧಾರ ಕೈಗೊಳ್ಳಲಾಗಿದೆ. ಶನಿವಾರ (ಮೇ 24) ತೇಜ್ ಪ್ರತಾಪ್ ಯಾದವ್ ಅವರ ಫೇಸ್‌ಬುಕ್ ಪ್ರೊಫೈಲ್‌ನಲ್ಲಿ ಅವರು ಒಬ್ಬ ಮಹಿಳೆಯೊಂದಿಗೆ ಇರುವ ಫೋಟೋವನ್ನು ಹಂಚಿಕೊಳ್ಳಲಾಗಿತ್ತು. ಪೋಸ್ಟ್‌ನಲ್ಲಿ ಆ ಮಹಿಳೆಯನ್ನು ಅನುಷ್ಕಾ ಯಾದವ್ ಎಂದು ಉಲ್ಲೇಖಿಸಲಾಗಿತ್ತು. ಅದರಲ್ಲಿ ತಾನು ಅನುಷ್ಕಾ ಯಾದವ್ ಜತೆಗೆ 12 ವರ್ಷಗಳಿಂದ ಪ್ರೀತಿಯಲ್ಲಿದ್ದೇನೆ ಎಂದು ಬರೆದಿದ್ದರು.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# 'ಜಾವಾ' ಸಿನಿಮಾದಲ್ಲಿ ರಾಗಿಣಿ ಬೋಲ್ಡ್ ಅವತಾರ ಪೋಸ್ಟರ್ ರಿವೀಲ್

ತುಪ್ಪದ ಬೆಡಗಿ ರಾಗಿಣಿ ದ್ವಿವೇದಿ ಇನ್ನೂ ಎರಡ್ಮೂರು ವರ್ಷ ಕಾಲ್‌ಶೀಟ್‌ಗೆ ಸಿಗಲ್ಲ, ಅಷ್ಟರಮಟ್ಟಿಗೆ ಬ್ಯಾಕ್ ಟು ಬ್ಯಾಕ್ ಸಿನಿಮಾಗಳಲ್ಲಿ ಅವರು ಬ್ಯುಸಿಯಾಗಿದ್ದಾರೆ. 'ಜಾವಾ' ಎಂಬ ಸಿನಿಮಾ ಮೂಲಕ ನಟಿ ಭಾರೀ ಸದ್ದು ಮಾಡ್ತಿದ್ದಾರೆ. ಈ ಚಿತ್ರದ ಪೋಸ್ಟರ್ ರಿಲೀಸ್ ಆಗಿ ಸೋಷಿಯಲ್ ಮೀಡಿಯಾದಲ್ಲಿ ಹಂಗಾಮ ಎಬ್ಬಿಸಿದೆ.

ಹಿರಿಯ ಡಿಂಗ್ರಿ, ನಾಗಾರಾಜ್ ಪುತ್ರ, ರಾಜ್ ವರ್ಧನ್‌ಗೆ ಜೊತೆಯಾಗಿ ರಾಗಿಣಿ 'ಜಾವಾ' ಸಿನಿಮಾದಲ್ಲಿ ನಟಿಸಿದ್ದಾರೆ. ಮೇ 24ರಂದು ರಾಗಿಣಿ ಬರ್ತ್‌ಡೇ ಹಿನ್ನೆಲೆ ಅವರ ಪಾತ್ರದ ಲುಕ್ ಅನ್ನು ಚಿತ್ರತಂಡ ಅನಾವರಣ ಮಾಡಿದೆ. ಪೋಸ್ಟರ್‌ನಲ್ಲಿ ರಾಗಿಣಿ ಬೋಲ್ಡ್ ಆಗಿ ಕಾಣಿಸಿಕೊಂಡಿದ್ದು, ಅದಕ್ಕೆ "`R QUEEN BRAND AMBASSADOR OF' ದುರಹಂಕಾರ ಎಂದು ಬರೆಯಲಾಗಿದೆ.



'ಜಾವಾ'ದಲ್ಲಿ ರಾಗಿಣಿ ಪವರ್‌ಫುಲ್ ಪಾತ್ರದಲ್ಲಿ ಕಾಣಿಸಿಕೊಳ್ತಿದ್ದಾರೆ. ಈ ಚಿತ್ರ ಕನ್ನಡ, ತಮಿಳು ಸೇರಿದಂತೆ ಬಹುಭಾಷೆಗಳಲ್ಲಿ ನಿರ್ಮಾಣ ಆಗುತ್ತಿದ್ದು, ದೇವಾ ಚಕ್ರವರ್ತಿ ನಿರ್ದೇಶಿಸಲಿದ್ದಾರೆ. ಜುಲೈನಲ್ಲಿ ಸಿನಿಮಾ ಶೂಟಿಂಗ್ ಶುರು ಆಗಲಿದೆ.

'ಜಾವಾ' ಚಿತ್ರದ ಜೊತೆ ಸಿಂಧೂರಿ, ಸರ್ಕಾರಿ ನ್ಯಾಯ ಬೆಲೆ ಅಂಗಡಿ, ಮೋಹನ್ ಲಾಲ್ ಜೊತೆ 'ವೃಷಭ' ಸಿನಿಮಾ ಮಾಡ್ತಿದ್ದಾರೆ ರಾಗಿಣಿ. ಈ ಚಿತ್ರಕ್ಕೆ ಕನ್ನಡದ ನಿರ್ದೇಶಕ ನಂದ ಕಿಶೋರ್ ನಿರ್ದೇಶನ ಮಾಡಿದ್ದಾರೆ. ಇದರೊಂದಿಗೆ ಬಾಲಿವುಡ್ ಚಿತ್ರ ಮತ್ತು ತಮಿಳಿನಲ್ಲೊಂದು ಸಿನಿಮಾ ಮುಗಿಸಿ ಕೊಟ್ಟಿದ್ದಾರೆ.

'ಶ್ಲೋಕ್' ಎಂಬ ಸಂಸ್ಕೃತ ಚಿತ್ರದಲ್ಲಿಯೂ ನಟಿ ಪ್ರಮುಖ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಮುಕ್ತಿಯನ್ನು ಹೊಂದುವ ಸನ್ಯಾಸಿನಿಯ ಪಾತ್ರದಲ್ಲಿ ಅವರು ನಟಿಸಿದ್ದಾರೆ. ಇದನ್ನು ಸ್ಮಶಾನದಲ್ಲಿ ಚಿತ್ರೀಕರಿಸಲಾಗಿದೆ. ಒಟ್ನಲ್ಲಿ ರಾಗಿಣಿ ಕಹಿ ಘಟನೆಯಿಂದ ಹೊರಬಂದು ಸಿನಿಮಾ ಮಾಡ್ತಿದ್ದಾರೆ. ಚಿತ್ರರಂಗದಲ್ಲಿ ಅವರಿಗೆ ಒಂದೊಳ್ಳೆಯ ಕಾಲ ಶುರುವಾಗಿದೆ. ರಾಗಿಣಿ ಒಪ್ಪಿಕೊಂಡಿರುವ ಈ ಸಿನಿಮಾಗಳಿಂದ ಸಕ್ಸಸ್ ಸಿಗುತ್ತಾ? ಎಂದು ಕಾದುನೋಡಬೇಕಿದೆ.

# 'ಮಾರ್ನಮಿ'ಗೆ ಮೋಹಕ ತಾರೆ ರಮ್ಯಾ ಸಾಥ್

ಕನ್ನಡ ಚಿತ್ರರಂಗದ ಪ್ರತಿಭಾವಂತ ನಟಿ ಚೈತ್ರಾ, ಆಚಾರ್, ಯಾವುದೇ ಪಾತ್ರ ಕೊಟ್ಟರೂ ಅದಕ್ಕೆ ಜೀವ ತುಂಬಬಲ್ಲರು. ಈಗ ಅವರು ಮಾರ್ನಮಿಗೆ ಮದುವೆಯಾಗೋದಿಕ್ಕೆ ಹೊರಟಿದ್ದಾರೆ. ಅರೇ! ಚೈತ್ರಾ ಮದುವೆನಾ ಅಂತಾ ಹುಬ್ಬೇರಿಸಬೇಡಿ. ಮದುವೆ ನಿಜವೇ, ಆದ್ರೆ ರೀಲ್‌ನಲ್ಲಿ. ಕರಾವಳಿ ಭಾಗದ ಪ್ರೇಮಕಥೆಯುಳ್ಳ 'ಮಾರ್ನಮಿ' ಸಿನಿಮಾದಲ್ಲಿ ಚೈತ್ರಾ ಆಚಾರ್ ನಾಯಕಿಯಾಗಿ ನಟಿಸುತ್ತಿದ್ದಾರೆ. ಅವರ ಪಾತ್ರದ ಪರಿಚಯದ ಟೀಸರ್ ಬಿಡುಗಡೆಯಾಗಿದೆ.



chaithra achar`'ಮಾರ್ನಮಿ'ಯಲ್ಲಿ ಚೈತ್ರಾ, ದೀಕ್ಷಾ ಎಂಬ ಪಾತ್ರದಲ್ಲಿ ಅಭಿನಯಿಸುತ್ತಿದ್ದು, ತನ್ನ ಪ್ರೀತಿ, ಮದುವೆ ಬಗ್ಗೆ ಕರಾವಳಿ ಭಾಷೆಯಲ್ಲಿ ಪರಿಚಯ ಮಾಡಿಕೊಳ್ಳುತ್ತಾರೆ. ಡಿ ಗ್ಲಾಮ್ ಲುಕ್‌ನಲ್ಲಿ ಕಾಣಿಸಿಕೊಂಡಿದ್ದು, ಮೋಹಕ ತಾರೆ ರಮ್ಯಾ ತಮ್ಮ ಇನ್ಸ್ಟಾಗ್ರಾಂ ಟೀಸರ್ ಬಿಡುಗಡೆ ಮಾಡಿ ಇಡೀ ತಂಡಕ್ಕೆ ಶುಭಾಶಯ ತಿಳಿಸಿದ್ದಾರೆ. ಕುಂದಾಪುರದ ಪಡುಕೋಣೆಯ ರಿಶಿತ್ ಶೆಟ್ಟಿ 'ಮಾರ್ನಮಿ' ಸಿನಿಮಾದ ಸೂತ್ರಧಾರ. ಕರಾವಳಿ ಭಾಗದ ಹುಲಿವೇಷದ ಹಿನ್ನೆಲೆ ಸಂಸ್ಕೃತಿಯ ಜೊತೆಗೆ ಪ್ರೇಮಕಥೆ, ಆಕ್ಷನ್, ಎಮೋಷನ್, ಕಾಮಿಡಿ ಮಿಶ್ರಣದ




ಮಾರ್ನಮಿ ಚಿತ್ರವನ್ನು ಗುನಾಧ್ಯ ಬ್ಯಾನರ್ ಅಡಿಯಲ್ಲಿ ಶಿಲ್ಪಾ ನಿಶಾಂತ್ ನಿರ್ಮಾಣ ಮಾಡುತ್ತಿದ್ದಾರೆ.

ಈ ಸಿನಿಮಾದಲ್ಲಿ ಗಿಣಿರಾಮ, ನಿನಗಾಗಿ ಸೀರಿಯಲ್ ಖ್ಯಾತಿಯ ರಿತ್ವಿಕ್ ಮಠದ್ ನಾಯಕನಾಗಿ ಅಭಿನಯಿಸಿದ್ದಾರೆ. ಪ್ರಕಾಶ್ ತುಮಿನಾಡು, ಸೋನು ಗೌಡ, ಜ್ಯೋತೀಶ್ ಶೆಟ್ಟಿ, ರೋಚಿತ್, ಸ್ವರಾಜ್ ಶೆಟ್ಟಿ, ಮೈಮ್ ರಾಮದಾಸ್ ಹಾಗೂ ಚೈತ್ರ ಶೆಟ್ಟಿ ಸೇರಿದಂತೆ ಹಲವರು ತಾರಾಬಳಗದಲ್ಲಿದ್ದಾರೆ. ಈ ಚಿತ್ರಕ್ಕೆ ಚರಣ್ ರಾಜ್ ಸಂಗೀತ ನಿರ್ದೇಶನವಿದ್ದು, ಶಿವಸೇನ ಛಾಯಾಗ್ರಹಣ ನಿರ್ವಹಿಸುತ್ತಿದ್ದಾರೆ.

# 'ಚೌಕಿದಾರ್' ಚಿತ್ರದ ಟೀಸರ್ ರಿಲೀಸ್ ರಕ್ತಸಿಕ್ತ ಅವತಾರದಲ್ಲಿ ಪೃಥ್ವಿ ಅಂಬರ್ ಅಬ್ಬರ



ಪೃಥ್ವಿ ಅಂಬರ್ ಹಾಗೂ ಧನ್ಯಾ ರಾಮ್‌ಕುಮಾರ್ ನಟನೆಯ 'ಚೌಕಿದಾರ್' ಸಿನಿಮಾದ ಟೀಸರ್ ಬಿಡುಗಡೆಯಾಗಿದೆ. ರಕ್ತಸಿಕ್ತ ಅವತಾರವೆತ್ತಿರುವ ಪೃಥ್ವಿ ಹೊಸ ಲುಕ್ ಸಿನಿರಸಿಕರಿಗೆ ಕಿಕ್ ಕೊಟ್ಟಿದೆ. ನಾಯಕಿ ಧನ್ಯಾ ಡಿ ಗ್ಲಾಮ್ ಲುಕ್‌ನಲ್ಲಿ ಕಾಣಿಸಿಕೊಂಡಿದ್ದಾರೆ.

ಟೀಸರ್‌ನಲ್ಲಿ ಎಲ್ಲಾ ಪಾತ್ರಗಳನ್ನು ತೋರಿಸಿರುವ ಚಂದ್ರಶೇಖರ್ ಬಂಡಿಯಪ್ಪ ಕಥೆಯ ಗುಟ್ಟನ್ನು ಎಲ್ಲಿಯೂ ಬಿಟ್ಟುಕೊಟ್ಟಿಲ್ಲ. ಕನ್ನಡ ಹಾಗೂ ತೆಲುಗು ಎರಡು ಭಾಷೆಯಲ್ಲಿ ಟೀಸರ್ ಬಿಡುಗಡೆ ಮಾಡಲಾಗಿದ್ದು, ಖಾಕಿ ಲುಕ್‌ನಲ್ಲಿ ಸುಧಾರಾಣಿ ಖದರ್ ತೋರಿಸಿದ್ದಾರೆ. ಹಿರಿಯ ನಟ ಸಾಯಿ ಕುಮಾರ್ ಪೃಥ್ವಿ ತಂದೆ ಪಾತ್ರದಲ್ಲಿ ಗಮನ ಸೆಳೆಯುತ್ತಾರೆ. ಧರ್ಮ, ಹಿರಿಯ ನಟಿ ಶ್ವೇತಾ ತಾರಾಬಳಗದಲ್ಲಿದ್ದಾರೆ.

ಸಚಿನ್ ಬಸ್ರೂರ್ ಸಂಗೀತ ಟೀಸರ್‌ನಲ್ಲಿ ಗಮನ ಸೆಳೆಯುತ್ತಿದೆ. ಕಲ್ಲಹಳ್ಳಿ ಚಂದ್ರಶೇಖರ್ ನಿರ್ಮಾಣ ಮಾಡುತ್ತಿದ್ದಾರೆ. ವಿದ್ಯಾದೇವಿ ನಿರ್ಮಾಣದಲ್ಲಿ ಸಾಥ್ ಕೊಡುತ್ತಿದ್ದಾರೆ. ವಿ.ನಾಗೇಂದ್ರ ಪ್ರಸಾದ್, ಪ್ರಮೋದ್ ಮರವಂತೆ, ಸಂತೋಷ್ ನಾಯಕ್ ಹಾಡುಗಳಿಗೆ ಸಾಹಿತ್ಯ ಬರೆದಿದ್ದಾರೆ. ಸಿದ್ದು ಕಂಚನಹಳ್ಳಿ ಛಾಯಾಗ್ರಹಣ, ಪೃಥ್ವಿರಾಜ್ ಧಫಾರಿ ಸಹನಿರ್ದೇಶನ ಸಿನಿಮಾಗಿದೆ.

'ಚೌಕಿದಾರ್' ಬಹುಭಾಷೆಯಲ್ಲಿ ಮೂಡಿ ಬರುತ್ತಿದ್ದು, ಟೀಸರ್ ನೋಡುತ್ತಿದ್ದರೇ ನಿರ್ದೇಶಕ ಚಂದ್ರಶೇಖರ್ ಬಂಡಿಯಪ್ಪ ಯಾವುದೋ ಹೊಸ ಕಥೆಯನ್ನು ಹರವಿಡಲು ಹೊರಟಿರುವುದು ಗೊತ್ತಾಗುತ್ತಿದೆ.

ಅಂದಹಾಗೆ, ಜೂನ್ 1ರಂದು 'ಚೌಕಿದಾರ್' ಸಿನಿಮಾದ ಮೊದಲ ಹಾಡನ್ನು ಬಿಡುಗಡೆ ಮಾಡಲಿದೆ. ಶೀಘ್ರದಲ್ಲೇ ರಿಲೀಸ್ ಡೇಟ್ ಅನ್ನು ಚಿತ್ರತಂಡ ರಿವೀಲ್ ಮಾಡಲಿದೆ.

# 'ಬಿಗ್ ಬಾಸ್' ಬಳಿಕ ಬಿಗ್ ನ್ಯೂಸ್ ಕೊಟ್ರು ಮೋಕ್ಷಿತಾ ಪೈ!

ನಟಿ ಮೋಕ್ಷಿತಾ ಪೈ ಅಭಿಮಾನಿಗಳಿಗೆ ಗುಡ್ ನ್ಯೂಸ್ ಕೊಟ್ಟಿದ್ದಾರೆ. ಬಿಗ್ ಬಾಸ್ ಕನ್ನಡ 11ರ ಶೋ ಬಳಿಕ ಮತ್ತೆ ಕ್ಯಾಮೆರಾ ಮುಂದೆ ಮಿಂಚಲಿದ್ದಾರೆ.

'ಬಿಗ್ ಬಾಸ್ ಕನ್ನಡ 10'ರ ಖ್ಯಾತಿಯ ವಿನಯ್ ಗೌಡ) ಜೊತೆ ವೆಬ್ ಸೀರೀಸ್ ನಾಯಕಿಯಾಗಿ ಮೋಕ್ಷಿತಾ ನಟಿಸುತ್ತಿದ್ದಾರೆ. ಇದಕ್ಕೆ ಸಂಬಂಧಿಸಿದ ವಿಡಿಯೋವೊಂದು ಸೋಷಿಯಲ್ ಮೀಡಿಯಾದಲ್ಲಿ ಭಾರೀ ಸದ್ದು ಮಾಡುತ್ತಿದೆ. ಧೃತಿ ಕ್ರಿಯೇಷನ್ಸ್‌ನಲ್ಲಿ ಇದನ್ನು ನಿರ್ಮಾಣ ಮಾಡುತ್ತಿದೆ. ಜೀ5 ಒಟಿಟಿಯಲ್ಲಿ ಇದು ಪ್ರಸಾರವಾಗಲಿದೆ.



'ಬಿಗ್ ಬಾಸ್' ಬಳಿಕ ಕಾಣಿಸಿಕೊಳ್ಳುತ್ತಿರುವ ಮೊದಲ ಪ್ರಾಜೆಕ್ಟ್ ಇದಾಗಿದೆ. ಹೀಗಾಗಿ ವಿನಯ್ ಗೌಡ ಮತ್ತು ಮೋಕ್ಷಿತಾ ಜೋಡಿ ನೋಡಲು ಅಭಿಮಾನಿಗಳು ಕಾಯ್ತಿದ್ದಾರೆ. 'ಮಿಡಲ್ ಕ್ಲಾಸ್ ರಾಮಾಯಣ' ಎಂಬ ಸಿನಿಮಾದಲ್ಲಿ ಮೋಕ್ಷಿತಾ ಪೈ ನಟಿಸುತ್ತಿದ್ದು, ಈ ಮೂಲಕ ಸ್ಯಾಂಡಲ್‌ವುಡ್‌ಗೆ ನಾಯಕಿಯಾಗಿ ಅವರು ಪಾದಾರ್ಪಣೆ ಮಾಡಿದ್ದಾರೆ. ಈ ಚಿತ್ರದಲ್ಲಿ ಕಪ್ಪು ಹುಡುಗಿಯ ಪಾತ್ರದಲ್ಲಿ ನಟಿಸುತ್ತಿದ್ದಾರೆ. ಮೋಕ್ಷಿತಾ ಪಾತ್ರವೇ ಚಿತ್ರದ ಹೈಲೆಟ್ ಆಗಿದ್ದು, ಈ ಸಿನಿಮಾ ರಿಲೀಸ್ ಬಗ್ಗೆ ಶೀಘ್ರದಲ್ಲೇ ಚಿತ್ರತಂಡ ಮಾಹಿತಿ ನೀಡುವ ನಿರೀಕ್ಷೆ ಇದೆ.

## ಚೆನ್ನೈ ಗುನ್ನಕ್ಕೆ ಗುಜರಾತ್ ಧೂಳಿಪಟ

# ಸಿಎಸ್‌ಕೆಗೆ 83 ರನ್‌ಗಳ ಭರ್ಜರಿ ಜಯ

ಸಿಡಿಲಬ್ಬರದ ಬ್ಯಾಟಿಂಗ್, ಸಂಘಟಿತ ಬೌಲಿಂಗ್ ದಾಳಿ ನೆರವಿನಿಂದ ಚೆನ್ನೈ ಸೂಪರ್ ಕಿಂಗ್ಸ್ ತಂಡವು ಗುಜರಾತ್ ಟೈಟಾನ್ಸ್ ವಿರುದ್ಧ 83 ರನ್‌ಗಳ ಭರ್ಜರಿ ಗೆಲುವು ಸಾಧಿಸಿದೆ. ತನ್ನ ಕೊನೆಯ ಪಂದ್ಯವಾಡಿದ ಸಿಎಸ್‌ಕೆ ಅದ್ಭುತ ಗೆಲುವಿನೊಂದಿಗೆ 18ನೇ ಆವೃತ್ತಿಗೆ ವಿದಾಯ ಹೇಳಿದೆ. ಇನ್ನೂ ಲೀಗ್ ಸುತ್ತಿನ ಕೊನೆಯ ಪಂದ್ಯವನ್ನಾಡಿದ ಗುಜರಾತ್ ಟೈಟಾನ್ಸ್ ಹೀನಾಯ ಸೋಲಿನಿಂದ ನಂ.1 ಪಟ್ಟ ಕಳೆದುಕೊಳ್ಳುವ ಆತಂಕದಲ್ಲಿದೆ.



ಹೌದು.. ಈಗಾಗಲೇ ಗುಜರಾತ್ ಟೈಟಾನ್ಸ್, ಪಂಜಾಬ್ ಕಿಂಗ್ಸ್, ಆರ್‌ಸಿಬಿ ಮತ್ತು ಮುಂಬೈ ಇಂಡಿಯನ್ಸ್ ಪ್ಲೇ ಆಫ್ ಪ್ರವೇಶಿವೆ. ಆದ್ರೆ ನಾಲ್ಕು ತಂಡಗಳ ನಡುವೆ ನಂ.1 ಪಟ್ಟಕ್ಕೆ ಹಣಾಹಣಿ ನಡೆಯುತ್ತಿದೆ. ಸದ್ಯ 14 ಪಂದ್ಯಗಳಲ್ಲಿ 9 ಗೆಲುವಿನೊಂದಿಗೆ 18 ಅಂಕ ಪಡೆದುಕೊಂಡಿರುವ ಟೈಟಾನ್ಸ್ ಅಗ್ರಸ್ಥಾನದಲ್ಲಿದೆ. ಉಳಿದ ಮೂರು ತಂಡಗಳಿಗೆ ಇನ್ನೂ ಒಂದು ಪಂದ್ಯ ಬಾಕಿ ಇರುವ ಕಾರಣ ಗುಜರಾತ್ ಟೈಟಾನ್ಸ್‌ಗೆ ನಂ.1 ಸ್ಥಾನ ತಪ್ಪುವ ಆತಂಕದಲ್ಲಿದೆ. ಒಂದು ವೇಳೆ ಮುಂಬೈ ಇಂಡಿಯನ್ಸ್ ಮುಂದಿನ ಪಂದ್ಯದಲ್ಲಿ ಪಂಜಾಬ್ ವಿರುದ್ಧ ಸೋತು, ಆರ್‌ಸಿಬಿ ಲಕ್ನೋ ವಿರುದ್ಧ ಉತ್ತಮ ರನ್‌ರೇಟ್‌ನಿಂದ ಗೆದ್ದರೆ, ಆರ್‌ಸಿಬಿಯೇ ನಂ.1 ಪಟ್ಟಕ್ಕೇರುವ ಅವಕಾಶವಿದೆ. ಇಲ್ಲದಿದ್ದರೆ, ಮೊದಲೆರಡು ಸ್ಥಾನಗಳು ಮುಂಬೈ ಮತ್ತು ಪಂಜಾಬ್ ಕಿಂಗ್ಸ್ ಪಾಲಾಗುವ ಸಾಧ್ಯತೆಯಿದೆ.

ಇಲ್ಲಿನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆದ 67ನೇ ಐಪಿಎಲ್ ಪಂದ್ಯದಲ್ಲಿ ಮೊದಲು ಟಾಸ್ ಗೆದ್ದ ಸಿಎಸ್‌ಕೆ ತಂಡ ಬ್ಯಾಟಿಂಗ್ ಆಯ್ದುಕೊಂಡು 20 ಓವರ್‌ಗಳಿಗೆ 5 ವಿಕೆಟ್ ನಷ್ಟಕ್ಕೆ 230 ರನ್ ಕಲೆ ಹಾಕಿತು. 231 ರನ್‌ಗಳ ಬೃಹತ್ ಮೊತ್ತದ ಗುರಿ ಬೆನ್ನಟ್ಟಿದ ಗುಜರಾತ್ ಟೈಟಾನ್ಸ್ 18.3 ಓವರ್‌ಗಳಿಗೆ 147 ರನ್‌ಗಳಿಗೆ ಸರ್ವಪತನ ಕಂಡಿತು.

ಗುಜರಾತ್ ತಂಡದಿಂದ ಮೊದಲಿಗೆ ಸಾಯಿ ಸುದರ್ಶನ್ ಹಾಗೂ ನಾಯಕ ಶುಭಮನ್ ಗಿಲ್ ಜೊತೆಯಾಟಾವಾಡಿ 15 ಎಸೆತಗಳಿಗೆ 24 ರನ್ ಗಳಿಸಿದರು. ಶುಭಮನ್ ಗಿಲ್ 9 ಎಸೆತಗಳಿಗೆ 13 ರನ್ (1 ಬೌಂಡರಿ, 1 ಸಿಕ್ಸ್) ಗಳಿಸಿ ಔಟಾದರು. ಬಳಿಕ ಕ್ರೀಸ್‌ಗಿಳಿದ ಜೋಸ್ ಬಟ್ಲರ್ 5 ರನ್ ಗಳಿಸಿ ಔಟಾದರೇ, ಶೆರ್ಫೇನ್ ರುದರ್‌ಫೋರ್ಡ್ ಯಾವುದೇ ರನ್ ಗಳಿಸದೇ ಪೆವಿಲಿಯನ್‌ಗೆ ಮರಳಿದರು. ಬಳಿಕ ಶಾರುಖ್ ಖಾನ್ ಹಾಗೂ ಸಾಯಿ ಸುದರ್ಶನ್ ಜೊತೆಯಾಟವಾಡಿ 34 ಎಸೆತಗಳಿಗೆ 55 ರನ್ ಕಲೆಹಾಕಿದರು. ಶಾರುಖ್ ಖಾನ್ 15 ಎಸೆತಗಳಿಗೆ 19 ರನ್ (2 ಸಿಕ್ಸ್) ಗಳಿಸಿ ವಿಕೆಟ್ ಒಪ್ಪಿಸಿದರೇ, ಸಾಯಿ ಸುದರ್ಶನ್ 28 ಎಸೆತಗಳಿಗೆ 41 ರನ್ (6 ಬೌಂಡರಿ) ಸಿಡಿಸಿ ತಂಡದ ಮೊತ್ತವನ್ನು ಏರಿಸುವಲ್ಲಿ ಪ್ರಮುಖ ಪಾತ್ರವಹಿಸಿದರು. ರಶೀದ್ ಖಾನ್ 8 ಎಸೆತಗಳಿಗೆ 12 ರನ್ (1 ಬೌಂಡರಿ, 1 ಸಿಕ್ಸ್) ಗಳಿಸಿ ಪೆವಿಲಿಯನ್‌ಗೆ ಮರಳಿದರು. ಗೆರಾಲ್ಡ್ ಕೋಟ್ಜಿ 5 ಎಸೆತಗಳಿಗೆ 5 ರನ್ ಗಳಿಸಿ ಔಟಾದರು. ರಾಹುಲ್ ತೆವಾಟಿಯಾ 10 ಎಸೆತಗಳಿಗೆ 14 ರನ್ ಗಳಿಸಿ ವಿಕೆಟ್ ಒಪ್ಪಿಸಿದರು. ಅರ್ಶದ್ ಖಾನ್ 14 ಎಸೆತಗಳಿಗೆ 20 ರನ್ ಗಳಿಸಿ ಔಟಾದರೆ, ಸಾಯಿ ಕಿಶೋರ್ 7 ಎಸೆತಗಳಿಗೆ 3 ರನ್ ಗಳಿಸಿ ಆಲೌಟ್ ಆದರು. ಮೊಹಮ್ಮದ್ ಸಿರಾಜ್ 4 ಎಸೆತಗಳಿಗೆ 3 ರನ್ ಗಳಿಸಿದರು.

ಸಿಎಸ್‌ಕೆ ತಂಡದಿಂದ ಮೊದಲು ಬ್ಯಾಟ್ ಬೀಸಿದ ಆಯುಷ್ ಮ್ಹಾತ್ರೆ ಹಾಗೂ ಡೆವೊನ್ ಕಾನ್ವೆ ಜೊತೆಯಾಟವಾಡಿ 22 ಎಸೆತಗಳಿಗೆ 44 ರನ್ ಕಲೆಹಾಕಿದರು. ಆಯುಷ್ 17 ಎಸೆತಗಳಿಗೆ 34 ರನ್ (3 ಬೌಂಡರಿ, 3 ಸಿಕ್ಸ್) ಗಳಿಸಿ ಮೊದಲ ವಿಕೆಟ್ ಒಪ್ಪಿಸಿದರು. ಬಳಿಕ ಡೆವೊನ್ ಹಾಗೂ ಡ್ವಿಲ್ ಪಟೇಲ್ ಜೊತೆಯಾಟವಾಡಿ 34 ಎಸೆತಗಳಿಗೆ 63 ರನ್ ಗಳಿಸಿ ತಂಡವನ್ನು ಮುನ್ನಡೆಸಿದರು.

# ಟಾಸ್ ವೇಳೆಯೇ ನಿವೃತ್ತಿಯ ಸುಳಿವು ನೀಡಿದ್ರಾ ಧೋನಿ?

ಐಪಿಎಲ್ 2025ರ ಸೀಸನ್ ಚೆನ್ನೈ ಸೂಪರ್ ಕಿಂಗ್ಸ್‌ಗೆ ತುಂಬಾ ನಿರಾಶಾದಾಯಕವಾಗಿತ್ತು. ತಂಡವು ಆಡಿದ 14 ಪಂದ್ಯಗಳಲ್ಲಿ ಗೆದ್ದಿದ್ದಕ್ಕಿಂತ ಸೋತಿದ್ದೇ ಹೆಚ್ಚು. ಹೀಗಾಗಿ ಚೆನ್ನೈ ತಂಡಕ್ಕೆ ಪ್ಲೇ ಆಫ್‌ಗೆ ಅರ್ಹತೆ ಪಡೆಯಲು ಸಾಧ್ಯವಾಗಲಿಲ್ಲ. ಏತನ್ಮಧ್ಯೆ, ಈ ಲೀಗ್‌ನ ಕೊನೆಯ ಪಂದ್ಯವನ್ನಾಡುತ್ತಿರುವ ಸಿಎಸ್‌ಕೆ ತಂಡವನ್ನು ಮುನ್ನಡೆಸುತ್ತಿರುವ ನಾಯಕ ಎಂಎಸ್ ಧೋನಿ ಟಾಸ್ ಸಮಯದಲ್ಲಿ ನೀಡಿದ ಹೇಳಿಕೆ ಅಭಿಮಾನಿಗಳನ್ನು ಸಾಕಷ್ಟು ಗೊಂದಲಕ್ಕೀಡು ಮಾಡಿದೆ. ಈ ನಡುವೆ ಧೋನಿ ನೀಡಿರುವ ಹೇಳಿಕೆ ಅವರು ಮುಂದಿನ ಸೀಸನ್ ಆಡುವ ಬಗ್ಗೆ ಹಲವು ಅನುಮಾನಗಳನ್ನು ಹುಟ್ಟುಹಾಕಿದೆ.



**ಧೋನಿ ಹೇಳಿದ್ದೇನು?:** ಗುಜರಾತ್ ಟೈಟನ್ಸ್ ವಿರುದ್ಧದ ಸಿಎಸ್‌ಕೆ ಕೊನೆಯ ಲೀಗ್ ಪಂದ್ಯಕ್ಕೂ ಮುನ್ನ ನಡೆದ ಟಾಸ್ ಸಮಯದಲ್ಲಿ, ನಿರೂಪಕ ರವಿಶಾಸ್ತ್ರಿ, ಧೋನಿಗೆ, 'ನೀವು 18 ವರ್ಷಗಳಿಂದ ಐಪಿಎಲ್‌ನಲ್ಲಿ ಆಡುತ್ತಿದ್ದೀರಿ, ನಿಮ್ಮ ದೇಹವು ಈಗ ಹೇಗೆ ವರ್ತಿಸುತ್ತಿದೆ?' ಎಂದು ಕೇಳಿದರು. ಈ ಪ್ರಶ್ನೆಗೆ ಉತ್ತರಿಸಿದ ಧೋನಿ, ದೇಹವು ಇನ್ನೂ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದೆ. ಪ್ರತಿ ವರ್ಷವೂ ಹೊಸ ಸವಾಲನ್ನು ತರುತ್ತದೆ. ನಿಮ್ಮ ವೃತ್ತಿಜೀವನದ ಕೊನೆಯ ಹಂತದಲ್ಲಿದ್ದಾಗ, ದೇಹವನ್ನು ಗೌರವಿಸಬೇಕು. ಇದಕ್ಕೆ ಸಾಕಷ್ಟು ನಿರ್ವಹಣೆ ಅಗತ್ಯವಿರುತ್ತದೆ. ನಾನು ಅಂತಾರಾಷ್ಟ್ರೀಯ ಕ್ರಿಕೆಟ್ ಆಡುತ್ತಿದ್ದಾಗ ಹೆಚ್ಚಿನ ಸಮಸ್ಯೆಗಳನ್ನು ಎದುರಿಸಲಿಲ್ಲ. ಇಷ್ಟು ವರ್ಷಗಳ ಕಾಲ ನನ್ನನ್ನು ಫಿಟ್ ಆಗಿಡಲು ಸಹಾಯ ಮಾಡಿದ ನನ್ನ ಸಹಾಯಕ ಸಿಬ್ಬಂದಿಗೆ ನಾನು ಕೃತಜ್ಞನಾಗಿದ್ದೇನೆ ಎಂದರು.

ಧೋನಿಯ ಈ ಹೇಳಿಕೆ ಅವರ ಹೋರಾಟ ಮತ್ತು ಉತ್ಸಾಹವನ್ನು ಪ್ರತಿಬಿಂಬಿಸುತ್ತದೆ. ಆದರೆ ಅವರ ಮಾತುಗಳಿಂದ ಅವರ ದೇಹವು ಮೊದಲಿನಂತೆ ಅವರನ್ನು ಬೆಂಬಲಿಸುತ್ತಿಲ್ಲ ಎಂಬುದು ಸ್ಪಷ್ಟವಾಗುತ್ತದೆ. ಧೋನಿ ತಮ್ಮ ದೇಹದ ಸ್ಥಿತಿಯನ್ನು ನೋಡಿಯೇ ತಮ್ಮ ಭವಿಷ್ಯವನ್ನು ನಿರ್ಧರಿಸುವುದಾಗಿ ಈ ಹಿಂದೆ ಹಲವು ಬಾರಿ ಹೇಳಿದ್ದಾರೆ. ಈ ಸೀಸನ್‌ನಲ್ಲಿ ಅವರು ಬ್ಯಾಟಿಂಗ್‌ನಲ್ಲಿ ದೊಡ್ಡ ಪರಿಣಾಮ ಬೀರಿಲ್ಲ, ಆದರೆ ಅವರ ಉಪಸ್ಥಿತಿಯು ತಂಡಕ್ಕೆ ಖಂಡಿತವಾಗಿಯೂ ಸ್ಪೂರ್ತಿ ನೀಡಿದೆ. ಆದರೆ, ಇದು ಅವರ ಕೊನೆಯ ಸೀಸನ್ ಅಥವಾ ಇಲ್ಲವೇ ಎಂಬುದನ್ನು ಅವರು ಇನ್ನೂ ಬಹಿರಂಗಪಡಿಸಿಲ್ಲ.

## ಸಂಧಾನ ಸಭೆ ಯಶಸ್ವಿ

# 18 ಬಿಜೆಪಿ ಶಾಸಕರ ಅಮಾನತು ವಾಪಸ್..!

**ಬೆಂಗಳೂರು:** ಬಿಜೆಪಿಯ 18 ಶಾಸಕರ ಅಮಾನತು ವಾಪಸ್ ಪಡೆಯಲಾಗಿದೆ. ಸ್ಪೀಕರ್ ಯುಟಿ ಖಾದರ್ ನೇತೃತ್ವದ ನಡೆದ ಸಂಧಾನ ಸಭೆಯಲ್ಲಿ ಈ ಮಹತ್ವದ ನಿರ್ಧಾರ ಕೈಗೊಳ್ಳಲಾಗಿದೆ. ಹನಿಟ್ರ್ಯಾಪ್ ಮತ್ತು ಮುಸ್ಲಿಮರಿಗೆ ಶೇ. 4ರಷ್ಟು ಮೀಸಲಾತಿ ವಿಚಾರವಾಗಿ ವಿಧಾನಸಭೆಯಲ್ಲಿ ಚರ್ಚೆ ವೇಳೆ ಭಾರೀ ಗಲಾಟೆ ನಡೆದಿತ್ತು. ಆ ವೇಳೆ ಬಿಜೆಪಿ ಶಾಸಕರು ಸ್ಪೀಕರ್ ಯು.ಟಿ ಖಾದರ್ ಅವರ ಮೇಲೆ ಪೇಪರ್ ತೂರಿ ಆಕ್ರೋಶ ವ್ಯಕ್ತಪಡಿಸಿದ್ದರು. ಈ ಮೂಲಕ ಪೀಠಕ್ಕೆ ಅಗೌರವ ತೋರಿದ ಆರೋಪದ ಮೇಲೆ ಬಿಜೆಪಿಯ 18 ಶಾಸಕರನ್ನು 6 ತಿಂಗಳು ಕಾಲ ಅಮಾನತು ಮಾಡಿ ಖಾದರ್ ಆದೇಶಿಸಿದ್ದರು. ಆದರೆ, ಇದೀಗ ಶಾಸಕ ಅಮಾನತು ಆದೇಶವನ್ನು ಹಿಂಪಡೆಯಲು ಸಭೆಯಲ್ಲಿ ತೀರ್ಮಾನವಾಗಿದೆ.



ಬಿಜೆಪಿಯ 18 ಶಾಸಕರ ಅಮಾನತು ಹಿಂಪಡೆಯುವ ಸಂಬಂಧ ವಿಧಾನಸಭೆ ಸ್ಪೀಕರ್ ಯು.ಟಿ.ಖಾದರ್ ನೇತೃತ್ವದಲ್ಲಿ ಸಂಧಾನ ಸಭೆ ನಡೆಯಿತು. ಸಭೆಯಲ್ಲಿ, ಡೆಪ್ಯುಟಿ ಸ್ಪೀಕರ್ ರುದ್ರಪ್ಪ ಲಮಾಣಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ವಿಪಕ್ಷ ನಾಯಕ ಆರ್. ಅಶೋಕ್, ಕಾನೂನು ಸಚಿವ ಹೆಚ್.ಕೆ.ಪಾಟೀಲ್ ಭಾಗಿಯಾಗಿದ್ದರು. ಈ ಸಂಧಾನ ಸಭೆಯಲ್ಲಿ ಸಂಧಾನ ಸಭೆಯಲ್ಲಿ ಬಿಜೆಪಿಯ 18 ಶಾಸಕರ ಅಮಾನತು ಆದೇಶವನ್ನು ಹಿಂಪಡೆಯಲು ತೀರ್ಮಾನಿಸಲಾಗಿದೆ.

**ಅಮಾನತು ಆದೇಶವನ್ನ ಹಿಂಪಡೆಯಲಾಗಿದೆ: ಸ್ಪೀಕರ್:** ಶಾಸಕರ ಅಮಾನತು ಆದೇಶವನ್ನ ಹಿಂಪಡೆಯಲಾಗಿದೆ. ಘಟನೆ ಬಗ್ಗೆ ಎಲ್ಲ ಶಾಸಕರು ವಿಷಾದ ವ್ಯಕ್ತಪಡಿಸಿದ್ದಾರೆ. ವಿಪಕ್ಷ ನಾಯಕರು ಕೂಡ ನನಗೆ ಮನವಿ ಸಹ ಸಲ್ಲಿಸಿದರು. ಇನ್ಮುಂದೆ ಹೀಗಾಗದಂತೆ ನೋಡಿಕೊಳ್ಳುವುದಾಗಿ ಭರವಸೆ ನೀಡಿದ್ದಾರೆ. 18 ಶಾಸಕರನ್ನು ಅಮಾನತು ಮಾಡಿ ಎರಡು ತಿಂಗಳಾಗಿದೆ. ಸಂತೋಷದಿಂದ ಶಾಸಕರ ಅಮಾಮತು ಹಿಂಪಡೆದಿದ್ದೇನೆ. ಯಾವುದೇ ಷರತ್ತು ಇಲ್ಲ, ಎಲ್ಲರೂ ನಮ್ಮ ಮಿತ್ರರು. ಆ ಸಮಯದಲ್ಲಿ ದುರ್ನಡತೆ ತೋರಿದ್ದಕ್ಕೆ ಕ್ರಮಕೈಗೊಂಡೆ. ಕ್ರಮತೆಗೆದುಕೊಳ್ಳುವುದಕ್ಕೆ ನನಗೆ ಅಧಿಕಾರವಿದೆ ಎಂದು ಸ್ಪೀಕರ್ ಯು.ಟಿ.ಖಾದರ್ ಹೇಳಿದರು.

**ಶಾಸಕರು ಈಗಾಗಲೇ ವಿಷಾದ ವ್ಯಕ್ತಪಡಿಸಿದ್ದಾರೆ: ಆರ್ ಅಶೋಕ್:** ಸಂಧಾನ ಸಭೆ ಬಳಿಕ ಮಾತನಾಡಿದ ವಿಪಕ್ಷ ನಾಯಕ ಅಶೋಕ್, ನಮ್ಮ ಶಾಸಕರು ಈಗಾಗಲೇ ವಿಷಾದ ವ್ಯಕ್ತಪಡಿಸಿದ್ದಾರೆ. ಸ್ಪೀಕರ್ 6 ತಿಂಗಳು ಅಮಾನತು ಮಾಡಿದ್ದು ಸರಿಯಲ್ಲ. ಹೀಗೆ ಆದ್ರೆ ಸದನದಲ್ಲಿ ಆಡಳಿತ ಪಕ್ಷವೇ ಇರಬೇಕಾಗುತ್ತೆ. ಸಿಎಂ ಸಹ ಇದು ಇಲ್ಲಿಗೆ ಮುಗಿಯಬೇಕು ಎಂದಿದ್ದಾರೆ. ಇದನ್ನು ಇಲ್ಲಿಗೆ ಅಂತ್ಯ ಮಾಡಬೇಕು. ಸಿಎಂ, ಸ್ಪೀಕರ್ ಕೂಡ ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಎಂದು ಹೇಳಿದರು.

**ಅಮಾನತಿಗೆ ಕಾರಣವೇನು?:** ಬಜೆಟ್ ಅಧಿವೇಶನದಲ್ಲಿ ಹನಿಟ್ರ್ಯಾಪ್ ಹಾಗೂ ಮುಸ್ಲಿಂ ಮೀಸಲಾತಿ ವಿಚಾರಗಳು ಕೋಲಾಹಲ ಎಬ್ಬಿಸಿದ್ದವು. ಮಾರ್ಚ್ 21 ರಂದು ವಿಧಾನಸಭೆ ಕಲಾಪದಲ್ಲಿ ಭಾರಿ ಹೈಡ್ರಾಮಾಕ್ಕೆ ಕಾರಣವಾಗಿದ್ದವು. ಸದನ ಶುರುವಾಗುತ್ತಿದ್ದಂತೆಯೇ ಹನಿಟ್ರ್ಯಾಪ್ ವಿಚಾರ ಪ್ರಸ್ತಾಪ ಮಾಡಿ ಉನ್ನತ ಮಟ್ಟದ ತನಿಖೆಗೆ ಆದೇಶಿಸಬೇಕೆಂದು ಪ್ರತಿಪಕ್ಷ ಪಟ್ಟು ಹಿಡಿದಿತ್ತು. ನಂತರ ಮುಸ್ಲಿಂ ಮೀಸಲಾತಿ ವಿಧೇಯಕದ ಕುರಿತು ಸರ್ಕಾರ ಚರ್ಚೆಗೆ ಮುಂದಾಗಿತ್ತು. ಇದೇ ವೇಳೆ ಬಿಜೆಪಿ ಶಾಸಕರು ತೀವ್ರ ವಿರೋಧ ವ್ಯಕ್ತಪಡಿಸಿದ್ದರು. ಅಲ್ಲದೇ, ವಿಧೇಯಕದ ಪ್ರತಿಗಳನ್ನು ಹರಿದು ಸ್ಪೀಕರ್ ಮೇಲೆ ಎಸೆಯುತ್ತಾ, 'ಹನಿಟ್ರ್ಯಾಪ್ ಸರ್ಕಾರ' ಎಂದು ಘೋಷಣೆಗಳನ್ನು ಕೂಗಿದ್ದರು. ಈ ವೇಳೆ ಸ್ಪೀಕರ್, ಶಾಸಕರು ತಾಳ್ಮೆ ವಹಿಸುವಂತೆ, ಕಲಾಪಕ್ಕೆ ಅಡ್ಡಿಪಡಿಸದಂತೆ ಮನವಿ ಮಾಡಿದ್ದರು. ಆದರೂ ಸಹ ವಿಪಕ್ಷ ಬಿಜೆಪಿ ಸದಸ್ಯರು ಪ್ರತಿಭಟನೆ ಮುಂದುವರಿಸಿದ್ದರು. ಇದರಿಂದ ಸ್ಪೀಕರ್ 18 ಬಿಜೆಪಿ ಸದಸ್ಯರನ್ನು 6 ತಿಂಗಳು ಕಲಾಪದಿಂದ ಅಮಾನತುಗೊಳಿಸಿ ರೂಲಿಂಗ್ ಹೊರಡಿಸಿದ್ದರು.

**ಅಮಾನತು ಆಗಿದ್ದವರು ಯಾರು?:** ಶಾಸಕರಾದ ದೊಡ್ಡನಗೌಡ ಪಾಟೀಲ್, ಡಾ. ಅಶ್ವಥ್ ನಾರಾಯಣ, ಬೈರತಿ ಬಸವರಾಜ, ಡಾ. ಶೈಲೇಂದ್ರ ಬೆಲ್ದಾಳೆ, ಮುನಿರತ್ನ, ಧೀರಜ್ ಮುನಿರಾಜು, ಬಿ.ಪಿ. ಹರೀಶ್, ಡಾ. ಭರತ್ ಶೆಟ್ಟಿ, ಚಂದ್ರು ಲಮಾಣಿ, ಉಮಾನಾಥ ಕೋಟ್ಯಾನ್, ಸಿ.ಕೆ. ರಾಮಮೂರ್ತಿ, ಯಶಪಾಲ್ ಸುವರ್ಣ, ಬಿ. ಸುರೇಶ್ ಗೌಡ, ಶರಣು ಸಲಗಾರ್, ಚನ್ನಬಸಪ್ಪ, ಬಸವರಾಜ ಮತ್ತಿಮೂಡ, ಎಸ್. ಆರ್. ವಿಶ್ವನಾಥ್, ಎಂ.ಆರ್. ಪಾಟೀಲ್ ಅವರನ್ನು ವಿಧಾನಸಭೆ ಕಲಾಪದಿಂದ ಆರು ತಿಂಗಳುಗಳ ಕಾಲ ಅಮಾನತು ಮಾಡಿ ಸ್ಪೀಕರ್ ಯುಟಿ ಖಾದರ್ ರೂಲಿಂಗ್ ಹೊರಡಿಸಿದ್ದರು.

# ಬಿಜೆಪಿ ಶಾಸಕರ ಅಮಾನತು ಹಿಂಪಡೆಯುವ ಬಗ್ಗೆ ನಿರ್ಧಾರ ಮಾಡಿದ್ದೇವೆ

**ಬೆಂಗಳೂರು:** ಬಿಜೆಪಿ ಶಾಸಕರ ಅಮಾನತು ಹಿಂಪಡೆಯುವ ಬಗ್ಗೆ ನಿರ್ಧಾರ ಮಾಡಿದ್ದೇವೆ ಎಂದು ಸ್ಪೀಕರ್ ಯುಟಿ ಖಾದರ್ ತಿಳಿಸಿದ್ದಾರೆ.



ಬಿಜೆಪಿ ಅಮಾನತ್ತಾದ ಶಾಸಕರ ಬಗ್ಗೆ ಸಂಜೆ ಸಭೆ ಹಿನ್ನೆಲೆ ವಿಧಾನಸೌಧದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಅಧಿವೇಶನ ನಡೆಯುವ ಸಂಧರ್ಭದಲ್ಲಿ ಸಂವಿಧಾನ ಪೀಠಕ್ಕೆ ಅಗೌರವ ತೋರಿಸಿದ್ದರು. ಅದರ ಬಗ್ಗೆ ಕ್ರಮ ತೆಗೆದುಕೊಂಡಿದ್ದೆವು. ಈ ಮಧ್ಯೆ ಅಮಾನತು ಆದೇಶ ವಾಪಸ್ ಪಡೆಯುವಂತೆ ವಿಪಕ್ಷ ನಾಯಕರು, ನಾಯಕರ ಬೇಡಿಕೆ ಇತ್ತು. ಚರ್ಚೆ ಸಂಧರ್ಭದಲ್ಲಿ ಘಟನೆ ನಡೆದಿದೆ ಎಂದಿದ್ದರು. ಇದರ ಬಗ್ಗೆ ಇಂದು ಚರ್ಚೆ ಇದೆ. ಚರ್ಚೆ ಬಳಿಕ ನಿರ್ಧಾರ ಆಗಲಿದೆ ಎಂದರು.

ಸಿಎಂ, ವಿಪಕ್ಷ ನಾಯಕ ಎಲ್ಲರೂ ಸಭೆಯಲ್ಲಿ ಇರುತ್ತಾರೆ. ಅಂದು ಆದ ಘಟನೆಯನ್ನ ವಿಧಾನಸಭೆಯಲ್ಲಿ ಚರ್ಚೆ ಮಾಡಿ, ತೀರ್ಮಾನ ಮಾಡಲಾಯಿತು. ಬಹುಮತ ಇರುವ ಶಾಸಕರ ನಿರ್ಣಯದ ಮೇಲೆ ತೆಗೆದುಕೊಂಡ ಕ್ರಮ ಅದು. ಅಮಾನತು ಮಾಡಿ ಎರಡು ತಿಂಗಳಾಗಿದೆ. ಹೆಚ್ಚು ಕಡಿಮೆ ಆದೇಶ ವಾಪಸ್ ಆಗಲಿದೆ. ಶಾಸಕ ಮಿತ್ರರು ನಮ್ಮವರೇ, ಸಕರಾತ್ಮಕ ನಿರ್ಧಾರ ತೆಗೆದುಕೊಳ್ಳುತ್ತೇವೆ ಎಂದು ಹೇಳಿದರು.

ವಿಧಾನಸೌಧ ಗೈಡೆಡ್ ಟೂರ್ ಬಗ್ಗೆ ಪ್ರತಿಕ್ರಿಯಿಸಿದ ಅವರು, ಗೈಡೆಡ್ ಟೂರ್ ಮೂಲಕ ವಿಧಾನಸೌಧದ ಪರಂಪರೆ, ಭವ್ಯತೆ, ಇತಿಹಾಸ ವಿದ್ಯಾರ್ಥಿಗಳಿಗೆ ತಿಳಿಸಿಕೊಡುವ ಉದ್ದೇಶವಿದೆ. ವಿಧಾನಸೌಧ ನಮ್ಮದು ಎಂಬ ಭಾವನೆ ಜನರಿಗೆ ಬರಬೇಕು. ಗೈಡೆಡ್ ಟೂರ್ ಬಗ್ಗೆ ಸಿಎಂ ಜೊತೆ ಚರ್ಚಿಸಿ ಆರಂಭಿಸಲಾಗಿದೆ. ಈ ಪ್ರವಾಸದ ಹೊಣೆ ಪ್ರವಾಸೋದ್ಯಮ ಇಲಾಖೆಗೆ ವಹಿಸಲಾಗಿದೆ. ಗೈಡೆಡ್ ಟೂರ್ ಹತ್ತನೇ ತರಗತಿವರೆಗಿನ ವಿದ್ಯಾರ್ಥಿಗಳಿಗೆ ಉಚಿತ ಪ್ರವೇಶ ಕಲ್ಪಿಸಲಾಗಿದೆ. ಉಳಿದಂತೆ ಪ್ರತಿಯೊಬ್ಬರಿಗೂ ತಲಾ 50 ರೂ. ನಿಗದಿಪಡಿಸಲಾಗಿದೆ. ಯಾಕೆ 50 ರೂ. ಅಂತ ಕೆಲವರು ಕೇಳುತ್ತಾರೆ. ಯಾರ ಬಳಿ ಫೋನ್ ಇರಲ್ವೋ ಅವರಿಂದ 50 ರೂ. ಪಡೆಯಲ್ಲ ಎಂದು ತಮಾಷೆ ಮಾಡಿದರು.

Printed, Published & Owned by N.Venugopal Krishna, Printed at Dashapramathi Mudranalaya, No.45, 4th Cross, Srigandhadakaval, Bengaluru-560079.
Published at No.45, 4th Cross, Srigandhadakaval, Bengaluru-560079. Editor: N.Venugopal Krishna, Mobile No.+91 94835 89085,
email: sanjemugilu@gmail.com, RNI No.KARKAN/2002/08054